# ಪ್ರವಾದಿ ಯೆಜೆಕಿಯೇಲನ ಗ್ರಂಥ

## ಮುನ್ನುಡಿ

ಕ್ರಿ.ಪೂ. 586ರಲ್ಲಿ ಆದ ಜೆರುಸಲೇಮಿನ ಪತನದ ಮುಂಚೆ ಹಾಗೂ ಅದರ ಅನಂತರ ಬಾಬಿಲೋನಿಗೆ ಸೆರೆಹೋದವರಲ್ಲಿ ಪ್ರವಾದಿ ಯೆಜೆಕಿಯೇಲನು ಒಬ್ಬನು. ಆತ ನೀಡಿದ ದೈವೋಕ್ತಿಗಳು ಬಾಬಿಲೋನಿನಲ್ಲಿ ಸೆರೆಹೋದವರಿಗೆ ಮಾತ್ರವಲ್ಲ, ಜೆರುಸಲೇಮಿನಲ್ಲೇ ಉಳಿದಿದ್ದ ನಿವಾಸಿಗಳಿಗೂ ಅನ್ವಯಿಸುತ್ತವೆ.

ಯೆಜೆಕಿಯೇಲನ ಗ್ರಂಥದಲ್ಲಿ ಆರು ಮುಖ್ಯ ಭಾಗಗಳಿವೆ: 1. ಯೆಜೆಕಿಯೇಲನು ಪ್ರವಾದಿಯಾಗಲು ದೇವರಿತ್ತ ಕರೆ; 2. ದೇವರ ತೀರ್ಪು, ಬರಲಿರುವ ಜೆರುಸಲೇಮಿನ ವಿನಾಶ ಹಾಗೂ ಪತನದ ಬಗ್ಗೆ ಎಚ್ಚರಿಕೆ; 3. ತನ್ನ ಜನರನ್ನು ಶೋಷಣೆಗೆ ಗುರಿಮಾಡಿ, ಅವರು ದಾರಿತಪ್ಪುವಂತೆ ಮಾಡಿದ ರಾಷ್ಟ್ರಗಳ ಬಗ್ಗೆ ಸರ್ವೇಶ್ವರನು ನೀಡಿದ ಸಂದೇಶ ಹಾಗೂ ದೈವ ತೀರ್ಪು; 4. ಜೆರುಸಲೇಮಿನ ಪತನದ ನಂತರ ಇಸ್ರಯೇಲಿಗೆ ದೊರೆತ ಉಪಶಮನ; ಭವ್ಯ ಭವಿಷ್ಯದ ವಾಗ್ದಾನ; 5. ಗೋಗನಿಗೆ ವಿರುದ್ಧವಾದ ಪ್ರವಾದನೆ; 6. ಮಹಾದೇವಾಲಯದ ಪುನರ್‍ನಿರ್ಮಾಣ ಹಾಗೂ ರಾಷ್ಟ್ರದ ಅಭ್ಯುದಯ ಕುರಿತು ಪ್ರವಾದಿಯ ಚಿತ್ರೀಕರಣ.

ಯೆಜೆಕಿಯೇಲನ ವಿಶ್ವಾಸ ಅಚಲವಾಗಿತ್ತು. ಅವನ ಕಲ್ಪನಾಶಕ್ತಿ ಅಗಾಧವಾಗಿತ್ತು. ದಿವ್ಯದರ್ಶನಗಳು ಹಾಗೂ ಸಾಂಕೇತಿಕ ಕಾರ್ಯಗಳು ದೈವಪ್ರೇರಿತವಾದ ಅವನ ಅನಿಸಿಕೆಗಳು ಇಲ್ಲಿ ಪ್ರತಿಬಿಂಬಿಸುತ್ತವೆ. ಅಂತರಂಗದಲ್ಲಿ ಮಾನವನು ಹೊಸಬನಾಗಬೇಕು; ತನ್ನ ಪಾಪಗಳಿಗೆ ತಾನೇ ಹೊಣೆಯಾಗಬೇಕು; ಅವುಗಳ ಪರಿಣಾಮವನ್ನು ತಾನೇ ಅನುಭವಿಸಬೇಕು ಎಂಬುವು ಅವನ ಈ ಗ್ರಂಥದ ಮುಖ್ಯಾಂಶಗಳು ಎನ್ನಬಹುದು. ಯೆಜೆಕಿಯೇಲನು ಯಾಜಕ ಹಾಗು ಪ್ರವಾದಿಯಾಗಿದ್ದುದರಿಂದ ಮಹಾದೇವಾಲಯದ ಹಾಗೂ ಪವಿತ್ರತೆಯ ಬಗ್ಗೆ ಅಪಾರ ಆಸಕ್ತಿಯನ್ನು ವ್ಯಕ್ತಪಡಿಸುತ್ತಾನೆ.

## ಪರಿವಿಡಿ


| | | | | | |
|---|---|---|---|---|---|
| 1. ಯೆಜೆಕಿಯೇಲನಿಗೆ ಬಂದ ಕರೆ | – | 1.1 | – | 3.27 |
| 2. ಜೆರುಸಲೇಮಿನ ವಿನಾಶ ಕುರಿತ ಸಂದೇಶ | – | 4.1 | – | 24.27 |
| 3. ರಾಷ್ಟ್ರಗಳ ಮೇಲೆ ದೇವರ ತೀರ್ಪು | – | 25.1 | – | 32.32 |
| 4. ದೇವರು ತನ್ನ ಜನರಿಗಿತ್ತ ವಾಗ್ದಾನ | – | 33.1 | – | 37.28 |
| 5. ಗೋಗಿನ ವಿರುದ್ಧ ಪ್ರವಾದನೆ | – | 38.1 | – | 39.29 |
| 6. ಮಹಾದೇವಾಲಯದ ಹಾಗೂ ರಾಷ್ಟ್ರದ ದರ್ಶನ | – | 40.1 | – | 48.35 |

# ಪ್ರವಾದಿ ಯೆಜೆಕಿಯೇಲನ ಗ್ರಂಥ

## ಮೊದಲನೆಯ ದರ್ಶನ – ದೇವರ ರಥ

**1** ಮೂವತ್ತನೆಯ ವರ್ಷದ ನಾಲ್ಕನೆಯ ತಿಂಗಳಿನ ಐದನೆಯ ದಿನ ನಾನು ಗಡೀಪಾರಾಗಿದ್ದ ಯೆಹೂದ್ಯರ
ಮಧ್ಯೆ ಕೆಬಾರ್ ನದಿಯ ಹತ್ತಿರ ಇದ್ದೆ. ಆಗ ಆಕಾಶ ತೆರೆಯಿತು. ನನಗೆ ದೇವ ದರ್ಶನಗಳಾದವು. 2ಅದೇ
ತಿಂಗಳಿನ ಐದನೆಯ ದಿನ, ಅಂದರೆ, ಯೆಹೋಯಾಖೀನನು ಸೆರೆಯಾದ ಐದನೆಯ ವರ್ಷ,
3ಬಾಬಿಲೋನಿಯಾ ದೇಶದ ಕೇಬಾರ್ ನದಿಯ ಹತ್ತಿರ, ಬೂಜಿಯ ಮಗ ಹಾಗೂ ಯಾಜಕನಾದ
ಯೆಜೆಕಿಯೇಲ ಎಂಬ ನನಗೆ ಸರ್ವೇಶ್ವರಸ್ವಾಮಿಯ ವಾಣಿ ನೇರವಾಗಿ ಕೇಳಿಸಿತು; ಅವರ ಹಸ್ತಸ್ಪರ್ಶದಿಂದ
ನಾನು ಪರವಶನಾದೆ.

4 ನಾನು ಕಂಡ ದರ್ಶನ ಹೀಗಿತ್ತು: ಇಗೋ, ಉತ್ತರ ದಿಕ್ಕಿನಿಂದ ಬಿರುಗಾಳಿಬೀಸಿತು. ಎಡೆಬಿಡದೆ
ಝುಗಝುಗಿಸುವ ಜ್ವಾಲೆಯಿಂದ ಕೂಡಿದ ಮಹಾ ಮೇಘವೊಂದು ಕಾಣಿಸಿತು. ಅದರ ಸುತ್ತಲೂ ಮಿಂಚು
ಹೊಳೆಯಿತು. ಅದರ ನಡುವೆ, ಆ ಜ್ವಾಲೆಯ ಮಧ್ಯೆ, ಸುವರ್ಣದಂಥ ಕಾಂತಿ ಬೆಳಗಿತು. 5ಅದರ ಮಧ್ಯದಿಂದ
ನಾಲ್ಕು ಜೀವಿಗಳ ಆಕಾರಗಳು ಕಂಡುಬಂದವು. ಅವುಗಳ ರೂಪ ಮನುಷ್ಯ ರೂಪದಂತಿತ್ತು. 6ಒಂದೊಂದಕ್ಕೆ
ನಾಲ್ಕು ಮುಖಗಳು, ನಾಲ್ಕು ರೆಕ್ಕೆಗಳು ಇದ್ದವು. 7ಇವುಗಳ ಕಾಲು ನೆಟ್ಟಗಿದ್ದವು; ಪಾದಗಳು ಕರುವಿನ
ಗೊರಸಿನಂತೆ ಇದ್ದವು; ಬೆಳಗಿದ ಕಂಚಿನಂತೆ ಮಿನುಮಿನುಗುತ್ತಿದ್ದವು. 8ಒಂದೊಂದು ಜೀವಿಯ ನಾಲ್ಕು
ಪಾರ್ಶ್ವಗಳಲ್ಲಿನ ರೆಕ್ಕೆಗಳ ಕೆಳಗೆ ಮನುಷ್ಯ ಹಸ್ತದಂಥ ಹಸ್ತಗಳಿದ್ದವು. ಆ ನಾಲ್ಕು ಜೀವಿಗಳ ಮುಖಗಳೂ
ರೆಕ್ಕೆಗಳೂ ಹೇಗಿದ್ದವೆಂದರೆ – 9ರೆಕ್ಕೆಗಳು ಒಂದಕ್ಕೊಂದು ತಗಲುತ್ತಿದ್ದವು; ಆ ಜೀವಿಗಳು ಹಿಂತಿರುಗಿ
ನೋಡದೆ ಹೊರಟ ಮುಖವಾಗಿಯೇ ಹೋಗುತ್ತಿದ್ದವು.

10 ಅವುಗಳ ಮುಖ ಲಕ್ಷಣಗಳು ಹೀಗಿದ್ದವು: ಒಂದೊಂದರ ಮುಂದಿನ ಮುಖ ಮನುಷ್ಯ
ಮುಖದಂತಿತ್ತು; ಬಲಗಡೆಯ ಮುಖ ಸಿಂಹನಂತಿತ್ತು; ಎಡಗಡೆಯ ಮುಖ ಹೋರಿಯ ಮುಖದಂತಿತ್ತು;
ಹಿಂದಿನ ಮುಖ ಗರುಡ ಪಕ್ಷಿಯ ಮುಖದಂತಿತ್ತು. 11ಅವುಗಳ ರೆಕ್ಕೆಗಳು ಮೇಲಕ್ಕೆ ಹರಡಿಕೊಂಡಿದ್ದವು.
ಒಂದೊಂದು ಜೀವಿಯ ಎರಡು ರೆಕ್ಕೆಗಳು ಪಕ್ಕದ ಜೀವಿಗಳ ರೆಕ್ಕೆಗಳಿಗೆ ತಗಲುತ್ತಿದ್ದವು. ಇನ್ನೆರಡು ರೆಕ್ಕೆಗಳು
ದೇಹವನ್ನು ಮುಚ್ಚಿಕೊಂಡಿದ್ದವು. 12ಆ ಜೀವಿಗಳೆಲ್ಲ ಹೊರಟ ಮುಖವಾಗಿಯೇ ಹೋಗುತ್ತಿದ್ದವು;
ಹಿಂದಿರುಗಿನೋಡದೆ ದೇವರಾತ್ಮ ಸಾಗಿಸಿದ ಕಡೆಗೇ ಸಾಗುತ್ತಿದ್ದವು.

13 ಆ ಜೀವಿಗಳ ಮಧ್ಯೆ ಅದ್ಭುತಕಾಂತಿಯೊಂದು ಉರಿಯುವ ಕೆಂಡಗಳೋ ಪಂಜುಗಳೋ
ಎಂಬಂತೆ ಕಾಣಿಸಿತು. ಅದು ಆ ಜೀವಿಗಳ ನಡುವೆ ಓಲಾಡುತ್ತಿತ್ತು; ಆ ಉರಿ ತೇಜೋಮಯವಾಗಿತ್ತು,
ಅದರೊಳಗಿಂದ ಮಿಂಚುಗಳು ಹೊರಡುತ್ತಿದ್ದವು. 14ಆ ಜೀವಿಗಳು ಮಿಂಚಿನಂತೆ ಮುಂದಕ್ಕೂ ಹಿಂದಕ್ಕೂ
ಸರಿದಾಡುತ್ತಿದ್ದವು.

15 ಇಗೋ, ನಾನು ಆ ಜೀವಿಗಳನ್ನು ನೋಡುತ್ತಿದ್ದಂತೆ ಒಂದೊಂದು ಕಡೆಯಲ್ಲೂ ಆ ಜೀವಿಗಳ
ಪಕ್ಕದಲ್ಲಿ ನೆಲಸೋಕುವ ಚಕ್ರಗಳು ಕಾಣಿಸಿದವು. 16ಆ ಚಕ್ರಗಳ ವರ್ಣರಚನೆ ಹೇಗಿತ್ತೆಂದರೆ: ಅವುಗಳ ವರ್ಣ
ಪೀತರತ್ನದ ಹಾಗೆ ಥಳಥಳಿಸುತ್ತಿತ್ತು. ಒಂದು ಚಕ್ರದೊಳಗೆ ಇನ್ನೊಂದು ಚಕ್ರವು ಅಡ್ಡವಾಗಿ ರಚಿಸಿದಂತಿತ್ತು;
ಆ ನಾಲ್ಕು ಚಕ್ರಗಳು ಒಂದೇ ಮಾದರಿಯಾಗಿದ್ದವು. 17ಅವು ಹೊರಳುವಾಗ ನಾಲ್ಕು ಕಡೆಗಳಲ್ಲಿ ಯಾವ
ಕಡೆಗಾದರೂ ಹೊರಳುತ್ತಿದ್ದವು. ಓರೆಯಾಗಿ ಹೊರಳುತ್ತಿರಲಿಲ್ಲ. 18ಗಾಲಿಗಳ ಸುತ್ತಣ ಭಾಗಗಳು
ಎತ್ತರವಾಗಿಯೂ ಭಯಂಕರವಾಗಿಯೂ ಇದ್ದವು; ಈ ಭಾಗಗಳ ಎಲ್ಲಾ ಕಡೆಯಲ್ಲೂ ಅನೇಕಾನೇಕ ಮಿನುಗು
ಕಣ್ಣುಗಳಿದ್ದವು; 19ಜೀವಿಗಳು ಮುಂದರಿಯುವಾಗ ಚಕ್ರಗಳೂ ಅವುಗಳ ಪಕ್ಕದಲ್ಲಿ ಮುಂದುವರಿಯುತ್ತಿದ್ದವು;
ಜೀವಿಗಳು ನೆಲದಿಂದ ಮೇಲಕ್ಕೇಳುವಾಗ ಚಕ್ರಗಳೂ ಏಳುತ್ತಿದ್ದವು; 20ದೇವರಾತ್ಮವು ಸಾಗಿಸಿದ ಕಡೆಗೇ ಅವು
ಸಾಗುತ್ತಿದ್ದವು. ಆ ಜೀವಿಗಳಲ್ಲಿದ್ದ ಆತ್ಮವು ಚಕ್ರಗಳಲ್ಲಿಯೂ ಇದ್ದ ಕಾರಣ ಚಕ್ರಗಳು ಅವುಗಳ ಪಕ್ಕದಲ್ಲಿ
ಏಳುತ್ತಿದ್ದವು. 21ಆ ಜೀವಿಗಳು ಮುಂದುವರಿಯುವಾಗ ಚಕ್ರಗಳೂ ಮುಂದುವರಿಯುತ್ತಿದ್ದವು, ಅವು ನಿಂತು
ಹೋಗುವಾಗ ಇವೂ ನಿಂತು ಹೋಗುತ್ತಿದ್ದವು, ಅವು ನೆಲದಿಂದ ಮೇಲಕ್ಕೆ ಏಳುವಾಗ ಚಕ್ರಗಳೂ ಅವುಗಳ
ಪಕ್ಕದಲ್ಲಿ ಏಳುತ್ತಿದ್ದವು; ಏಕೆಂದರೆ ಆ ಜೀವಿಗಳ ಆತ್ಮ ಚಕ್ರಗಳಲ್ಲಿಯೂ ಇತ್ತು.

22 ಮಂಜುಗಡ್ಡೆಯಂತೆ ಥಳಥಳಿಸುವ ಒಂದು ತೆರೆದ ಆಶ್ಚರ್ಯಕರವಾದ ಗವಿಯಾಕೃತಿ ಆ ಜೀವಿಗಳ ತಲೆಯ ಮೇಲ್ಗಡೆ ಇತ್ತು. 23ಅದರ ಕೆಳಗೆ ಆ ಜೀವಿಗಳ ರೆಕ್ಕೆಗಳು ಮಟ್ಟಸವಾಗಿ ಚಾಚಲ್ಪಟ್ಟು ಒಂದಕ್ಕೊಂದು ತಗಲುತ್ತಿದ್ದವು; ಇದಲ್ಲದೆ ಒಂದೊಂದು ಜೀವಿಗೆ ದೇಹವನ್ನು ಮುಚ್ಚಿಕೊಳ್ಳುವ ಎರಡೆರಡು ರೆಕ್ಕೆಗಳಿದ್ದವು. 24ಅವು ಮುಂದುವರಿಯುವಾಗ ಅವುಗಳ ರೆಕ್ಕೆಗಳ ಶಬ್ದವು ಜಲಪ್ರವಾಹದ ಘೋಷದಂತೆ, ಸರ್ವಶಕ್ತನ ಧ್ವನಿಯಂತೆ, ಆರ್ಭಟಿಸುವ ಸೈನ್ಯದ ಕೋಲಾಹಲದಂತೆ ನನಗೆ ಕೇಳಿಸಿತು; ಅವು ನಿಂತಾಗ ರೆಕ್ಕೆಗಳನ್ನು ಮುದುರಿಕೊಳ್ಳುತ್ತಿದ್ದವು. 25ಅವುಗಳ ತಲೆಗಳ ಮೇಲ್ಗಡೆಯ ಗವಿಯಾಕೃತಿಯ ಮೇಲಿಂದ ಒಂದು ಧ್ವನಿ ನನ್ನ ಕಿವಿಗೆ ಬಿತ್ತು.

26 ಅವುಗಳ ತಲೆಗಳ ಮೇಲ್ಗಡೆಯ ಗವಿಯಾಕೃತಿಯ ಮೇಲೆ ಇಂದ್ರನೀಲಮಣಿಯಂತೆ ಹೊಳೆಯುವ ಸಿಂಹಾಸನಾಕಾರವು ಕಾಣಿಸಿತು; ಅದರ ಮೇಲೆ ನರನ ರೂಪವುಳ್ಳ ಒಬ್ಬಾತನು ಆಸೀನನಾಗಿದ್ದನು. 27ಸೊಂಟದ ಹಾಗೆ ತೋರುವ ಆತನ ಮಧ್ಯಭಾಗದಿಂದ ಮೇಲ್ಗಡೆ ಸುವರ್ಣವು ಥಳಥಳಿಸುತ್ತದೋ, ಬೆಂಕಿಯು ಆ ರೂಪದೊಳಗೆಲ್ಲಾ ಪ್ರಜ್ವಲಿಸುತ್ತದೋ ಎಂಬಂತಿರುವ ಅದ್ಭುತ ಕಾಂತಿಯನ್ನು ನಾನು ಕಂಡೆ; ಸೊಂಟದ ಹಾಗೆ ತೋರುವ ಆತನ ಮಧ್ಯಭಾಗದಿಂದ ಕೆಳಗಡೆ ಬೆಂಕಿ ಉರಿಯುತ್ತದೋ ಎಂಬಂತಿರುವ ಮಹಾ ತೇಜಸ್ಸನ್ನು ನೋಡಿದೆ; ಪ್ರಕಾಶವು ಆತನನ್ನು ಆವರಿಸಿಕೊಂಡಿತ್ತು. 28ಮಳೆಗಾಲದಲ್ಲಿ ಮೇಘಮಂಡಲದೊಳಗೆ ಕಾಮನ ಬಿಲ್ಲು ಹೊಳೆಯುವಂತೆ ಆತನ ಸುತ್ತಲು ಪ್ರಕಾಶ ಹೊಳೆಯುತ್ತಿತ್ತು. ಹೀಗೆ ಸರ್ವೇಶ್ವರನ ಮಹಿಮಾದ್ಭುತ ದರ್ಶನವು ಆಯಿತು. ಇದನ್ನು ಕಂಡು ನಾನು ಅಡ್ಡಬಿದ್ದೆ; ಮಾತಾಡುವಾತನ ವಾಣಿಯನ್ನು ಕೇಳಿದೆ.

### ಪ್ರವಾದಿಯಾಗಲು ಯೆಜೆಕಿಯೇಲನಿಗೆ ಕರೆ

**2** ಸರ್ವೇಶ್ವರ ನನಗೆ, "ನರಪುತ್ರನೇ, ಎದ್ದು ನಿಲ್ಲು; ನಿನ್ನ ಸಂಗಡ ಮಾತಾಡಬೇಕು," ಹೇಳಿದರು. 2ಅವರ ಈ ಮಾತನ್ನು ಹೇಳಿದ ಕೂಡಲೆ ದೇವರಾತ್ಮ ನನ್ನೊಳಗೆ ಸೇರಿ ನಾನು ಎದ್ದು ನಿಂತುಕೊಳ್ಳುವಂತೆ ಮಾಡಿತು; ಆಗ ನನ್ನೊಡನೆ ಮಾತಾಡಿದಾತನ ನುಡಿಯನ್ನು ಚೆನ್ನಾಗಿ ಕೇಳಿದೆ. 3ಆತ ನನಗೆ ಹೀಗೆ ಹೇಳಿದನು, "ನರಪುತ್ರನೇ, ನನಗೆ ವಿಮುಖರಾಗಿ ದ್ರೋಹಮಾಡಿದ ಜನಾಂಗದವರಾದ ಇಸ್ರಯೇಲರ ಬಳಿಗೆ ನಿನ್ನನ್ನು ಕಳುಹಿಸುವೆನು; ಈ ದಿನದವರೆಗೆ ಅವರೂ ಅವರ ಪಿತೃಗಳೂ ನನ್ನನ್ನು ಪ್ರತಿಭಟಿಸುತ್ತಲೇ ಬಂದಿದ್ದಾರೆ. 4ನಾನು ಯಾವ ಸಂತಾನದವರ ಬಳಿಗೆ ನಿನ್ನನ್ನು ಕಳುಹಿಸುತ್ತೇನೋ ಆ ಸಂತಾನದವರು ನಾಚಿಕೆಗೆಟ್ಟವರೂ ಹಟಗಾರರೂ ಆಗಿದ್ದಾರೆ; ನೀನು ಅವರಿಗೆ, 'ಸರ್ವೇಶ್ವರನಾದ ದೇವರೇ ಇಂತೆನ್ನುತ್ತಾರೆ,' ಎಂದು ನುಡಿ. 5ಅವರು ದ್ರೋಹಿವಂಶದವರು, ಒಂದು ವೇಳೆ ಕೇಳದೆ ಹೋಗಬಹುದು, ಕೇಳಿದರೂ ಕೇಳದೆ ಹೋದರೂ ಒಬ್ಬ ಪ್ರವಾದಿ ತಮ್ಮ ಮಧ್ಯೆ ಕಾಣಿಸಿಕೊಂಡಿದ್ದಾನೆಂದು ತಿಳಿದುಕೊಳ್ಳುವರು.

6 "ನರಪುತ್ರನೇ, ನೀನು ಮುಳ್ಳುಪೊದೆಗಳಲ್ಲಿ ಸಿಕ್ಕಿಕೊಂಡು ಚೇಳುಗಳ ನಡುವೆ ವಾಸಿಸುವಂತೆ ಅವರ ಮಧ್ಯೆ ಇದ್ದರೂ ಅವರಿಗೆ ಭಯಪಡಬೇಡ, ಅವರ ಗದರಿಕೆಗೆ ಹೆದರದಿರು; ಅವನು ದ್ರೋಹಿ ವಂಶದವರು; ಅವರ ಬಿರುನುಡಿಗೆ ದಿಗಿಲು ಪಡಬೇಡ, ಅವರ ಬಿರುನೋಟಕ್ಕೆ ಬೆಚ್ಚದಿರು. 7ಅವರು ಕೇಳಲಿ ಅಥವಾ ಬಿಡಲಿ ನೀನು ನನ್ನ ವಾಕ್ಯವನ್ನು ಅವರಿಗೆ ನುಡಿಯಲೇಬೇಕು. ಅವರು ದ್ರೋಹಿಗಳೇ ಸರಿ.

8 "ನರಪುತ್ರನೇ, ನಾನು ನಿನಗೆ ನುಡಿಯುವ ಮಾತನ್ನು ಕೇಳು; ಅವಿಧೇಯರಾದ ಆ ವಂಶದವರಂತೆ ನೀನು ಅವಿಧೇಯನಾಗಬೇಡ; ನಾನು ಕೊಡುವುದನ್ನು ಬಾಯಿತೆರೆದು ತಿಂದು ಬಿಡು," ಎಂದರು. 9ಇಗೋ, ನಾನು ನೋಡುತ್ತಿದ್ದಂತೆ ಒಂದು ಕೈ ನನ್ನ ಕಡೆಗೆ ಚಾಚಿತ್ತು; ಅದರಲ್ಲಿ ಗ್ರಂಥದ ಸುರುಳಿಯೊಂದು ಕಾಣಿಸಿತು. 10ಆ ಸುರುಳಿಯನ್ನು ನನ್ನೆದುರಿನಲ್ಲೆ ಬಿಚ್ಚಿದರು. ಅದರ ಎರಡು ಬದಿಗಳಲ್ಲಿಯೂ ಬರೆದಿತ್ತು: ಅದು ಪ್ರಲಾಪ, ಶೋಕ, ಶಾಪ ಇವುಗಳ ಬರಹದಿಂದ ಕೂಡಿತ್ತು.

**3** ಬಳಿಕ ಸರ್ವೇಶ್ವರ ನನಗೆ, "ನರಪುತ್ರನೇ, ನಿನಗೆ ಕೊಟ್ಟ ಈ ಸುರುಳಿಯನ್ನು ತಿನ್ನು; ಅನಂತರ ಇಸ್ರಯೇಲ್ ವಂಶದವರಿಗೆ ಸಾರು, ಹೋಗು," ಎಂದು ಆಜ್ಞಾಪಿಸಿದರು. 2ನಾನು ಬಾಯಿ ತೆರೆದೆ; ಅವರೇ ಆ ಸುರುಳಿಯನ್ನು ನನಗೆ ತಿನ್ನಿಸಿದರು. 3ತಿನ್ನಿಸುತ್ತಾ, "ನರಪುತ್ರನೇ, ನಾನು ಕೊಡುವ ಈ ಸುರುಳಿಯನ್ನು

ತಿಂದು ಹೊಟ್ಟೆ ತುಂಬಿಸಿಕೋ," ಎಂದರು. ನಾನು ಅದನ್ನು ತಿಂದು ಬಿಟ್ಟೆ; ಅದು ನನ್ನ ಬಾಯಿಗೆ ಜೇನಿನಂತೆ ಸಿಹಿಯಾಗಿತ್ತು.

4 ಆಮೇಲೆ ಸರ್ವೇಶ್ವರ ನನಗೆ ಹೀಗೆಂದರು: "ನರಪುತ್ರನೇ, ನೀನು ಇಸ್ರಯೇಲ್ ವಂಶದವರ
ಬಳಿಗೆ ಹೋಗಿ ನಾನು ತಿಳಿಸುವ ಮಾತುಗಳನ್ನು ಅವರಿಗೆ ಹೇಳು. 5ನಾನು ನಿನ್ನನ್ನು ಇಸ್ರಯೇಲ್
ವಂಶದವರ ಬಳಿಗೆ ಕಳುಹಿಸುತ್ತೇನೆಯೇ ಹೊರತು ಕಷ್ಟಕರವಾದ ಅನ್ಯಭಾಷೆಯನ್ನಾಡುವ ಜನರ ಬಳಿಗೆ
ಕಳುಹಿಸುತ್ತಿಲ್ಲ; 6ಹೌದು, ನಿನಗೆ ಅರ್ಥವಾಗದ ಕಷ್ಟಕರವಾದ ಅನ್ಯಭಾಷೆಯನ್ನಾಡುವ ಜನರ ಬಳಿಗೆ
ಕಳುಹಿಸುತ್ತಿಲ್ಲ; 6ಹೌದು, ನಿನಗೆ ಅರ್ಥವಾಗದ ಕಷ್ಟಕರವಾದ ಅನ್ಯಭಾಷೆಯನ್ನಾಡುವ ನಾನಾ ಜನಾಂಗಗಳ
ಕಡೆಗೆ ಕಳುಹಿಸುತ್ತಿಲ್ಲ. ಇಂಥವರ ಕಡೆಗೆ ನಾನು ನಿನ್ನನ್ನು ಕಳುಹಿಸಿದ ಪಕ್ಷದಲ್ಲಿ ಅವರಾದರೂ ನಿಶ್ಚಯವಾಗಿ
ನಿನ್ನ ಮಾತಿಗೆ ಕಿವಿಗೊಡುತ್ತಿದ್ದರು. 7ಇಸ್ರಯೇಲ್ ವಂಶದವರೋ ನಿನಗೆ ಕಿವಿಗೊಡಲು ಸಿದ್ಧರಿಲ್ಲ; ನನಗೂ
ಕಿವಿಗೊಡಲು ಸಿದ್ಧರಿಲ್ಲ; ನನಗೂ ಕಿವಿಗೊಡಲು ಸಿದ್ಧರಿಲ್ಲ; ಅವರೆಲ್ಲರು ಗರ್ವಿಗಳು ಹಾಗೂ ಹಟಮಾರಿಗಳು.
8ಇಗೋ, ಅವರ ಕಠಿಣ ಹೃದಯಕ್ಕೆ ವಿರುದ್ಧ ನಿನ್ನ ಹೃದಯವನ್ನು ಕಠಿಣಪಡಿಸಿದ್ದೇನೆ; ಅವರ
ಹಟಮಾರಿತನಕ್ಕೆ ಪ್ರತಿಯಾಗಿ ನಿನ್ನನ್ನು ಹಟವಾದಿಯನ್ನಾಗಿ ಮಾಡಿದ್ದೇನೆ. 9ನಿನ್ನ ನಿರ್ಧಾರವನ್ನು ಕಗ್ಗಲ್ಲಿಗಿಂತ
ಕಠಿಣವಾದ ವಜ್ರದಷ್ಟು ಕಠಿಣಪಡಿಸಿದ್ದೇನೆ; ಅವರು ದ್ರೋಹಿ ವಂಶದವರು, ಅವರಿಗೆ ಭಯಪಡಬೇಡ;
ಅವರ ಬಿರುನೋಟಕ್ಕೆ ಬೆಚ್ಚದಿರು."

10 ಇದಲ್ಲದೆ ಸರ್ವೇಶ್ವರ ನನಗೆ ಹೀಗೆ ಹೇಳಿದರು: "ನರಪುತ್ರನೇ, ನಾನು ನಿನಗೆ ನುಡಿಯುವ,
ಮಾತುಗಳನ್ನೆಲ್ಲಾ ಕಿವಿಯಿಂದ ಕೇಳಿ ಮನಸ್ಸಿನಲ್ಲಿಟ್ಟುಕೋ. 11ಸೆರೆಯಾಗಿರುವ ನಿನ್ನ ಸ್ವಜನರ ಬಳಿಗೆಹೋಗಿ
ಅವರು ಕೇಳಲಿ ಅಥವಾ ಕೇಳದೆ ಹೋಗಲಿ ಅವರನ್ನು ಪ್ರಬೋಧಿಸು; 'ಸರ್ವೇಶ್ವರನಾದ ದೇವರು
ಇಂತೆನ್ನುತ್ತಾರೆ,' ಎಂದು ಅವರಿಗೆ ಸಾರಿಹೇಳು."

12 ಆಮೇಲೆ ದೇವರಾತ್ಮ ನನ್ನನ್ನು ಎತ್ತಿಕೊಂಡು ಹೋಯಿತು. "ಮಹಿಮಾಭರಿತ ಸರ್ವೇಶ್ವರಸ್ವಾಮಿಗೆ
ಆತನಾಲಯದಲ್ಲಿ ಸ್ತೋತ್ರ; ಸ್ತೋತ್ರ;" ಎಂಬ ಮಹಾಶಬ್ದ ನನ್ನ ಹಿಂದೆ ಭರಭರನೆ ಕೇಳಿಸಿತು. 13ಆ ಜೀವಿಗಳ
ರೆಕ್ಕೆಗಳು ಒಂದಕ್ಕೊಂದು ಬಡಿದಾಡುವ ಸಪ್ಪಳ, ಅವುಗಳ ಪಕ್ಕದಲ್ಲಿ ಗರಗರನೆ ತಿರುಗುವ ಚಕ್ರಗಳ ಸದ್ದು,
ಹೀಗೆ ಭೂಕಂಪದಂಥ ಮಹಾಶಬ್ದ ನನ್ನ ಕಿವಿಗೆ ಬಿತ್ತು. 14ದೇವರಾತ್ಮ ನನ್ನನ್ನು ಎತ್ತಿಕೊಂಡು ಹೋಯಿತು.
ಸರ್ವೇಶ್ವರನ ಹಸ್ತಸ್ಪರ್ಶದಿಂದ ನಾನು ಅತಿ ಪರವಶನಾಗಿದ್ದು ವ್ಯಥೆಗೊಳ್ಳುತ್ತಾ ಮನಸ್ತಾಪಪಡುತ್ತಾ
ಮುನ್ನಡೆದೆ. 15ಅನಂತರ ಕೆಬಾರ್ ನದಿಯ ಹತ್ತಿರ ತೇಲ್ ಅಬೀಬ್‌ನಲ್ಲಿ ವಾಸವಾಗಿದ್ದ ಗಡೀಪಾರಾಗಿ
ಸೆರೆಯಾಳುಗಳಾಗಿದ್ದವರ ಬಳಿಗೆ ಬಂದೆ. ಅವರು ಕೂತಿದ್ದ ಸ್ಥಳದಲ್ಲಿಯೇ ಕುಳಿತುಕೊಂಡೆ; ಏಳು ದಿವಸ
ಅಲ್ಲೇ ಅವರ ಮಧ್ಯದಲ್ಲಿ ಸ್ತಬ್ದನಾಗಿ ಇದ್ದುಬಿಟ್ಟೆ.

### ಕಾವಲುಗಾರನಾಗಿ ನೇಮಕ

(ಯೆಜೆ. 33.1–9)

16 ಏಳು ದಿವಸಗಳಾದ ಮೇಲೆ ಸರ್ವೇಶ್ವರ ನನಗೆ ಅನುಗ್ರಹಿಸಿದ ವಾಣಿ ಇದು: 17 "ನರಪುತ್ರನೇ,
ನಾನು ನಿನ್ನನ್ನು ಇಸ್ರಯೇಲ್ ವಂಶದವರ ಮೇಲೆ ಕಾವಲುಗಾರನನ್ನಾಗಿ ನೇಮಿಸಿದ್ದೇನೆ. ಹೀಗಿರಲು ನನ್ನ
ಬಾಯಿಂದ ಹೊರಡುವ ಮಾತನ್ನು ಕೇಳಿ ನನ್ನ ಪರವಾಗಿ ಅವರನ್ನು ಎಚ್ಚರಿಸು. 18ನಾನು ದುಷ್ಟನಿಗೆ, "ನೀನು
ಖಂಡಿತವಾಗಿ ಸಾಯುವೆ," ಎಂದು ನುಡಿಯುವಾಗ ನೀನು ಅವನನ್ನು ಎಚ್ಚರಿಸದೆ ಹಾಗು ಅವನು ತನ್ನ
ದುರ್ಮಾರ್ಗವನ್ನು ಬಿಟ್ಟು ತನ್ನ ಪ್ರಾಣವನ್ನು ಉಳಿಸಿಕೊಳ್ಳುವಂತೆ ಅವನಿಗೆ ಬುದ್ಧಿ ಹೇಳದೆ ಇದ್ದರೆ, ಆ
ದುಷ್ಟನು ತನ್ನ ಅಪರಾಧಕ್ಕಾಗಿ ಸಾಯಬೇಕಾಗುವುದು; ಅವನ ಮರಣಕ್ಕೆ ನೀನೆ ಹೊಣೆಯಾಗುವೆ. 19ನೀನು
ಆ ದುಷ್ಟನನ್ನು ಎಚ್ಚರಿಸಿದರೂ ಅವನು ತನ್ನ ದುಷ್ಟತನವನ್ನೂ ದುರ್ಮಾರ್ಗವನ್ನೂ ಬಿಡದೆ ಹೋದರೆ ತನ್ನ
ಅಪರಾಧಕ್ಕಾಗಿ ಸಾಯುವನು; ನೀನಾದರೋ ನಿನ್ನ ಪ್ರಾಣವನ್ನು ಉಳಿಸಿಕೊಳ್ಳುವೆ. 20ಇದಲ್ಲದೆ,
ಸಜ್ಜನನೊಬ್ಬನು ತನ್ನ ಸನ್ನಡತೆಯನ್ನು ಬಿಟ್ಟು ಅಧರ್ಮಮಾಡುವಲ್ಲಿ, ನಾನು ಅವನ ಮುಂದೆ ಒಡ್ಡುವ
ಆತಂಕವನ್ನು ಎಡವಿ ಅವನು ಸತ್ತೇ ಸಾಯುವನು; ನೀನು ಅವನನ್ನು ಎಚ್ಚರಿಸದೆ ಹೋದ ಕಾರಣ ಅವನು
ತನ್ನ ಪಾಪದಿಂದ ಸಾಯಬೇಕಾಯಿತು. ಅವನು ಮಾಡಿದ ಸುಕೃತ್ಯಗಳು ಲೆಕ್ಕಕ್ಕೆಬಾರವು; ಅವನ ಮರಣಕ್ಕೆ

ನೀನೆ ಹೊಣೆಯಾಗುವೆ. 21ನೀನು ಆ ಸಜ್ಜನನನ್ನು ಪಾಪಮಾಡದಂತೆ ಎಚ್ಚರಿಸಿದ ಮೇಲೆ ಅವನು ಪಾಪ ಮಾಡದೆ ಎಚ್ಚರಗೊಂಡರೆ ಈ ಕಾರಣ ಜೀವದಿಂದ ಉಳಿಯುವನು; ನೀನೂ ನಿನ್ನ ಪ್ರಾಣವನ್ನು ಉಳಿಸಿಕೊಳ್ಳುವೆ."

### ಪ್ರವಾದಿಯ ಬಾಯಿಗೆ ಬೀಗ

22 ಅದೇ ಸ್ಥಳದಲ್ಲಿ ನಾನು ಸರ್ವೇಶ್ವರನ ಹಸ್ತಸ್ಪರ್ಶದಿಂದ ಪರವಶನಾದೆ. ಆಗ ಅವರು ನನಗೆ, "ನೀನೆದ್ದು ಬಯಲುಪ್ರದೇಶಕ್ಕೆ ಹೊರಡು, ಅಲ್ಲಿ ನಾನು ನಿನ್ನೊಂದಿಗೆ ಮಾತಾಡುವೆನು," ಎಂದು ಹೇಳಿದರು.
23ನಾನೆದ್ದು ಬಯಲು ಪ್ರದೇಶಕ್ಕೆ ಹೊರಟುಬಂದಾಗ, ಕೆಬಾರ್ ನದಿಯ ಹತ್ತಿರ ನನಗೆ ಮಹಿಮಾದ್ಭುತ ದರ್ಶನವು ಆದಂತೆ, ಇಗೋ ಅಲ್ಲಿಯೂ ಸರ್ವೇಶ್ವರನ ಮಹಿಮೆ ಪ್ರತ್ಯಕ್ಷವಾಯಿತು. ಅದನ್ನು ನೋಡಿ ಅಡ್ಡಬಿದ್ದೆ. 24ದೇವರಾತ್ಮ ನನ್ನೊಳಗೆ ಹೊಕ್ಕು ನಾನು ಎದ್ದು ನಿಂತುಕೊಳ್ಳುವಂತೆ ಮಾಡಿತು. ಆಮೇಲೆ ಅವರು ನನಗೆ ಹೀಗೆ ಹೇಳಿದರು: ನೀನು ಹೋಗಿ ನಿನ್ನ ಮನೆಯೊಳಗೆ ಅಡಗಿಕೋ, 25ನರಪುತ್ರನೇ, ಇಗೋ, ನಿನ್ನ ಸ್ವಜನರೇ ನಿನ್ನನ್ನು ಕಟ್ಟಿ ಬಂಧಿಸುವರು. ನೀನು ಅವರ ಮಧ್ಯೆ ಅತ್ತಿತ್ತ ಸಂಚರಿಸದಿರುವೆ.
26ಇದಲ್ಲದೆ, ನಿನ್ನ ನಾಲಿಗೆ ಸೇದಿಹೋಗಿ ನೀನು ಮೂಕನಾಗಿರುವಂತೆ ಮಾಡುವೆನು; ದ್ರೋಹಿವಂಶದವರಾದ ಅವರನ್ನು ನೀನು ಖಂಡಿಸಲು ಸಾಧ್ಯವಾಗದು. 27ನಾನು ನಿನ್ನೊಡನೆ ಮತ್ತೆ ಮಾತಾಡುವಾಗ ನಿನ್ನ ಬಾಯನ್ನು ಬಿಚ್ಚುವೆನು; ಆಗ ನೀನು ಅವರಿಗೆ, 'ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ' ಎಂದು ನುಡಿಯಬೇಕು; ಕೇಳುವವನು ಕೇಳಲಿ, ಕೇಳದವನು ಬಿಡಲಿ; ಏಕೆಂದರೆ ಅವರು ದ್ರೋಹಿವಂಶದವರೇ.

### ಜೆರುಸಲೇಮಿನ ಮುತ್ತಿಗೆಯ ಮುನ್ಸೂಚನೆ

**4** "ನರಪುತ್ರನೇ, ನೀನು ಒಂದು ಚದರ ಇಟ್ಟಿಗೆಯನ್ನು ತೆಗೆದುಕೊಂಡು ನಿನ್ನ ಮುಂದೆ ಇಟ್ಟು ಅದರಲ್ಲಿ ಪಟ್ಟಣದ ನಕ್ಷೆಯನ್ನು ಅಂದರೆ, ಜೆರುಸಲೇಮಿನ ನಕ್ಷೆಯನ್ನು ಬರೆ. 2ಆ ನಕ್ಷೆಯ ಸುತ್ತಲು ದಿಬ್ಬ ಹಾಕಿ, ಒಡ್ಡುಕಟ್ಟಿ, ಪಾಳೆಯಗಳನ್ನು ಮಾಡಿ, ಭಿತ್ತಿಭೇದಕ ಯಂತ್ರಗಳನ್ನು ನಿಲ್ಲಿಸಿ, ಅದನ್ನು ಮುತ್ತು. 3ಆಮೇಲೆ ಕಬ್ಬಿಣದ ಹೆಂಚನ್ನು ತೆಗೆದುಕೊಂಡು ಅದನ್ನು ನಿನಗೂ ಆ ಪಟ್ಟಣಕ್ಕೂ ಮಧ್ಯೆ ಕಬ್ಬಿಣದ ಗೋಡೆಯನ್ನಾಗಿ ನಿಲ್ಲಿಸಿ ಆ ಪಟ್ಟಣದ ಮೇಲೆ ದೃಷ್ಟಿಯಿಡು; ಅದು ಮುತ್ತಲ್ಪಡುವುದು. ನೀನು ಅದನ್ನು ಮುತ್ತಿದಂತಾಗುವುದು. ಇದು ಇಸ್ರಯೇಲ್ ವಂಶದವರಿಗೆ ಒಂದು ಸಂಕೇತ.

4 "ಇದಲ್ಲದೆ ನೀನು ನಿನ್ನ ಎಡಮಗ್ಗುಲಲ್ಲಿ ಮಲಗು. ಇಸ್ರಯೇಲ್ ವಂಶದವರ ಅಧರ್ಮದ ಭಾರ ನಿನ್ನ ಮೇಲೆ ಬಿದ್ದಿದೆ ಎಂದು ಗೊತ್ತಾಗಲಿ; ನೀನು ಎಷ್ಟು ದಿವಸ ಹೀಗೆ ಮಲಗಿಕೊಂಡಿರುವಿಯೋ ಅಷ್ಟು ದಿವಸ ಅವರ ಅಧರ್ಮವನ್ನು ಹೊತ್ತುಕೊಂಡಿರುವೆ. 5ಅವರು ಎಷ್ಟು ವರ್ಷ ತಮ್ಮ ಅಧರ್ಮದ ಫಲವನ್ನು ಅನುಭವಿಸಬೇಕೋ ಅಷ್ಟು ದಿವಸ ಅಂದರೆ, ಮುನ್ನೂರತೊಂಬತ್ತು ದಿವಸ ನೀನು ಮಲಗಿಕೊಂಡಿರಬೇಕೆಂದು ನಿನಗೆ ನೇಮಿಸಿದ್ದೇನೆ; ಅಷ್ಟು ದಿವಸ ಇಸ್ರಯೇಲ್ ವಂಶದವರ ಅಧರ್ಮವನ್ನು ನೀನು ಹೊತ್ತುಕೊಂಡಿರಬೇಕು. 6ಅಷ್ಟು ದಿವಸಗಳು ತೀರಿದ ಮೇಲೆ ಬಲಮಗ್ಗುಲಲ್ಲಿ ಮಲಗಿಕೊಂಡು ಯೆಹೂದ ವಂಶದವರ ಅಧರ್ಮವನ್ನು ಹೊತ್ತುಕೊಳ್ಳಬೇಕು; ವರ್ಷ ಒಂದಕ್ಕೆ ಒಂದು ದಿನದ ಮೇರೆಗೆ ನಲವತ್ತು ದಿನ ಅವರ ಅಧರ್ಮವನ್ನು ಹೊತ್ತುಕೊಳ್ಳಬೇಕೆಂದು ನಿನಗೆ ಗೊತ್ತುಮಾಡಿದ್ದೇನೆ.

7 "ನಿನ್ನ ತೋಳಿಗೆ ಹೊದಿಕೆಯಿಲ್ಲದೆ, ಮುತ್ತಿಗೆಯಾದ ಜೆರುಸಲೇಮಿನ ಕಡೆಗೆ ಮೋರೆ ತಿರುಗಿಸಿ, ಅದರ ವಿರುದ್ಧ ಅಶುಭವನ್ನು ಪ್ರವಾದಿಸು. 8ಇಗೋ, ನಿನ್ನ ಮುತ್ತಿಗೆಯ ದಿನಗಳು ಮುಗಿಯುವ ತನಕ ನೀನು ಬಲಮಗ್ಗುಲಿಂದ ಎಡಮಗ್ಗುಲಿಗೆ ಹೊರಳದಂತೆ ನಿನ್ನನ್ನು ಬಂಧಿಸುವೆನು.

9 "ಇದಲ್ಲದೆ ನೀನು ಗೋದಿ, ಜವೆಗೋದಿ, ಅವರೆ, ಅಲಸಂದೆ, ಸಾವೆ, ಕಡಲೆ ಇವುಗಳನ್ನು ತೆಗೆದುಕೊಂಡು ಒಂದೇ ಪಾತ್ರೆಯಲ್ಲಿ ಹಾಕಿ ಅವುಗಳಿಂದ ರೊಟ್ಟಿಯನ್ನು ಮಾಡಿಕೋ; ಮಗ್ಗುಲಲ್ಲಿ ಮಲಗಿಕೊಳ್ಳುವಷ್ಟು ದಿನ, ಅಂದರೆ ಮುನ್ನೂರತೊಂಬತ್ತು ದಿನ ಅದನ್ನು ತಿನ್ನು. 10ನಿನ್ನ ಆಹಾರದ ತೂಕ

ದಿನವೊಂದಕ್ಕೆ 230 ಗ್ರಾಂ ಇರಲಿ; ಆಗಾಗಗ್ಗೆ ಸ್ವಲ್ಪ ಸ್ವಲ್ಪ ತಿನ್ನಬೇಕು. 11ಮತ್ತು ನೀರನ್ನು ಅಳತೆಯ ಪ್ರಕಾರ ದಿನವೊಂದಕ್ಕೆ ಎರಡು ಬಟ್ಟಲಂತೆ ಕುಡಿ; ಆಗಾಗ್ಗೆ ಸ್ವಲ್ಪ ಸ್ವಲ್ಪ ಕುಡಿಯಬೇಕು. 12ನೀನು ಸೌದೆಗೆ ಬದಲಾಗಿ ಮನುಷ್ಯನ ಮಲವನ್ನು ಉರಿಸಿ, ನಿನ್ನ ಜನರ ಕಣ್ಣೆದುರಿಗೆ ಆ ಹಿಟ್ಟನ್ನು ರೊಟ್ಟಿ ಮಾಡಿ ಜವೆಗೋದಿಯ ರೊಟ್ಟಿಗಳಂತೆ ತಿನ್ನು.

13 "ಹಾಗೆಯೇ ಇಸ್ರಯೇಲ್ ವಂಶದವರು ನನ್ನಿಂದ ಅನ್ಯದೇಶಗಳಿಗೆ ಅಟ್ಟಲ್ಪಟ್ಟು ಆ ದೇಶೀಯರ ನಡುವೆ ವಾಸಿಸುತ್ತಾ ತಮ್ಮ ಆಹಾರವನ್ನು ಹೊಲಸಾಗಿ ತಿನ್ನುವರು; ಇದು ಸರ್ವೇಶ್ವರನಾದ ನನ್ನ ನುಡಿ."

14 ಅದಕ್ಕೆ ನಾನು, "ಅಯ್ಯೋ, ದೇವರಾದ ಸರ್ವೇಶ್ವರ ನಾನು ಹೊಲಸನ್ನು ಮುಟ್ಟಿದವನಲ್ಲ, ನಾನು ಹುಟ್ಟಿದಂದಿನಿಂದ ಇಂದಿನವರೆಗೂ ಸತ್ತ ಪಶುವಿನ ಮಾಂಸವನ್ನಾಗಲಿ, ಕಾಡುಮೃಗ ಕೊಂದ ಪಶುವಿನ ಮಾಂಸವನ್ನಾಗಲಿ ತಿಂದವನೇ ಅಲ್ಲ; ಯಾವ ಅಸಹ್ಯಪದಾರ್ಥವೂ ನನ್ನ ಬಾಯೊಳಗೆ ಸೇರಲಿಲ್ಲ," ಎಂದು ಅರಿಕೆಮಾಡಿದೆ. 15ಅದಕ್ಕೆ ಅವರು, "ನೋಡು, ಮನುಷ್ಯರ ಮಲಕ್ಕೆ ಬದಲಾಗಿ ದನಗಳ ಸಗಣಿಯನ್ನು ನಿನಗೆ ಗೊತ್ತು ಮಾಡಿದ್ದೇನೆ. ಇದನ್ನು ಉರಿಸಿ ನಿನ್ನ ರೊಟ್ಟಿಯನ್ನು ಸುಟ್ಟುಕೋ," ಎಂದು ಉತ್ತರಕೊಟ್ಟರು.

16 ಇದಲ್ಲದೆ ಅವರು ನನಗೆ ಹೀಗೆ ಹೇಳಿದರು: "ನರಪುತ್ರನೇ, ನಾನು ಜೆರುಸಲೇಮಿನಲ್ಲಿ ಆಹಾರ ಸರಬರಾಜನ್ನು ನಿಲ್ಲಿಸಿಬಿಡುವೆನು. ನಿವಾಸಿಗಳು ಅನ್ನವನ್ನು ತೂಕಮಾಡಿ ಅಂಜಿಕೆಯಿಂದ ತಿನ್ನುವರು, ನೀರನ್ನು ಅಳತೆಮಾಡಿ ಕಳವಳದಿಂದ ಕುಡಿಯುವರು; 17ಅವರಲ್ಲಿ ಪ್ರತಿಯೊಬ್ಬರು ಅನ್ನ ನೀರಿನ ಕೊರತೆಯಿಂದ ಕುಗ್ಗಿಹೋಗಿ ತಮ್ಮ ಅಧರ್ಮದಿಂದ ಕ್ಷಯಿಸಿ ಹೋಗುವರು."

### ಕತ್ತರಿಸಿದ ಕೂದಲಿನ ಗತಿ ಜೆರುಸಲೇಮಿನವರ ಸ್ಥಿತಿ

**5** "ನರಪುತ್ರನೇ, ಹರಿತವಾದ ಖಡ್ಗವನ್ನು ತೆಗೆದುಕೊಂಡು, ಕ್ಷೌರಿಕನ ಕತ್ತಿಯನ್ನಾಗಿ ಉಪಯೋಗಿಸಿ ನಿನ್ನ ತಲೆಯನ್ನೂ ಗಡ್ಡವನ್ನೂ ಬೋಳಿಸಿಬಿಡು; ತಕ್ಕಡಿಯನ್ನು ತಂದು ತೂಗಿ ಆ ಕೂದಲನ್ನು ಸರಿಯಾಗಿ ಮೂರು ಭಾಗ ಮಾಡು. 2ಮುತ್ತಿಗೆಯ ದಿನಗಳು ಮುಗಿದ ಕೂಡಲೆ ಕೂದಲಿನ ಒಂದು ಭಾಗವನ್ನು ಪಟ್ಟಣದ ಮಧ್ಯೆ ಬೆಂಕಿಯಲ್ಲಿ ಸುಡು; ಇನ್ನೊಂದು ಭಾಗವನ್ನು ತೆಗೆದುಕೊಂಡು ಪಟ್ಟಣದ ಸುತ್ತಲು ಖಡ್ಗದಿಂದ ಕಡಿ; ಮತ್ತೊಂದು ಭಾಗವನ್ನು ಗಾಳಿಗೆ ತೂರಿಬಿಡು; (ಈ ಪ್ರಕಾರ ನಾನು ನನ್ನ ಜನರ ಹಿಂದೆ ಕತ್ತಿಯನ್ನು ಬೀಸುವೆನು). 3ಈ ಕಡೆಯ ಭಾಗದಲ್ಲಿ ಉಳಿಸಿಕೊಂಡ ಕೆಲವು ಕೂದಲನ್ನು ನಿನ್ನ ಮೇಲಂಗಿಯ ಅಂಚಿನಲ್ಲಿ ಕಟ್ಟು; 4ಆಮೇಲೆ ಇವುಗಳಲ್ಲಿ ಕೆಲವನ್ನು ಆರಿಸಿ ಬೆಂಕಿಯಲ್ಲಿ ಹಾಕಿ ಸುಡು; ಅವುಗಳಿಂದ ಬೆಂಕಿ ಹೊರಟು ಇಸ್ರಯೇಲ್ ವಂಶವನ್ನೆಲ್ಲಾ ವ್ಯಾಪಿಸುವುದು."

5 ಸರ್ವೇಶ್ವರನಾದ ದೇವರು ಹೀಗೆಂದರು: "ನಾನಾ ದೇಶಗಳ ನಡುವೆ, ನಾನಾ ಜನಾಂಗಗಳ ಮಧ್ಯೆ ನಾನು ಸ್ಥಾಪಿಸಿದ ಜೆರುಸಲೇಮ್ ಪಟ್ಟಣ ಈ ಮನೆ. 6ಅದು ನನ್ನ ನಿಯಮನಿಷ್ಠೆಗಳಿಗೆ ಒಳಪಡದೆ ಇತರ ಜನಾಂಗಗಳಿಗಿಂತಲೂ ಸುತ್ತಲಿನ ದೇಶಗಳಿಗಿಂತಲೂ ಹೆಚ್ಚು ಅಧರ್ಮವನ್ನು ನಡೆಸಿದೆ; ಅದರ ನಿವಾಸಿಗಳು ನನ್ನ ನಿಯಮಗಳನ್ನು ಅನುಸರಿಸದೆ ನನ್ನ ವಿಧಿಗಳನ್ನು ನಿರಾಕರಿಸಿದ್ದಾರೆ. 7ಹೀಗಿರಲು ಸರ್ವೇಶ್ವರ ಸ್ವಾಮಿಯಾದ ನಾನು ಹೇಳುವುದಿದು: 'ನೀವು ನನ್ನ ನಿಯಮಗಳನ್ನು ಅನುಸರಿಸದೆ, ನನ್ನ ವಿಧಿಗಳನ್ನು ಕೈಗೊಳ್ಳದೆ, ನಿಮ್ಮ ಸುತ್ತಲಿನ ಜನಾಂಗಗಳ ಧರ್ಮವಿಧಿಗಳನ್ನು ಆಚರಿಸಿ, ಆ ಜನಾಂಗಗಳಿಗಿಂತ ಹೆಚ್ಚು ದಂಗೆಕೋರರಾಗಿ ವರ್ತಿಸಿದ್ದೀರಿ. 8ಆದುದರಿಂದ ಜೆರುಸಲೇಮೇ, ಇಗೋ, ನಾನೇ ನಿನಗೆ ವಿರುದ್ಧವಾಗಿದ್ದೇನೆ. ಜನಾಂಗಗಳ ಕಣ್ಣೆದುರಿಗೆ ನಿನ್ನ ಜನರನ್ನು ದಂಡಿಸುವೆನು; ಇದು ಸರ್ವೇಶ್ವರನಾದ ನನ್ನ ನುಡಿ. 9ನೀನು ಬಹಳ ಅಸಹ್ಯಕೃತ್ಯಗಳಲ್ಲಿ ತೊಡಗಿದ್ದರಿಂದ ನಾನು ಈವರೆಗೂ ಇನ್ನು ಮುಂದಕ್ಕೂ ಮಾಡದಂಥ ದಂಡನೆಯನ್ನು ಈಗ ನಿನಗೆ ಮಾಡುವೆನು. 10ನಿನ್ನಲ್ಲಿ ತಂದೆಗಳು ಮಕ್ಕಳನ್ನು, ಮಕ್ಕಳು ತಂದೆಗಳನ್ನು, ತಿನ್ನುವರು; ನಾನು ನಿನ್ನನ್ನು ದಂಡಿಸಿ ನಿನ್ನಲ್ಲಿ ಉಳಿದ ಸಮಸ್ತರನ್ನು ಎಲ್ಲಾ ಕಡೆಯ ಗಾಳಿಗೂ ತೂರುವೆನು.'

11 "ನನ್ನ ಜೀವದಾಣೆ, ನೀನು ನಿನ್ನ ಹೇರಳವಾದ ಹೇಯ ವಿಗ್ರಹಗಳಿಂದಲೂ ಅಸಹ್ಯ ವಸ್ತುಗಳಿಂದಲೂ ನನ್ನ ಪವಿತ್ರಾಲಯವನ್ನು ಹೊಸಲು ಮಾಡಿದ್ದರಿಂದ ಖಂಡಿತವಾಗಿ ನಾನು ಸಹಿಸೆನು,

ಕಟಾಕ್ಷಿಸೆನು, ಕ್ಷಮಿಸೆನು. 12ನಿನ್ನಲ್ಲಿನ ಮೂರನೆಯ ಒಂದು ಭಾಗದ ಜನರು ವ್ಯಾಧಿಯಿಂದ ಸಾಯುವರು, ನಿನ್ನ ಮಧ್ಯದಲ್ಲೆ ಕ್ಷಾಮದಿಂದ ನಾಶವಾಗುವರು; ಇನ್ನೊಂದು ಭಾಗದವರು ನಿನ್ನ ಸುತ್ತಲ ಖಡ್ಗದಿಂದ ಹತರಾಗುವರು; ಮತ್ತೊಂದು ಭಾಗದವರನ್ನು ನಾನು ಎಲ್ಲಾ ಕಡೆಯ ಗಾಳಿಗೂ ತೂರಿ ಅವರ ಹಿಂದೆ ಕತ್ತಿಯನ್ನು ಬೀಸುವೆನು.

13 "ಹೀಗೆ ನನ್ನ ಸಿಟ್ಟನ್ನು ತೀರಿಸಿಕೊಳ್ಳುವೆನು, ನನ್ನ ರೋಷವನ್ನು ಅವರ ಮೇಲೆ ಕಾರಿ ಶಾಂತನಾಗುವೆನು; ಆಗ್ರಹದಿಂದ ಮಾತಾಡಿದವನು ಸರ್ವೇಶ್ವರನಾದ ನಾನೇ ಎಂಬುದು ನನ್ನ ಕೋಪವನ್ನು ಅವರ ಮೇಲೆ ಹೊಯ್ದುಬಿಟ್ಟ ಬಳಿಕ ಅವರಿಗೆ ಗೊತ್ತಾಗುವುದು. 14ಹಾದು ಹೋಗುವವರೆಲ್ಲರ ಕಣ್ಣೆದುರಿಗೆ ನಾನು ನಿನ್ನನ್ನು ಹಾಳುಮಾಡಿ ಸುತ್ತಲಿನ ಜನಾಂಗಗಳ ನಿಂದೆಗೆ ಗುರಿಮಾಡುವೆನು.

15 "ನಾನು ಕೋಪದಿಂದ, ರೋಷದಿಂದ ಹಾಗು ತೀವ್ರ ಖಂಡನೆಯಿಂದ ನಿನಗೆ ಮಾಡುವ ದಂಡನೆಗಳು ಸುತ್ತಲಿನ ಜನಾಂಗಗಳ ದೂಷಣೆಗೂ ಪರಿಹಾಸ್ಯಗಳಿಗೂ ಬೆರಗು ಬುದ್ಧಿವಾದಗಳಿಗೂ ಆಸ್ಪದವಾಗುವುವು; ಇದು ಸರ್ವೇಶ್ವರನಾದ ನನ್ನ ನುಡಿ. 16ಆಗ ನಾನು ನಿನ್ನನ್ನು ಹಾಳು ಮಾಡಲು ಕ್ಷಾಮವೆಂಬ ವಿನಾಶಕರವಾದ ತೀಕ್ಷ್ಣಬಾಣಗಳನ್ನು ನಿನ್ನ ಮೇಲೆ ಬಿಡುವೆನು; ನಿನ್ನನ್ನು ಬರದಿಂದ ಬಹಳವಾಗಿ ಬಾಧಿಸಿ ನಿನ್ನ ಆಹಾರ ಸರಬರಾಜನ್ನು ನಿಲ್ಲಿಸುವೆನು. 17ನಾನು ಕಳುಹಿಸುವ ಕ್ಷಾಮದಿಂದ, ದುಷ್ಟಮೃಗಗಳಿಂದ ನಿನಗೆ ಪುತ್ರಶೋಕ ಪ್ರಾಪ್ತಿಯಾಗುವುದು; ವ್ಯಾಧಿಯೂ ರಕ್ತಪ್ರವಾಹವೂ ನಿನ್ನನ್ನು ಪೀಡಿಸುವುದು; ನಿನ್ನನ್ನು ಖಡ್ಗಕ್ಕೆ ತುತ್ತುಮಾಡುವೆನು. ಇದು ಸರ್ವೇಶ್ವರನಾದ ನನ್ನ ನುಡಿ."

## ಪೂಜಾಸ್ಥಳಗಳಾಗಿದ್ದ ಬೆಟ್ಟಗುಡ್ಡಗಳ ವಿರುದ್ಧ

**6** ಸರ್ವೇಶ್ವರಸ್ವಾಮಿ ನನಗೆ ಅನುಗ್ರಹಿಸಿದ ವಾಣಿ ಇದು: "ನರಪುತ್ರನೇ, 2ಇಸ್ರಯೇಲಿನ ಬೆಟ್ಟಗಳಿಗೆ ಅಭಿಮುಖನಾಗಿ ನಿಂತು ಅವುಗಳನ್ನು ಕುರಿತು ಈ ದೈವೋಕ್ತಿಯನ್ನು ನುಡಿ, 3'ಇಸ್ರಯೇಲಿನ ಬೆಟ್ಟಗಳೇ, ಸರ್ವೇಶ್ವರನಾದ ದೇವರ ಈ ಮಾತನ್ನು ಕೇಳಿರಿ; ಸರ್ವೇಶ್ವರನಾದ ದೇವರು ಬೆಟ್ಟಗುಡ್ಡಗಳಿಗೂ ತೊರೆತಗ್ಗುಗಳಿಗೂ ಹೀಗೆ ಹೇಳುತ್ತಾರೆ: ಇಗೋ, ನಾನೇ ನಿಮ್ಮ ಮೇಲೆ ಖಡ್ಗವನ್ನು ಬರಮಾಡಿ ನಿಮ್ಮ ಪೂಜಾಸ್ಥಳಗಳನ್ನು ನಾಶಪಡಿಸುವೆನು. 4ನಿಮ್ಮ ಯಜ್ಞವೇದಿಗಳು ಹಾಳಾಗುವುವು. ನಿಮ್ಮ ಸೂರ್ಯಸ್ತಂಭಗಳು ಚೂರುಚೂರಾಗುವುವು. ನಿಮ್ಮವರು ನಿಮ್ಮ ಬೊಂಬೆಗಳ ಮುಂದೆ ಹತರಾಗಿ ಬೀಳುವಂತೆ ಮಾಡುವೆನು. 5ನಾನು ಇಸ್ರಯೇಲರ ಹೆಣಗಳನ್ನು ಅವರ ಬೊಂಬೆಗಳ ಮುಂದೆ ಬಿಸಾಡಿ ನಿಮ್ಮ ಯಜ್ಞವೇದಿಗಳ ಸುತ್ತಲು ನಿಮ್ಮ ಎಲುಬುಗಳನ್ನು ಎರಚಿಬಿಡುವೆನು. 6ನೀವು ವಾಸಿಸುವ ದೇಶದಲ್ಲೆಲ್ಲಾ ಊರುಗಳು ಹಾಳಾಗುವುವು; ಪೂಜಾಸ್ಥಳಗಳು ಪಾಳುಬೀಳುವುವು; ಇದರಿಂದ ನಿಮ್ಮ ಯಜ್ಞವೇದಿಕೆಗಳು ಹಾಳು ಪಾಳಾಗುವುವು; ನಿಮ್ಮ ಬೊಂಬೆಗಳು ಪುಡಿಪುಡಿಯಾಗುವುವು; ನಿಮ್ಮ ಸೂರ್ಯಸ್ತಂಭಗಳು ಚೂರುಚೂರಾಗುವುವು; ನೀವು ರೂಪಿಸಿದ ವಿಗ್ರಹಗಳು ಅಳಿದುಹೋಗುವುವು; 7ಹತರಾದವರು ನಿಮ್ಮ ಮಧ್ಯದಲ್ಲಿ ಬೀಳುವರು; ಆಗ ನಾನೇ ಸರ್ವೇಶ್ವರ ಎಂದು ನಿಮಗೆ ಗೊತ್ತಾಗುವುದು. 8ಆದರೂ ನಾನು ಜನಶೇಷವನ್ನು ಉಳಿಸುವೆನು; ಹೇಗೆಂದರೆ ನೀವು ಅನ್ಯದೇಶಗಳಿಗೆ ಚದರಿ ಹೋಗುವಾಗ ನಿಮ್ಮಲ್ಲಿ ಕೆಲವರು ಆ ಜನಾಂಗಗಳ ಮಧ್ಯೆ ಕತ್ತಿಗೆ ತಪ್ಪಿಸಿಕೊಳ್ಳುವರು. 9ಹೀಗೆ ಅಳಿದುಳಿದು ಸೆರೆಗೆ ಒಯ್ಯಲ್ಪಟ್ಟು ಜನಾಂಗಗಳ ಮಧ್ಯೆ ಕತ್ತಿಗೆ ತಪ್ಪಿಸಿಕೊಳ್ಳುವರು. 9ಹೀಗೆ ಅಳಿದುಳಿದು ಸೆರೆಗೆ ಒಯ್ಯಲ್ಪಟ್ಟು ಜನಾಂಗಗಳ ಮಧ್ಯೆ ವಾಸಿಸುವ ನಿಮ್ಮವರು ನನ್ನನ್ನು ಸ್ಮರಿಸಿಕೊಳ್ಳುವರು. ಅನ್ಯ ದೇವತೆಗಳಲ್ಲಿನ ಮೋಹದಿಂದ ನನ್ನನ್ನು ತೊರೆದ ತಮ್ಮ ಹೃದಯವನ್ನು ಹಾಗು ತಮ್ಮ ವಿಗ್ರಹಗಳ ಮೇಲಣ ಕಾಮದಿಂದ ದೇವ ದ್ರೋಹ ಮಾಡಿದ ತಮ್ಮ ಕಣ್ಣುಗಳನ್ನು ಭಂಗ ಪಡಿಸಿದವನು ನಾನೇ ಎಂಬುದಾಗಿ ನನ್ನನ್ನು ಜ್ಞಾಪಕಮಾಡಿಕೊಳ್ಳುವರು. ತಾವು ಬಹಳ ಅಸಹ್ಯಕಾರ್ಯಗಳನ್ನು ನಡೆಸಿ ಕೆಟ್ಟತನವನ್ನು ಮಾಡಿದ್ದೇವೆಂದು ತಮ್ಮನ್ನು ತಾವೇ ಹೇಸಿಕೊಳ್ಳುವರು. 10ನಾನೇ ಸರ್ವೇಶ್ವರ ಎಂದು ಅವರಿಗೆ ಗೊತ್ತಾಗುವುದು; ಈ ಕೇಡನ್ನು ಅವರಿಗೆ ಮಾಡುವೆನು ಎಂದು ನಾನು ಹೇಳಿದ್ದು ಬರೀ ಮಾತಲ್ಲ."

11 ಸರ್ವೇಶ್ವರನಾದ ದೇವರು ನುಡಿದದ್ದು: "ನೀನು ಚಪ್ಪಾಳೆಹೊಡೆದು ನೆಲವನ್ನೊದ್ದು ಹೀಗೆ ಹೇಳು,
'ಅಕಟಾ, ಇಸ್ರಯೇಲ್ ವಂಶದವರ ಅಸಹ್ಯವಾದ ಕೆಟ್ಟಕೆಲಸಗಳೆಷ್ಟು ! ಅವರು ಖಡ್ಗ, ಕ್ಷಾಮ, ವ್ಯಾಧಿಗಳಿಂದ
ಸತ್ತೇ ಸಾಯುವರು. 12ದೂರದಲ್ಲಿರುವವನು ವ್ಯಾಧಿಯಿಂದ ಸಾಯುವನು, ಹತ್ತಿರದಲ್ಲಿರುವವನು ಖಡ್ಗದಿಂದ
ಸಾಯುವನು; ಅಂತು ನಾನು ಅವರ ಮೇಲೆ ಇಟ್ಟಿರುವ ರೋಷವನ್ನು ತೀರಿಸಿಬಿಡುವೆನು. 13ಆ ವಂಶದವರು
ಎತ್ತರವಾದ ಎಲ್ಲಾ ಗುಡ್ಡಗಳ ಮೇಲೆ, ಎಲ್ಲಾ ಬೆಟ್ಟಗಳ ತುದಿಗಳಲ್ಲಿ, ಸೊಂಪಾದ ಎಲ್ಲಾ ಮರಗಳ ಕೆಳಗೆ
ಹಾಗು ತಮ್ಮ ಸಮಸ್ತ ವಿಗ್ರಹಗಳಿಗೆ ಸುಗಂಧ ಹೋಮಮಾಡುತ್ತಿದ್ದ ದಟ್ಟವಾದ ಎಲ್ಲಾ ಮರಗಳ ಕೆಳಗೆ
ಹತರಾಗಿ, ತಮ್ಮ ಯಜ್ಞವೇದಿಕೆಗಳ ಸುತ್ತಲು ತಮ್ಮ ಬೊಂಬೆಗಳ ನಡುವೆ ಬಿದ್ದಿರುವಾಗ ನಾನೇ ಸರ್ವೇಶ್ವರ
ಎಂದು ಗೊತ್ತಾಗುವುದು. 14ನಾನು ಅವರ ವಿರುದ್ಧ ಕೈಯೆತ್ತಿ ಅವರು ವಾಸವಾಗಿರುವ ದೇಶವನ್ನೆಲ್ಲಾ
ಮರುಭೂಮಿಯಿಂದ ದಿಬ್ಬದವರೆಗೂ ಹಾಳುಪಾಳು ಮಾಡುವೆನು; ನಾನೇ ಸರ್ವೇಶ್ವರ ಎಂದು ಅವರಿಗೆ
ಗೊತ್ತಾಗುವುದು."

## ನಾಡಿನ ಸರ್ವನಾಶ ಸಮೀಪಿಸಿತು

**7** ಇದಲ್ಲದೆ ಸರ್ವೇಶ್ವರ ಅನುಗ್ರಹಿಸಿದ ಈ ವಾಣಿ ನನಗೆ ಕೇಳಿಸಿತು: 2"ನರಪುತ್ರನೇ, ಸರ್ವೇಶ್ವರನಾದ
ದೇವರು ಇಸ್ರಯೇಲ್ ನಾಡಿಗೆ ಹೀಗೆ ನುಡಿಯುತ್ತಾರೆ: 'ಪ್ರಳಯ, ಪೂರ್ಣ ಪ್ರಳಯ ನಾಡಿನ
ಚತುರ್ದಿಕ್ಕಿನಲ್ಲೂ ಸಂಭವಿಸಿದೆ.'

3 "ಈಗಲೇ ನಿನಗೆ ಪ್ರಳಯ ಬಂದು ಬಿಟ್ಟಿತು; ನಾನು ನನ್ನ ಕೋಪವನ್ನು ನಿನ್ನ ಮೇಲೆ ಬರಮಾಡಿ,
ನಿನ್ನ ನಡತೆಗೆ ತಕ್ಕಂತೆ ನ್ಯಾಯ ತೀರಿಸಿ, ನಿನ್ನ ಸಮಸ್ತ ಅಸಹ್ಯಕಾರ್ಯಗಳ ಫಲವನ್ನು ನಿನಗೆ ಉಣ್ಣಿಸುವೆನು.
4ನಿನ್ನನ್ನು ಕಟಾಕ್ಷಿಸೆನು, ಉಳಿಸೆನು; ನಿನ್ನ ದುರ್ಮಾರ್ಗದ ಫಲವನ್ನು ನಿನಗೆ ತಿನ್ನಿಸುವೆನು; ನಿನ್ನ ಅಸಹ್ಯ
ಕಾರ್ಯಗಳು ನಿನ್ನ ಅನುಭವಕ್ಕೆ ಬರುವುವು; ಆಗ ನಾನೇ ಸರ್ವೇಶ್ವರ ಎಂದು ನಿನಗೆ ಗೊತ್ತಾಗುವುದು."

5 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಅಯ್ಯೋ, ಕೇಡು, ಎಂದೂ ಕಾಣದ ಕೇಡು, ಇಗೋ
ಬಂದಿತು; 6ಪ್ರಳಯ ಬಂದಿತು, ಪೂರ್ಣಪ್ರಳಯ ಬಂದಿತು, ನಿನ್ನನ್ನು ಚಚ್ಚುವುದಕ್ಕೆ ಚಚ್ಚರಗೊಂಡಿದೆ,
ಇಗೋ ಬಂದೇ ಬಂತು; 7ದೇಶನಿವಾಸಿಯೇ, ನಿನ್ನ ಗತಿ ಮುಗಿಯಿತು, ಸಮಯ ಬಂದಿತು, ದಿನ
ಸಮೀಪಿಸಿತು; ಬೆಟ್ಟಗಳ ಮೇಲೆ ಕೇಳಿಸುವ ಧ್ವನಿ ಉತ್ಸಾಹಧ್ವನಿಯಲ್ಲ, ಅದು ಬರೀ ಗೋಳೇ!

8 "ಇನ್ನು ಸ್ವಲ್ಪಕಾಲದೊಳಗೆ ನಾನು ನಿನ್ನ ಮೇಲೆ ನನ್ನ ರೋಷಾಗ್ನಿಯನ್ನು ಸುರಿಸುವೆನು, ನನ್ನ
ಕೋಪವನ್ನು ತೀರಿಸಿಕೊಳ್ಳುವೆನು; ನಿನ್ನ ನಡತೆಗೆ ತಕ್ಕ ದಂಡನೆಯನ್ನು ವಿಧಿಸಿ, ನಿನ್ನ ಅಸಹ್ಯ ಕಾರ್ಯಗಳ
ಫಲವನ್ನೆಲ್ಲಾ ನಿನಗೆ ತಿನ್ನಿಸುವೆನು. 9ನಿನ್ನನ್ನು ಕಟಾಕ್ಷಿಸುವುದಿಲ್ಲ, ಉಳಿಸುವುದಿಲ್ಲ, ನಿನ್ನ ದುರ್ಮಾರ್ಗಗಳಿಗೆ
ತಕ್ಕ ಗತಿಯನ್ನು ಬರಮಾಡುವೆನು. ಆಗ ನಿನ್ನ ಅಸಹ್ಯಕಾರ್ಯಗಳು ನಿನ್ನ ಅನುಭವಕ್ಕೆ ಬರುವುವು;
ಸರ್ವೇಶ್ವರನಾದ ನಾನು ದಂಡಿಸುವವನು ಎಂಬುದು ನಿನಗೆ ಚೆನ್ನಾಗಿ ಗೊತ್ತಾಗುವುದು.

10 "ಇಗೋ, ದಂಡನೆಯ ದಿನ ಬಂದೇ ಬಿಟ್ಟಿತು; ನಿನಗೆ ದುರ್ಗತಿ ಅಂಕುರಿಸಿದೆ, ಕೋಲು
ಹೂಬಿಟ್ಟಿದೆ, ಹೆಮ್ಮೆ ಚಿಗುರಿದೆ; 11ಹಿಂಸೆ ಬೆಳೆದು ಬೆಳೆದು ಕೆಡುಕಿನ ಕೋಲಾಗಿದೆ; ನಿನ್ನವರಲ್ಲಿ ಯಾರೂ
ಉಳಿಯರು. ಆ ಜನಸಮೂಹದಲ್ಲೂ ಅವರ ಆಸ್ತಿಯಲ್ಲೂ ಶೇಷವೇನೂ ಇರದು; ಅವರಲ್ಲಿ ಯಾವ
ಶ್ರೇಷ್ಠತೆಯೂ ನಿಲ್ಲದು.

12 "ಸಮಯ ಬಂದಿದೆ, ದಿನ ಹತ್ತಿರವಾಗಿದೆ; ಕೊಂಡುಕೊಳ್ಳುವವನು ಹರ್ಷಿಸದಿರಲಿ,
ಮಾರುವವನು ದುಃಖಿಸದಿರಲಿ; ರೋಷಾಗ್ನಿ ಆ ಸಮೂಹದವರೆಲ್ಲರ ಮೇಲೆ ಹತ್ತಿದೆ. 13ಮಾರಿದವನು ಎಷ್ಟು
ವರ್ಷ ಬದುಕಿದರೂ ಮಾರಿದ ಸೊತ್ತು ಅವನ ವಶಕ್ಕೆ ತಿರುಗಿಬಾರದು; ಉಂಟಾದ ದಿವ್ಯದರ್ಶನ
ಸಮಾಜದವರಿಗೆಲ್ಲಾ ಸಂಬಂಧಿಸಿದೆ, ಯಾರೂ ಹಿಂದಿರುಗರು, ಯಾರೂ ತಮ್ಮ ಅಧರ್ಮದಿಂದ ತಮ್ಮ
ಜೀವವನ್ನು ಉಳಿಸಿಕೊಳ್ಳರು; 14ಅವರು ಕೊಂಬನ್ನೂದಿ ಸರ್ವಸನ್ನಾಹಮಾಡಿದರೂ ಯಾರು ಯುದ್ಧಕ್ಕೆ
ಹೊರಡರು; ನನ್ನ ರೋಷಾಗ್ನಿ ಆ ಸಮಾಜದವರೆಲ್ಲರ ಮೇಲೆ ಹತ್ತಿದೆ.

## ಇಸ್ರಯೇಲಿನ ಪಾಪಕೃತ್ಯಗಳು

15 “ಊರ ಹೊರಗೆ ಖಡ್ಗಕ್ಕೆ, ಊರೊಳಗೆ ವ್ಯಾಧಿ ಕ್ಷಾಮಗಳಿಗೆ ತುತ್ತಾಗುವರು; ಹೊರಗಿರುವವರು ಖಡ್ಗದಿಂದ ಸಾಯುವರು. 16ಅವರಲ್ಲಿ ಪಲಾಯನ ಮಾಡಿದವರು ತಪ್ಪಿಸಿಕೊಂಡು, ತಮ್ಮ ಅಧರ್ಮದಲ್ಲಿಯೇ ಇದ್ದು, ಡೊಂಗರಗಳಲ್ಲಿನ ಪಾರಿವಾಳಗಳಂತೆ ಬೆಟ್ಟಗಳ ಮೇಲೆ ಗೋಳಿಡುತ್ತಿರುವರು. 17ಎಲ್ಲರ ಕೈಗಳು ಜೋಲು ಬಿದ್ದಿರುವುವು; ಎಲ್ಲರ ಮೊಣಕಾಲುಗಳು ನೀರಿನಂತೆ ಅದರುವುವು. 19ಅವರು ಗೋಣಿತಟ್ಟನ್ನು ಸುತ್ತಿಕೊಳ್ಳುವರು, ದಿಗಿಲು ಅವರನ್ನು ಆವರಿಸಿ ಬಿಡುವುದು; ಎಲ್ಲರ ಮುಖದಲ್ಲೂ ನಾಚಿಕೆ ತುಂಬಿರುವುದು, ಎಲ್ಲರು ತಲೆಬೋಳಿಸಿಕೊಂಡು ಇರುವರು. 19ಅವರು ತಮ್ಮ ಬೆಳ್ಳಿಯನ್ನು ಬೀದಿಗಳಲ್ಲಿ ಬಿಸಾಡುವರು, ಅವರ ಬಂಗಾರ ಅಶುದ್ಧ ಪದಾರ್ಥದಂತಿರುವುದು; ಸರ್ವೇಶ್ವರ ರೋಷವನ್ನು ತೀರಿಸುವ ದಿನದಲ್ಲಿ ಅವರ ಬೆಳ್ಳಿ ಬಂಗಾರ ಅವರನ್ನು ರಕ್ಷಿಸಲಾರದು; ಅವರ ಇಷ್ಟಾರ್ಥ ನೆರವೇರದು, ಅವರ ಹೊಟ್ಟೆ ತುಂಬದು; ಏಕೆಂದರೆ ಅವರ ಆಸ್ತಿ ಅವರಿಗೆ ಪಾಪಕ್ಕೆ ಕಾರಣವಾಗಿತ್ತು.

20 “ಅವರ ಆಭರಣಗಳ ಚಂದವು ಅವರಿಗೆ ಗರ್ವಕ್ಕೆ ಆಸ್ಪದವಾಯಿತು. ಇದಲ್ಲದೆ ಹೇಯವೂ ಅಸಹ್ಯವೂ ಆದ ತಮ್ಮ ದೇವತೆಗಳ ಪ್ರತಿಮೆಗಳನ್ನು ಬೆಳ್ಳಿಬಂಗಾರದಿಂದ ರೂಪಿಸುತ್ತಿದ್ದರು. 21ಆದಕಾರಣ ಅದನ್ನು ಅವರಿಗೆ ಅಶುದ್ಧ ಪದಾರ್ಥವನ್ನಾಗಿ ಮಾಡುವೆನು. ಅನ್ಯರ ಕೈಯಿಂದ ಕೊಳ್ಳೆಹೊಡೆಯಿಸಿ ಲೋಕಕುಖ್ಯಾತ ದುಷ್ಟರಿಂದ ಸೂರೆಮಾಡಿಸುವೆನು; ಅವರು ಅದನ್ನು ಹೊಲೆಗೊಳಿಸುವರು. 22ನಾನು ಅವರ ಕಡೆಯಿಂದ ನನ್ನ ಮುಖವನ್ನು ತಿರುಗಿಸಿಕೊಳ್ಳುವೆನು; ಅವರು ನನ್ನ ಪ್ರಿಯ ಮಂದಿರವನ್ನು ಅಪವಿತ್ರಗೊಳಿಸುವರು. ಕಳ್ಳರು ಅದರಲ್ಲಿ ನುಗ್ಗಿ ಅದನ್ನು ಹೊಲೆಗೆಡಿಸುವರು.

23 “ಒಂದು ಸರಪಣಿಯನ್ನು ಮಾಡು; ಏಕೆಂದರೆ ನಾಡು ನರಹತ್ಯಪೂರಿತವಾಗಿದೆ. ಪಟ್ಟಣವು ಹಿಂಸಾಕೃತ್ಯಗಳಿಂದ ತುಂಬಿಹೋಗಿದೆ. 24ಹೀಗಿರಲು ನಾನು ಅತಿ ದುಷ್ಟಜನಾಂಗಗಳನ್ನು ಬರಮಾಡುವೆನು; ಅವು ನನ್ನ ಜನರ ಮನೆಗಳನ್ನು ವಶಮಾಡಿಕೊಳ್ಳುವುವು; ನಾನು ಬಲಿಷ್ಠರ ಸೊಕ್ಕನ್ನು ಅಡಗಿಸುವೆನು, ಅವರ ಪವಿತ್ರ ಸ್ಥಾನಗಳು ಹೊಲೆಗೆಡುವುವು; 25ಸಂಕಟ ಸಂಭವಿಸುವುದು; ಅಲ್ಪ ಸ್ವಲ್ಪ ಸಮಾಧಾನವನ್ನು ಹುಡುಕಿದರೂ ಸಿಕ್ಕದು. 26ಉಪದ್ರವದ ಮೇಲೆ ಉಪದ್ರವ, ಸುದ್ದಿಯ ಮೇಲೆ ಸುದ್ದಿ ಹರಡುವುವು; ‘ದಿವ್ಯದರ್ಶನವಾಯಿತೆ’ ಎಂದು ಪ್ರವಾದಿಯನ್ನು ಕೇಳುತ್ತಲೇ ಇರುವರು; ಯಾಜಕರಲ್ಲಿ ಧರ್ಮೋಪದೇಶ ಅಡಗಿಹೋಗುವುದು, ಹಿರಿಯರಲ್ಲಿ ಸಲಹೆ ಸಮಾಲೋಚನೆ ಇಲ್ಲವಾಗುವುದು. 27ರಾಜನು ದುಃಖಿಸುವನು, ದಿಗಿಲು ಒಡೆಯನನ್ನು ಮುಸುಕುವುದು, ಜನಸಾಮಾನ್ಯರ ಕೈಗಳು ತತ್ತರಿಸುವುವು; ನಾನು ಅವರ ದುರ್ನಡತೆಗೆ ತಕ್ಕ ಪ್ರತೀಕಾರವನ್ನು ಮಾಡಿ ಅವರ ದುಷ್ಕರ್ಮಗಳಿಗೆ ಸರಿಯಾದ ದಂಡನೆಯನ್ನು ವಿಧಿಸುವೆನು; ನಾನೇ ಸರ್ವೇಶ್ವರ ಎಂದು ಅವರಿಗೆ ಗೊತ್ತಾಗುವುದು.”

## ಎರಡನೆಯ ದರ್ಶನ – ಜೆರುಸಲೇಮಿನಲ್ಲಿ ವಿಗ್ರಹಾರಾಧನೆ

**8** ಅದು ಆರನೆಯ ವರ್ಷದ ಆರನೆಯ ತಿಂಗಳಿನ ಐದನೆಯ ದಿನ. ನಾನೂ ಯಹೂದದ ಹಿರಿಯರೂ ನನ್ನ ಮನೆಯೊಳಗೆ ಎದುರುಬದುರಾಗಿ ಕುಳಿತಿದ್ದೆವು. ಸರ್ವೇಶ್ವರನಾದ ದೇವರ ಹಸ್ತಸ್ಪರ್ಶದಿಂದ ನಾನು ಪರವಶನಾದೆ. 2ಇಗೋ, ನಾನು ನೋಡುತ್ತಿದ್ದಂತೆ ಬೆಂಕಿ ಉರಿಯುತ್ತದೋ ಎಂಬಂತೆ ಮನುಷ್ಯಾಕೃತಿಯೊಂದು ನನಗೆ ಕಾಣಿಸಿತು; ಸೊಂಟದ ಹಾಗೆ ತೋರುವ ಅದರ ಮಧ್ಯಭಾಗದಿಂದ ಕೆಳಗಡೆ ಬೆಂಕಿ ಉರಿಯುತ್ತಿತ್ತು; ಅದರ ಮಧ್ಯಭಾಗದಿಂದ ಮೇಲ್ಗಡೆ ಸುವರ್ಣವು ಥಳಥಳಿಸುತ್ತದೋ ಎಂಬಂತೆ ಅದ್ಭುತ ಕಾಂತಿಯೊಂದು ಹೊಳೆಯಿತು. 3ಆಗ ಆ ಮನುಷ್ಯಾಕೃತಿ ಮಾನವನ ಹಸ್ತದಂಥ ಹಸ್ತವನ್ನು ಚಾಚಿ ನನ್ನ ಜಂಡಿಕೆಯನ್ನು ಹಿಡಿಯಿತು. ದೇವರಾತ್ಮ ನನ್ನನ್ನು ಎತ್ತಿಕೊಂಡು ಭೂಮ್ಯಾಕಾಶಗಳ ನಡುವೆ ಜೆರುಸಲೇಮಿನವರೆಗೆ ಒಯ್ದಿತು. ಅಲ್ಲಿನ ದೇವಾಲಯದ ಒಳಗಣ ಪ್ರಾಕಾರದ ಉತ್ತರ ಬಾಗಿಲ ಮುಂದೆ, ದೇವರನ್ನು ರೋಷಗೊಳಿಸುವ ವಿಗ್ರಹವು ಮೊದಲಿದ್ದ ಸ್ಥಳದಲ್ಲಿ ನಿಲ್ಲಿಸಿದ ಹಾಗೆ ಆ ದೇವದರ್ಶನದಲ್ಲಿ ನನಗೆ ಕಂಡು ಬಂದಿತು.

4 ಆಗ ಇಗೋ, ಇಸ್ರಯೇಲಿನ ದೇವರ ಮಹಿಮಾದ್ಭುತ ದರ್ಶನವು ಬಯಲು ಸೀಮೆಯಲ್ಲಿ ಆದಂತೆ ಇಲ್ಲಿಯೂ ನನಗಾಯಿತು. 5ಆಗ ಅವರು ನನಗೆ, "ನರಪುತ್ರನೇ, ಉತ್ತರಕ್ಕೆ ಕಣ್ಣೆತ್ತಿ ನೋಡು," ಎಂದು ಹೇಳಿದರು; ಅಂತೆಯೇ ನಾನು ಉತ್ತರಕ್ಕೆ ಕಣ್ಣೆತ್ತಿ ನೋಡಿದೆ. ಇಗೋ ದೇವರನ್ನು ರೋಷಗೊಳಿಸುವ ಅದೇ ವಿಗ್ರಹವು ಬಲಿಪೀಠದ ಬಾಗಿಲ ಉತ್ತರದಲ್ಲಿ ಪ್ರವೇಶದ್ವಾರದ ಮುಂದೆ ನಿಂತಿತ್ತು.

6 ಆಗ ಅವರು ನನಗೆ, "ನರಪುತ್ರನೇ, ಇವರು ಮಾಡುವುದನ್ನು ನೋಡಿದೆಯಾ? ಇಸ್ರಯೇಲ್ ವಂಶದವರು ಇಲ್ಲಿ ನಡೆಸುವ ಅಧಿಕ ದುರಾಚಾರಗಳನ್ನೆಲ್ಲ ಕಂಡೆಯಾ? ಇದರಿಂದ ನಾನು ನನ್ನ ಪವಿತ್ರಾಲಯವನ್ನು ಬಿಟ್ಟು ದೂರ ಹೋಗಬೇಕಾಯಿತು. ಬಾ, ಇವುಗಳಿಗಿಂತ ಇನ್ನು ಹೆಚ್ಚಾದ ದುರಾಚಾರಗಳನ್ನು ನೋಡುವೆ," ಎಂದು ಹೇಳಿದರು.

7 ಆಮೇಲೆ ದೇವರು ನನ್ನನ್ನು ಪ್ರಾಕಾರದ ಬಾಗಿಲಿಗೆ ಬರಮಾಡಿದರು; ಇಗೋ, ಆ ಗೋಡೆಯಲ್ಲಿ ಒಂದು ರಂಧ್ರವು ನನಗೆ ಕಾಣಿಸಿತು. 8ಆಗ ಅವರು ನನಗೆ, "ನರಪುತ್ರನೇ, ಗೋಡೆಯನ್ನು ತೋಡು," ಎಂದು ಹೇಳಿದರು. ನಾನು ಗೋಡೆಯನ್ನು ತೋಡಿದೆ. ಆಗ ಇಗೋ, ಒಂದು ಬಾಗಿಲು ಕಾಣಿಸಿತು. 9ದೇವರು ನನಗೆ, "ನೀನು ಒಳಹೊಕ್ಕು ಜನರು ಇಲ್ಲಿ ನಡೆಸುವ ಅಸಹ್ಯ ದುಷ್ಕಾರ್ಯಗಳನ್ನು ನೋಡು," ಎಂದು ಹೇಳಿದರು. ನಾನು ಹೊಕ್ಕು ನೋಡಿದೆ; 10ಅಕಟಾ, ಎಲ್ಲಾ ಜಾತಿಯ ಕ್ರಿಮಿಕೀಟಗಳು, ಅಸಹ್ಯ ಮೃಗಗಳು ಹಾಗು ಇಸ್ರಯೇಲ್ ವಂಶದವರು ಪೂಜಿಸುವ ಸಕಲ ಮೂರ್ತಿಗಳು ಆ ಗೋಡೆಯ ಸುತ್ತಲೂ ಚಿತ್ರಿತವಾಗಿದ್ದವು. 11ಇಸ್ರಯೇಲ್ ವಂಶದ ಎಪ್ಪತ್ತು ಮಂದಿ ಹಿರಿಯರೂ ಅವರ ಮಧ್ಯದಲ್ಲಿ ಶಾಫಾನನ ಮಗ ಯಾಜನ್ಯನೂ ತಮ್ಮ ತಮ್ಮ ಕೈಗಳಲ್ಲಿ ಧೂಪಾರತಿಗಳನ್ನು ಹಿಡಿದುಕೊಂಡು ಆ ಚಿತ್ರಗಳ ಮುಂದೆ ನಿಂತಿದ್ದರು; ಧೂಪದ ಸುವಾಸನೆಯ ಧೂಮವು ಮೇಘವಾಗಿ ಏರುತ್ತಿತ್ತು. 12ಆಗ ದೇವರು ನನಗೆ, "ನರಪುತ್ರನೇ, ಇಸ್ರಯೇಲ್ ವಂಶದ ಹಿರಿಯರೆಲ್ಲರು ನಾನಾ ರೂಪಗಳಿಂದ ಚಿತ್ರಿತವಾದ ತಮ್ಮ ತಮ್ಮ ಕೊಠಡಿಗಳೊಳಗೆ, ಕತ್ತಲೆಯಲ್ಲಿ ನಡೆಸುವ ಕೆಲಸವನ್ನು ನೋಡಿದೆಯಾ? 'ಸರ್ವೇಶ್ವರ ನಮ್ಮನ್ನು ನೋಡನು, ಸರ್ವೇಶ್ವರ ನಾಡನ್ನು ತೊರೆದುಬಿಟ್ಟಿದ್ದಾನೆ,' ಎಂದು ಮಾತಾಡಿಕೊಳ್ಳುತ್ತಾರಷ್ಟೆ," ಎಂಬುದಾಗಿ ಹೇಳಿದರು.

13 ಆಮೇಲೆ ದೇವರು ನನಗೆ, "ಇವುಗಳಿಗಿಂತ ಇನ್ನು ಹೆಚ್ಚಾದ ದುರಾಚಾರಗಳನ್ನು ನೋಡುವೆ," ಎಂದು ಹೇಳಿ 14ನನ್ನನ್ನು ಸರ್ವೇಶ್ವರನ ಆಲಯದ ಉತ್ತರ ಬಾಗಿಲ ಮುಂದಕ್ಕೆ ಕರೆತಂದರು; ಇಗೋ, ಅಲ್ಲಿ ಹೆಂಗಸರು 'ತಮ್ಮೂಜ್' ದೇವತೆಗಾಗಿ ಅಳುತ್ತಾ ಕುಳಿತಿದ್ದರು.

15 ಇದಾದ ಮೇಲೆ ದೇವರು ನನಗೆ, "ನರಪುತ್ರನೇ, ಇದನ್ನು ನೋಡಿದೆಯಾ? ಇವುಗಳಿಗಿಂತ ಮತ್ತೂ ಹೆಚ್ಚಾದ ದುರಾಚಾರಗಳನ್ನು ನೋಡುವೆ," ಎಂದು ಹೇಳಿ 16ಸರ್ವೇಶ್ವರನ ಆಲಯದ ಒಳಗಣ ಪ್ರಾಕಾರದೊಳಕ್ಕೆ ನನ್ನನ್ನು ಕರೆದುತಂದರು; ಇಗೋ, ಆ ಆಲಯದ ಬಾಗಿಲ ಮುಂದೆ ಮಂಟಪಕ್ಕೂ ಬಲಿಪೀಠಕ್ಕೂ ನಡುವೆ ಸುಮಾರು ಇಪ್ಪತ್ತೈದು ಜನರು ಸರ್ವೇಶ್ವರನ ಆಲಯಕ್ಕೆ ಬೆನ್ನುಮಾಡಿ ಪೂರ್ವದ ಕಡೆಗೆ ಮುಖ ಮಾಡಿ ಉದಯಕಾಲದ ಸೂರ್ಯನನ್ನು ಪೂಜಿಸುತ್ತಿದ್ದರು.

17 ಆಗ ದೇವರು ನನಗೆ, "ನರಪುತ್ರನೇ, ನೋಡಿದೆಯಾ? ಯೆಹೂದವಂಶದವರು ತಾವು ಇಲ್ಲಿ ನಡೆಸುವ ಅಸಹ್ಯಕಾರ್ಯಗಳು ಅಲ್ಪವೆಂದು ಭಾವಿಸಿದ್ದಾರೋ? ನಾಡನ್ನು ಹಿಂಸಾಕೃತ್ಯಗಳಿಂದ ತುಂಬಿಸಿದ್ದಲ್ಲದೆ ನನ್ನನ್ನು ಕೆಣಕಬೇಕೆಂದೇ ಮತ್ತೆ ಯತ್ನಿಸುತ್ತಿದ್ದಾರೆ; ನೋಡು, ಪತ್ರೆಯನ್ನು ಮೂಗಿಗೆ ಒತ್ತಿಕೊಳ್ಳುತ್ತಾರೆ. 18ಆದಕಾರಣ ನಾನೂ ಕೋಪೋದ್ರೇಕದಿಂದ ವರ್ತಿಸುವೆನು. ಅವರನ್ನು ಕಟಾಕ್ಷಿಸೆನು, ಉಳಿಸೆನು; ಅವರು ನನ್ನ ಕಿವಿಯಲ್ಲಿ ಎಷ್ಟು ಗಟ್ಟಿಯಾಗಿ ಕೂಗಿಕೊಂಡರೂ ನಾನು ಆಲಿಸೆನು."

### ಜೆರುಸಲೇಮಿನ ದಂಡನೆ

**9** ಆಮೇಲೆ ದೇವರು, "ಈ ಪಟ್ಟಣವನ್ನು ದಂಡಿಸಲಿರುವವರೇ, ನೀವೆಲ್ಲರೂ ನಿಮ್ಮ ಹತ್ಯದ ಆಯುಧಗಳನ್ನು ಹಿಡಿದು ಸಮೀಪಿಸಿರಿ," ಎಂದು ಗಟ್ಟಿಯಾಗಿ ಕೂಗಿ ಹೇಳಿದ ಮಾತು ನನ್ನ ಕಿವಿಗೆ ಬಿತ್ತು. 2ಕೂಡಲೆ ಗದೆಗಳನ್ನು ಹಿಡಿದುಕೊಂಡ ಆರು ಮಂದಿ ಪುರುಷರು ಉತ್ತರಾಭಿಮುಖವಾಗಿರುವ ಮೇಲಣ ಹೆಬ್ಬಾಗಿಲಿನ ಮಾರ್ಗವಾಗಿ ಬಂದರು; ನಾರಿನ ಬಟ್ಟೆಯನ್ನು ಹೊದ್ದುಕೊಂಡು ಲೇಖಕನ ದೌತಿಯನ್ನು

ನಡುವಿಗೆ ಕಟ್ಟಿಕೊಂಡಿರುವ ಮತ್ತೊಬ್ಬ ಪುರುಷನು ಅವರ ಮಧ್ಯದಲ್ಲಿದ್ದನು. ಇವರೆಲ್ಲರೂ ಒಳಕ್ಕೆ ಸೇರಿ ಕಂಚಿನ ಬಲಿಪೀಠದ ಪಕ್ಕದಲ್ಲಿ ನಿಂತುಕೊಂಡರು.

3 ಇಷ್ಟರಲ್ಲಿ ಇಸ್ರಯೇಲಿನ ದೇವರ ತೇಜಸ್ಸು ತನ್ನ ವಾಹನವಾದ ಕೆರೂಬಿಯನ್ನು ಬಿಟ್ಟು ಮೇಲಕ್ಕೇರಿ ಆಲಯದ ಹೊಸ್ತಿಲಿನ ಮೇಲ್ಗಡೆ ನಿಂತಿತ್ತು; ಆಗ ನಾರಿನ ಬಟ್ಟೆಯನ್ನು ಹೊದ್ದುಕೊಂಡು, ಲೇಖಕನ ಮಸಿಕೊಂಬನ್ನು ನಡುವಿಗೆ ಕಟ್ಟಿಕೊಂಡಿದ್ದ ಪುರುಷನನ್ನು ಸರ್ವೇಶ್ವರ ಕೂಗಿ ಅವನಿಗೆ, 4"ನೀನು ಜೆರುಸಲೇಮ್ ಪಟ್ಟಣದಲ್ಲೆಲ್ಲಾ ತಿರುಗಾಡಿ, ಅದರೊಳಗೆ ನಡೆಯುವ ಸಮಸ್ತ ಅಸಹ್ಯ ಕಾರ್ಯಗಳಿಗೆ ನರಳಿ ಗೋಳಾಡುತ್ತಿರುವ ಜನರ ಹಣೆಯ ಮೇಲೆ ಗುರುತುಮಾಡು," ಎಂದು ಅಪ್ಪಣೆಕೊಟ್ಟರು.

5 ಮಿಕ್ಕವರಿಗೆ, "ನೀವು ಪಟ್ಟಣದಲ್ಲೆಲ್ಲಾ ಇವನ ಹಿಂದೆ ಸಂಚರಿಸುತ್ತಾ ಹತಿಸಿರಿ; ಯಾರನ್ನೂ ಕಟಾಕ್ಷಿಸದಿರಿ, ಉಳಿಸದಿರಿ; 6ವೃದ್ಧ, ಯುವಕ, ಯುವತಿ, ಮಹಿಳೆ, ಬಾಲಕ ಎನ್ನದೆ ಸಕಲರನ್ನೂ ಸಂಹಾರ ಮಾಡಿಬಿಡಿ; ಆದರೆ ಆ ಗುರುತುಳ್ಳವರಲ್ಲಿ ಯಾರನ್ನೂ ಮುಟ್ಟಬೇಡಿ; ನನ್ನ ಆಲಯದಲ್ಲಿಯೇ ಪ್ರಾರಂಭಮಾಡಿ", ಎಂದು ನನಗೆ ಕೇಳಿಸುವಂತೆ ಅಪ್ಪಣೆಮಾಡಿದರು. ಆಗ ದೇವಾಲಯದ ಮುಂದೆ ಇದ್ದ ಹಿರಿಯರನ್ನು ಮೊದಲುಗೊಂಡು ಹತಿಸ ತೊಡಗಿದರು.

7 ದೇವರು ಅವರಿಗೆ, "ಹೊರಡಿ, ಪ್ರಾಕಾರಗಳನ್ನು ಶವಗಳಿಂದ ತುಂಬಿಸಿ, ದೇವಾಲಯವನ್ನು ಹೊಲೆಗೆಡಿಸಿ," ಎಂದು ಅಪ್ಪಣೆಕೊಡಲು ಅವರು ಹೊರಟು ಪಟ್ಟಣದಲ್ಲಿದ್ದವರನ್ನು ಹತಿಸಿದರು.

8 ಅವರು ಹೊಡೆಯುತ್ತಿರುವಾಗ ಅಲ್ಲಿ ಒಂಟಿಗನಾಗಿ ಉಳಿದ ನಾನು ಅಡ್ಡಬಿದ್ದು, "ಅಯ್ಯೋ, ಸರ್ವೇಶ್ವರನಾದ ದೇವರೇ, ನೀವು ಜೆರುಸಲೇಮಿನ ಮೇಲೆ ನಿಮ್ಮ ಕೋಪಾಗ್ನಿಯನ್ನು ಸುರಿಸಿ ಇಸ್ರಯೇಲಿನ ಶೇಷವನ್ನೆಲ್ಲಾ ನಾಶಮಾಡುವಿರೋ?" ಎಂದು ಮೊರೆಯಿಟ್ಟೆ.

9 ಆಗ ಅವರು ನನಗೆ, "ಇಸ್ರಯೇಲ್ ಮತ್ತು ಯೆಹೂದ ವಂಶದವರ ಅಧರ್ಮ ತುಂಬಿ ಹೋಗಿದೆ; ನಾಡು ರಕ್ತಪೂರ್ಣವಾಗಿದೆ, ಪಟ್ಟಣವು ಅನ್ಯಾಯಭರಿತವಾಗಿದೆ; ಆ ವಂಶದವರು, 'ನಮ್ಮ ನಾಡನ್ನು ಸರ್ವೇಶ್ವರ ತೊರೆದುಬಿಟ್ಟಿದ್ದಾರೆ, ಸರ್ವೇಶ್ವರ ನಮ್ಮನ್ನು ನೋಡುವುದಿಲ್ಲ' ಎಂದು ಮಾತಾಡಿಕೊಳ್ಳುತ್ತಿದ್ದಾರೆ; 10ನಾನಂತು ಅವರನ್ನು ಕಟಾಕ್ಷಿಸೆನು, ಉಳಿಸೆನು, ಅವರ ದುರ್ನಡತೆಯನ್ನು ಅವರ ತಲೆಗೆ ಕಟ್ಟುವೆನು," ಎಂದು ಹೇಳಿದರು.

11 ಕೂಡಲೆ ನಾರಿನ ಬಟ್ಟೆಯನ್ನು ಹೊದ್ದುಕೊಂಡು ಮಸಿಕೊಂಬನ್ನು ನಡುವಿಗೆ ಕಟ್ಟಿಕೊಂಡಿದ್ದ ಪುರುಷನು "ನಿಮ್ಮ ಅಪ್ಪಣೆಯಂತೆಯೇ ಮಾಡಿದ್ದೇನೆ," ಎಂದು ಅರಿಕೆ ಮಾಡಿದನು.

## ದೇವರ ತೇಜಸ್ಸು ದೇವಾಲಯವನ್ನು ಬಿಟ್ಟು ತೆರಳಿತು

**10** ದೇವದರ್ಶನದಲ್ಲಿ ಇಗೋ, ಕೆರೂಬಿಗಳ ತಲೆಗಳ ಮೇಲಿದ್ದ ಗವಿಯಾಕೃತಿಯ ಮೇಲ್ಗಡೆ ಇಂದ್ರನೀಲ ಮಣಿಯಂತೆ ಹೊಳೆಯುವ ಸಿಂಹಾಸನದ ಆಕಾರವು ನನಗೆ ಕಾಣಿಸಿತು. 2ನಾರಿನ ಬಟ್ಟೆಯನ್ನು ಹೊದ್ದುಕೊಂಡಿದ್ದ ಆ ಪುರುಷನಿಗೆ ದೇವರು, "ನೀನು ಗರಗರನೆ ತಿರುಗುವ ಗಾಲಿಗಳ ನಡುವೆ, ಕೆರೂಬಿಯ ಕೆಳಗೆ ಪ್ರವೇಶಿಸಿ, ಕೆರೂಬಿಗಳ ಮಧ್ಯೆಯಿಂದ ಬೊಗಸೆಯಲ್ಲಿ ಕೆಂಡಗಳನ್ನು ತುಂಬಿ ತಂದು ಪಟ್ಟಣದ ಮೇಲೆ ಎರಚು," ಎಂದು ಅಪ್ಪಣೆಕೊಟ್ಟರು. ಅವನು ನನ್ನ ಕಣ್ಣೆದುರಿಗೇ ಹೋಗಿ ಅಲ್ಲಿ ಪ್ರವೇಶಿಸಿದನು.

3 ಅವನು ಒಳಗೆ ಸೇರಿದಾಗ ಕೆರೂಬಿಗಳು ದೇವಾಲಯದ ದಕ್ಷಿಣಭಾಗದಲ್ಲಿ ನಿಂತಿದ್ದವು, ಮೇಘವು ಒಳಗಿನ ಆವರಣವನ್ನು ತುಂಬಿತ್ತು. 4ಇದಲ್ಲದೆ ಸರ್ವೇಶ್ವರನ ತೇಜಸ್ಸು ಕೆರೂಬಿಗಳನ್ನು ಬಿಟ್ಟು ಮೇಲಕ್ಕೇರಿ ದೇವಾಲಯದ ಹೊಸ್ತಿಲಿನ ಮೇಲ್ಗಡೆ ನಿಂತಿತು; ದೇವಾಲಯದಲ್ಲೂ ಮೇಘವು ತುಂಬಿತ್ತು; ಸರ್ವೇಶ್ವರನ ತೇಜಸ್ಸಿನ ಅದ್ಭುತಕಾಂತಿ ಆವರಣದಲ್ಲೆಲ್ಲಾ ವ್ಯಾಪಿಸಿತ್ತು. 5ಆಗ ಕೆರೂಬಿಗಳ ರೆಕ್ಕೆಗಳ ಶಬ್ದ ಸರ್ವಶಕ್ತನಾದ ದೇವರು ಮಾತಾಡುವ ಧ್ವನಿಯಷ್ಟು ಗಂಭೀರವಾಗಿ ಹೊರಗಣ ಆವರಣದ ಪರ್ಯಂತವೂ ಕೇಳಿಸಿತು.

6 ದೇವರು ನಾರಿನ ಬಟ್ಟೆಯನ್ನು ಹೊದ್ದುಕೊಂಡಿದ್ದ ಆ ಪುರುಷನಿಗೆ, "ನೀನು ಗರಗರನೆ ತಿರುಗುವ ಗಾಲಿಗಳ ನಡುವೆ ಪ್ರವೇಶಿಸಿ, ಕೆರೂಬಿಗಳ ಮಧ್ಯೆಯಿಂದ ಬೆಂಕಿಯನ್ನು ತೆಗೆದುಕೋ," ಎಂದು ಅಪ್ಪಣೆಕೊಟ್ಟರು. ಅವನು ಒಳಕ್ಕೆ ಹೋಗಿ ಒಂದು ಚಕ್ರದ ಪಕ್ಕದಲ್ಲಿ ನಿಂತುಕೊಂಡನು. 7ಆಗ ಒಬ್ಬ

ಕೆರೂಬಿಯು ಇತರ ಕೆರೂಬಿಯರ ನಡುವೆ ಕೈಚಾಚಿ, ಅವುಗಳ ಮಧ್ಯದಲ್ಲಿದ್ದ ಬೆಂಕಿಯನ್ನು ತೆಗೆದು, ನಾರಿನ ಬಟ್ಟೆತೊಟ್ಟವನ ಬೊಗಸೆಯಲ್ಲಿ ಹಾಕಿತು; ಅವನು ಅದನ್ನು ತೆಗೆದುಕೊಂಡು ಆಚೆಗೆ ಹೊರಟನು.
8(ಕೆರೂಬಿಗಳ ಒಂದೊಂದು ರೆಕ್ಕೆಯ ಕೆಳಗೂ ಮನುಷ್ಯಹಸ್ತದಂಥ ಒಂದೊಂದು ಹಸ್ತವು ಕಾಣಿಸಿತು.)

9 ಇಗೋ, ಆ ಕೆರೂಬಿಗಳ ಪಕ್ಕಗಳಲ್ಲಿ, ಒಂದೊಂದು ಕೆರೂಬಿಯ ಪಕ್ಕದಲ್ಲಿ ಒಂದೊಂದು ಚಕ್ರದಂತೆ
ನಾಲ್ಕು ಚಕ್ರಗಳಿದ್ದುದು ಕಾಣಿಸಿತು. ಆ ಚಕ್ರಗಳ ಬಣ್ಣ ಪೀತರತ್ನದ ಹಾಗೆ ಹೊಳೆಯುತ್ತಿತ್ತು. 10ಅವುಗಳ
ರೂಪ ಹೇಗಿತ್ತೆಂದರೆ ಒಂದು ಚಕ್ರದೊಳಗೆ ಇನ್ನೊಂದು ಚಕ್ರ ರಚಿಸಿದಂತಿತ್ತು. ಆ ನಾಲ್ಕು ಚಕ್ರಗಳೂ ಒಂದೇ
ಮಾದರಿಯಾಗಿದ್ದವು. 11ಅವು ಹೊರಳುವಾಗ ನಾಲ್ಕು ಕಡೆಗಳಲ್ಲಿ ಯಾವ ಕಡೆಗಾದರೂ ಹೊರಳುತ್ತಿದ್ದವು,
ಓರೆಯಾಗಿ ಹೊರಳುತ್ತಿರಲಿಲ್ಲ; ಎದುರುಮುಖವಾಗಿ ಹೋಗುತ್ತಿದ್ದವೇ ಹೊರತು ಓರೆಯಾಗಿ
ಹೋಗುತ್ತಿರಲಿಲ್ಲ. 12ಕೆರೂಬಿಗಳ ಬೆನ್ನು, ಕೈ, ರೆಕ್ಕೆ, ಅಂತು ಸರ್ವಾಂಗಗಳಲ್ಲಿಯೂ ಹಾಗು ಚಕ್ರಗಳಲ್ಲಿಯೂ
ಕಣ್ಣುಗಳು ಸರ್ವತ್ರ ತುಂಬಿದ್ದವು; ನಾಲ್ಕು ಕೆರೂಬಿಗಳಲ್ಲಿ ಒಂದೊಂದಕ್ಕೂ ಒಂದೊಂದು ಚಕ್ರವಿತ್ತು. 13(ನಾನು
ಕೇಳಿದಂತೆ ಆ ಚಕ್ರಗಳ ಹೆಸರು ಗರಗರಗಾಲಿ ಎಂದು.)

14 ಒಂದೊಂದು ಕೆರೂಬಿಗೆ ನಾಲ್ಕು ನಾಲ್ಕು ಮುಖಗಳಿದ್ದವು; ಮೊದಲನೆಯದು ಕೆರೂಬಿಯದು;
ಎರಡನೆಯದು ಮನುಷ್ಯನದು, ಮೂರನೆಯದು ಸಿಂಹನದು, ನಾಲ್ಕನೆಯದು ಗರುಡಪಕ್ಷಿಯದು. 15ಆ
ಕೆರೂಬಿಗಳು ಮೇಲಕ್ಕೆ ಏರಿದವು; ನಾನು ಕೆಬಾರ್ ನದಿಯ ಹತ್ತಿರ ನೋಡಿದ ಜೀವಿಗಳು ಇವೇ.
16ಕೆರೂಬಿಗಳು ಹೋಗುವಾಗ ಚಕ್ರಗಳೂ ಅವುಗಳ ಪಕ್ಕದಲ್ಲಿ ಹೋಗುತ್ತಿದ್ದವು; ಕೆರೂಬಿಗಳು ನೆಲದಿಂದ
ಮೇಲಕ್ಕೆ ಏರಬೇಕೆಂದು ರೆಕ್ಕೆಗಳನ್ನು ಹರಡಿಕೊಂಡಾಗ ಚಕ್ರಗಳೂ ಓರೆಯಾಗದೆ ಅವರ ಸಂಗಡವೇ
ಏರಿದವು. 17ಜೀವಿಗಳ ಆತ್ಮ ಆ ಚಕ್ರಗಳಲ್ಲಿಯೂ ಇದ್ದ ಕಾರಣ, ಅವು ನಿಂತು ಹೋದಾಗ ಇವೂ
ನಿಂತುಹೋದವು, ಅವು ಏರಿದಾಗ ಇವೂ ಅವುಗಳ ಜೊತೆಯಲ್ಲೇ ಏರಿದವು.

18 ಬಳಿಕ ಸರ್ವೇಶ್ವರನ ತೇಜಸ್ಸು ದೇವಾಲಯದ ಹೊಸ್ತಿಲನ್ನು ಬಿಟ್ಟು, ಕೆರೂಬಿಗಳ ಮೇಲೆ ನಿಂತಿತು.
19ಆಗ ನನ್ನ ಕಣ್ಣೆದುರಿಗೆ ಕೆರೂಬಿಗಳು ರೆಕ್ಕೆಗಳನ್ನು ಹರಡಿಕೊಂಡು ಚಕ್ರಸಮೇತವಾಗಿ ನೆಲದಿಂದ ಏರಿ
ಹೊರಟು ಸರ್ವೇಶ್ವರನ ಆಲಯದ ಪೂರ್ವಬಾಗಿಲ ಮುಂದೆನಿಂತವು. ಅವುಗಳ ಮೇಲ್ಗಡೆ ಇಸ್ರಯೇಲಿನ
ದೇವರ ತೇಜಸ್ಸು ನೆಲಸಿತ್ತು. 20ಇಸ್ರಯೇಲಿನ ದೇವರ ವಾಹನವಾಗಿ ಕೆಬಾರ್ ನದಿಯ ಹತ್ತಿರ ನನಗೆ
ಕಾಣಿಸಿದ ಆ ಜೀವಿಗಳು ಇವೇ; ಅವು ಕೆರೂಬಿಗಳೆಂದು ಈಗ ನನಗೆ ತಿಳಿದುಬಂತು.

21 ಒಂದೊದಕ್ಕೆ ನಾಲ್ಕು ನಾಲ್ಕು ಮುಖಗಳೂ ನಾಲ್ಕು ನಾಲ್ಕು ರೆಕ್ಕೆಗಳೂ ಇದ್ದವು; ಅವುಗಳ ರೆಕ್ಕೆಗಳ
ಕೆಳಗೆ ಮನುಷ್ಯ ಹಸ್ತದಂಥ ಹಸ್ತಗಳು ಇದ್ದವು; 22ಅವುಗಳ ಮುಖಗಳು ಕೆಬಾರ್ ನದಿಯ ಹತ್ತಿರ ನಾನು
ಕಂಡ ಮುಖಗಳಂತೆ ನನಗೆ ಕಂಡು ಬಂದವು. ಅವು ಆ ಮುಖಗಳೇ. ಪ್ರತಿಯೊಂದು ಜೀವಿಯು ಹೊರಟ
ಮುಖವಾಗಿಯೇ ಹೋಗುತ್ತಿತ್ತು.

### ಜೆರುಸಲೇಮಿನಲ್ಲೇ ಉಳಿದಿದ್ದ ದುರಾಲೋಚನೆಕಾರರ ಖಂಡನೆ

**11** ಆಮೇಲೆ ದೇವರಾತ್ಮ ನನ್ನನ್ನು ಎತ್ತಿ ಪೂರ್ವದಿಕ್ಕಿಗೆ ಅಭಿಮುಖವಾಗಿರುವ ಸರ್ವೇಶ್ವರನ ಆಲಯದ
ಮೂಡಣ ಬಾಗಿಲಿಗೆ ತಂದುಬಿಟ್ಟಿತು. ಇಗೋ, ಬಾಗಿಲ ಮುಂದೆ ಇಪ್ಪತ್ತೈದು ಜನರು ನಿಂತಿದ್ದರು. ಅವರ
ಮಧ್ಯೆ ಅಜ್ಜೂರನ ಮಗ ಯಾಜನ್ಯ, ಬೆನಾಯನ ಮಗ ಪೆಲತ್ಯ ಎಂಬ ಜನನಾಯಕರನ್ನು ನಾನು ನೋಡಿದೆ.

2 ಅಲ್ಲಿ ದೇವರು ನನಗೆ, "ನರಪುತ್ರನೇ, ಪಟ್ಟಣದಲ್ಲಿ ಕುತಂತ್ರಗಳನ್ನು ಕಲ್ಪಿಸಿ ದುರಾಲೋಚನೆಯನ್ನು
ಹೇಳಿಕೊಡುವವರು ಈ ಜನರೇ; 3ಇವರು, 'ಮನೆಗಳನ್ನು ಕಟ್ಟಿಕೊಳ್ಳುವ ಕಾಲವು ಬಂದಿಲ್ಲ; ಈ ಪಟ್ಟಣವು
ಒಂದು ಹಂಡೆ, ನಾವು ಅದರಲ್ಲಿನ ಮಾಂಸ' ಎಂದು ಹೇಳುತ್ತಾರೆ. 4ಆದಕಾರಣ, ನರಪುತ್ರನೇ, ನೀನು
ಇವರ ವಿಷಯವಾಗಿ ಶಾಪ ಹಾಕು, ತಪ್ಪದೆ ಹಾಕು," ಎಂದು ಆಜ್ಞಾಪಿಸಿದರು.

5 ಆಗ ಸರ್ವೇಶ್ವರನ ಆತ್ಮ ನನ್ನಲ್ಲಿ ಆವೇಶ ಉಂಟುಮಾಡಿತು. ಹೀಗೆ ಸಾರಬೇಕೆಂದು ಅಪ್ಪಣೆ
ಆಯಿತು: ಸರ್ವೇಶ್ವರ ಇಂತೆನ್ನುತ್ತಾರೆ: "ಇಸ್ರಯೇಲ್ ವಂಶದವರೇ, ನೀವು ಹೀಗೆ ಮಾತಾಡುತ್ತಿದ್ದೀರಿ, ಸರಿ;

ನಿಮ್ಮ ಮನಸ್ಸಿನಲ್ಲಿ ಹುಟ್ಟಿರುವ ಆಲೋಚನೆಗಳು ನನಗೆ ಗೊತ್ತೇ ಇವೆ. 6ನೀವು ಈ ಪಟ್ಟಣದಲ್ಲಿ ನರಹತ್ಯವನ್ನು ಹೆಚ್ಚೆಚ್ಚಾಗಿ ಮಾಡಿ ಹತರಾದವರಿಂದ ಬೀದಿಗಳನ್ನು ತುಂಬಿಸಿದ್ದೀರಿ.

7 "ಆದಕಾರಣ ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: ನಿಮ್ಮ ದೋಷದಿಂದ ಹತರಾಗಿ ಪಟ್ಟಣದಲ್ಲಿ ಬಿದ್ದಿರುವ ನಿಮ್ಮವರ ಶವಗಳೇ ಹಂಡೆಯಲ್ಲಿನ ಮಾಂಸ, ಈ ಪಟ್ಟಣವೇ ಹಂಡೆ, ನಿಮ್ಮನ್ನಾದರೋ ನಾನು ಪಟ್ಟಣದೊಳಗಿಂದ ಕಿತ್ತುಹಾಕಿವೆನು. 8ಖಡ್ಗಕ್ಕೆ ಹೆದರಿದ ನಿಮ್ಮನ್ನೇ ಖಡ್ಗಕ್ಕೆ ಗುರಿಮಾಡುವೆನು; ಇದು ಸರ್ವೇಶ್ವರನಾದ ದೇವರ ನುಡಿ. 9ನಾನು ಪಟ್ಟಣದೊಳಗಿಂದ ನಿಮ್ಮನ್ನು ಕಿತ್ತು ಅನ್ಯರ ಕೈಗೆ ಕೊಟ್ಟು ದಂಡಿಸುವೆನು. 10ನೀವು ಖಡ್ಗಕ್ಕೆ ತುತ್ತಾಗುವಿರಿ. ಇಸ್ರಯೇಲಿನ ಮೇರೆಯಲ್ಲೆ ನಿಮಗೆ ದಂಡನೆಯನ್ನು ವಿಧಿಸುವೆನು; ನಾನೇ ಸರ್ವೇಶ್ವರ ಎಂದು ನಿಮಗೆ ಗೊತ್ತಾಗುವುದು. 11ಈ ಪಟ್ಟಣ ನಿಮಗೆ ಹಂಡೆಯಾಗುವುದಿಲ್ಲ; ನೀವು ಅದರಲ್ಲಿ ಮಾಂಸವಾಗುವುದಿಲ್ಲ; ಇಸ್ರಯೇಲಿನ ಮೇರೆಯಲ್ಲೆ ನಿಮಗೆ ದಂಡನೆಯನ್ನು ವಿಧಿಸುವೆನು. 12ನಾನೇ ಸರ್ವೇಶ್ವರ ಎಂದು ನಿಮಗೆ ಗೊತ್ತಾಗುವುದು; ನೀವು ನನ್ನ ವಿಧಿಗಳನ್ನು ಕೈಗೊಳ್ಳದೆ, ನನ್ನ ನಿಯಮಗಳನ್ನು ಅನುಸರಿಸದೆ, ನಿಮ್ಮ ಸುತ್ತಲಿನ ಜನಾಂಗಗಳ ಆಚಾರಗಳನ್ನೇ ಅನುಸರಿಸಿದ್ದರಿಂದ ಇದೆಲ್ಲಾ ಆಗುವುದು."

13 ನಾನು ಈ ಮಾತನ್ನು ನುಡಿಯುತ್ತಿರುವಾಗಲೇ ಬೆನಾಯನ ಮಗ ಪೆಲತ್ಯನು ಸತ್ತುಹೋದನು. ಆಗ ನಾನು ಅಡ್ಡಬಿದ್ದು ಗಟ್ಟಿಯಾಗಿ ಕೂಗಿಕೊಂಡೆ. "ಅಯ್ಯೋ, ಸರ್ವೇಶ್ವರನಾದ ದೇವರೇ, ಇಸ್ರಯೇಲಿನಲ್ಲಿ ಉಳಿದವರನ್ನು ಸಂಪೂರ್ಣವಾಗಿ ನಿರ್ಮೂಲನ ಮಾಡುವಿರೋ?" ಎಂದು ಮೊರೆಯಿಟ್ಟೆ.

### ಗಡೀಪಾರಾಗಿದ್ದವರೊಡನೆ ಹೊಸ ಒಡಂಬಡಿಕೆಯ ವಾಗ್ದಾನ

14 ಆಗ ಸರ್ವೇಶ್ವರ ನನಗೆ ದಯಪಾಲಿಸಿದ ವಾಣಿ ಇದು: 15"ನರಪುತ್ರನೇ, ನಿನ್ನ ಸಹೋದರರಿಗೆ, ನಿನ್ನ ಅಣ್ಣ ತಮ್ಮಂದಿರಿಗೆ, ನಿನ್ನ ನೆಂಟರಿಷ್ಟರಿಗೆ, ಅಂತು ಇಸ್ರಯೇಲ್ ವಂಶದ ಎಲ್ಲರಿಗೆ, ಜೆರುಸಲೇಮಿನಲ್ಲೇ ಉಳಿದಿರುವವರು, 'ಸರ್ವೇಶ್ವರನ ಬಳಿಯಿಂದ ದೂರವಾಗಿ ತೊಲಗಿರಿ, ಈ ನಾಡು ನಮಗೇ ಸೊತ್ತಾಗಿ ಸಿಕ್ಕಿದೆ,' ಎಂದು ಹೇಳಿ ಹೀನೈಸುತ್ತಿದ್ದಾರಲ್ಲವೆ?

16 "ಆದಕಾರಣ ನೀನು ಹೀಗೆ ಸಾರು; ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: ನಾನು ಅವರನ್ನು ದೂರ ಗಡೀಪಾರುಮಾಡಿ, ಅನ್ಯದೇಶದ ಜನಾಂಗಗಳಲ್ಲಿ ಚದರಿಸಿದ್ದರೂ ಅವರು ಸೇರಿರುವ ದೇಶಗಳಲ್ಲಿಯೇ ನಾನು ಕೊಂಚಕಾಲದ ಮಟ್ಟಿಗೆ ಅವರಿಗೆ ಪವಿತ್ರಾಲಯವಾಗಿರುವೆನು.

17 "ಆಮೇಲೆ ಅವರನ್ನು ಜನಾಂಗಗಳಿಂದ ಒಟ್ಟುಗೂಡಿಸುವೆನು. ಚದರಿರುವ ದೇಶಗಳಿಂದ ಅವರನ್ನು ಒಟ್ಟಿಗೆ ಬರಮಾಡಿ ಇಸ್ರಯೇಲ್ ನಾಡನ್ನು ಅವರಿಗೆ ದಯಪಾಲಿಸುವೆನು. 18ಅವರು ಅಲ್ಲಿಗೆ ಸೇರಿ ಎಲ್ಲ ಅಸಹ್ಯ ವಸ್ತುಗಳನ್ನೂ ಸಮಸ್ತ ಅನಿಷ್ಟ ವಿಗ್ರಹಗಳನ್ನೂ ತೆಗೆದುಹಾಕುವರು. 19ಅವರು ನನ್ನ ನಿಯಮಗಳನ್ನು ಅನುಸರಿಸಿ, ನನ್ನ ವಿಧಿಗಳನ್ನು ಕೈಕೊಂಡು ನೆರವೇರಿಸುವಂತೆ ನಾನು ಅವರಿಗೆ ಒಂದೇ ಮನಸ್ಸನ್ನು ದಯಪಾಲಿಸಿ, ನೂತನ ಸ್ವಭಾವವನ್ನು ಅವರಲ್ಲಿ ಹುಟ್ಟಿಸುವೆನು; 20ಕಲ್ಲಾದ ಹೃದಯವನ್ನು ಅವರೊಳಗಿಂದ ತೆಗೆದು ಮೃದುವಾದ ಹೃದಯವನ್ನು ಅವರಿಗೆ ಅನುಗ್ರಹಿಸುವೆನು; ಅವರು ನನಗೆ ಪ್ರಜೆಯಾಗಿರುವರು, ನಾನು ಅವರಿಗೆ ದೇವರಾಗಿರುವೆನು. 21ಆದರೆ ಯಾರ ಮನಸ್ಸು ತಮ್ಮ ಅಸಹ್ಯ ವಸ್ತುಗಳನ್ನೂ ಅನಿಷ್ಟ ವಿಗ್ರಹಗಳನ್ನೂ ಅನುಸರಿಸುತ್ತದೋ ಅವರ ದುರ್ನಡತೆಯನ್ನು ಅವರ ತಲೆಗೆ ಕಟ್ಟುವೆನು, ಇದು ಸರ್ವೇಶ್ವರನಾದ ದೇವರ ನುಡಿ."

### ದೇವರ ತೇಜಸ್ಸು ಜೆರುಸಲೇಮನ್ನು ಬಿಟ್ಟು ತೆರಳಿತು

22 ಬಳಿಕ ಚಕ್ರಗಳ ಪಕ್ಕದಲ್ಲಿದ್ದ ಕೆರೂಬಿಗಳು ರೆಕ್ಕೆಗಳನ್ನು ಹರಡಿಕೊಂಡವು. ಇಸ್ರಯೇಲಿನ ದೇವರ ತೇಜಸ್ಸು ಅವುಗಳ ಮೇಲ್ಗಡೆ ನೆಲಸಿತ್ತು. 23ಆಗ ಸರ್ವೇಶ್ವರನ ತೇಜಸ್ಸು ಪಟ್ಟಣದ ಮಧ್ಯದಿಂದ ಏರಿ, ಪಟ್ಟಣಕ್ಕೆ ಪೂರ್ವದಲ್ಲಿರುವ ಗುಡ್ಡದ ಮೇಲೆ ನಿಂತಿತು. 24ಆ ಮೇಲೆ ದೇವರಾತ್ಮ ಪರವಶನಾದ ನನ್ನನ್ನು ಎತ್ತಿ, ದಿವ್ಯ ದರ್ಶನದ ಮುಖಾಂತರ ಬಾಬಿಲೋನಿಯ ದೇಶದಲ್ಲಿ ಸೆರೆಯಾಗಿದ್ದವರ ಬಳಿಗೆ ಒಯ್ದು

ತಂದಿತು. ನನಗಾದ ದಿವ್ಯದರ್ಶನವು ಆಗ ಮಾಯವಾಯಿತು. 25ಸರ್ವೇಶ್ವರ ತೋರಿಸಿದ ಎಲ್ಲವುಗಳನ್ನು ಕೂಡಲೆ ಸೆರೆಯವರಿಗೆ ತಿಳಿಸಿದೆ.

### ಗಡೀಪಾರಿನ ಮುಂಗುರುತು

**12** ಸರ್ವೇಶ್ವರ ನನಗೆ ಅನುಗ್ರಹಿಸಿದ ವಾಣಿ ಇದು: 2"ನರಪುತ್ರನೇ, ನೀನು ದ್ರೋಹಿವಂಶದ ಮಧ್ಯೆ
ವಾಸಿಸುತ್ತಿರುವೆ. ಆ ವಂಶದವರು ದ್ರೋಹಿಗಳಾಗಿರುವುದರಿಂದ ಕಣ್ಣಿದ್ದರೂ ಕಾಣರು, ಕಿವಿಯಿದ್ದರೂ ಕೇಳರು.
3"ನರಪುತ್ರನೇ, ವಲಸೆಹೋಗುವುದಕ್ಕೆ ಬೇಕಾದ ಸಾಮಗ್ರಿಗಳನ್ನು ನೀನು ಕೂಡಿಸಿಕೊಂಡು
ಹಗಲಿನಲ್ಲಿ ಅವರ ಕಣ್ಣೆದುರಿಗೇ ಹೊರಡು. ಅಂದರೆ, ನಿನ್ನ ವಾಸಸ್ಥಳವನ್ನು ಬಿಟ್ಟು ಅವರು ನೋಡುವ
ಹಾಗೆ ಬೇರೊಂದು ಸ್ಥಳಕ್ಕೆ ಹೋಗು: ಅವರು ದ್ರೋಹಿವಂಶದವರಾಗಿದ್ದರೂ ಒಂದು ವೇಳೆ ತಮ್ಮ
ದ್ರೋಹವನ್ನು ಮನಸ್ಸಿಗೆ ತಂದುಕೊಳ್ಳಬಹುದು. 4ನೀನು ನಿನ್ನ ಸಾಮಗ್ರಿಗಳನ್ನು ವಲಸೆಯ ಸಾಮಗ್ರಿಗಳನ್ನೊ
ಎಂಬಂತೆ ಹಗಲಿನಲ್ಲಿ ಅವರ ಕಣ್ಣೆದುರಿಗೆ ಮನೆಯೊಳಗಿಂದ ಆಚೆಗೆ ಹಾಕಿ ವಲಸೆ ಹೋಗುವವನಂತೆ
ಸಾಯಂಕಾಲ ಅವರ ಸಮಕ್ಷಮ ಹೊರಟು ಹೋಗು. 5ಅವರು ನೋಡುತ್ತಿರುವಾಗ, ನೀನು ಗೋಡೆಯನ್ನು
ತೋಡಿ, ಕಂಡಿಯ ಮೂಲಕ ನಿನ್ನ ಸಾಮಗ್ರಿಗಳನ್ನು ಸಾಗಿಸಿಕೊಂಡು ಹೋಗು. 6ಅವರ ಕಣ್ಣ ಮುಂದೆ,
ಅದನ್ನು ಹೆಗಲ ಮೇಲೆ ಹಾಕಿ, ಕತ್ತಲಲ್ಲಿ ಹೊತ್ತುಕೊಂಡು ಹೋಗು; ನೆಲವನ್ನು ನೋಡದಂತೆ ಮೋರೆಯನ್ನು
ಮುಚ್ಚಿಕೋ; ನಾನು ನಿನ್ನನ್ನು ಇಸ್ರಯೇಲ್ ವಂಶದವರಿಗೆ ಮುಂಗುರುತನ್ನಾಗಿ ಮಾಡಿದ್ದೇನೆ."
7 ಆಗ ನಾನು ನನಗಾದ ಅಪ್ಪಣೆಯನ್ನು ನೆರವೇರಿಸಿದೆ: ಹಗಲಿನಲ್ಲಿ ನನ್ನ ಸಾಮಗ್ರಿಗಳನ್ನು ವಲಸೆಯ
ಸಾಮಗ್ರಿಗಳನ್ನೋ ಎಂಬಂತೆ ಮನೆಯೊಳಗಿನಿಂದ ಆಚೆಗೆ ಹಾಕಿದೆ; ಸಾಯಂಕಾಲ ನನ್ನ ಕೈಯಿಂದಲೇ
ಗೋಡೆಯನ್ನು ಕಂಡಿಮಾಡಿ, ಕತ್ತಲಲ್ಲಿ ಆ ಸಾಮಗ್ರಿಗಳನ್ನು ಆಚೆಗೆ ಸಾಗಿಸಿ, ಅವರ ಕಣ್ಣ ಮುಂದೆ ಹೆಗಲ
ಮೇಲೆ ಹೊತ್ತು ಕೊಂಡುಹೋದೆ.
8 ಬೆಳಿಗ್ಗೆ ಸರ್ವೇಶ್ವರನಿಂದ ಈ ವಾಣಿ ನನಗೆ ಕೇಳಿಸಿತು: 9 "ನರಪುತ್ರನೇ, ದ್ರೋಹಿವಂಶದವರಾದ
ಇಸ್ರಯೇಲರು, 'ನೀನು ಏನು ಮಾಡುತ್ತಿರುವೆ?' ಎಂದು ನಿನ್ನನ್ನು ಕೇಳಿದ್ದಾರಲ್ಲವೆ? 10ನೀನು ಅವರಿಗೆ ಹೀಗೆ
ನುಡಿ, 'ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: ಈ ಹೊರೆ ಜೆರುಸಲೇಮಿನಲ್ಲಿರುವ ರಾಜನಿಗೂ ಅಲ್ಲಿನ
ಇಸ್ರಯೇಲ್ ವಂಶದವರೆಲ್ಲರಿಗೂ ಸಂಬಂಧಪಟ್ಟಿದೆ; 11ಇದನ್ನೂ ನುಡಿ, – 'ನಾನು ನಿಮಗೆ
ಮುಂಗುರುತಾಗಿದ್ದೇನೆ. ನಾನು ಮಾಡಿದಂತೆಯೇ ಅವರಿಗಾಗುವುದು: ಅವರು ವಲಸೆಯಾಗಿ
ಸೆರೆಹೋಗುವರು. 12ಅವರಲ್ಲಿನ ರಾಜನು ಹೆಗಲ ಮೇಲೆ ಹೊರೆಯನ್ನು ಹೊತ್ತುಕೊಂಡು ಕತ್ತಲಲ್ಲಿ
ಹೊರಟುಹೋಗುವನು: ಅವನು ಗೋಡೆಯನ್ನು ತೋಡಿ, ಕಂಡಿಯ ಮೂಲಕ ಸಾಮಗ್ರಿಗಳನ್ನು ಆಚೆಗೆ
ಸಾಗಿಸುವನು; ಅವನು ಮೋರೆಯನ್ನು ಮುಚ್ಚಿಕೊಳ್ಳುವನು, ಭೂಮಿಯು ಅವನ ಕಣ್ಣಿಗೆ ಕಾಣಿಸದು. 13ನಾನು
ಅವನಿಗೆ ನನ್ನ ಬಲೆಯೊಡ್ಡುವೆನು, ನಾನು ಹಾಕಿದ ಉರುಲಿನಲ್ಲಿ ಸಿಕ್ಕಿಬೀಳುವನು: ಬಾಬಿಲೋನಿಯಾ ದೇಶದ
ಬಾಬಿಲೋನ್ ನಗರಕ್ಕೆ ಅವನನ್ನು ಒಯ್ಯುವೆನು; ಅಲ್ಲೇ ಇದ್ದು ಸಾಯುವನು, ಆದರೂ ಆ ದೇಶವನ್ನು
ನೋಡನು. 14ಅವನ ಸುತ್ತಲಿನ ಸಕಲ ಸಹಾಯಕರನ್ನೂ ಅವನ ಸಮಸ್ತವ್ಯೂಹಗಳವರನ್ನೂ ನಾನು ಎಲ್ಲ
ಕಡೆಯ ಗಾಳಿಗೂ ತೂರಿ ಅವರ ಹಿಂದೆ ಕತ್ತಿಯನ್ನು ಬೀಸುವೆನು.
15 "ನಾನು ಅವರನ್ನು ಜನಾಂಗಗಳೊಳಗೆ ಚದರಿಸಿ ಬಿಟ್ಟು, ಅನ್ಯದೇಶಗಳಲ್ಲಿ ಚೆಲ್ಲಾಪಿಲ್ಲಿ
ಮಾಡುವಾಗ ನಾನೇ ಸರ್ವೇಶ್ವರ ಎಂದು ಅವರಿಗೆ ಗೊತ್ತಾಗುವುದು. 16ನಾನು ಕೆಲವರನ್ನು ಖಡ್ಗ–ಕ್ಷಾಮ–
ವ್ಯಾಧಿಗಳಿಂದ ಉಳಿಸಿ, ಅವರು ತಮ್ಮ ಅಸಹ್ಯ ಕಾರ್ಯಗಳ ವಿಷಯವನ್ನು ತಾವು ಸೇರಿದ ಜನಾಂಗಗಳಲ್ಲಿ
ತಿಳಿಸುವುದಕ್ಕೆ ಅವಕಾಶ ಮಾಡುವೆನು: ನಾನೇ ಸರ್ವೇಶ್ವರ ಎಂದು ಆ ಜನಾಂಗಗಳಿಗೂ ಗೊತ್ತಾಗುವುದು."

### ನಡುಕದ ವಿಡಂಬನೆ

17 ಇದಲ್ಲದೆ ಸರ್ವೇಶ್ವರನ ವಾಣಿ ನನಗೆ ಇಂತೆಂದಿತು: 18"ನರಪುತ್ರನೇ, ನೀನು ಅನ್ನವನ್ನು
ಅಂಜಿಕೆಯಿಂದ ತಿಂದು, ನೀರನ್ನು ನಡುಕದಿಂದ ಕುಡಿದು, ಆ ದೇಶದಲ್ಲಿರುವ ಜನರಿಗೆ ಹೀಗೆ ಹೇಳು:

19ಸರ್ವೇಶ್ವರನಾದ ದೇವರು ಇಸ್ರಯೇಲ್ ನಾಡಿನ ಜೆರುಸಲೇಮ್ ನಿವಾಸಿಗಳನ್ನೂ ಕುರಿತು ಇಂತೆನ್ನುತ್ತಾರೆ: 'ಅವರು ಅನ್ನವನ್ನು ಅಂಜಿಕೆಯಿಂದ ತಿಂದು ನೀರನ್ನು ನಡುಕದಿಂದ ಕುಡಿಯುವರು: ಏಕೆಂದರೆ ಆ ನಾಡಿನಲ್ಲಿರುವವರು ಹಿಂಸಾಚಾರಿಗಳು; ಈ ಕಾರಣ, ಅಲ್ಲಿನ ಸೊತ್ತೆಲ್ಲಾ ಸೂರೆಯಾಗಿ, ನಾಡು ಬರಿದಾಗುವುದು. 20ಆಗ ಜನ ತುಂಬಿದ ಊರುಗಳು ಹಾಳಾಗಿ ನಾಡು ಪಾಳುಬೀಳುವುದು; ನಾನೇ ಸರ್ವೇಶ್ವರ ಎಂದು ನಿಮಗೆ ಆಗ ಗೊತ್ತಾಗುವುದು."

### ಗಾದೆಮಾತನ್ನು ಸುಳ್ಳಾಗಿಸುವ ಸಂದೇಶ

21 ಆಮೇಲೆ ಸರ್ವೇಶ್ವರನ ವಾಣಿ ನನಗೆ ದಯಪಾಲಿಸಿದ್ದು: 22"ನರಪುತ್ರನೇ 'ಕ್ಲುಪ್ತಕಾಲ ದೂರ ದೂರ ಹೋಗುತ್ತಲಿದೆ, ದಿವ್ಯದರ್ಶನಗಳೆಲ್ಲಾ ನಿರರ್ಥಕ' ಎಂಬುದಾಗಿ ಇಸ್ರಯೇಲ್ ನಾಡಿನವರು ಆಡಿಕೊಳ್ಳುವ ಈ ಗಾದೆ ಏನು? 23ಅವರಿಗೆ ಹೀಗೆ ಹೇಳು – ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನಾನು ಈ ಗಾದೆಯನ್ನು ನಿಲ್ಲಿಸಿಬಿಡುವೆನು; ಅದು ಇಸ್ರಯೇಲಿನಲ್ಲಿ ಇನ್ನು ಸಲ್ಲದು; ನಾನು ನುಡಿಯುವ ಆ ಮಾತನ್ನು ಕೇಳಿರಿ: ಕ್ಲುಪ್ತಕಾಲ ಹತ್ತಿರಬಂದಿದೆ, ದಿವ್ಯ ದರ್ಶನಗಳೆಲ್ಲಾ ಸಾರ್ಥಕವಾಗುವ ಕಾಲ ಸಮೀಪಿಸಿದೆ.

24"ಇನ್ನು ಮೇಲೆ ಇಸ್ರಯೇಲ್ ವಂಶದವರಲ್ಲಿ ಯಾರಿಗೂ ಸುಳ್ಳು ದರ್ಶನವಾಗದು; ಮೋಸದ ಕಣಿ ಇರದು. 25ನಾನೇ ಸರ್ವೇಶ್ವರ; ನಾನು ನುಡಿದೇ ತೀರುವೆನು; ನಾನು ನುಡಿದ ಮಾತು ನೆರವೇರುವುದು, ಇನ್ನು ನಿಧಾನವಾಗದು. ದ್ರೋಹಿ ವಂಶದವರೇ, ನಾನು ನಿಮ್ಮ ಕಾಲದಲ್ಲಿ ನುಡಿಯುವುದು ಮಾತ್ರವಲ್ಲದೆ ನುಡಿದದ್ದನ್ನು ನೆರವೇರಿಸುವೆನು. ಇದು ಸರ್ವೇಶ್ವರನಾದ ದೇವರ ವಾಕ್ಯ." 26ಮತ್ತು ಸರ್ವೇಶ್ವರನ ವಾಣಿ ನನಗೆ ಹೀಗೆಂದಿತು: 27"ನರ ಪುತ್ರನೇ, ಇಗೋ, ಇಸ್ರಯೇಲ್ ವಂಶದವರು, 'ಇವನಿಗಾದ ದಿವ್ಯದರ್ಶನ ಮುಂದೆ ಬಹುದೂರ ಕಾಲಕ್ಕೆ ಸಂಬಂಧಪಟ್ಟದ್ದು; ಬಹಳ ದಿನಗಳ ಮೇಲೆ ಆಗತಕ್ಕದ್ದನ್ನು ಮುಂತಿಳಿಸುತ್ತಾನೆ' ಎಂದು ಹೇಳುತ್ತಾರೆ. 28ಆದಕಾರಣ ನೀನು ಅವರಿಗೆ ಹೀಗೆ ಹೇಳು: ಸರ್ವೇಶ್ವರನಾದ ದೇವರು ಹೇಳುವುದನ್ನು ಗಮನಿಸಿ: ಇನ್ನು ಮೇಲೆ ನನ್ನ ಮಾತುಗಳಲ್ಲಿ ಯಾವುದೂ ಸಾವಕಾಶವಾಗದು; ನಾನಾಡುವ ಮಾತು ನೆರವೇರುವುದು ಖಂಡಿತ; ಇದು ಸರ್ವೇಶ್ವರನಾದ ದೇವರ ನುಡಿ."

### ಕಳ್ಳ ಪ್ರವಾದಿಗಳಿಗೆ ಧಿಕ್ಕಾರ !

**13** ಸರ್ವೇಶ್ವರ ನನಗೆ ಅನುಗ್ರಹಿಸಿದ ವಾಣಿ ಇದು: 2"ನರಪುತ್ರನೇ, ಪ್ರವಾದನೆ ಮಾಡಿ ಸ್ವಕಲ್ಪಿತವಾದುದನ್ನೇ ಸಾರುತ್ತಲಿರುವ ಇಸ್ರಯೇಲಿನ ಪ್ರವಾದಿಗಳಿಗೆ ಖಂಡನೆಯಾಗಿ ನೀನು ಪ್ರವಾದಿಸುತ್ತ ಹೀಗೆ ಹೇಳು: "ಸರ್ವೇಶ್ವರನ ವಾಕ್ಯವನ್ನು ಕೇಳಿರಿ, ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ:

3 'ಯಾವ ಸಾಕ್ಷಾತ್ಕಾರವೂ ಇಲ್ಲದೆ ಸ್ವಬುದ್ಧಿಯನ್ನೇ ಅನುಸರಿಸುವ ಮೂರ್ಖ ಪ್ರವಾದಿಗಳಿಗೆ ಧಿಕ್ಕಾರ! 4ಇಸ್ರಯೇಲೇ, ನಿನ್ನ ಪ್ರವಾದಿಗಳು ಹಾಳು ಪ್ರದೇಶಗಳಲ್ಲಿನ ಗುಳ್ಳೆ ನರಿಗಳಿಂತಿದ್ದಾರೆ ! 5ಸರ್ವೇಶ್ವರನ ದಿನದಲ್ಲಿ ಯುದ್ಧಕ್ಕೆ ನಿಲ್ಲಬೇಕೆಂದು ನೀವು ಪೌಳಿಯ ಒಡಕುಗಳನ್ನೇರಲಿಲ್ಲ, ಇಸ್ರಯೇಲ್ ವಂಶದ ರಕ್ಷಣೆಗಾಗಿ ಗೋಡೆಯನ್ನು ಗಟ್ಟಿಮಾಡಲೂ ಇಲ್ಲ. 6ಸರ್ವೇಶ್ವರ ಇಂತೆನ್ನುತ್ತಾರೆಂದು ನುಡಿ: ಅಂಥವರಿಗೆ ಆದ ದರ್ಶನ ಮಿಥ್ಯ; ಕೇಳಿಸಿದ ವಾಣಿ ಸುಳ್ಳು; ಸರ್ವೇಶ್ವರ ಅವರನ್ನು ಕಳುಹಿಸಲಿಲ್ಲ. ತಾವು ನುಡಿದ ಮಾತು ನೆರವೇರುವುದೆಂದು ಸುಮ್ಮಸುಮ್ಮನೆ ನಿರೀಕ್ಷಿಸಿ ಕೊಂಡಿದ್ದಾರೆ. 7ನಾನು ಮಾತಾಡದೆ ಇದ್ದರೂ 'ಸರ್ವೇಶ್ವರ ಇಂತೆನ್ನುತ್ತಾರೆ' ಎಂದು ನುಡಿಯುತ್ತಿರುವ ನಿಮಗೆ ಆದ ದರ್ಶನ ಮಿಥ್ಯ. ನೀವು ಹೇಳಿದ ಭವಿಷ್ಯ ಸುಳ್ಳು.'

8 ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ನೀವು ವ್ಯರ್ಥವಾದುದನ್ನು ನುಡಿದು ಸುಳ್ಳಾದುದನ್ನು ಕಂಡದ್ದರಿಂದ ಇಗೋ, ನಿಮಗೆ ವಿರುದ್ಧವಾಗಿದ್ದೇನೆ, ಇದು ಸರ್ವೇಶ್ವರನಾದ ದೇವರೆಂಬ ನನ್ನ ನುಡಿ. 9ಮಿಥ್ಯ ದರ್ಶನ ಹೊಂದಿ ಸುಳ್ಳು ಭವಿಷ್ಯ ಹೇಳುವ ಪ್ರವಾದಿಗಳ ಮೇಲೆ ನಾನು ಕೈ ಮಾಡುವೆನು; ಅವರು ನನ್ನ ಜನರ ಹಿರಿಯ ಸಭೆಯಲ್ಲಿ ಸೇರಕೂಡದು, ಇಸ್ರಯೇಲ್ ವಂಶದವರ

ಪಟ್ಟಿಯಲ್ಲಿ ಅವರ ಹೆಸರು ಲಿಖಿತವಾಗಬಾರದು, ಅವರು ಇಸ್ರಯೇಲ್ ನಾಡನ್ನು ಪ್ರವೇಶಿಸಲೂಬಾರದು. ನಾನೇ ಸರ್ವೇಶ್ವರನಾದ ದೇವರು ಎಂದು ನಿಮಗೆ ಗೊತ್ತಾಗುವುದು.

10 "ಅಶಾಂತಿಯಿರುವಾಗಲೂ ಅವರು ಶಾಂತಿಯಿದೆ ಎಂದು ಹೇಳಿ ನನ್ನ ಜನಗಳನ್ನು ವಂಚಿಸಿದ್ದಾರೆ. ಜನರು ದುರ್ಬಲ ಗೋಡೆಯನ್ನು ಕಟ್ಟಿದ್ದಾರೆ. ಅದಕ್ಕೆ ಆ ಪ್ರವಾದಿಗಳು ಸುಣ್ಣ ಬಳಿಯುತ್ತಾರೆ;
11ಆದಕಾರಣ, ನೀನು ಸುಣ್ಣ ಬಳಿಯುವವರಿಗೆ ಹೀಗೆ ನುಡಿ: 'ವಿಪರೀತ ಮಳೆಯಾಗಿ ಗೋಡೆ ಬಿದ್ದುಹೋಗುವುದು, ಆನೆಕಲ್ಲುಗಳು ಸುರಿಯುವುವು; ಬಿರುಗಾಳಿ ಗೋಡೆಯನ್ನು ಕೆಡವಿ ಹಾಕುವುದು;
12ಇಗೋ, ಗೋಡೆ ಬಿದ್ದ ಮೇಲೆ, 'ನೀವು ಬಳಿದ ಸುಣ್ಣ ಎಲ್ಲಿ?' ಎಂದು ನಿಮ್ಮನ್ನು ಕೇಳುವರಲ್ಲವೆ?'

13 "ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: 'ನಾನು ಸಿಟ್ಟುಗೊಂಡು ಗೋಡೆಯನ್ನು ಬಿರುಗಾಳಿಯಿಂದ ಕೆಡವಿಹಾಕುವೆನು; ಅದನ್ನು ನಾಶಮಾಡಲು ನನ್ನ ಕೋಪದಿಂದ ವಿಪರೀತ ಮಳೆಯುಂಟಾಗುವುದು; ರೋಷದಿಂದ ಆನೆಕಲ್ಲುಗಳು ಸುರಿಯುವುವು.
14ನೀವು ಸುಣ್ಣ ಬಳಿದ ಗೋಡೆಯನ್ನು ನಾನು ಹೀಗೆ ಕೆಡವಿ ನೆಲಸಮಮಾಡಿ ಅದರ ಅಸ್ತಿವಾರವನ್ನು ಹೊರಗೆಡಹುವೆನು; ಅದು ಹೀಗೆ ಬಿದ್ದು ಹೋಗುವಾಗ ನೀವು ಅದರೊಳಗೆ ಸಿಕ್ಕಿ ನಾಶವಾಗುವಿರಿ; ನಾನೇ ಸರ್ವೇಶ್ವರ ಎಂದು ನಿಮಗೆ ಗೊತ್ತಾಗುವುದು.'

15 "ಹೀಗೆ ನಾನು ಗೋಡೆಯಲ್ಲಿಯೂ ಅದಕ್ಕೆ ಸುಣ್ಣಬಳಿದ ನಿಮ್ಮಲ್ಲಿಯೂ ರೋಷವನ್ನು ತೀರಿಸಿಕೊಂಡು ಇಂತೆನ್ನುವೆನು:
16'ಇಸ್ರಯೇಲಿನ ಪ್ರವಾದಿಗಳೇ, ಅಶಾಂತಿಯಿದ್ದರೂ ಶಾಂತಿಯ ದರ್ಶನಗಳನ್ನು ನೀವು ಕಂಡು ಜೆರುಸಲೇಮಿನ ಬಗ್ಗೆ ಪ್ರವಾದಿಸಿದ್ದೀರಲ್ಲವೆ? ಗೋಡೆ ಇಲ್ಲವಾಯಿತು, ಅದಕ್ಕೆ ಸುಣ್ಣ ಬಳಿದವರೂ ಇಲ್ಲವಾದರು; ಇದು ಸರ್ವೇಶ್ವರನಾದ ದೇವರ ನುಡಿ.'

### ಸುಳ್ಳು ಪ್ರವಾದಿನಿಯರಿಗೆ ಧಿಕ್ಕಾರ !

17 "ನರಪುತ್ರನೇ, ಸ್ವಕಲ್ಪಿತವಾದದ್ದನ್ನು ಭವಿಷ್ಯವಾಣಿ ಎಂದು ಹೇಳುವ ನಿನ್ನ ಸ್ವಕುಲ ಮಹಿಳೆಯರ ಕಡೆಗೆ ಮುಖಮಾಡಿಕೊಂಡು ಅವರನ್ನೂ ಖಂಡಿಸಿ ಹೀಗೆ ಪ್ರವಾದಿಸು:
18ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಜನರ ಪ್ರಾಣಗಳನ್ನು ಬೇಟೆಯಾಡಬೇಕೆಂದು, ಎಲ್ಲರ ಮೊಣಕೈಗಳಿಗೆ ತಾಯಿತಿಗಳನ್ನು ಕಟ್ಟಿ, ಉದ್ದವಾದವರಿಗೂ ಗಿಡ್ಡವಾದವರಿಗೂ ತಕ್ಕತಕ್ಕ ಮುಸುಕುಗಳನ್ನು ಸಿದ್ಧಮಾಡಿಕೊಂಡಿರುವ ಮಹಿಳೆಯರಿಗೆ ಧಿಕ್ಕಾರ! ಮಹಿಳೆಯರೇ, ನೀವು ನನ್ನ ಜನರ ಪ್ರಾಣಗಳನ್ನು ಬೇಟೆಯಾಡಿ, ನಿಮಗೆ ಬೇಕಾದವರ ಪ್ರಾಣಗಳನ್ನು ಉಳಿಸಿಕೊಳ್ಳುವಿರೋ?
19ನೀವು ಹಿಡಿಯುವಷ್ಟೆ ಜವೆಗೋಧಿಗೆ, ಚೂರುಪಾರು ರೊಟ್ಟಿಗೆ ಆಸೆಪಟ್ಟು, ಸುಳ್ಳು ಮಾತಿಗೆ ಕಿವಿಗೊಡುವ ನನ್ನ ಜನರಿಗೆ ಸುಳ್ಳು ಹೇಳಿ, ಜೀವಿಸತಕ್ಕವರನ್ನು ಸಾಯಿಸಿ, ಸಾಯತಕ್ಕವರನ್ನು ಉಳಿಸಿ, ನನ್ನ ಜನರ ನಡುವೆ ನನ್ನ ಘನತೆಗೆ ಕುಂದುತಂದಿದ್ದೀರಿ."

20 ಹೀಗಿರಲು, ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – "ಅಕಟಾ! ನೀವು ಜನರ ಪ್ರಾಣಗಳನ್ನು ಪಕ್ಷಿಗಳನ್ನೋ ಎಂಬಂತೆ ಬೇಟೆಯಾಡುವುದಕ್ಕೆ ಸಾಧನವಾದ ನಿಮ್ಮ ತಾಯಿತಿಗಳಿಗೆ ನಾನು ಹೇಸಿ, ಅವುಗಳನ್ನು ನಿಮ್ಮ ಕೈಗಳಿಂದ ಕಿತ್ತುಹಾಕುವೆನು; ನೀವು ಬೇಟೆಯಾಡುವ ಪ್ರಾಣಿಗಳನ್ನು ಬಿಡುಗಡೆಮಾಡಿ ಪಕ್ಷಿಗಳ ಹಾಗೆ ಸ್ವತಂತ್ರವಾಗಿಸುವೆನು.
21ನಾನು ನಿಮ್ಮ ಮುಸುಕುಗಳನ್ನೂ ಹರಿದು, ನನ್ನ ಜನರನ್ನು ನಿಮ್ಮ ಕೈಯಿಂದ ತಪ್ಪಿಸುವೆನು; ಅವರು ಇನ್ನು ಮೇಲೆ ನಿಮ್ಮ ಕೈಗೆ ಬೇಟೆಯಾಗಿ ಸಿಕ್ಕುವುದಿಲ್ಲ; ನಾನೆ ಸರ್ವೇಶ್ವರ ಎಂದು ನಿಮಗೆ ಗೊತ್ತಾಗುವುದು.

22 "ನಾನು ಎದೆಗುಂದಿಸದ ಶಿಷ್ಟನ ಮನಸ್ಸನ್ನು ನೀವು ಸುಳ್ಳಾಡಿ ಕುಂದಿಸಿದ್ದೀರಿ; ದುಷ್ಟನು ತನ್ನ ದುರ್ಮಾರ್ಗವನ್ನು ಬಿಟ್ಟು ತನ್ನ ಪ್ರಾಣವನ್ನು ಉಳಿಸಿಕೊಳ್ಳದಂತೆ ನೀವು ಅವನನ್ನು ಪ್ರೋತ್ಸಾಹಿಸಿದ್ದೀರಿ.
23ಆದಕಾರಣ ನೀವು ಮಿಥ್ಯದರ್ಶನವನ್ನು ಹೊಂದಿ, ಸುಳ್ಳುಭವಿಷ್ಯ ಹೇಳುವ ಕೆಲಸ ಇನ್ನು ನಡೆಯುವುದೇ ಇಲ್ಲ; ನನ್ನ ಜನರನ್ನು ನಿಮ್ಮ ಕೈವಶದಿಂದ ಬಿಡಿಸುವೆನು; ನಾನೆ ಸರ್ವೇಶ್ವರ ಎಂದು ನಿಮಗೆ ಗೊತ್ತಾಗುವುದು."

## ವಿಗ್ರಹಾರಾಧನೆ ಕೂಡದು

**14** ಇಸ್ರಯೇಲಿನ ಹಿರಿಯರಲ್ಲಿ ಕೆಲವರು ಬಂದು, 2ನನ್ನ ಮುಂದೆ ಕುಳಿತುಕೊಂಡು ಇರುವಾಗ ಸರ್ವೇಶ್ವರ
ನನಗೆ ಅನುಗ್ರಹಿಸಿದ ವಾಣಿ ದಿ: 3"ನರಪುತ್ರನೇ, ಈ ಜನರು ವಿಗ್ರಹಗಳನ್ನು, ತಮ್ಮ ಹೃದಯದಲ್ಲಿ
ನೆಲೆಗೊಳಿಸಿಕೊಂಡಿದ್ದಾರೆ. ಪಾಪಕಾರಿಯಾದ ಈ ವಿಘ್ನವನ್ನು ತಮ್ಮ ಮುಂದೆಯೇ ಇಟ್ಟುಕೊಂಡಿದ್ದಾರೆ;
ಇಂಥವರಿಗೆ ನಾನು ದೈವೋತ್ತರವನ್ನು ದಯಪಾಲಿಸುವುದು ಸರಿಯೆ? ಎಂದಿಗೂ ಅಲ್ಲ.

4 "ಆದಕಾರಣ ನೀನು ಅವರನ್ನು ಸಂಬೋಧಿಸಿ ಹೀಗೆ ಹೇಳು – ಸರ್ವೇಶ್ವರನಾದ ದೇವರು
ಇಂತೆನ್ನುತ್ತಾರೆ – ಇಸ್ರಯೇಲ್ ವಂಶದವರಲ್ಲಿ ಯಾರು ಯಾರು ವಿಗ್ರಹಗಳನ್ನು ತಮ್ಮ ಹೃದಯದಲ್ಲಿ
ನೆಲೆಗೊಳಿಸಿಕೊಂಡಿದ್ದಾರೋ, ಪಾಪಕಾರಿಯಾದ ಆ ವಿಘ್ನವನ್ನು ತಮ್ಮ ಮುಂದೆಯೇ ಇಟ್ಟುಕೊಂಡಿದ್ದಾರೋ
ಅಂಥವರು ಪ್ರವಾದಿಯನ್ನು ಪ್ರಶ್ನೆ ಕೇಳುವುದಕ್ಕೆ ಬಂದರೆ ಅವರು ಪಾತಕಕ್ಕೆ ಅಂದರೆ, ಅವರ ಲೆಕ್ಕವಿಲ್ಲದ
ವಿಗ್ರಹಗಳಿಗೆ ತಕ್ಕ ಹಾಗೆ ಸರ್ವೇಶ್ವರನಾದ ನಾನೇ ಅವರಿಗೆ ಉತ್ತರಕೊಡುವೆನು. 5ಇಸ್ರಯೇಲ್
ವಂಶದವರೆಲ್ಲರೂ ತಮ್ಮ ವಿಗ್ರಹಗಳ ನಿಮಿತ್ತ ನನ್ನನ್ನು ತೊರೆದುದ್ದರಿಂದ ನಾನು ಅವರನ್ನೆಲ್ಲಾ ಅವರ
ಆಶಾಪಾಶದಲ್ಲೇ ಸಿಕ್ಕಿಸಿ ಹಿಡಿಯುವೆನು.

6 "ಆದಕಾರಣ ನೀನು ಇಸ್ರಯೇಲ್ ವಂಶದವರಿಗೆ ಹೀಗೆ ನುಡಿ – ಸರ್ವೇಶ್ವರನಾದ ದೇವರು
ಇಂತೆನ್ನುತ್ತಾರೆ – ನೀವು ನಿಮ್ಮ ವಿಗ್ರಹಗಳನ್ನು ತೊರೆದುಬಿಟ್ಟು ಹಿಂದಿರುಗಿರಿ; ನಿಮ್ಮ ಎಲ್ಲಾ ಅಸಹ್ಯ ವಸ್ತುಗಳ
ಕಡೆಗೆ ಬೆನ್ನುಮಾಡಿರಿ.

7 "ಏಕೆಂದರೆ ಇಸ್ರಯೇಲ್ ವಂಶದವರಲ್ಲಾಗಲಿ ಇಸ್ರಯೇಲಿನಲ್ಲಿ ನೆಲೆಸಿರುವ ವಿದೇಶಿಗಳಲ್ಲಾಗಲಿ
ಯಾವನಾದರೂ ನನ್ನಿಂದ ಅಗಲಿ ವಿಗ್ರಹಗಳನ್ನು ಹೃದಯದಲ್ಲಿ ನೆಲೆಗೊಳಿಸಿಕೊಂಡು ಪಾಪಕಾರಿಯಾದ ಆ
ವಿಘ್ನವನ್ನು ತನ್ನ ಮುಂದೆಯೇ ಇಟ್ಟುಕೊಂಡು, ಪ್ರವಾದಿಯ ಬಳಿಗೆ ಬಂದು, ಅವನ ಮೂಲಕ
ದೈವೋತ್ತರವನ್ನು ಕೇಳಿಕೊಂಡರೆ ಅವನಿಗೆ ಸರ್ವೇಶ್ವರನಾದ ನಾನೇ ಉತ್ತರಕೊಡುವೆನು. 8ಅವನಿಗೆ
ವಿಮುಖನಾಗಿ ಅವನ ದುರ್ಗತಿಯು ಎಚ್ಚರಿಕೆಗೆ ಗುರುತಾಗಿಯೂ ಕಟ್ಟು ಗಾದೆಗಳಿಗೆ ವಸ್ತುವಾಗಿಯೂ
ಆಗುವಂತೆ ಮಾಡುವೆನು; ಅವನನ್ನು ನನ್ನ ಜನರಿಂದ ಹೊರಹಾಕುವೆನು; ಹೀಗೆ ನಾನೇ ಸರ್ವೇಶ್ವರ ಎಂದು
ನಿಮಗೆ ಗೊತ್ತಾಗುವುದು.

9 "ಒಬ್ಬ ಪ್ರವಾದಿ ಮರುಳುಗೊಂಡು ದೈವೋಕ್ತಿಯೊಂದನ್ನು ನುಡಿದರೆ, ಆ ಪ್ರವಾದಿಯನ್ನು
ಮರಳುಗೊಳಿಸಿದವನು ಸರ್ವೇಶ್ವರನಾದ ನಾನೇ. ನಾನು ಅವನ ಮೇಲೆ ಕೈಯೆತ್ತಿ ಇಸ್ರಯೇಲರಾದ ನನ್ನ
ಜನರಿಂದ ತೆಗೆದುಹಾಕಿ ಅವನನ್ನು ನಿರ್ನಾಮ ಮಾಡುವೆನು. 10ಪ್ರವಾದಿಯ ದೋಷವು ಎಷ್ಟೋ, ಅವನನ್ನು
ಪ್ರಶ್ನೆ ಕೇಳುವವನ ದೋಷವೂ ಅಷ್ಟೇ; ಉಭಯರೂ ತಮ್ಮ ತಮ್ಮ ದೋಷಫಲವನ್ನು ಅನುಭವಿಸುವರು.
11ಹೀಗಾದರೆ ಇಸ್ರಯೇಲ್ ವಂಶದವರು ಇನ್ನು ನನ್ನನ್ನು ತೊರೆಯರು, ತಮ್ಮ ಲೆಕ್ಕವಿಲ್ಲದ ದ್ರೋಹಗಳಿಂದ
ತಮ್ಮನ್ನು ಹೊಲೆಮಾಡಿಕೊಳ್ಳರು; ಅವರು ನನಗೆ ಪ್ರಜೆಯಾಗಿರುವರು, ನಾನು ಅವರಿಗೆ ದೇವರಾಗಿ
ಇರುವೆನು; ಇದು ಸರ್ವೇಶ್ವರನಾದ ದೇವರ ನುಡಿ."

## ವೈಯಕ್ತಿಕ ಹೊಣೆಗಾರಿಕೆ – ನೋಹ,
## ದಾನಿಯೇಲ ಹಾಗೂ ಯೋಬ

12 ಸರ್ವೇಶ್ವರ ದಯಪಾಲಿಸಿದ ವಾಣಿ ನನಗೆ ಹೀಗೆಂದಿತು: 13"ನರಪುತ್ರನೇ, ಒಂದು ನಾಡು
ಅಪರಾಧವನ್ನು ನಡೆಸಿ ನನಗೆ ವಿರುದ್ಧ ಪಾಪ ಮಾಡಿದ ಮೇಲೆ ನಾನು ಕೈಯೆತ್ತಿ, ಅದರ ಜೀವನಾಧಾರವನ್ನು
ನಿಲ್ಲಿಸಿಬಿಟ್ಟು, ಕ್ಷಾಮವನ್ನು ಬರಮಾಡಿ, ಜನ ಹಾಗೂ ಜಾನುವಾರುಗಳನ್ನು ಅದರಿಂದ ನಿರ್ಮೂಲ
ಮಾಡುತ್ತೇನೆ. 14ನೋಹ, ದಾನಿಯೇಲ, ಯೋಬ, ಎಂಬೀ ಮೂವರು ವ್ಯಕ್ತಿಗಳು ಆ ನಾಡಿನಲ್ಲಿದ್ದರೂ ತಮ್ಮ
ಸದಾಚಾರದಿಂದ ಸ್ವಂತಪ್ರಾಣಗಳನ್ನು ಮಾತ್ರ ಉಳಿಸಿಕೊಳ್ಳುತ್ತಿದ್ದರು; ಇದು ಸರ್ವೇಶ್ವರನಾದ ದೇವರ ನುಡಿ.

15 "ನನ್ನ ಅಪ್ಪಣೆಯ ಮೇರೆಗೆ ದುಷ್ಟ ಮೃಗಗಳು ಆ ನಾಡಿನಲ್ಲಿ ತಿರುಗುತ್ತಾ ಅದನ್ನು
ನಿರ್ಜನಗೊಳಿಸಿ, ಹಾಳುಮಾಡಿ, ಯಾರೂ ಹಾದುಹೋಗದಂತೆ ಹೆದರಿಸುವ ಪಕ್ಷದಲ್ಲಿ 16ಈ ಮೂವರು

ವ್ಯಕ್ತಿಗಳು ಅದರಲ್ಲಿದ್ದರೂ, ನನ್ನ ಜೀವದಾಣೆ, ತಾವು ಉಳಿದುಕೊಳ್ಳುತ್ತಿದ್ದರೇ ಹೊರತು ತಮ್ಮ ಗಂಡು ಮಕ್ಕಳನ್ನಾಗಲಿ ಹೆಣ್ಣು ಮಕ್ಕಳನ್ನಾಗಲಿ ಉಳಿಸಿಕೊಳ್ಳುತ್ತಿರಲಿಲ್ಲ; ನಾಡು ಹಾಳಾಗಿ ಹೋಗುವುದು; ಇದು ಸರ್ವೇಶ್ವರನಾದ ದೇವರ ನುಡಿ.

17 " 'ಖಡ್ಗವೇ, ಆ ನಾಡನ್ನು ಹೊಕ್ಕು ಹೋಗು' ಎಂದು ಆಜ್ಞಾಪಿಸಿ ನಾನು ಅದನ್ನು ಆ ನಾಡಿಗೆ ತಂದು, ಜನ ಹಾಗು ಜಾನುವಾರುಗಳನ್ನು ಅದರೊಳಗಿಂದ ನಿರ್ಮೂಲಮಾಡುವ ಪಕ್ಷದಲ್ಲಿ 18ಈ ಮೂವರು ಪುರುಷರು ಅದರಲ್ಲಿದ್ದರೂ, ನನ್ನ ಜೀವದಾಣೆ, ತಾವು ಉಳಿದುಕೊಳ್ಳುತ್ತಿದ್ದರೇ ಹೊರತು ತಮ್ಮ ಗಂಡು ಮಕ್ಕಳನ್ನಾಗಲಿ ಹೆಣ್ಣುಮಕ್ಕಳನ್ನಾಗಲಿ ಉಳಿಸಿಕೊಳ್ಳುತ್ತಿರಲಿಲ್ಲ; ಇದು ಸರ್ವೇಶ್ವರನಾದ ದೇವರ ನುಡಿ.

19 "ನಾನು ಆ ನಾಡಿನ ಮೇಲೆ ಕೋಪಕಾರಿ, ರಕ್ತವನ್ನು ಸುರಿಸಿ, ವ್ಯಾಧಿಯನ್ನು ಕಳುಹಿಸಿ, ಜನ ಜಾನುವಾರುಗಳನ್ನು ನಿರ್ಮೂಲಮಾಡುವ ಪಕ್ಷದಲ್ಲಿ 20ನೋಹ, ದಾನಿಯೇಲ, ಯೋಬ, ಎಂಬವರು ಅದರಲ್ಲಿದ್ದರೂ ನನ್ನ ಜೀವದಾಣೆ, ತಮ್ಮ ಸದಾಚಾರದಿಂದ ಸ್ವಂತಪ್ರಾಣಗಳನ್ನು ಉಳಿಸಿಕೊಳ್ಳುತ್ತಿದ್ದರೇ ಹೊರತು ತಮ್ಮ ಗಂಡು ಮಗನನ್ನಾಗಲಿ ಹೆಣ್ಣು ಮಗಳನ್ನಾಗಲಿ ಉಳಿಸಿಕೊಳ್ಳುತ್ತಿರಲಿಲ್ಲ; ಇದು ಸರ್ವೇಶ್ವರನಾದ ದೇವರ ನುಡಿ."

21 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ನಾನು ಖಡ್ಗ, ಕ್ಷಾಮ, ದುಷ್ಟಮೃಗ, ವ್ಯಾಧಿ ಎಂಬ ನಾಲ್ಕು ಬಾಧೆಗಳನ್ನು ಜೆರುಸಲೇಮಿನ ಮೇಲೆ ಒಟ್ಟಿಗೆ ಬರಮಾಡಿ ಜನ ಜಾನುವಾರುಗಳನ್ನು ನಿರ್ಮೂಲ ಮಾಡುವಾಗ ಹೇಳತಕ್ಕದ್ದೇನು ! 22ಆದರೂ ಸ್ತ್ರೀಪುರುಷರಲ್ಲಿ ಕೆಲವರು ಹೇಗೋ ತಪ್ಪಿಸಿಕೊಂಡು ಉಳಿದು ಅಲ್ಲಿಂದ ಒಯ್ಯಲ್ಪಡುವರು; ಅವರು ನಿಮ್ಮ ಬಳಿ ಸೇರಿದಾಗ ನೀವು ಅವರ ದುರ್ಮಾರ್ಗ, ದುಷ್ಕೃತ್ಯಗಳನ್ನು ಕಂಡು, ನಾನು ಜೆರುಸಲೇಮಿನ ಮೇಲೆ ಬರಮಾಡಿದ ಕೇಡಿನ ವಿಷಯವಾಗಿ, ಅದಕ್ಕೆ ಉಂಟುಮಾಡಿದ ಎಲ್ಲ ಕೇಡುಗಳ ವಿಷಯವಾಗಿ, ಸಮಾಧಾನ ಹೊಂದುವಿರಿ. 23ನೀವು ಅವರ ದುರ್ಮಾರ್ಗ, ದುಷ್ಕೃತ್ಯಗಳನ್ನು ನೋಡುವಾಗ ಅವರಿಂದಲೇ ನಿಮಗೆ ಸಮಾಧಾನವಾಗುವುದು; ನಾನು ಜೆರುಸಲೇಮಿಗೆ ಮಾಡಿದ್ದೆಲ್ಲಾ ಕಾರಣವಿಲ್ಲದೆ ಮಾಡಿದ್ದಲ್ಲವೆಂದು ನಿಮಗೆ ಆಗ ತಿಳಿಯುವುದು. ಇದು ಸರ್ವೇಶ್ವರನಾದ ದೇವರ ನುಡಿ."

## ಕೆಲಸಕ್ಕೆ ಬಾರದ ದ್ರಾಕ್ಷಿಯ ಕಟ್ಟಿಗೆ

**15** ಸರ್ವೇಶ್ವರ ನನಗೆ ಅನುಗ್ರಹಿಸಿದ ವಾಣಿ ಇದು: 2"ನರಪುತ್ರನೇ, ವನ ವೃಕ್ಷಗಳಲ್ಲಿ ದ್ರಾಕ್ಷಾವೃಕ್ಷದ ವಿಶಿಷ್ಟತೆಯೇನು? ಕಾಡು ಗಿಡಗಳ ಕಟ್ಟಿಗೆಗಿಂತ ದ್ರಾಕ್ಷಿಯಯಲ್ಲಿ ಹೆಚ್ಚಾದುದೇನು? 3ದ್ರಾಕ್ಷಿಯ ಕಟ್ಟಿಗೆಯನ್ನು ಬಳಸಿ ಮಾಡುತ್ತಾರೆಯೆ ಏನನ್ನಾದರು? ಸಾಮಗ್ರಿಗಳನ್ನು ತಗಲಿ ಹಾಕಲು ಅದರಿಂದ ಮಾಡುತ್ತಾರೆಯೇ ಗೂಟವನ್ನಾದರು? 4ಇಲ್ಲ, ಬೆಂಕಿಗೆ ಹಾಕುತ್ತಾರೆ. ಸೌದೆಯಾಗಿ, ಅದನ್ನು ಬೆಂಕಿ ಸುಟ್ಟುಬಿಡುತ್ತದೆ. ಅದರ ಎರಡು ಕೊನೆಗಳೂ ಇದ್ದಲಾಗುತ್ತವೆ. ಅದರ ಮಧ್ಯಭಾಗವು ಬಾರದು ಯಾವ ತರದ ಬಳಕೆಗು. 5ಇದ್ದಹಾಗೆಯೆ ಇದ್ದಾಗ ಅದು ಬಾರಲಿಲ್ಲ ಯಾವ ಕೆಲಸಕ್ಕು. ಬೆಂಕಿಯಲ್ಲಿ ಸುಟ್ಟು ಇದ್ದಲಾದಾಗ ಯಾವುದಕ್ಕೆ ಬಂದೀತು?"

6 ಇಂತಿರಲು ಸರ್ವೇಶ್ವರನಾದ ದೇವರು ಹೇಳುವುದಿದು: "ವನವೃಕ್ಷಗಳಲ್ಲಿ ದ್ರಾಕ್ಷಾವೃಕ್ಷವನ್ನೆ ಅಗ್ನಿಗೆ ನಾನು ಸೌದೆಯನ್ನಾಗಿಸಿರುವಂತೆ ಕೊಟ್ಟಿರುವೆನು ಜೆರುಸಲೇಮನ್ನು ವಿನಾಶಕ್ಕೆ. 7ನಾನವರ ಮೇಲಿಡುವೆನು ಕೋಪದೃಷ್ಟಿಯನ್ನು; ಬೆಂಕಿಯಿಂದ ತಪ್ಪಿಸಿಕೊಂಡರೂ ನುಂಗಿಬಿಡುವುದು ಅದು ಅವರನ್ನು. ನಾನವರ ಮೇಲೆ ಕೋಪ ದೃಷ್ಟಿಯನ್ನಿಟ್ಟಾಗ ನಾನೇ ಸರ್ವೇಶ್ವರನೆಂದು ನಿಮಗೆ ಮನದಟ್ಟಾಗುವುದು. 8ಅವರು ದ್ರೋಹ ಮಾಡಿದ್ದರಿಂದ ನಾಡು ಕಾಡಾಗುವುದು ನನ್ನಿಂದ." ಇದು ಸರ್ವೇಶ್ವರನಾದ ದೇವರ ನುಡಿ.

## ಜೆರುಸಲೇಮ್ ನಗರಿಯ ಪತಿದ್ರೋಹ

**16** ಆಮೇಲೆ ಸರ್ವೇಶ್ವರ ನನಗೆ ದಯಪಾಲಿಸಿದ ವಾಣಿ – 2"ನರಪುತ್ರನೇ, ನೀನು ಜೆರುಸಲೇಮಿಗೆ ಅದರ ಅಸಹ್ಯಕಾರ್ಯಗಳನ್ನು ತಿಳಿಯಪಡಿಸಿ ಹೀಗೆ ನುಡಿ – 3ಸರ್ವೇಶ್ವರ ದೇವರು ಜೆರುಸಲೇಮೆಂಬಾಕೆಗೆ ಈ ಮಾತನ್ನು ಹೇಳಿ ಕಳುಹಿಸಿದ್ದಾರೆ.

“ನೀನು ಹುಟ್ಟಿದ್ದು ಕಾನಾನ್ ದೇಶದಲ್ಲಿ, ಅದೇ ನಿನ್ನ ಜನ್ಮಭೂಮಿ. ನಿನ್ನ ತಂದೆ ಅಮೋರಿಯನು, ನಿನ್ನ ತಾಯಿ ಹಿತ್ತಿಯಳು. 4ನಿನ್ನ ಜನನವನ್ನು ಕುರಿತು ಏನು ಹೇಳಲಿ! ನೀನು ಹುಟ್ಟಿದ ದಿನದಂದು ಯಾರೂ ನಿನ್ನ ಹೊಕ್ಕಳು ಕೊಯ್ದು ಕಟ್ಟಲಿಲ್ಲ. ನಿನ್ನನ್ನು ನೀರಿನಿಂದ ತೊಳೆದು ಶುಚಿ ಮಾಡಲಿಲ್ಲ, ನಿನಗೆ ಉಪ್ಪನ್ನು ಸ್ವಲ್ಪವು ಸವರಲಿಲ್ಲ, ನಿನ್ನನ್ನು ಬಟ್ಟೆಯಲ್ಲಿ ಸುತ್ತಲೇ ಇಲ್ಲ. 5ನಿನ್ನನ್ನು ಕಟಾಕ್ಷಿಸಿ, ಕರುಣಿಸಿ ಯಾರೂ ನಿನಗೆ ಇಂಥಾ ಸಹಾಯ ಮಾಡಲಿಲ್ಲ; ನಿನ್ನ ಜನನ ದಿವಸದಲ್ಲಿ ನೀನು ಹೇಸಿಗೆಯಾಗಿದ್ದೆ, ನಿನ್ನನ್ನು ಬಯಲಿನಲ್ಲಿ ಬಿಸಾಡಿ ಬಿಟ್ಟರು.

6 “ನಾನು ಹಾದುಹೋಗುತ್ತಾ, ನಿನ್ನ ರಕ್ತದಲ್ಲೇ ಹೊರಳಾಡುತ್ತಿದ್ದ ನಿನ್ನನ್ನು ನೋಡಿ, ‘ನೀನು ರಕ್ತದಿಂದ ಅಶುದ್ಧವಾಗಿದ್ದರೂ ಬದುಕು’ ಎಂದು ಹೇಳಿದೆ; ಹೌದು, ‘ನೀನು ರಕ್ತದಿಂದ ಅಶುದ್ಧವಾಗಿದ್ದರೂ ಬದುಕು’ ಎಂದು ಹೇಳಿ ಬದುಕಿಸಿದೆ. 7ಭೂಮಿಯಲ್ಲಿ ಮೊಳಕೆಯನ್ನೋ ಎಂಬಂತೆ ನಾನು ನಿನ್ನನ್ನು ಬೆಳೆಯಿಸಿದೆ; ನೀನು ಬಲಿತು ಪ್ರಾಯ ತುಂಬಿ ಅತಿ ಸುಂದರಿಯಾದೆ; ನಿನಗೆ ಸ್ತನಗಳು ಮೂಡಿದವು. ನಿನ್ನ ಕೂದಲು ಉದ್ದವಾಯಿತು; ಆದರೆ ನೀನು ಬಟ್ಟೆಯಿಲ್ಲದೆ ಬೆತ್ತಲೆಯಾಗಿದ್ದೆ.

8 “ನಾನು ಪುನಃ ಹಾದುಹೋಗುತ್ತಾ ನಿನ್ನನ್ನು ನೋಡಲು ಇಗೋ, ನೀನು ಮದುವೆಗೆ ಸಿದ್ಧಳಾಗಿದ್ದೆ; ಆಗ ನಾನು ನನ್ನ ಹೊದಿಕೆಯ ಸೆರಗನ್ನು ನಿನಗೆ ಹೊದಿಸಿ, ನಿನ್ನ ಮಾನವನ್ನು ಕಾಪಾಡಿದೆ; ಇದಲ್ಲದೆ ನಾನು ನಿನಗೆ ಮಾತುಕೊಟ್ಟು ಒಡಂಬಡಿಕೆ ಮಾಡಿಕೊಂಡೆ. ಆದ್ದರಿಂದ ನೀನು ನನ್ನವಳಾದೆ; ಇದು ಸರ್ವೇಶ್ವರನಾದ ದೇವರ ನುಡಿ.

9 “ಆಗ ನಾನು ನೀರಿನಲ್ಲಿ ನಿನಗೆ ಸ್ನಾನ ಮಾಡಿಸಿ, ನಿನ್ನ ಮೇಲಿನ ರಕ್ತವನ್ನು ತೊಳೆದು ಬಿಟ್ಟು, ನಿನಗೆ ತೈಲವನ್ನು ಹಚ್ಚಿದೆ. 10ಇದಲ್ಲದೆ ಕಸೂತಿಯ ಬಟ್ಟೆಯನ್ನು ನಿನಗೆ ತೊಡಿಸಿ, ಕಡಲು ಹಂದಿಯ ತೊಗಲಿನ ಕೆರಗಳನ್ನು ನಿನ್ನ ಕಾಲಿಗೆ ಮೆಟ್ಟಿಸಿ, ನಯವಾದ ನಾರುಮಡಿಯನ್ನು ನಿನಗೆ ಉಡಿಸಿ, ರೇಷ್ಮೆಯ ಹೊದಿಕೆಯನ್ನು ನಿನಗೆ ಹೊದಿಸಿದೆ. 11ಮತ್ತು ನಾನು ನಿನ್ನ ಕೈಗಳಿಗೆ ಬಳೆಗಳನ್ನು, 12ಕೊರಳಿಗೆ ಮಾಲೆಯನ್ನು, ಮೂಗಿಗೆ ಮೂಗುತಿಯನ್ನು, ಶಿರಸ್ಸಿಗೆ ಸುಂದರ ಕಿರೀಟವನ್ನು ಇಟ್ಟು, ನಿನ್ನನ್ನು ಆಭರಣಗಳಿಂದ ಸಿಂಗರಿಸಿದೆ. 13ನಿನ್ನ ಒಡವೆಗಳು ಬೆಳ್ಳಿಬಂಗಾರದವು; ನಿನ್ನ ಉಡುಪು ನಯವಾದ ನಾರುಮಡಿ, ರೇಷ್ಮೆಯ ಹೊದಿಕೆ, ಕಸೂತಿಯ ವಸ್ತ್ರ; ನಿನ್ನ ಆಹಾರವು ಗೋದಿಹಿಟ್ಟು, ಜೇನುತುಪ್ಪ ಮತ್ತು ಎಣ್ಣೆ; ನಿನ್ನ ಲಾವಣ್ಯವು ಅತಿ ಮನೋಹರ; ನೀನು ಹೀಗೆ ವೃದ್ಧಿಗೊಂಡು ರಾಣಿಯಾದೆ. 14ನಾನು ನಿನಗೆ ಅನುಗ್ರಹಿಸಿದ ನನ್ನ ವೈಭವದಿಂದ ನಿನ್ನ ಸೌಂದರ್ಯ ಪರಿಪೂರ್ಣವಾಯಿತು; ನಿನ್ನ ಚೆಲುವು ಜನಾಂಗಗಳಲ್ಲಿ ಪ್ರಸಿದ್ಧವಾಯಿತು; ಇದು ಸರ್ವೇಶ್ವರನಾದ ದೇವರ ನುಡಿ.

15 “ಆದರೆ ನೀನು ನಿನ್ನ ಸೌಂದರ್ಯವನ್ನೇ ನೆಚ್ಚಿಕೊಂಡೆ, ‘ನಾನು ಪ್ರಸಿದ್ಧಳಾದೆ’ ಎಂದು ಉಬ್ಬಿಕೊಂಡು ಸೂಳೆತನಮಾಡಿದೆ; ಹಾದು ಹೋಗುವ ಪ್ರತಿಯೊಬ್ಬನ ಸಂಗಡ ಮಿತಿಮೀರಿ ಹಾದರಮಾಡಿದೆ. ಒಬ್ಬೊಬ್ಬನಿಗೂ ಒಳಗಾದೆ. 16ನೀನು ಪುಣ್ಯಕ್ಷೇತ್ರಗಳನ್ನು ನಿರ್ಮಿಸಿ, ನಿನ್ನ ನಾನಾ ಶೈಲಿಯ ವಸ್ತ್ರಗಳಿಂದ ಅವುಗಳನ್ನು ಅಲಂಕರಿಸಿ, ಹಿಂದೆಂದೂ ನಡೆಯದಂತಹ, ಮುಂದೆ ಎಂದೂ ನಡೆಯಬಾರದಂತಹ ವ್ಯಭಿಚಾರವನ್ನು ನಡೆಸಿದೆ. 17ನಾನು ನನ್ನ ಬೆಳ್ಳಿಬಂಗಾರದಿಂದ ನಿನಗೆ ಮಾಡಿಸಿಕೊಟ್ಟಿದ್ದ ಅಂದಚೆಂದವಾದ ಆಭರಣಗಳನ್ನು ತೆಗೆದು, ಅವುಗಳಿಂದ ಪುರುಷಮೂರ್ತಿಗಳನ್ನು ರೂಪಿಸಿಕೊಂಡು, ಅವುಗಳೊಡನೆ ಹಾದರ ಮಾಡಿದೆ; 18ನಿನ್ನ ಕಸೂತಿಯ ವಸ್ತ್ರಗಳನ್ನು ತೆಗೆದು ಮೂರ್ತಿಗಳಿಗೆ ಹೊದಿಸಿ, ಅವುಗಳಿಗೆ ನನ್ನ ತೈಲವನ್ನೂ ನನ್ನ ಧೂಪವನ್ನೂ ಅರ್ಪಿಸಿದೆ. 19ನಾನು ನಿನಗೆ ಕೊಟ್ಟ ರೊಟ್ಟಿಯನ್ನೂ ನಿನ್ನ ಆಹಾರಕ್ಕೆ ನಾನು ಒದಗಿಸಿದ ಗೋದಿಹಿಟ್ಟು, ಎಣ್ಣೆ, ಜೇನು, ಇವುಗಳನ್ನೂ, ನೀನು ಆ ಮೂರ್ತಿಗಳ ಮುಂದೆ ಸುಗಂಧಹೋಮ ಮಾಡಿದೆ; ಅಯ್ಯೋ, ನಿನಗೆ ಕೇಡು! ಇದು ಸರ್ವೇಶ್ವರನಾದ ದೇವರ ನುಡಿ.

20 “ಇದಲ್ಲದೆ ನೀನು ನನಗೆ ಹೆತ್ತ ಗಂಡು ಹೆಣ್ಣು ಮಕ್ಕಳನ್ನು ಹಿಡಿದು ಮೂರ್ತಿಗಳಿಗೆ ಆಹಾರವಾಗಲೆಂದು ಯಜ್ಞವಾಗಿ ಅರ್ಪಿಸಿದೆ. 21ನಿನ್ನ ಈ ಸೂಳೆತನ ಅಲ್ಪಕಾರ್ಯವೆಂದು ಭಾವಿಸಿದಿಯೋ? ಅದನ್ನು ಮೀರಿಸಬೇಕೆಂದು ನೀನು ನನ್ನ ಮಕ್ಕಳನ್ನು ಹತಿಸಿ ಮೂರ್ತಿಗಳಿಗೆ ಆಹುತಿಯಾಗಿಟ್ಟೆ! 22ಈ ನಿನ್ನ ಅಸಹ್ಯಕಾರ್ಯಗಳನ್ನೂ ಸೂಳೆತನವನ್ನೂ ನೀನು ಪದೇ ಪದೇ ನಡಿಸುತ್ತಿದ್ದಾಗ ನೀನು ಬಟ್ಟೆಯಿಲ್ಲದೆ

ಬೆತ್ತಲೆಯಾಗಿ ನಿನ್ನ ರಕ್ತದಲ್ಲಿ ಹೊರಳಾಡುತ್ತಿದ್ದ ನಿನ್ನ ಎಳೆತನವನ್ನು ನೀನು ಜ್ಞಾಪಕಕ್ಕೆ ತಂದುಕೊಳ್ಳಲಿಲ್ಲ.
23ಅಯ್ಯೋ, ನಿನಗೆ ಧಿಕ್ಕಾರ! ಇದು ಸರ್ವೇಶ್ವರನಾದ ದೇವರ ನುಡಿ.

### ಜೆರುಸಲೇಮಿನ ಜಾರತ್ವ

24 "ನೀನು ಈ ದುಷ್ಕೃತ್ಯಗಳನ್ನೆಲ್ಲಾ ನಡೆಸಿದ್ದಲ್ಲದೆ ಪ್ರತಿಯೊಂದು ಚೌಕದಲ್ಲಿ ಮಂಟಪವನ್ನು ಮಾಡಿ
ಜಗಲಿಯನ್ನು ಕಟ್ಟಿಕೊಂಡಿರುವೆ. 25ಒಂದೊಂದು ಬೀದಿಯ ಕೊನೆಯಲ್ಲಿ ನೀನು ಜಗಲಿಯನ್ನು
ಕಟ್ಟಿಕೊಂಡು, ನಿನ್ನ ಸೌಂದರ್ಯವನ್ನು ನೀಚಕೆಲಸಕ್ಕೆ ಒಪ್ಪಿಸಿ, ಹಾದುಹೋಗುವವರೆಲ್ಲರನ್ನೂ ಸೇರಿ
ಸೂಳೆತನವನ್ನು ಅಧಿಕಗೊಳಿಸಿರುವೆ. 26ನಿನ್ನ ನೆರೆಯವರೂ ಅತಿಕಾಮಿಗಳೂ ಆದ ಈಜಿಪ್ಟರೊಂದಿಗೆ ಸಹ
ನೀನು ಕಲೆತು ಹೆಚ್ಚಾಗಿ ಹಾದರಮಾಡಿ ನನ್ನನ್ನು ಕೆರಳಿಸಿರುವೆ.

27 "ಆದಕಾರಣ ನಾನು ನಿನ್ನ ಮೇಲೆ ಕೈಯೆತ್ತಿ ನಿನ್ನ ಆಹಾರವನ್ನು ಕಡಿಮೆಮಾಡಿದೆ; ನಿನ್ನನ್ನು
ದ್ವೇಷಿಸಿ, ನಿನ್ನ ಕೆಟ್ಟನಡತೆಗೆ ಅಸಹ್ಯಪಡುವ ಫಿಲಿಷ್ಟಿಯ ಕುವರಿಯರ ಕೈಗೆ ನಿನ್ನನ್ನು ಒಪ್ಪಿಸಿದೆ.

28 "ಇಷ್ಟೂ ಸಾಲದೆಂದು ನೀನು ಅಸ್ಸೀರಿಯರೊಂದಿಗೂ ಹಾದರಮಾಡಿದೆ; ಹೌದು, ಅವರೊಡನೆ
ಹಾದರಮಾಡಿದರೂ ನಿನಗೆ ತೃಪ್ತಿಯಾಗಲಿಲ್ಲ. 29ಇದಲ್ಲದೆ ನೀನು ವ್ಯಾಪಾರಸ್ಥರಾದ ಬಾಬಿಲೋನಿ
ಯಾದವರೊಡನೆ ಸೇರಿ ಅಲ್ಲಿಯೂ ಬಹಳ ಸೂಳೆತನಮಾಡಿದೆ; ಆಗಲೂ ನಿನಗೆ ತೃಪ್ತಿಯಾಗಲಿಲ್ಲ".

30 ಸರ್ವಶಕ್ತ ದೇವರು ಇಂತೆನ್ನುತ್ತಾರೆ: "ನಿನ್ನ ಮನಸ್ಸು ಮೋಹಪಾಶಕ್ಕೆ ಸಿಕ್ಕಿ ಎಷ್ಟೋ ಸೋತಿದೆ!
ಇಷ್ಟೆಲ್ಲಾ ದುಷ್ಕೃತ್ಯಗಳನ್ನು ನಡೆಸಿ ಕಟ್ಟಿಲ್ಲದ ಜಾರಿಣಿಯಾಗಿರುವೆ. 31ಒಂದೊಂದು ಬೀದಿಯ ಕೊನೆಯಲ್ಲೂ
ನೀನು ಮಂಟಪವನ್ನು ಕಟ್ಟಿ ಎಲ್ಲಾ ಚೌಕಗಳಲ್ಲಿ ಜಗಲಿಯನ್ನು ಸ್ಥಾಪಿಸಿಕೊಂಡಿರುವೆ; ದೊರೆತದ್ದನ್ನು ಇದು
ಕಡಿಮೆಯೆಂದು ತಿರಸ್ಕರಿಸುವ ಸೂಳೆಯಂತೆ ನೀನು ನಡೆಯುವವಳಲ್ಲ. 32ನೀನು ಸೂಳೆತನಮಾಡುವ
ಪತಿವ್ರತೆ; ಗಂಡನಿಗೆ ಬದಲಾಗಿ ಅನ್ಯರನ್ನು ಸೇರುವ ಜಾರಿಣಿ! 33ಸಾಮಾನ್ಯವಾಗಿ ಸೂಳೆಯರಿಗೆ ಹಣ
ಕೊಡುವುದುಂಟು; ನೀನಾದರೋ ನಿನ್ನ ಎಲ್ಲಾ ಮಿಂಡರಿಗೆ ನೀನೇ ಹಣ ನೀಡುತ್ತಿರುವೆ. ಅವರು ಎಲ್ಲ
ಕಡೆಯಿಂದಲೂ ಬಂದು ನಿನ್ನಲ್ಲಿ ವ್ಯಭಿಚಾರಮಾಡುವಂತೆ ಅವರಿಗೆ ಬಹುಮಾನ ಕೊಡುತ್ತಿರುವೆ. 34ನಿನ್ನ
ಸೂಳೆತನಕ್ಕೂ ಇತರ ವೇಶ್ಯೆಯರ ಸೂಳೆತನಕ್ಕೂ ವ್ಯತ್ಯಾಸವುಂಟು; ನಿನ್ನಲ್ಲಿ ವ್ಯಭಿಚಾರಮಾಡಲಿಕ್ಕೆ ಯಾರೂ
ನಿನ್ನ ಹಿಂದೆ ಬಾರರು; ನೀನೇ ಕೊಡುತ್ತೀಯೇ ಹೊರತು ನಿನಗೇನೂ ಸಿಕ್ಕದು; ನಿನ್ನ ದುರಾಚಾರ
ಹೇಳತೀರದು!"

### ಜೆರುಸಲೇಮಿಗೆ ದೇವರಿತ್ತ ತೀರ್ಪು

35 ಹೀಗಿರಲು ಎಲೌ ಜಾರಿಣಿಯೇ, ಸರ್ವೇಶ್ವರನ ಈ ವಾಕ್ಯವನ್ನು ಕೇಳು: ಸರ್ವೇಶ್ವರನಾದ
ದೇವರು ಇಂತೆನ್ನುತ್ತಾರೆ: 36"ಆಹಾ, ಮಿತಿಮೀರಿದ ನಿನ್ನ ಕಾಮಾತುರ! ನಿನ್ನಲ್ಲಿ ವ್ಯಭಿಚಾರಮಾಡಿದ ನಿನ್ನ
ಮಿಂಡರ ಮೂಲಕ ನಿನಗಾದ ಮಾನಭಂಗ, ನಿನ್ನ ಎಲ್ಲ ಅಸಹ್ಯ ವಿಗ್ರಹಗಳು, ನೀನು ಅವುಗಳಿಗೆ ಅರ್ಪಿಸಿದ
ನಿನ್ನ ಮಕ್ಕಳ ರಕ್ತ, 37ಇವುಗಳನ್ನು ನಾನು ನೋಡಿ, ನೀನು ರಮಿಸಿದ ನಿನ್ನ ಎಲ್ಲ ಮಿಂಡರನ್ನೂ, ನೀನು
ಮೋಹಿಸಿದ ಸಮಸ್ತ ಜಾರರನ್ನೂ, ನೀನು ಹಗೆ ಮಾಡಿದ ಎಲ್ಲರನ್ನೂ, ಸುತ್ತುಮುತ್ತಲು ನಿನಗೆ ವಿರುದ್ಧ
ಒಟ್ಟುಗೂಡಿಸಿ, ಅವರ ಕಣ್ಣೆದುರಿಗೆ ನಿನ್ನನ್ನು ಬೆತ್ತಲೆಗೈದು ನಿನ್ನ ಮಾನವನ್ನು ಬಟ್ಟಬಯಲು ಮಾಡುವೆನು.
38ವ್ಯಭಿಚಾರಮಾಡುವಂಥ, ರಕ್ತ ಹರಿಸುವಂಥ ಹೆಂಗಸರಿಗೆ ವಿಧಿಸತಕ್ಕ ದಂಡನೆಗಳನ್ನು ನಾನು ನಿನಗೆ ವಿಧಿಸಿ
ನನ್ನ ಕೋಪೋದ್ರೇಕವನ್ನೂ ರೋಷಾವೇಶವನ್ನೂ ರಕ್ತದಂತೆ ನಿನ್ನ ಮೇಲೆ ಸುರಿಸುವೆನು. 39ನಾನು ನಿನ್ನನ್ನು
ಸುತ್ತಲಿನವರ ಕೈವಶಮಾಡುವೆನು; ಅವರು ನಿನ್ನ ಮಂಟಪವನ್ನು ಕೆಡವಿ, ನಿನ್ನ ಜಗಲಿಗಳನ್ನು ಒಡೆದು, ನಿನ್ನ
ಬಟ್ಟೆಗಳನ್ನು ಕಿತ್ತು, ನಿನ್ನ ಒಡವೆಗಳನ್ನು ಸುಲಿದುಕೊಂಡು, ನಿನ್ನನ್ನು ಬಟ್ಟಬರಿದಾಗಿ ಬಿಟ್ಟುಹೋಗುವರು.

40 "ಅವರು ನಿನ್ನ ವಿಷಯದಲ್ಲಿ ನ್ಯಾಯಸಭೆಯನ್ನು ಕೂಡಿಸಿ, ನಿನ್ನನ್ನು ಕಲ್ಲೆಸೆದು ಕೊಲ್ಲುವರು;
ಕತ್ತಿಗಳಿಂದ ತುಂಡರಿಸುವರು. 41ನಿನ್ನ ಮನೆಗಳನ್ನು ಬೆಂಕಿಯಿಂದ ಸುಡುವರು; ಬಹುಮಂದಿ ಹೆಂಗಸರ
ಕಣ್ಣೆದುರಿನಲ್ಲಿ ನಿನ್ನನ್ನು ದಂಡಿಸುವರು; ನೀನು ನಿನ್ನ ಸೂಳೆತನವನ್ನು ನಿಲ್ಲಿಸಿಬಿಡುವಂತೆ ಮಾಡುವೆನು; ನೀನು
ನಿನ್ನ ಮಿಂಡರಿಗೆ ಇನ್ನು ಬಹುಮಾನ ತರದಂತೆ ಮಾಡುವೆನು. 42ಹೀಗೆ ನಾನು ನಿನ್ನ ಮೇಲಣ ಸಿಟ್ಟನ್ನು

ತೀರಿಸುವೆನು. ಆಗ ನನ್ನ ರೋಷವು ನಿನ್ನಿಂದ ದೂರವಾಗುವುದು; ನಾನು ಶಾಂತನಾಗಿ ಇನ್ನು ಮೇಲೆ ಕೋಪಗೊಳ್ಳೆನು. 43ನೀನು ನಿನ್ನ ಯೌವನಕಾಲವನ್ನು ನೆನೆಸಿಕೊಳ್ಳದೆ, ಈ ದುಷ್ಕೃತ್ಯಗಳನ್ನೆಲ್ಲಾ ನಡೆಸಿ, ನನ್ನನ್ನು ರೇಗಿಸಿದ್ದರಿಂದ ಇಗೋ, ನಾನು ನಿನ್ನ ದುರ್ಮಾರ್ಗದ ಫಲವನ್ನು ನಿನ್ನ ತಲೆಗೆ ಕಟ್ಟುವೆನು; ನೀನು ಲೆಕ್ಕವಿಲ್ಲದ ದುರಾಚಾರಗಳನ್ನು ನಡೆಸಿದ್ದಲ್ಲದೆ ಈ ಅಸಹ್ಯಕಾರ್ಯವನ್ನೂ ಮಾಡಿರುವೆ. ಇದು ಸರ್ವೇಶ್ವರನಾದ ದೇವರ ನುಡಿ.

## ತಾಯಿಯಂತೆ ಮಗಳು

44 "ಗಾದೆಗಳಲ್ಲಿ ಜಾಣರು 'ತಾಯಿಯಂತೆ ಮಗಳು' ಎಂಬ ಗಾದೆಯನ್ನು ನಿನ್ನ ಬಗ್ಗೆ ಖಂಡಿತವಾಗಿ ನುಡಿಯುವರು. 45ಗಂಡನನ್ನೂ ಮಕ್ಕಳನ್ನೂ ಅಸಹ್ಯವಾಗಿ ಕಂಡ ನಿನ್ನ ತಾಯಿಗೆ ನೀನು ತಕ್ಕ ಮಗಳು; ಗಂಡನನ್ನೂ ಮಕ್ಕಳನ್ನೂ ಬೇಸರಪಡಿಸಿದ ನಿನ್ನ ಅಕ್ಕಂದಿರಿಗೆ ನೀನು ತಕ್ಕ ತಂಗಿ; ನಿನ್ನ ತಾಯಿ ಹಿತ್ತಿಯಳು, ನಿನ್ನ ತಂದೆ ಅಮೋರಿಯನು.

46 "ನಿನ್ನ ಉತ್ತರಕ್ಕೆ ತನ್ನ ಕುವರಿಯರೊಂದಿಗೆ ವಾಸಿಸುವ ಸಮಾರಿಯ, ನಿನ್ನ ಅಕ್ಕ; ನಿನ್ನ ದಕ್ಷಿಣ ಕಡೆಯಲ್ಲಿ ಕುವರಿಯರೊಂದಿಗೆ ವಾಸಿಸುವ ಸೊದೋಮ್, ನಿನ್ನ ತಂಗಿ.

47 "ಆದರೆ ನೀನು ನಡೆದ ದುರ್ಮಾರ್ಗ ಅವರು ನಡೆದಂಥದಲ್ಲ. ನಿನ್ನ ಅಸಹ್ಯಕಾರ್ಯಗಳು ಅವರು ನಡೆಸಿದಂಥವುಗಳಲ್ಲ. ಅವರ ದುರ್ನಡತೆ ಅತ್ಯಲ್ಪವೆಂದು ಸರ್ವದಾ ಅವರಿಗಿಂತ ಬಹುಕೆಟ್ಟವಳಾಗಿ ನಡೆದುಕೊಂಡೆ. 48ಸರ್ವೇಶ್ವರ ದೇವರು ಇಂತೆನ್ನುತ್ತಾರೆ – ನನ್ನ ಜೀವದಾಣೆ, ನೀನೂ ನಿನ್ನ ಕುವರಿಯರೂ ನಡೆದಂತೆ ಸೊದೋಮೆಂಬ ನಿನ್ನ ತಂಗಿಯಾಗಲಿ ಆಕೆಯ ಕುವರಿಯರಾಗಲಿ ನಡೆಯಲಿಲ್ಲ. 49ಸೊದೋಮೆಂಬ ನಿನ್ನ ತಂಗಿಯ ದೋಷವನ್ನು ನೋಡು; ಗರ್ವಪಡುವುದು, ಹೊಟ್ಟೆ ತುಂಬಿಸಿಕೊಳ್ಳುವುದು, ಸ್ವಸುಖದಲ್ಲಿ ಮುಳುಗಿರುವುದು, ಇವು ಆಕೆಯಲ್ಲಿಯೂ ಆಕೆಯ ಕುವರಿಯರಲ್ಲೂ ಇದ್ದವು. ಅಲ್ಲದೆ ಅವರು ದೀನದಲಿತರಿಗೆ ಬೆಂಬಲವಾಗಿರಲಿಲ್ಲ. 50ಅವರು ಸೊಕ್ಕೇರಿ ನನ್ನ ಕಣ್ಣೆದುರಿಗೆ ಅಸಹ್ಯಾಚಾರಗಳನ್ನು ನಡೆಸಿದರು; ನಾನು ಅದನ್ನು ನೋಡಿ ಅವರನ್ನು ನಿರ್ಮೂಲಮಾಡಿದೆ.

51 "ಸಮಾರಿಯ ಎಂಬಾಕೆ ಕೂಡ ನೀನು ಮಾಡಿದ ಪಾಪಗಳಲ್ಲಿ ಅರ್ಧವನ್ನೂ ಮಾಡಲಿಲ್ಲ. ನೀನು ನಿನ್ನ ಅಕ್ಕತಂಗಿಯರಿಗಿಂತಲೂ ಅತ್ಯಧಿಕ ಅಸಹ್ಯಕಾರ್ಯಗಳನ್ನು ನಡೆಸಿರುವೆ; ನೀನು ಮಾಡಿದ ಲೆಕ್ಕವಿಲ್ಲದ ದುರಾಚಾರಗಳಿಂದ ಅವರನ್ನು ನಿರ್ದೋಷಿಗಳೆಂದು ತೋರ್ಪಡಿಸಿರುವೆ. 52ನಿನ್ನ ದೋಷಗಳೇ ನಿನ್ನ ಅಕ್ಕತಂಗಿಯರ ಪರವಾಗಿ ನಿಂತದ್ದರಿಂದ ನೀನು ನಾಚಿಕೆ ಪಡಬೇಕು; ಅವರಿಗಿಂತ ಅಧಿಕವಾಗಿ ನೀನು ಅಸಹ್ಯ ಪಾಪಗಳನ್ನು ಮಾಡಿರುವುದರಿಂದ ಅವರು ನಿನಗಿಂತ ಉತ್ತಮರಾಗಿದ್ದಾರೆ. ಹೌದು, ನಿನ್ನ ಅಕ್ಕತಂಗಿಯರನ್ನು ನಿರ್ದೋಷಿಗಳೆಂದು ತೋರ್ಪಡಿಸಿದ್ದಕ್ಕಾಗಿ ಲಜ್ಜೆಪಡು, ನಾಚಿಕೆಪಡು.

## ಸೊದೋಮ್ ಮತ್ತು ಸಮಾರಿಯಗಳ ಪುನಃ ಸ್ಥಾಪನೆ

53 "ಸೊದೋಮ್ ಮತ್ತು ಆಕೆಯ ಕುವರಿಯರ ಹಾಗೂ ಸಮಾರಿಯ ಮತ್ತು ಆಕೆಯ ಕುವರಿಯರ ಸೌಭಾಗ್ಯವನ್ನು ಪುನಃ ನೀಡುವೆನು. ಅದರೊಂದಿಗೆ ನಿನ್ನ ಸೌಭಾಗ್ಯವನ್ನೂ ಮರಳಿಸುವೆನು. 54ಹೀಗಿರಲು, ನೀನು ನಿನ್ನ ಲೆಕ್ಕವಿಲ್ಲದ ದುಷ್ಕೃತ್ಯಗಳ ಮೂಲಕ ಅವರನ್ನು ಸಂತೈಸಿದ್ದರಿಂದ ಲಜ್ಜೆಪಡುವೆ, ನಾಚಿಕೆಪಡುವೆ. 55ಆಗ ಸಮಾರಿಯ ಮತ್ತು ಸೊದೋಮ್ ಎಂಬ ನಿನ್ನ ಅಕ್ಕತಂಗಿಯರನ್ನೂ ಅವರ ಕುವರಿಯರನ್ನೂ ನಿನ್ನನ್ನೂ ನಿಮ್ಮ ಪೂರ್ವಸ್ಥಿತಿಗೆ ತರುವೆ. 56ಅರಾಮಿನ ಕುವರಿಯರು ಆಕೆಯ ಸುತ್ತಮುತ್ತಲಿನ ಸಮಸ್ತರು, ನಿನ್ನನ್ನು ಎಲ್ಲೆಲ್ಲೂ ಹೀನೈಸುತ್ತಿರುವ ಫಿಲಿಷ್ಟಿಯದ ಕುವರಿಯರು, ಇವರೆಲ್ಲರ ದೂಷಣೆಗೆ ನೀನು ಗುರಿಯಾಗುವುದಕ್ಕೆ ಮುಂಚೆ, ನಿನ್ನ ಕೆಟ್ಟತನವು ಬೆಳಕಿಗೆ ಬರುವುದಕ್ಕೆ ಮೊದಲು, 57ನೀನು ಗರ್ವಪಡುತ್ತಿದ್ದ ಆ ಕಾಲದಲ್ಲಿ ಸೊದೋಮೆಂಬ ನಿನ್ನ ತಂಗಿಯ ಹೆಸರು ನಿನ್ನ ಬಾಯಲ್ಲಿ ಬರಲೇ ಇಲ್ಲ; 58ಈಗ ನಿನ್ನ ದುರ್ನಡತೆಯ ಮತ್ತು ದುರಾಚಾರಗಳ ಫಲವನ್ನು ಅವಳಂತೆ ಅನುಭವಿಸಬೇಕಾಗಿ ಬಂತು." ಇದು ಸರ್ವೇಶ್ವರನ ನುಡಿ.

### ಶಾಶ್ವತ ಒಡಂಬಡಿಕೆ

59 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: – “ನೀನು ಒಡಂಬಡಿಕೆಯನ್ನು ಮೀರಿ ನಿನ್ನ ಆಣೆಯನ್ನು ತಿರಸ್ಕರಿಸಿದೆ. ನೀನು ಮಾಡಿದ್ದಕ್ಕೆ ತಕ್ಕದ್ದನ್ನು ನಾನು ನಿನಗೆ ಮಾಡುವೆನು. 60ಆದರೂ ನಾನು ನಿನ್ನ ಯೌವನಕಾಲದಲ್ಲಿ ನಿನ್ನೊಂದಿಗೆ ಮಾಡಿಕೊಂಡ ಒಡಂಬಡಿಕೆಯನ್ನು ನೆನಪಿಗೆ ತಂದುಕೊಂಡು ನಿನ್ನೊಂದಿಗೆ ಶಾಶ್ವತವಾದ ಒಡಂಬಡಿಕೆಯನ್ನು ಮಾಡಿಕೊಂಡು ದೃಢೀಕರಿಸುವೆನು. 61ಇದಕ್ಕನುಸಾರ ನಾನು ಕುವರಿಯನ್ನೋ ಎಂಬಂತೆ ನಿನಗೆ ದಯಪಾಲಿಸುವ ನಿನ್ನ ಅಕ್ಕಂದಿರೂ ತಂಗಿಯರೂ ನಿನ್ನಲ್ಲಿ ಸೇರಿಕೊಳ್ಳುವರು. ಆಗ ನೀನು ನಿನ್ನ ದುರ್ಮಾರ್ಗಗಳನ್ನು ನೆನಸಿಕೊಂಡು ನಾಚಿಕೆಪಡುವೆ; ಈ ನನ್ನ ದಯೆ ನಿನ್ನ ಹಿಂದಿನ ಒಡಂಬಡಿಕೆಯ ಫಲವಲ್ಲ. 62ನಾನು ಈ ಒಡಂಬಡಿಕೆಯನ್ನು ನಿನ್ನೊಂದಿಗೆ ಮಾಡಿಕೊಳ್ಳುವಾಗ ನಾನೇ ಸರ್ವೇಶ್ವರ ಎಂದು ನಿನಗೆ ಗೊತ್ತಾಗುವುದು. 63ನಾನು ನಿನ್ನ ದುಷ್ಕೃತ್ಯಗಳನ್ನೆಲ್ಲಾ ಕ್ಷಮಿಸಿಬಿಟ್ಟ ಮೇಲೆ, ನೀನು ಅವುಗಳನ್ನು ನೆನಪಿಗೆ ತಂದು ನಾಚಿಕೆಪಟ್ಟು, ನಿನಗಾದ ಅವಮಾನದ ನಿಮಿತ್ತ ಇನ್ನು ಬಾಯಿ ತೆರೆಯದಿರುವೆ.” ಇದು ಸರ್ವೇಶ್ವರನಾದ ದೇವರು ನುಡಿ.

### ಹದ್ದುಗಳ ಮತ್ತು ಗಿಡಗಳ ಸಾಮತಿ

**17** ಸರ್ವೇಶ್ವರ ನನಗೆ ಅನುಗ್ರಹಿಸಿದ ವಾಣಿ: 2“ನರಪುತ್ರನೇ, ನೀನು ಇಸ್ರಯೇಲ್ ವಂಶದವರಿಗೆ ಈ ಸಾಮತಿಯನ್ನು ಒಗಟಾಗಿ ಹೇಳು – 3ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಅಗಲ ಹಾಗು ಉದ್ದವಾದ ರೆಕ್ಕೆಗಳುಳ್ಳ ವಿವಿಧ ವರ್ಣದ ಗರಿಗಳಿಂದ ಕೂಡಿದ ದೊಡ್ಡ ಹದ್ದೊಂದು ಲೆಬನೋನಿಗೆ ಬಂದು ದೇವದಾರು ಮರದ ಮೇಲ್ತುದಿಯ ರೆಂಬೆಯನ್ನು ಕಿತ್ತಿತು; 4ತುಟ್ಟತುದಿಯ ಚಿಗುರುಗಳನ್ನು ಕಚ್ಚಿ ವಾಣಿಜ್ಯ ದೇಶಕ್ಕೆ ತೆಗೆದುಕೊಂಡುಹೋಗಿ ಬಹುಮಂದಿ ವರ್ತಕರಿರುವ ಪಟ್ಟಣದಲ್ಲಿ ಇಟ್ಟು ಬಿಟ್ಟಿತು. 5ಆಮೇಲೆ ಅದು ಆ ದೇವದಾರು ಇದ್ದ ದೇಶದ ಒಂದು ಬೀಜವನ್ನು ತೆಗೆದುಕೊಂಡು ಫಲವತ್ತಾದ ನೀರಾವರಿಯ ಭೂಮಿಯಲ್ಲಿ ನೆಟ್ಟು ನೀರವಂಜಿಯ ಹಾಗೆ ಬೆಳೆಸಿತು. 6ಅದು ಗುಜ್ಜಾಗಿ ಬೆಳೆದು ದ್ರಾಕ್ಷಾಲತೆಯಾಗಿ ವಿಶಾಲವಾಗಿ ಹರಡಿಕೊಂಡು, ತನ್ನ ರೆಂಬೆಗಳನ್ನು ಆ ಹದ್ದಿನ ಕಡೆಗೆ ಚಾಚಿ, ಅದರ ಕೆಳಗೂ ಬೇರು ಬಿಟ್ಟಿತು; ಅದು ಲತೆಯಾಗಿ ಬೆಳೆದು, ರೆಂಬೆಗಳನ್ನು ಹರಡಿಸಿ, ಚಿಗುರುಗಳನ್ನು ಹೊರಡಿಸಿತು.

7 “ಆದರೆ ಅಗಲವಾದ ರೆಕ್ಕೆಗಳುಳ್ಳ ಗರಿ ತುಂಬಿದ ಮತ್ತೊಂದು ದೊಡ್ಡ ಹದ್ದು ಇತ್ತು; ಇಗೋ, ಆ ದ್ರಾಕ್ಷಾಲತೆ ತಾನು ನಾಟಿಕೊಂಡಿದ್ದ ಪತಿಯೊಳಗಿಂದ ಅದರ ಕಡೆಗೆ ತನ್ನ ಬೇರುಗಳನ್ನು ತಿರುಗಿಸಿ, ತನ್ನ ರೆಂಬೆಗಳನ್ನು ಚಾಚಿ ಅದರಿಂದ ನೀರನ್ನು ಹಾಯಿಸುತ್ತಿತ್ತು. 8ಅದು ಸೊಂಪಾದ ಲತೆಯಾಗಿ ರೆಂಬೆಗಳನ್ನು ಹರಡಿಸಿ, ಫಲಕೊಡುವುದಕ್ಕೆ ಅನುಕೂಲವಾದ ಒಳ್ಳೆಯ ನೀರಾವರಿಯ ನೆಲದಲ್ಲಿ ನಾಟಿಕೊಂಡಿತ್ತು.”

9 “ಈ ಮಾತನ್ನು ನುಡಿ – ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಅದು ಯಾವಾಗಲು ಸಮೃದ್ಧವಾಗಿಯೆ ಇರುವುದೇ? ಅದನ್ನು ನಾಟಿದ ಆ ಹದ್ದು ಅದರ ಬೇರುಗಳನ್ನು ಕಿತ್ತು ಅದರ ಫಲವನ್ನು ಕಡಿದುಬಿಡುವುದು. ಆಗ ಅದು ಒಣಗಿ ಅದರ ಹಸುರೆಲೆಗಳೆಲ್ಲಾ ಬಾಡುವುದಲ್ಲವೆ? ಅದನ್ನು ಬೇರುಸಹಿತ ಕೀಳಲು ಹೆಚ್ಚು ಬಲಬೇಕಾಗಿಲ್ಲ, ಬಹು ಜನರ ಅಗತ್ಯವಿಲ್ಲ. 10ನಾಟಿಕೊಂಡಿದ್ದ ಆ ಲತೆ ಸಮೃದ್ಧವಾಗಿಯೇ ಇರುವುದೇ? ಮೂಡಣಗಾಳಿ ಬಡಿಯುವಾಗ ಅದು ಖಂಡಿತವಾಗಿ ಬಾಡುವುದಲ್ಲವೆ? ಬೆಳೆದ ಪಾತಿಯಲ್ಲಿಯೇ ಅದು ಒಣಗಿಹೋಗುವುದಲ್ಲವೆ?”

### ಸಾಮತಿಯ ಅರ್ಥ

11 ಸರ್ವೇಶ್ವರ ದಯಪಾಲಿಸಿದ ಇನ್ನೊಂದು ವಾಣಿ: 12“ದ್ರೋಹಿವಂಶದ ಈ ಜನರಿಗೆ ಹೀಗೆ ಹೇಳು – ಇದರ ಅರ್ಥ ನಿಮಗೆ ತಿಳಿಯಲಿ; ಇಗೋ, ಬಾಬಿಲೋನಿನ ಅರಸನು ಜೆರುಸಲೇಮಿಗೆ ಬಂದು ಅಲ್ಲಿನ ಅರಸನನ್ನೂ ಪ್ರಧಾನರನ್ನೂ ಹಿಡಿದು ಬಾಬಿಲೋನಿಗೆ ತೆಗೆದುಕೊಂಡು ಹೋದ; 13ಮತ್ತು ರಾಜವಂಶದವನೊಬ್ಬನನ್ನು ಆರಿಸಿ ಅವನೊಂದಿಗೆ ಒಪ್ಪಂದಮಾಡಿ ಅವನಿಂದ ಆಣೆಯಿಡಿಸಿದ. 14ಅವನ ರಾಜ್ಯ ಏಳಿಗೆಗೆ ಬಾರದೆ ಗುಜ್ಜಾಗಿದ್ದು ಒಪ್ಪಂದಕ್ಕೆ ಬದ್ಧವಾಗಿರುವುದರಿಂದಲೇ ಅದು ನಿಲ್ಲದೆಂದು ಆ ದೇಶದ

ಬಲಿಷ್ಠರನ್ನು ಗಡೀಪಾರು ಮಾಡಿದ. 15ಆದರೆ ಅವನು ಬಾಬಿಲೋನಿನ ಅರಸನ ವಿರುದ್ಧ ದಂಗೆಯೆದ್ದು ಕುದುರೆಗಳನ್ನೂ ಬಹುಮಂದಿ ಸೈನಿಕರನ್ನೂ ನಮಗೆ ಒದಗಿಸೆಂದು ಈಜಿಪ್ಟಿಗೆ ರಾಯಭಾರಿಗಳನ್ನು ಕಳುಹಿಸಿದ. ಆದರೂ ಇವನು ಗೆಲ್ಲುವನೇ? ಇಂಥಾ ಕೃತ್ಯಗಳನ್ನು ನಡೆಸಿದವನು ಪಾರಾಗುವನೇ? ಒಪ್ಪಂದವನ್ನು ಮೀರಿದವನು ತಪ್ಪಿಸಿಕೊಂಡಾನೇ?

16 "ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನನ್ನ ಜೀವದಾಣೆ, ಇವನು ಯಾವನಿಂದ
ಅರಸನಾಗಿ ನೇಮಕಗೊಂಡನೋ, ಯಾವನಿಗೆ ಮಾಡಿದ ಪ್ರಮಾಣವನ್ನು ತಿರಸ್ಕರಿಸಿದನೋ, ಯಾವನ ಒಪ್ಪಂದವನ್ನು ಮೀರಿದನೋ, ಆ ಅರಸನ ಬಳಿಯಲ್ಲೆ, ಅಂದರೆ ಬಾಬಿಲೋನೆಂಬ ಅವನ ವಾಸಸ್ಥಾನದಲ್ಲೆ, ಇವನು ಸಾಯುವುದು ಖಂಡಿತ.
17ಫರೋಹನೂ ಅವನ ಮಹಾಸೈನ್ಯವೂ ದೊಡ್ಡ ಪರಿವಾರವೂ ಬಂದು ಬಹುಜನರನ್ನು ಕೊಲ್ಲುವುದಕ್ಕೆ ದಿಬ್ಬಗಳನ್ನು ಹಾಕಿ, ಬುರುಜುಗಳನ್ನು ಕಟ್ಟಿದರೂ ಯುದ್ಧದಲ್ಲಿ ಇವನಿಗೆ ಏನೂ ಸಹಾಯವಾಗದು.
18ಏಕೆಂದರೆ ಇವನು ಇಟ್ಟ ಆಣೆಯನ್ನು ತಿರಸ್ಕರಿಸಿ ಒಪ್ಪಂದವನ್ನೂ ಮೀರಿದನಲ್ಲವೇ? ಕೈಯ ಮೇಲೆ ಕೈಯಿಟ್ಟು ಭಾಷೆಮಾಡಿ ಪ್ರಯೋಜನವೇನು? ಅದನ್ನೆಲ್ಲಾ ಮುರಿದುಬಿಟ್ಟನಲ್ಲವೇ? ಇವನು ನನ್ನಿಂದ ಪಾರಾಗನು.

19 "ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನನ್ನ ಜೀವದಾಣೆ, ನನಗೆ ಮಾಡಿದ ಪ್ರಮಾಣವನ್ನು ಅವನು ತಿರಸ್ಕರಿಸಿ ನನ್ನ ಒಡಂಬಡಿಕೆಯನ್ನು ಮೀರಿದ ದೋಷವನ್ನು ಅವನ ತಲೆಯ ಮೇಲೆ ಹೊರಿಸುವೆನು.
20ನಾನು ಅವನಿಗೆ ನನ್ನ ಬಲೆಯೊಡ್ಡುವೆನು; ನಾನು ಹಾಕಿದ ಉರುಳಿನಲ್ಲಿ ಸಿಕ್ಕಿಬೀಳುವನು. ಅವನನ್ನು ಬಾಬಿಲೋನಿಗೆ ತಂದು, ಅಲ್ಲೇ ಅವನೊಂದಿಗೆ ವಾದಿಸಿ, ಅವನು ನನಗೆ ಮಾಡಿದ ಅಪರಾಧವನ್ನು ಅವನ ಮೇಲೆ ಹೊರಿಸುವೆನು.
21ಅವನ ಸೇನೆಗಳೆಲ್ಲಾ ಚದರಿ ಓಡಿಹೋಗಿ, ಕತ್ತಿಯ ಬಾಯಿಗೆ ತುತ್ತಾಗುವುವು; ಉಳಿದವರನ್ನು ಎಲ್ಲ ಕಡೆಯ ಗಾಳಿಗೆ ತೂರಿಬಿಡುವೆನು; ಈ ಮಾತನ್ನು ಆಡಿದವನು ಸರ್ವೇಶ್ವರನಾದ ನಾನೇ ಎಂದು ನಿಮಗೆ ಗೊತ್ತಾಗುವುದು."

22 ಸರ್ವೇಶ್ವರನಾದ ದೇವರ ವಾಣಿಯಿದು:
ನಾನೇ ನೆಡುವೆನು ರೆಂಬೆಯೊಂದನು
ಎತ್ತರದ ದೇವದಾರು ಮರದ ಮೇಲಿಂದ
ತಂದು
ತುಂಟ ತುದಿಯ ಚಿಗುರುಗಳಲೊಂದನ್ನು ತಂದು
ಅತಿ ಕೋಮಲವಾದುದನು ಚಿವುಟಿ ತಂದು,
ನೆಡುವೆನದನು ಉನ್ನತೋನ್ನತವಾದ
ಪರ್ವತದಲ್ಲಿ.

23 ಹೌದು, ನೆಡುವೆನು ಇಸ್ರಯೇಲಿನಾ
ಪರ್ವತಾಗ್ರದಲ್ಲಿ.
ಆಗುವುದದು ಸೊಂಪಾದ ದೇವದಾರು ಮರ,
ರೆಂಬೆಗಳನದು ಹರಡಿಕೊಂಡು ಕೊಡುವುದು
ಫಲ.
ಸಕಲವಿಧ ಪಕ್ಷಿಗಳು ವಾಸಿಸುವುವು ಅದರಲ್ಲಿ.

24 ಆಶ್ರಯ ಪಡೆವುವು ಅದರ ರೆಂಬೆಗಳ ನೆರಳಲಿ.
ಆಗ ತಿಳಿವುವು ವನದ ವೃಕ್ಷಗಳು:
ಎತ್ತರವಾದ ಮರಗಳ ತಗ್ಗಿಸುವವನು
ತಗ್ಗಾದುದನು ಎತ್ತರಪಡಿಸುವವನು
ಹಸುರಾದುದನು ಒಣಗಿಸುವವನು
ಒಣಗಿದುದನ್ನು ಚಿಗುರಿಸುವವನು
ಸರ್ವೇಶ್ವರ ನಾನೇ ಎಂದು.

ಇದ ನುಡಿದವ ನಾನು, ನುಡಿದದನು
ನಡೆಸುವವ ನಾನು.”

## ಪ್ರತಿಯೊಬ್ಬನಿಗೆ ಅವನವನ ಕರ್ಮದ ಫಲ
## ‘ಮಾಡಿದ್ದುಣ್ಣೋ ಮಹರಾಯ’

**18** ಸರ್ವೇಶ್ವರ ನನಗೆ ಅನುಗ್ರಹಿಸಿದ ವಾಣಿ: 2“ಹೆತ್ತವರು ತಿಂದರು ಹುಳಿದ್ರಾಕ್ಷಿಯನ್ನು; ಚಳಿತು ಹೋದವು
ಅವರ ಮಕ್ಕಳ ಹಲ್ಲುಗಳು” ಎಂಬ ಗಾದೆಯನ್ನು ನೀವು ಇಸ್ರಯೇಲ್ ನಾಡನ್ನು ಕುರಿತು ಹೇಳುವುದೇಕೆ?
3ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನನ್ನ ಜೀವದಾಣೆ, ನೀವು ಈ ಗಾದೆಯನ್ನು ಇಸ್ರಯೇಲಿನಲ್ಲಿ
ಇನ್ನು ಎತ್ತಬೇಕಾಗುವುದಿಲ್ಲ. 4ಇಗೋ, ಸಕಲ ನರಪ್ರಾಣಿಗಳು ನನ್ನವೇ; ತಂದೆಯೇನು, ಮಗನೇನು,
ನರಪ್ರಾಣಿಗಳೆಲ್ಲವೂ ನನ್ನಧೀನದಲ್ಲಿವೆ; ಪಾಪ ಮಾಡುವ ಪ್ರಾಣಿಯೇ ಸಾಯುವನು.
5 “ಒಬ್ಬನು ಸದ್ಧರ್ಮಿಯಾಗಿ ನ್ಯಾಯನೀತಿಗಳನ್ನು ನಡೆಸಿ, 6ಗುಡ್ಡಗಳ ಮೇಲೆ ಯಜ್ಞಶೇಷವನ್ನು
ತಿನ್ನದೆ, ಇಸ್ರಾಯೇಲ್ ವಂಶದವರ ವಿಗ್ರಹಗಳ ಕಡೆಗೆ ಕಣ್ಣೆತ್ತದೆ, ನೆರೆಯವನ ಹೆಂಡತಿಯನ್ನು ಕೆಡಿಸದೆ,
7ಮುಟ್ಟಿನ ಹೆಂಗಸನ್ನು ಕೂಡದೆ, ಯಾರನ್ನೂ ಹಿಂಸಿಸದೆ, ಸಾಲಮಾಡಿದವನ ಒತ್ತೆಯನ್ನು ಬಿಗಿಹಿಡಿಯದೆ,
ಯಾರ ಸೊತ್ತನ್ನೂ ಅಪಹರಿಸದೆ, ಹಸಿದವನಿಗೆ ಅನ್ನವಿಕ್ಕಿ, ಬೆತ್ತಲೆ ಇರುವವನಿಗೆ ಹೊದಿಕೆಯನ್ನು ಹೊದಿಸಿ;
8ಸಾಲಕ್ಕೆ ಬಡ್ಡಿ ತೆಗೆಯದೆ, ಲಾಭಕ್ಕೆ ಹಣಕೊಡದೆ, ಅನ್ಯಾಯಕ್ಕೆ ಕೈಹಾಕದೆ, ವಾದಿ ಪ್ರತಿವಾದಿಗಳಿಗೆ ಸರಿಯಾಗಿ
ನ್ಯಾಯತೀರಿಸಿ, 9ನನ್ನ ನಿಯಮಗಳನ್ನು ಅನುಸರಿಸಿ, ನನ್ನ ವಿಧಿಗಳನ್ನು ಕೈಕೊಂಡು, ಸತ್ಯಪರನಾಗಿಯೇ
ನಡೆದರೆ, ಇಂಥವನು ಸದ್ಧರ್ಮಿ. ಆದುದರಿಂದ ಅವನು ಜೀವಿಸುವುದು ನಿಶ್ಚಯ. ಇದು ಸರ್ವೇಶ್ವರನಾದ
ದೇವರ ನುಡಿ: 10ಇಂಥವನು ಪಡೆದ ಮಗನು, ಈಗ ಹೇಳಿದ ದುಷ್ಕೃತ್ಯಗಳಲ್ಲಿ ಯಾವುದನ್ನಾದರೂ ನಡೆಸಿ,
11ಸುಕೃತ್ಯಗಳಲ್ಲಿ ಯಾವುದನ್ನೂ ನಡೆಸದೆ ಗುಡ್ಡಗಳ ಮೇಲೆ ಯಜ್ಞಶೇಷವನ್ನು ತಿಂದು, ನೆರೆಯವನ
ಹೆಂಡತಿಯನ್ನು ಕೆಡಿಸಿ, 12ದೀನದಲಿತರನ್ನು ಹಿಂಸಿಸಿ, ಜನರ ಸೊತ್ತನ್ನು ಅಪಹರಿಸಿ, ಸಾಲಗಾರನ ಒತ್ತೆಯನ್ನು
ಬಿಗಿಹಿಡಿದು, ವಿಗ್ರಹಗಳ ಕಡೆಗೆ ಕಣ್ಣೆತ್ತಿ, 13ಅಸಹ್ಯ ಕಾರ್ಯವನ್ನು ಮಾಡಿ, ಸಾಲಕ್ಕೆ ಬಡ್ಡಿ ತೆಗೆದು, ಲಾಭಕ್ಕೆ
ಹಣಕೊಟ್ಟು, ಹಿಂಸಾಚಾರಿಯೂ, ರಕ್ತಸುರಿಸುವವನೂ ಆಗಿದ್ದರೆ, ಜೀವಿಸುವನೇ? ಖಂಡಿತ ಜೀವಿಸನು; ಈ
ದುರಾಚಾರಗಳನ್ನೆಲ್ಲಾ ನಡೆಸಿದನಲ್ಲವೇ? ಅವನು ಸಾಯುವುದು ನಿಶ್ಚಯ; ತನ್ನ ಮರಣಕ್ಕೆ ತಾನೇ ಕಾರಣ.
14 “ಇಗೋ, ಇವನು ಪಡೆದ ಮಗನು ತನ್ನ ತಂದೆ ಮಾಡಿದ ಪಾಪಗಳನ್ನೆಲ್ಲಾ ಕಂಡು ಭಯಪಟ್ಟು,
ಇಂಥಾ ಕಾರ್ಯಗಳನ್ನು ನಡೆಸದೆ 15ಗುಡ್ಡಗಳ ಮೇಲೆ ಯಜ್ಞಶೇಷವನ್ನು ತಿನ್ನದೆ, ಇಸ್ರಯೇಲ್ ವಂಶದವರ
ವಿಗ್ರಹಗಳ ಕಡೆಗೆ ಕಣ್ಣೆತ್ತದೆ, ನೆರೆಯವನ ಹೆಂಡತಿಯನ್ನು ಕೆಡಿಸದೆ, ಯಾರನ್ನೂ ಹಿಂಸಿಸದೆ, 16ಒತ್ತೆಯನ್ನು
ಕೇಳದೆ, ಯಾರ ಸೊತ್ತನ್ನೂ ಅಪಹರಿಸದೆ, ಹಸಿದವನಿಗೆ ಅನ್ನವಿಕ್ಕಿ, ಬೆತ್ತಲೆಯಿರುವವನಿಗೆ ಹೊದಿಕೆಯನ್ನು
ಹೊದಿಸಿ, 17ಬಡವನ ಮೇಲೆ ಕೈ ಮಾಡದೆ, ಬಡ್ಡಿಯನ್ನು ಕೇಳದೆ, ಲಾಭಕ್ಕೆ ಹಣಕೊಡದೆ, ನನ್ನ ವಿಧಿಗಳನ್ನು
ಆಚರಿಸಿ, ನನ್ನ ನಿಯಮಗಳನ್ನು ಅನುಸರಿಸಿದರೆ, ತನ್ನ ತಂದೆಯ ಅಧರ್ಮದ ನಿಮಿತ್ತ ಸಾಯನು, ಅವನು
ಜೀವಿಸುವುದು ನಿಶ್ಚಯ. 18ಇವನ ತಂದೆಯಾದರೊ ಸ್ವಕುಲದವರನ್ನು ಬಹಳವಾಗಿ ಅರೆದು, ಸುಲಿದು,
ಸ್ವಜನರ ನಡುವೆ ಕೆಟ್ಟದ್ದನ್ನು ನಡೆಸಿದ ಕಾರಣ, ಇಗೋ, ತನ್ನ ಅಧರ್ಮದಿಂದಲೇ ಸಾಯುವನು.
19 “ಆದರೆ ನೀವು, – ‘ತಂದೆಯ ದೋಷ ಫಲವನ್ನು ಮಗನು ಹೇಗೆ ಅನುಭವಿಸುವುದಿಲ್ಲ?’
ಎಂದು ಆಕ್ಷೇಪಿಸುವಿರೋ? ಮಗನು ನೀತಿ ನ್ಯಾಯಗಳನ್ನು ನಡೆಸಿ ನನ್ನ ವಿಧಿಗಳನ್ನೆಲ್ಲಾ ಕೈಗೊಂಡು
ಆಚರಿಸಿದರೆ ಖಂಡಿತ ಜೀವಿಸುವನು. 20ಪಾಪಮಾಡುವವನೇ ಸಾಯುವನು. ಮಗನು ತಂದೆಯ ದೋಷ
ಫಲವನ್ನು ಅನುಭವಿಸನು; ತಂದೆಯು ಮಗನ ದೋಷ ಫಲವನ್ನು ಅನುಭವಿಸನು; ಶಿಷ್ಟನ ಶಿಷ್ಟತನದ
ಫಲವು ಶಿಷ್ಟನದೇ, ದುಷ್ಟನ ದುಷ್ಟತನದ ಫಲವು ದುಷ್ಟನದೇ.
21 “ಆದರೆ ದುಷ್ಟನು ತಾನು ಮಾಡುತ್ತಿದ್ದ ಪಾಪಗಳನ್ನೆಲ್ಲಾ ಬಿಟ್ಟುಬಿಟ್ಟು, ನನ್ನ ಸಕಲ ವಿಧಿಗಳನ್ನು
ಕೈಗೊಂಡು, ನ್ಯಾಯ ನೀತಿಗಳನ್ನು ನಡೆಸಿದರೆ ಸಾಯನು; ಖಂಡಿತ ಜೀವಿಸುವನು. 22ಅವನು ಮಾಡಿದ
ಯಾವ ಅಪರಾಧವೂ ಅವನ ಲೆಕ್ಕಕ್ಕೆ ಸೇರದು. ಅವನು ಮಾಡುತ್ತಿರುವ ಸದ್ಧರ್ಮದಿಂದಲೇ ಅವನು

ಜೀವಿಸುವನು. 23ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ದುಷ್ಟನ ಸಾವಿನಲ್ಲಿ ನನಗೆ
ಲವಲೇಶವಾದರೂ ಸಂತೋಷವಿಲ್ಲ. ಅವನು ತನ್ನ ದುರ್ಮಾರ್ಗವನ್ನು ಬಿಟ್ಟು ಬಾಳುವುದೇ ನನಗೆ
ಸಂತೋಷ. 24ಆದರೆ ಶಿಷ್ಟನು ತನ್ನ ಶಿಷ್ಟತನವನ್ನು ಬಿಟ್ಟು, ಅಧರ್ಮಮಾಡಿ, ದುಷ್ಟನು ನಡೆಸುವ
ದುರಾಚಾರಗಳನ್ನೆಲ್ಲಾ ನಡೆಸಿದರೆ, ಅವನು ಜೀವಿಸುವನೇ? ಅವನು ಮಾಡಿದ ಯಾವ ಸುಕೃತ್ಯವೂ ಅವನ
ಲೆಕ್ಕಕ್ಕೆ ಸೇರಿಸಲ್ಪಡದು, ಅವನು ಮಾಡುತ್ತಿರುವ ಪಾಪಾಪರಾಧಗಳಿಂದಲೇ ಸಾಯುವನು.

25 “ಆದರೆ ನೀವು, ‘ಸರ್ವೇಶ್ವರನ ಕ್ರಮ ಸರಿಯಲ್ಲ’ ಎಂದು ಹೇಳುತ್ತಿದ್ದೀರಿ; ಇಸ್ರಯೇಲ್
ವಂಶದವರೇ, ನನ್ನ ಕ್ರಮವು ಸರಿಯಲ್ಲವೆ? ನಿಮ್ಮ ಕ್ರಮವೇ ಸರಿಯಲ್ಲವಷ್ಟೆ. 26ಶಿಷ್ಟನು ತನ್ನ ಶಿಷ್ಟತನವನ್ನು
ಬಿಟ್ಟು ಅಧರ್ಮದಿಂದಲೇ ಸಾಯಬೇಕಾಯಿತು. 27ದುಷ್ಟನು ತಾನು ಮಾಡುತ್ತಿದ್ದ ದುಷ್ಟತನವನ್ನು ಬಿಟ್ಟು,
ನ್ಯಾಯನೀತಿಗಳನ್ನು ನಡೆಸಿದರೆ, ತನ್ನ ಪ್ರಾಣವನ್ನು ಉಳಿಸಿಕೊಳ್ಳುವನು. 28ಅವನು ಯೋಚಿಸಿ, ತಾನು
ಮಾಡುತ್ತಿದ್ದ ಅಪರಾಧಗಳನ್ನೆಲ್ಲಾ ಬಿಟ್ಟದ್ದರಿಂದ ಸಾಯನು, ಖಂಡಿತ ಜೀವಿಸುವನು. 29ಆದರೆ ಇಸ್ರಯೇಲ್
ವಂಶದವರು ಸರ್ವೇಶ್ವರನ ಕ್ರಮ ಸರಿಯಲ್ಲ ಎಂದು ಹೇಳುತ್ತಿದ್ದಾರೆ; ಇಸ್ರಯೇಲ್ ವಂಶದವರೇ, ನನ್ನ
ಕ್ರಮ, ಸರಿಯಿಲ್ಲವೇ? ನಿಮ್ಮ ಕ್ರಮವೇ ಸರಿಯಿಲ್ಲವಷ್ಟೆ.”

30 ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – “ಇಸ್ರಯೇಲ್ ವಂಶದವರೇ, ನಿಮ್ಮ
ನಿಮ್ಮ ನಡತೆಗೆ ತಕ್ಕ ಹಾಗೆ ನಾನು ನಿಮಗೆ ತೀರ್ಪು ನೀಡುವೆನು; ಅಧರ್ಮವು ನಿಮ್ಮನ್ನು ನಾಶಮಾಡದಂತೆ
ಪಾಪಕ್ಕೆ ವಿಮುಖರಾಗಿರಿ; ನಿಮ್ಮ ಅಪರಾಧಗಳನ್ನೆಲ್ಲಾ ತೊರೆದುಬಿಡಿ. 31ನೀವು ಮಾಡುತ್ತಾ ಬಂದಿರುವ
ಅಪರಾಧಗಳನ್ನೆಲ್ಲಾ ನಿಮ್ಮಿಂದ ತೊಲಗಿಸಿ ಬಿಟ್ಟು ನಿಮ್ಮ ಹೃದಯವನ್ನೂ ಸ್ವಭಾವವನ್ನೂ ನೂತನ
ಮಾಡಿಕೊಳ್ಳಿ; ಇಸ್ರಯೇಲ್ ವಂಶದವರೇ, ನೀವು ಏಕೆ ಸಾಯಬೇಕು? 32ಯಾರ ಸಾವಿನಲ್ಲೂ ನನಗೆ
ಸಂತೋಷವಿಲ್ಲ; ಪಾಪಕ್ಕೆ ವಿಮುಖರಾಗಿ ಜೀವಿಸಿರಿ; ಇದು ಸರ್ವೇಶ್ವರನಾದ ದೇವರ ನುಡಿ.”

### ಇಸ್ರಯೇಲ್ ಅರಸರನ್ನು ಕುರಿತ ಶೋಕಗೀತೆ

**19** “ಇಸ್ರಯೇಲ್ ಅರಸರನ್ನು ಕುರಿತ ಈ
ಶೋಕ ಗೀತೆಯನ್ನು ಹಾಡು:
2 ಇಗೋ, ನಿನ್ನ ತಾಯಿ, ಸಿಂಹಗಳ ಮಧ್ಯೆ
ಸಿಂಹಿಣಿ,
ಸಾಕಿದಳು ತನ್ನ ಮರಿಗಳನು, ಯುವ ಸಿಂಹಗಳ
ನಡುವೆ ಪವಡಿಸಿ.
3 ಯುವ ಸಿಂಹವಾಯಿತು ಆಕೆ ಬೆಳೆಸಿದಾ
ಮರಿಯೊಂದು,
ನರಭಕ್ಷಕ ಆಗಲಾರಂಭಿಸಿತದು ಬೇಟೆಯನು
ಕಲಿತು.
4 ಇದ ಕೇಳಿದ ರಾಷ್ಟ್ರಗಳು ಹಿಡಿದವದನ್ನು
ಗುಂಡಿತೋಡಿ,
ಈಜಿಪ್ಟ್ ದೇಶಕೊಯ್ದವು ಅದಕ್ಕೆ ಬಿಗಿದು
ಸರಪಣಿ.
5 ತನ್ನ ನಂಬಿಕೆ ನಿರೀಕ್ಷೆ ಹಾಳಾಯಿತೆಂದುಕೊಂಡಾ
ಸಿಂಹಿಣಿ,
ಪ್ರಾಯಕ್ಕೆ ತಂದಳು ತನ್ನ ಮರಿಗಳಲ್ಲಿ
ಇನ್ನೊಂದನ್ನು ಸಾಕಿ.
6 ಇದು ಕೂಡ ಯುವಸಿಂಹವಾಯಿತು

ಇತರ ಸಿಂಹಗಳ ನಡುವೆ ತಿರುಗಾಡಿತು.
ಬೇಟೆಯಾಡುವುದನು ಕಲಿತು
ತಾನೂ ನರಭಕ್ಷಕನಾಗಲಾರಂಭಿಸಿತು.
7 ನೆಲಸಮ ಮಾಡಿತು ಪಟ್ಟಣಗಳನೆ
ನಾಶ ಮಾಡಿತು ಕೋಟೆಕೊತ್ತಲುಗಳನೆ
ನಾಡಿಗೆ ನಾಡೇ ನಡುಗಿತು ಅದರ ಗರ್ಜನೆಗೆ.
8 ಆಗ ಬಂದವು ಸುತ್ತಲಿನ ರಾಷ್ಟ್ರಗಳು
ಒಟ್ಟುಗೂಡಿ,
ಸಿಕ್ಕಿಸಿದವು ಅದನ್ನು ಬಲೆಯೊಡ್ಡಿ,
ಗುಂಡಿತೋಡಿ.
9 ಒಯ್ದವು ಅದನ್ನು ಬಾಬಿಲೋನಿನ ಅರಸನ
ಬಳಿಗೆ
ಬಿಗಿದು ಸರಪಣಿ, ಹಾಕಿ ಪಂಜರದೊಳಗೆ.
ಅದರ ಗರ್ಜನೆ ಇಸ್ರಯೇಲಿನ
ಗಿರಿಗಳಿಗೆ ಕೇಳಿಸದಂತೆ,
ಸೇರಿಸಿಬಿಟ್ಟವು ಅದನ್ನು ಸುಭದ್ರ
ಕೋಟೆಯೊಳಗೆ.
10 ನಿನ್ನ ಹೆತ್ತ ತಾಯಿ ದ್ರಾಕ್ಷಾಲತೆಯಂತೆ
ನೀರಾವರಿಯಲಿ ನಾಟಿದ್ದಾ ಲತೆಯಂತೆ
ಬೆಳೆದಿತ್ತದು ಫಲವತ್ತಾಗಿ, ಹುಲುಸಾಗಿ, ಅತಿ
ತಂಪಾಗಿಯೆ.
11 ಅದರಲ್ಲಿದ್ದವು ರಾಜದಂಡ ಯೋಗ್ಯವಾದ
ಗಟ್ಟಿ ಕೊಂಬೆಗಳು
ಮಿಕ್ಕ ರೆಂಬೆಗಳಿಗಿಂತ ಅಧಿಕವಾಗಿತ್ತವುಗಳ
ಎತ್ತರವು
ಹಲವಾರು ರೆಂಬೆಗಳ ಮಧ್ಯೆ ಉದ್ದುದ್ದವಾಗಿ
ಕಾಣಿಸಿದವು.
12 ಕಿತ್ತು ಬಿಸಾಡಿದರು ಕ್ರೋಧಿಗಳು ಆ
ಲತೆಯನು
ಬಾಡಿಸಿತು ಅದರ ಫಲವನು
ಮೂಡಣಗಾಳಿಯು
ಮುದುರಿ ಒಣಗಿ ಹೋದುವು ಅದರ ಗಟ್ಟಿ
ಕೊಂಬೆಗಳು.
13 ದಹಿಸಿಬಿಟ್ಟಿತು ಅವುಗಳನು ಅಗ್ನಿ
ಜ್ವಾಲೆಯು,
ಈಗದು ನಾಟಿಕೊಂಡಿದೆ ನೀರಿಲ್ಲದ
ಬೆಂಗಾಡಿನೊಳು.
14 ಅದರ ಕಾಂಡದಿಂದ ಹೊರಟ ಬೆಂಕಿಯು
ದಹಿಸಿಬಿಟ್ಟಿದೆ ಅದರ ಫಲಗಳನು
ಎಂದೇ ಇನ್ನು ಉಳಿದಿಲ್ಲ ಅದರೊಳು

ರಾಜದಂಡಕೆ ಯೋಗ್ಯವಾದ ಗಟ್ಟಿ
ಕೊಂಬೆಯು.”
ಇದೊಂದು ಶೋಕ ಗೀತೆ; ರೂಢಿಯಲ್ಲಿ
ಇರುವ
ಜಾನಪದ ಗೀತೆ.

### ದೇವರ ಚಿತ್ತ – ಮಾನವನ ಗರ್ವ

**20** ಏಳನೆಯ ವರ್ಷದ ಐದನೆಯ ತಿಂಗಳಿನ ಹತ್ತನೆಯ ದಿನದಲ್ಲಿ ಇಸ್ರಯೇಲಿನ ಹಿರಿಯರಲ್ಲಿ ಕೆಲವರು
ಸರ್ವೇಶ್ವರನನ್ನು ಪ್ರಶ್ನಿಸುವುದಕ್ಕೆ ಬಂದು ನನ್ನ ಮುಂದೆ ಕುಳಿತುಕೊಂಡರು. 2ಆಗ ಸರ್ವೇಶ್ವರ ಈ
ವಾಣಿಯನ್ನು ನನಗೆ ದಯಪಾಲಿಸಿದರು: 3 “ನರಪುತ್ರನೇ, ಇಸ್ರಯೇಲಿನ ಹಿರಿಯರನ್ನು ಸಂಬೋಧಿಸಿ ಹೀಗೆ
ಹೇಳು – ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನನ್ನನ್ನು ಪ್ರಶ್ನೆಕೇಳುವುದಕ್ಕೆ ಬಂದಿರೋ? ನನ್ನ
ಜೀವದಾಣೆ ನಾನು ನಿಮಗೆ ಉತ್ತರ ಕೊಡುವುದೇ ಇಲ್ಲ; ಇದು ಸರ್ವೇಶ್ವರನಾದ ದೇವರ ನುಡಿ.

4 “ನರಪುತ್ರನೇ, ಇವರಿಗೆ ನ್ಯಾಯತೀರಿಸಲು ನೀನೂ ಮನಸ್ಸು ಮಾಡಿರುವೆಯಾ? ಇವರ ಪಿತೃಗಳ
ದುರಾಚಾರಗಳನ್ನು ಇವರಿಗೆ ಹೀಗೆ ತಿಳಿಸು – 5ಸರ್ವೇಶ್ವರ ದೇವರು ಇಂತೆನ್ನುತ್ತಾರೆ – ನಾನು
ಇಸ್ರಯೇಲರನ್ನು ಆರಿಸಿಕೊಂಡ ದಿನದಂದು ಯಕೋಬ ಸಂತಾನದವರಿಗೆ ಮಾತುಕೊಟ್ಟು, ‘ನಾನೇ ನಿಮ್ಮ
ದೇವರಾದ ಸರ್ವೇಶ್ವರ’ ಎಂದು ಈಜಿಪ್ಟ್ ದೇಶದಲ್ಲಿ ಪ್ರಮಾಣಪೂರ್ವಕವಾಗಿ ತಿಳಿಯಪಡಿಸಿದೆ. 6ನಾನು
ಅವರಿಗೆ ‘ನಾಡುಗಳಲ್ಲೆಲ್ಲ ಶ್ರೀಮಂತವಾದ ನಾಡನ್ನು ನಿಮಗಾಗಿ ನೋಡಿದ್ದೇನೆ; ನಾನು ನಿಮ್ಮನ್ನು ಈಜಿಪ್ಟ್
ದೇಶದಿಂದ ಉದ್ಧರಿಸಿ ಹಾಲೂ ಜೇನೂ ಹರಿಯುವ ಆ ನಾಡಿಗೆ ಸೇರಿಸುವೆನು’ ಎಂದು ಪ್ರಮಾಣಮಾಡಿದೆ;
7‘ನೀವೆಲ್ಲರೂ ನಿಮ್ಮ ಕಣ್ಣಿಗೆ ಇಷ್ಟವಾದ ಅಸಹ್ಯ ವಸ್ತುಗಳನ್ನು ಬಿಸಾಡಿಬಿಡಿ; ಈಜಿಪ್ಟ್‌ನ ವಿಗ್ರಹಗಳಿಂದ
ನಿಮ್ಮನ್ನು ಹೊಲಸು ಮಾಡಿಕೊಳ್ಳಬೇಡಿ; ನಾನು ನಿಮ್ಮ ದೇವರಾದ ಸರ್ವೇಶ್ವರ’ ಎಂದು ಅವರನ್ನು
ಎಚ್ಚರಿಸಿದೆ. 8ಅವರಾದರೋ ನನ್ನ ಮಾತನ್ನು ಲೆಕ್ಕಿಸದೆ ನನ್ನ ವಿರುದ್ಧ ದಂಗೆಯೆದ್ದರು; ತಮ್ಮ ಕಣ್ಣಿಗೆ
ಇಷ್ಟವಾದ ಅಸಹ್ಯ ವಸ್ತುಗಳನ್ನು ಯಾರೂ ಬಿಸಾಡಿಬಿಡಲಿಲ್ಲ. ಈಜಿಪ್ಟಿನ ವಿಗ್ರಹಗಳನ್ನು ತ್ಯಜಿಸಲಿಲ್ಲ. ಆಗ
ನಾನು ಈಜಿಪ್ಟ್ ದೇಶದಲ್ಲಿ ಇವರ ಮೇಲೆ ನನ್ನ ರೋಷಾಗ್ನಿಯನ್ನು ಸುರಿಸಿ, ನನ್ನ ಕೋಪವನ್ನು
ತೀರಿಸಿಕೊಳ್ಳುವೆನು ಎಂದುಕೊಂಡೆ. 9ಆದರೂ, ‘ನಿಮ್ಮನ್ನು ಈಜಿಪ್ಟ್‌ನಿಂದ ಪಾರುಮಾಡುವೆನು,’ ಎಂಬುದಾಗಿ
ಜನಾಂಗಗಳ ಮುಂದೆಯೇ ನನ್ನನ್ನು ಇವರಿಗೆ ಪ್ರಕಟಿಸಿಕೊಂಡೆನಲ್ಲಾ ಎಂದು ಯೋಚಿಸಿ ಅವರ
ಸುತ್ತಮುತ್ತಲಿನ ಆ ಜನಾಂಗಗಳ ಮುಂದೆ ನನ್ನ ಹೆಸರು ಅಪಕೀರ್ತಿಗೆ ಗುರಿಯಾಗದಂತೆ ನನ್ನ ಹೆಸರಿನ
ನಿಮಿತ್ತವೇ ಸಹಿಸಿಕೊಂಡೆ.

10 “ಆದರೂ ನಾನು ಅವರನ್ನು ಈಜಿಪ್ಟ್‌ನಿಂದ ಬಿಡಿಸಿ ಮರುಭೂಮಿಗೆ ಕರೆದುತಂದೆ.
11ಕೈಗೊಳ್ಳುವವರಿಗೆ ಜೀವಾಧಾರವಾದ ನನ್ನ ಆಜ್ಞಾವಿಧಿಗಳನ್ನು ಅವರಿಗೆ ತಿಳಿಸಿಕೊಟ್ಟೆ. 12ಇದಲ್ಲದೆ, ತಮ್ಮನ್ನು
ದೇವಜನರನ್ನಾಗಿ ಮಾಡಿರುವ ಸರ್ವೇಶ್ವರ ನಾನೇ ಎಂದು ಅವರು ತಿಳಿದುಕೊಳ್ಳುವಂತೆ ನನಗೂ ಅವರಿಗೂ
ಸಂಕೇತವಾದ ಸಬ್ಬತ್ ದಿನಗಳನ್ನು ಅವರಿಗೆ ನೇಮಿಸಿದೆ. 13ಆದರೆ ಇಸ್ರಯೇಲ್ ವಂಶದವರು
ಮರುಭೂಮಿಯಲ್ಲಿ ನನ್ನ ವಿರುದ್ಧ ದಂಗೆಯೆದ್ದರು. ಕೈಗೊಳ್ಳುವವರಿಗೆ ಜೀವಾಧಾರವಾದ ನನ್ನ
ಆಜ್ಞಾವಿಧಿಗಳನ್ನು ಅನುಸರಿಸದೆ ಧಿಕ್ಕರಿಸಿದರು. ಮುಖ್ಯವಾಗಿ ನಾನು ನೇಮಿಸಿದ ಸಬ್ಬತ್ ದಿನಗಳನ್ನು
ಅಪವಿತ್ರಮಾಡಿದರು. ಆಗ ನಾನು ‘ಮರುಭೂಮಿಯಲ್ಲಿರುವ ಇವರ ಮೇಲೆ ನನ್ನ ರೋಷಾಗ್ನಿಯನ್ನು ಹರಿಸಿ
ಇವರನ್ನು ಧ್ವಂಸ ಮಾಡುವೆನು’ ಎಂದುಕೊಂಡೆ. 14ಆದರೂ ಯಾವ ಜನಾಂಗಗಳ ಮುಂದೆ ಅವರನ್ನು
ಪಾರುಮಾಡಿದೆನೋ ಆ ಜನಾಂಗಗಲ ಮುಂದೆ ನನ್ನ ಹೆಸರು ಅಪಕೀರ್ತಿಗೆ ಗುರಿಯಾಗಬಾರದೆಂದು ನನ್ನ
ಹೆಸರಿನ ನಿಮಿತ್ತವೇ ಸಹಿಸಿಕೊಂಡೆ. 15ಆಮೇಲೆ, ‘ನಾಡುಗಳಲ್ಲೆಲ್ಲಾ ಶ್ರೇಷ್ಠವಾದ ನಾಡಿಗೆ, ಹಾಲೂ ಜೇನೂ
ಹರಿಯುವ ಆ ವಾಗ್ದತ್ತನಾಡಿಗೆ ನಿಮ್ಮನ್ನು ಸೇರಿಸೆನು’ ಎಂದು ಮರುಭೂಮಿಯಲ್ಲಿ ಅವರಿಗೆ ಪ್ರಮಾಣಮಾಡಿ

ಹೇಳಿದೆ. 16ಏಕೆಂದರೆ, ಅವರ ಹೃದಯ ವಿಗ್ರಹಗಳಲ್ಲಿ ಆಸಕ್ತವಾಗಿ, ನನ್ನ ಆಜ್ಞಾವಿಧಿಗಳನ್ನು ಅವರು ಅನುಸರಿಸದೆ ಧಿಕ್ಕರಿಸಿ, ನಾನು ನೇಮಿಸಿದ ಸಬ್ಬತ್ ದಿನಗಳನ್ನು ಅಪವಿತ್ರಗೊಳಿಸಿದರು.

17 "ಆದರೂ ನಾನು ಅವರನ್ನು ನಾಶ ಮಾಡಲಿಲ್ಲ; ನನ್ನ ಕಟಾಕ್ಷವು ಅವರನ್ನು ಉಳಿಸಿತು; ನಾನು ಅವರನ್ನು ಮರುಭೂಮಿಯಲ್ಲಿ ನಿರ್ಮೂಲಮಾಡಲಿಲ್ಲ. 18ಆಮೇಲೆ ನಾನು ಅವರ ಸಂತಾನದವರಿಗೆ – 'ನೀವು ನಿಮ್ಮ ಪಿತೃಗಳ ಕಟ್ಟಳೆಗಳನ್ನು ಅನುಸರಿಸದೆ ಅವರ ವಿಧಿಗಳನ್ನು ಕೈಗೊಳ್ಳದೆ ಅವರ ವಿಗ್ರಹಗಳಿಂದ ನಿಮ್ಮನ್ನು ಕೈಗೊಳ್ಳದೆ ಅವರ ವಿಗ್ರಹಗಳಿಂದ ನಿಮ್ಮನ್ನು ಅಪವಿತ್ರಮಾಡಿಕೊಳ್ಳಬೇಡಿ; 19ನಾನು ನಿಮ್ಮ ದೇವರಾದ ಸರ್ವೇಶ್ವರ; ನೀವು ನನ್ನ ಆಜ್ಞೆಗಳನ್ನು ಅನುಸರಿಸಿ ನನ್ನ ವಿಧಿಗಳನ್ನು ಕೈಗೊಂಡು ನಡೆಯಿರಿ. 20ನಾನು ನೇಮಿಸಿದ ಸಬ್ಬತ್ ದಿನಗಳನ್ನು ನನ್ನ ದಿನಗಳೆಂದು ಆಚರಿಸಿರಿ; ನಾನು ನಿಮ್ಮ ದೇವರಾದ ಸರ್ವೇಶ್ವರ ಎಂದು ನೀವು ತಿಳಿದುಕೊಳ್ಳುವಂತೆ ಅವು ನಿಮಗೂ ನನಗೂ ಗುರುತಾಗಿರುವುವು' ಎಂದು ಹೇಳಿದೆ.

21 "ಆದರೆ ಆ ಸಂತಾನದವರು ನನ್ನನ್ನು ಪ್ರತಿಭಟಿಸಿದರು; ನನ್ನ ಆಜ್ಞೆಗಳನ್ನು ಅನುಸರಿಸಲಿಲ್ಲ; ಕೈಗೊಂಡವರಿಗೆ ಜೀವಾಧಾರವಾದ ನನ್ನ ವಿಧಿಗಳನ್ನು ಅನುಸರಿಸಿ ನಡೆಯಲಿಲ್ಲ; ನಾನು ನೇಮಿಸಿದ ಸಬ್ಬತ್ ದಿನಗಳನ್ನು ಅಪವಿತ್ರ ಮಾಡಿದರು. ಆದುದರಿಂದ ನಾನು 'ಮರುಭೂಮಿಯಲ್ಲೇ ಇವರ ಮೇಲೆ ನನ್ನ ರೋಷಾಗ್ನಿಯನ್ನು ಹರಿಸಿ, ನನ್ನ ಕೋಪವನ್ನು ತೀರಿಸಿಕೊಳ್ಳುವೆನು' ಎಂದುಕೊಂಡೆ. 22ಆದರೂ ನಾನು ಯಾವ ಜನಾಂಗಗಳ ಮುಂದೆ ಅವರನ್ನು ಬಿಡುಗಡೆ ಮಾಡಿದೆನೋ, ಆ ಜನಾಂಗಗಳ ಮುಂದೆ ನನ್ನ ಹೆಸರು ಅಪಕೀರ್ತಿಗೆ ಗುರಿಯಾಗಬಾರದೆಂದು ನನ್ನ ಹೆಸರಿನ ನಿಮಿತ್ತವೇ ಸಹಿಸಿಕೊಂಡು, ಕೈಯನ್ನು ಹಿಂದಕ್ಕೆ ತೆಗೆದುಕೊಂಡೆ. 23ಆಮೇಲೆ ಅವರು ನನ್ನ ಆಜ್ಞೆಗಳನ್ನು ಕೈಗೊಳ್ಳದೆ, ನನ್ನ ವಿಧಿಗಳನ್ನು ನಿರಾಕರಿಸಿ, ನಾನು ನೇಮಿಸಿದ ಸಬ್ಬತ್ ದಿನಗಳನ್ನು ಅಪವಿತ್ರಮಾಡಿ ತಮ್ಮ ಪಿತೃಗಳ ವಿಗ್ರಹಗಳಲ್ಲೇ ಆಸಕ್ತರಾದರು. 24ಆದ್ದರಿಂದ ನಾನು 'ನಿಮ್ಮನ್ನು ಜನಾಂಗಗಳಲ್ಲಿ ಚದರಿಸಿ ದೇಶ ದೇಶಗಳಿಗೆ ತೂರಿಬಿಡುವೆನು' ಎಂದು ಮರುಭೂಮಿಯಲ್ಲಿ ಪ್ರಮಾಣಮಾಡಿ ಹೇಳಿದೆ.

25 "ಇದಲ್ಲದೆ, 'ನಾನೇ ಸರ್ವೇಶ್ವರ' ಎಂದು ಅವರು ತಿಳಿದುಕೊಳ್ಳುವಂತೆ ನಾನು ಅವರಿಗೆ ಅಹಿತವಾದ ಆಜ್ಞೆಗಳನ್ನೂ ಜೀವಾಧಾರವಲ್ಲದ ವಿಧಿಗಳನ್ನೂ ನೇಮಿಸಿದೆ. 26ಅವರು ತಮ್ಮ ಚೊಚ್ಚಲುಮಕ್ಕಳನ್ನು ಆಹುತಿಕೊಟ್ಟು ಅರ್ಪಿಸುತ್ತಿದ್ದ ಬಲಿಗಳಿಂದಲೇ ಅವರನ್ನು ಹೊಲೆಗೆಡಿಸಿ, ಕೇವಲ ದುರವಸ್ಥೆಗೆ ತಂದೆನು.

27 "ಹೀಗಿರಲು, ನರಪುತ್ರನೇ, ಇಸ್ರಯೇಲ್ ವಂಶದವರಿಗೆ ಈ ಮಾತನ್ನು ಹೇಳು – ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನಿಮ್ಮ ಪಿತೃಗಳು ಪುನಃ ದ್ರೋಹಮಾಡಿ ನನ್ನನ್ನು ದೂಷಿಸಿದ್ದಾರೆ. 28ನಾನು ಪ್ರಮಾಣಪೂರ್ವಕವಾಗಿ ಅವರಿಗೆ ವಾಗ್ದಾನ ಮಾಡಿದ ನಾಡಿಗೆ ಅವರನ್ನು ಸೇರಿಸಿದ ಮೇಲೆ, ಅವರು ಎತ್ತರವಾದ ಎಲ್ಲ ಗುಡ್ಡಗಳನ್ನೂ ಸೊಂಪಾಗಿ ಬೆಳೆದಿರುವ ಎಲ್ಲ ಮರಗಳನ್ನೂ ನೋಡಿ, ಅಲ್ಲಿ ಯಜ್ಞಪಶುಗಳನ್ನು ವಧಿಸಿ, ನನ್ನನ್ನು ರೇಗಿಸುವ ನೈವೇದ್ಯವನ್ನರ್ಪಿಸಿ, ಸುಗಂಧ ಹೋಮಮಾಡಿ, ಪಾನದ್ರವ್ಯವನ್ನು ಸುರಿದು, ಬಲಿ ಒಪ್ಪಿಸುತ್ತಿದ್ದರು. 29ನೀವು ಹೋಗುವ 'ಬಾ – ಮಾ' ಎಂಬ ಪೂಜಾಸ್ಥಳ ಎಂಥ ಸ್ಥಳ? (ಇಂದಿನವರೆಗೂ ಇಂಥಾ ಪೂಜಾಸ್ಥಳಗಳಿಗೆ ಬಾಮಾ ಎಂದೇ ಹೆಸರು).

30 "ಇಸ್ರಯೇಲ್ ವಂಶದವರಿಗೆ ಹೀಗೆ ಹೇಳು:– ಸರ್ವೇಶ್ವರ ದೇವರು ಇಂತೆನ್ನುತ್ತಾರೆ – ನಿಮ್ಮ ಪಿತೃಗಳಂತೆ ನಿಮ್ಮನ್ನು ನೀವೇ ಅಪವಿತ್ರ ಮಾಡಿಕೊಳ್ಳುತ್ತೀರೋ? ಅವರು ಪೂಜಿಸುತ್ತಿದ್ದ ಅಸಹ್ಯ ವಸ್ತುಗಳನ್ನು ನೀವೂ ಪೂಜಿಸಿ ದೇವದ್ರೋಹ ಮಾಡುತ್ತೀರೋ? 31ನೀವು ಬಲಿಯರ್ಪಿಸುತ್ತಾ, ನಿಮ್ಮ ಮಕ್ಕಳನ್ನು ಆಹುತಿಕೊಟ್ಟು ಇಂದಿನವರೆಗೂ ನಿಮ್ಮನ್ನು ಅಶುದ್ಧಮಾಡಿಕೊಂಡಿರಿ. ಹೀಗಿರುವಾಗ ಇಸ್ರಯೇಲ್ ವಂಶದವರೇ, ನಾನು ನಿಮ್ಮಂಥವರಿಗೆ ದೈವೋತ್ತರವನ್ನು ದಯಪಾಲಿಸಬಹುದೇ? ನನ್ನ ಜೀವದಾಣೆ, ನಿಮಗೆ ದೈವೋತ್ತರವನ್ನು ದಯಪಾಲಿಸೆನು; ಇದು ಸರ್ವೇಶ್ವರನಾದ ದೇವರ ನುಡಿ. 32'ನಾವು ಜನಾಂಗಗಳಂತೆ, ಅನ್ಯದೇಶಗಳವರಂತೆ ಮರ, ಕಲ್ಲುಗಳ ವಿಗ್ರಹಗಳನ್ನು ಪೂಜಿಸುವೆವು' ಎಂದು ನಿಮ್ಮ ಮನಸ್ಸಿನಲ್ಲಿ ಹುಟ್ಟುವಯೋಚನೆ ಎಷ್ಟು ಮಾತ್ರವೂ ನೆರವೇರದು.

**ಶಿಕ್ಷಿಸುವ ಹಾಗೂ ಕ್ಷಮಿಸುವ ದೇವರು**

33 "ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನನ್ನ ಜೀವದಾಣೆ, ನಾನು ಶಿಕ್ಷಾಹಸ್ತವನ್ನೆತ್ತಿ, ಭುಜಪರಾಕ್ರಮವನ್ನು ತೋರಿಸಿ, ರೋಷಾಗ್ನಿಯನ್ನು ಸುರಿಸುತ್ತಾ, ನಿಮ್ಮ ಮೇಲೆ ದೊರೆತನ ಮಾಡುವೆನು;
34ಹೌದು, ನಾನು ಶಿಕ್ಷಾಹಸ್ತವನ್ನೆತ್ತಿ, ಭುಜಪರಾಕ್ರಮವನ್ನು ತೋರಿಸಿ, ರೋಷಾಗ್ನಿಯನ್ನು ಹರಿಸುತ್ತಾ, ನಿಮ್ಮನ್ನು ಜನಾಂಗಗಳಿಂದ ಬಿಡುಗಡೆಮಾಡಿ, ನೀವು ಚದರಿಹೋಗಿರುವ ದೇಶಗಳಿಂದ ನಿಮ್ಮನ್ನು
ಒಂದುಗೂಡಿಸಿ, 35ಜನಾಂಗಗಳ ಮಧ್ಯೆ ಮರುಭೂಮಿಗೆ ಕರೆತಂದು ಅಲ್ಲೇ ಮುಖಾಮುಖಿಯಾಗಿ
ನಿಮ್ಮೊಂದಿಗೆ ವಾದಿಸುವೆನು. 36ನಾನು ಈಜಿಪ್ಟಿನ ಮರುಭೂಮಿಯಲ್ಲಿ ನಿಮ್ಮ ಪಿತೃಗಳ ಸಂಗಡ ವಾದಿಸಿದಂತೆ
ನಿಮ್ಮ ಸಂಗಡವೂ ವಾದಿಸುವೆನು; ಇದು ಸರ್ವೇಶ್ವರನಾದ ದೇವರ ನುಡಿ.

37 "ನಾನು ನಿಮ್ಮನ್ನು ಲೆಕ್ಕಿಸುವಂತೆ, ಕೋಲಿನ ಕೆಳಗೆ ಹೋಗುವಂತೆಮಾಡಿ, ಒಡಂಬಡಿಕೆಯ
ಕಟ್ಟಿನಿಂದ ಬಂಧಿಸುವೆನು, 38ನನಗೆ ವಿಮುಖರಾದ ದ್ರೋಹಿಗಳನ್ನು ನಿಮ್ಮಿಂದ ದೂರಕ್ಕೆ ಗುಡಿಸಿಬಿಡುವೆನು;
ಅವರು ಪ್ರವಾಸಿಗಳಾಗಿದ್ದ ದೇಶದಿಂದ ನಾನು ಅವರನ್ನು ಬಿಡುಗಡೆ ಮಾಡಿದರೂ ಅವರು ಇಸ್ರಯೇಲ್ ನಾಡಿಗೆ ಸೇರುವುದೇ ಇಲ್ಲ; ಆಗ ನಾನೇ ಸರ್ವೇಶ್ವರ ಎಂದು ನಿಮಗೆ ಗೊತ್ತಾಗುವುದು.

39 "ಇಸ್ರಯೇಲ್ ವಂಶದವರೇ, ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಹೋಗಿರಿ, ನಿಮ್ಮ ವಿಗ್ರಹಗಳನ್ನು ಪೂಜಿಸಿರಿ; ಮುಂದಕ್ಕಾದರು ನನ್ನ ಮಾತನ್ನು ಕೇಳಿಯೇ ಕೇಳುವಿರಿ; ಇನ್ನು ಮೇಲಾದರು ನನ್ನ ಪರಿಶುದ್ಧ ನಾಮವನ್ನು ನಿಮ್ಮ ಬಲಿಗಳಿಂದ ಹಾಗೂ ವಿಗ್ರಹಗಳಿಂದ ನೀವು ಅಪಕೀರ್ತಿಗೆ
ಒಳಪಡಿಸಲಾರಿರಿ. 40ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನಾಡಿನಲ್ಲಿ ಇಸ್ರಯೇಲ್
ವಂಶದವರೆಲ್ಲರೂ ನನ್ನ ಪರಿಶುದ್ಧ ಬೆಟ್ಟದಲ್ಲೇ, ಇಸ್ರಯೇಲಿನ ಪರ್ವತಾಗ್ರದಲ್ಲೇ, ನನ್ನನ್ನು ಪೂಜಿಸುವರು; ಅಲ್ಲೇ ಅವರಿಗೆ ಪ್ರಸನ್ನನಾಗುವೆನು, ಅಲ್ಲೇ ನಿಮ್ಮ ಕಾಣಿಕೆಗಳನ್ನೂ ಉತ್ತಮ ನೈವೇದ್ಯಗಳನ್ನೂ
ಮೀಸಲಾದುದೆಲ್ಲವನ್ನೂ ಅಂಗೀಕರಿಸುವೆನು. 41ನಾನು ನಿಮ್ಮನ್ನು ಜನಾಂಗಗಳೊಳಗಿಂದ ಬಿಡುಗಡೆಮಾಡಿ,
ನೀವು ಚದರಿ ಹೋಗಿರುವ ದೇಶಗಳಿಂದ ತಂದು ಸೇರಿಸುವಾಗ, ನಿಮ್ಮ ಸುಗಂಧ ಹೋಮವನ್ನು ಆಘ್ರಾಣಿಸಿ, ನಿಮಗೆ ಪ್ರಸನ್ನನಾಗುವೆನು; ಸಕಲ ಜನಾಂಗಗಳೆದುರಿಗೆ, ನಿಮ್ಮ ರಕ್ಷಣೆಯ ಮೂಲಕ, ನನ್ನ ಗೌರವವನ್ನು
ಕಾಪಾಡಿಕೊಳ್ಳುವೆನು. 42ನಾನು ಪ್ರಮಾಣಮಾಡಿ ನಿಮ್ಮ ಪಿತೃಗಳಿಗೆ ಯಾವ ನಾಡನ್ನು ಕೊಟ್ಟೆನೋ ಆ
ಇಸ್ರಾಯೇಲ್ ನಾಡಿಗೆ ನಿಮ್ಮನ್ನು ಬರಮಾಡುವಾಗ ನಾನೇ ಸರ್ವೇಶ್ವರ ಎಂದು ನಿಮಗೆ ಗೊತ್ತಾಗುವುದು.
43ನಿಮ್ಮನ್ನು ಅಪವಿತ್ರಗೊಳಿಸಿರುವ ನಿಮ್ಮ ನಡತೆಯನ್ನೂ ನಿಮ್ಮ ಎಲ್ಲಾ ಕಾರ್ಯಗಳನ್ನೂ ಅಲ್ಲಿ ನೆನಪಿಗೆ
ತಂದುಕೊಂಡು, ನೀವು ನಡೆಸಿರುವ ಸಕಲ ದುಷ್ಕೃತ್ಯಗಳ ನಿಮಿತ್ತ, ನಿಮ್ಮನ್ನು ನೋಡಿ ನೀವೇ ಅಸಹ್ಯಪಡುವಿರಿ.
44ಇಸ್ರಯೇಲ್ ವಂಶದವರೇ, ನಿಮ್ಮ ದುರ್ನಡತೆಗೂ ದುಷ್ಕೃತ್ಯಗಳಿಗೂ ತಕ್ಕ ಹಾಗೆ ನಾನು ನಿಮ್ಮನ್ನು
ಸಹಿಸಿಕೊಂಡಿರುವಾಗ, ನಾನೇ ಸರ್ವೇಶ್ವರ ಎಂದು ನಿಮಗೆ ತಿಳಿಯುವುದು; ಇದು ಸರ್ವೇಶ್ವರನಾದ ದೇವರ
ನುಡಿ."

**ಕಾಳ್ಗಿಚ್ಚಿನ ಸಾಮತಿ**

45 ಆಮೇಲೆ ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು – 46"ನರಪುತ್ರನೇ ನೀನು
ದಕ್ಷಿಣಾಭಿಮುಖನಾಗಿ, ಆ ಕಡೆಗೆ ಮಾತಾಡುತ್ತಾ ದಕ್ಷಿಣ ಸೀಮೆಯ ವನವನ್ನು ಉದ್ದೇಶಿಸಿ ಪ್ರಸ್ತಾಪವನ್ನೆತ್ತಿ,
47ಆ ವನಕ್ಕೆ ಹೀಗೆ ಪ್ರವಾದಿಸು: 'ಸರ್ವೇಶ್ವರನ ಮಾತನ್ನು ಕೇಳು: ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ
– ಆಹಾ, ನಾನು ನಿನ್ನೊಳಗೆ ಬೆಂಕಿಯನ್ನು ಹೊತ್ತಿಸುವೆನು. ಅದು ನಿನ್ನಲ್ಲಿನ ಎಲ್ಲಾ ಹಸಿರು ಮರಗಳನ್ನೂ ಒಣ ಮರಗಳನ್ನೂ ಕಬಳಿಸಿ ಬಿಡುವುದು; ಧಗಧಗಿಸುವ ಜ್ವಾಲೆ ಆರದೆ, ತೆಂಕಲಿಂದ ಬಡಗಲವರೆಗೆ ಎಲ್ಲರ
ಮುಖಗಳನ್ನು ಕುಂದಿಸುವುದು. 48ಅದನ್ನು ಹೊತ್ತಿಸಿದವನು ಸರ್ವೇಶ್ವರನಾದ ನಾನೇ ಎಂದು ಸಕಲ
ನರಪ್ರಾಣಿಗಳಿಗೆ ಆಗ ಗೋಚರವಾಗುವುದು; ಅದು ಆರಿಹೋಗದು'.

49 ಆಗ ನಾನು – 'ಅಯ್ಯೋ, ಸರ್ವೇಶ್ವರನಾದ ದೇವರೇ, 'ಅವನು ಒಗಟುಗಾರನಲ್ಲವೆ?' ಎಂದು
ಈ ಜನರು ನನ್ನ ಬಗ್ಗೆ ಆಡಿಕೊಳ್ಳುತ್ತಾರೆ" ಎಂದು ಅರಿಕೆಮಾಡಿದೆನು.

## ಸರ್ವೇಶ್ವರನ ಖಡ್ಗ – ಪ್ರವಾದಿಯ ದುಃಖ

**21** ಸರ್ವೇಶ್ವರ ನನಗೆ ಈ ವಾಣಿಯನ್ನು ದಯಪಾಲಿಸಿದರು – 2"ನರಪುತ್ರನೇ, ನೀನು ಜೆರುಸಲೇಮಿಗೆ
ಅಭಿಮುಖನಾಗಿ, ಅಲ್ಲಿನ ಪವಿತ್ರಸ್ಥಳಗಳ ಕಡೆಗೆ ಮಾತಾಡುತ್ತಾ, ಇಸ್ರಯೇಲ್ ನಾಡಿನ ಪ್ರಸ್ತಾಪವನ್ನೆತ್ತಿ ಆ
ನಾಡಿಗೆ ಹೀಗೆ ಪ್ರವಾದಿಸು: 3ಸರ್ವೇಶ್ವರ ಇಂತೆನ್ನುತ್ತಾರೆ – ಇಗೋ, ನಾನು ನಿನಗೆ ವಿರುದ್ಧವಾಗಿದ್ದೇನೆ,
ನನ್ನ ಖಡ್ಗವನ್ನು ಒರೆಯಿಂದ ಹಿರಿದು ನಿನ್ನಲ್ಲಿನ ಸಜ್ಜನರನ್ನೂ ದುರ್ಜನರನ್ನೂ ಸಂಹರಿಸಿಬಿಡುವೆನು. 4ನಾನು
ನಿನ್ನಲ್ಲಿನ ಸಜ್ಜನರನ್ನೂ ದುರ್ಜನರನ್ನೂ ಸಂಹರಿಸಬೇಕೆಂದಿರುವುದರಿಂದ ನನ್ನ ಖಡ್ಗ ಒರೆಯಿಂದ ಹೊರಟು
ದಕ್ಷಿಣದಿಂದ ಉತ್ತರದವರೆಗೆ ಸಕಲ ನರಪ್ರಾಣಿಗಳ ಮೇಲೆ ಬೀಳುವುದು; 5ಆಗ ಸರ್ವೇಶ್ವರನಾದ ನಾನೇ
ನನ್ನ ಖಡ್ಗವನ್ನು ಒರೆಯಿಂದ ಹಿರಿದಿದ್ದೇನೆ ಎಂಬುದು ಎಲ್ಲ ನರಮಾನವರಿಗೂ ತಿಳಿಯುವುದು; ಅದು
ಪುನಃ ಒರೆಗೆ ಸೇರದು, 6ನರಪುತ್ರನೇ, ಮೊರೆಯಿಡು; ಸೊಂಟಮುರಿದಷ್ಟು ದುಃಖದಿಂದ ಜನರ ಮುಂದೆ
ನರಳಾಡು. 7'ಏಕೆ ನರಳಾಡುತ್ತೀ?' ಎಂದು ಅವರು ನಿನ್ನನ್ನು ಕೇಳುವರು. ಆಗ ನೀನು ಅವರಿಗೆ –
'ದುರ್ವಾರ್ತೆಯ ನಿಮಿತ್ತ ನರಳುತ್ತಿದ್ದೇನೆ; ಇಗೋ, ವಿಪತ್ತು ಬಂದಿತು; ಎಲ್ಲರ ಹೃದಯವು ಕರಗಿ
ನೀರಾಗುವುದು, ಎಲ್ಲರ ಕೈ ಜೋಲುಬೀಳುವುದು, ಎಲ್ಲರ ಮನಸ್ಸು ಕುಂದುವುದು, ಎಲ್ಲರ ಮೊಣಕಾಲು
ನೀರಿನಂತೆ ಅದರುವುದು; ಇಗೋ, ಬಂದಿತು, ಬಂದಾಯಿತು! ಇದು ಸರ್ವೇಶ್ವರನಾದ ದೇವರ ನುಡಿ,'
ಎಂದು ಉತ್ತರಕೊಡು."

### ಖಡ್ಗದ ಗೀತೆ

8 ಸರ್ವೇಶ್ವರ ನನಗೆ ಅನುಗ್ರಹಿಸಿದ ವಾಣಿ
    ಇದು:
9 "ನರಪುತ್ರನೇ, ಪ್ರವಾದಿಸು ಸರ್ವೇಶ್ವರ
    ಹೀಗೆನ್ನುತ್ತಾರೆಂದು:
10 ಆಹಾ ಖಡ್ಗ, ಖಡ್ಗ, ಸಾಣೆ ಹಿಡಿದ ಖಡ್ಗ,
    ಮಸೆದ ಖಡ್ಗ !
  ಸಾಣೆ ಹಿಡಿದಿದೆ ಹತಿಸುವಂತೆ, ಮಸೆದಿದೆ
    ಮಿಂಚುವಂತೆ.
  ಸಂಭ್ರಮಿಸಲಾದೀತೆ 'ನಮ್ಮ ಕುಮಾರನ
    ರಾಜದಂಡ' ಎಂದು?
  ಮಿಕ್ಕ ದಂಡಗಳನೆಲ್ಲ ಧಿಕ್ಕರಿಸುವಂಥ
    ದಂಡವೆಂದುಕೊಂಡು?
11 ಬಳಕೆಗೆ ಸಿದ್ಧವಿರಲೆಂದು ಕೊಡಲಾಗಿದೆ ಆ
    ಖಡ್ಗ ಮಸೆಯಲಿಕ್ಕೆ
  ಮಸೆದು, ಸಾಣೆಹಿಡಿದು, ಸಜ್ಜಾಗಿದೆ ಅದು
    ಹತ್ಯಗಾರನ ಹಿಡಿತಕ್ಕೆ.
12 ನರಪುತ್ರನೇ, ಕೂಗು, ಗೋಳಾಡು,
    ಬಡಿದುಕೋ ಎದೆ !
  ಎರಗಿದೆ ಆ ಖಡ್ಗ ನನ್ನ ಜನರ ಮೇಲೆ
  ಇಸ್ರಯೇಲಿನ ಅರಸರೆಲ್ಲರ ಮೇಲೆ
  ತುತ್ತಾಗುವರು ಅದಕ್ಕೆ ಜನನಾಯಕರು
    ಜನರೊಂದಿಗೆ.
13 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ:

ಸಂಭವಿಸಿದೆ ಪರಿಶೋಧನೆ
ಏನುಗತಿ, ರಾಜದಂಡವೇ ನಾಶವಾದರೆ !
14 ನರಪುತ್ರನೇ, ಪ್ರವಾದಿಸು, ಚಪ್ಪಾಳೆ ಬಡಿ,
ಹತಿಸುವುದಾ ಖಡ್ಗ ಇಮ್ಮಡಿ ಮುಮ್ಮಡಿ.
ಪ್ರಜೆಯನ್ನು ಸಂಹರಿಸುವುದಾ ಖಡ್ಗ
ಅಧಿಪತಿಯನ್ನೇ ಸುತ್ತಲು ಬೀಸಿ
ಹತಿಸುವುದಾ ಖಡ್ಗ.
15 ನೀರಾಗುವುದು ಜನರ ಹೃದಯ,
ಎಡವಿ ಬೀಳುವರು ಬಹುಜನ.
ಪುರದ್ವಾರಗಳಿಗೇ ತಂದಿರುವೆನು ಹತಿಸುವಾ
ಖಡ್ಗವ.
ಮಿನುಗುತಿಹುದದು ಮಿಂಚಿನಂತೆ
ಹರಿತವಿದೆ ವಧೆಗಾಗುವ ಕತ್ತಿಯಂತೆ.
16 ಖಡ್ಗವೇ, ಏಕಾಗ್ರವಾಗಿ ಹೋಗು ಬಲಕೆ
ಸಜ್ಜಾಗಿ ಸಾಗು ಎಡಕೆ
ಹೊರಡು ನಿನ್ನ ಮುಖವಿದ್ದ ಕಡೆಗೆ.
17 ನಾನೂ ರೋಷ ತೀರಿಸಿಕೊಳ್ವೆ ಚಪ್ಪಾಳೆ ತಟ್ಟಿ
ಇದು ಸರ್ವೇಶ್ವರನಾದ ನನ್ನ ನುಡಿ”.

## ಬಾಬಿಲೋನಿಯಾ ರಾಜನ ಖಡ್ಗ

18 ಸರ್ವೇಶ್ವರ ನನಗೆ ಮತ್ತೊಂದು ವಾಣಿಯನ್ನು ದಯಪಾಲಿಸಿದರು – “ನರಪುತ್ರನೇ,
19ಬಾಬಿಲೋನಿನ ಅರಸನ ಖಡ್ಗ ಬರುವುದಕ್ಕೆ ಎರಡು ದಾರಿಗಳುಳ್ಳ ನಕ್ಷೆಯನ್ನು ಬರೆ; ಅವೆರಡು ದಾರಿಗಳು
ಒಂದೇ ದೇಶದಿಂದ ಹೊರಟ ಹಾಗಿರಲಿ; ಒಂದೊಂದು ಪಟ್ಟಣಕ್ಕೆ ಹೋಗುವ ದಾರಿಯ ಮೊದಲಲ್ಲಿ
ಕೈಮರವನ್ನು ಚಿತ್ರಿಸು. 20ಅಮ್ಮೋನ್ಯರ ರಬ್ಬಾ ಪಟ್ಟಣಕ್ಕೂ ಜುದೇಯದಲ್ಲಿ ಕೋಟೆಕೊತ್ತಲಗಳಿಂದ ಕೂಡಿದ
ಜೆರುಸಲೇಮಿಗೂ ಆ ಖಡ್ಗ ಬರುವುದಕ್ಕೆ ದಾರಿಗಳನ್ನು ಮಾಡು. 21ಮಾರ್ಗ ಕವಲೊಡೆಯುವ ಸ್ಥಳದಲ್ಲಿ,
ಎರಡು ದಾರಿಗಳ ಪ್ರಾರಂಭದಲ್ಲಿ ಬಾಬಿಲೋನಿನ ಅರಸ ಶಕುನ ನೋಡಲು ನಿಂತಿರುವನು. ಬಾಣಗಳನ್ನು
ಕಲಕಿ, ವಿಗ್ರಹಗಳನ್ನು ಪ್ರಶ್ನೆ ಕೇಳಿ, ಹಸ್ತರೇಖೆಯನ್ನು ಪರೀಕ್ಷಿಸಿದ್ದಾನೆ. 22ಜೆರುಸಲೇಮ್ ಗುರುತಿನ ಬಾಣ
ಅವನ ಬಲಗೈಗೆ ಸಿಕ್ಕಿದೆ; ಭಿತ್ತಿಭೇದಕ ಯಂತ್ರಗಳನ್ನು ಪುರದ್ವಾರಗಳೆದುರಿಗೆ ನಿಲ್ಲಿಸಿ, ಬಾಯಿತೆರೆದು ಸಂಹಾರ
ಧ್ವನಿಮಾಡಿ, ಹೌದು ಭಿತ್ತಿ ಭೇದಕಯಂತ್ರಗಳನ್ನು ಪುರದ್ವಾರಗಳೆದುರಿಗೆ ನಿಲ್ಲಿಸಿ, ದಿಬ್ಬಹಾಕಿ, ಒಡ್ಡು
ಕಟ್ಟಬೇಕೆಂಬ ಸೂಚನೆ ಅದರಿಂದ ಬಂದಿತು. 23ಆದರೆ ಪುರನಿವಾಸಿಗಳು ತಾವು ಆ ಅರಸನಿಂದ
ಮಾಡಿಸಿಕೊಂಡ ಪ್ರಮಾಣಗಳಲ್ಲಿ ಭರವಸೆಯಿಟ್ಟು, ಈ ಶಕುನವು ಸುಳ್ಳೆಂದು ಭಾವಿಸುವರು; ಆದರೆ ಅವರು
ತನ್ನ ಕೈಗೆ ಸಿಕ್ಕಿ ಬೀಳಲೆಂದು ಅವರ ಅಧರ್ಮವನ್ನು ಅವನು ಬೆಳಕಿಗೆ ತರುವನು. 24ಹೀಗಿರಲು
ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – “ನಿಮ್ಮ ಅಪರಾಧಗಳು ಬೆಳಕಿಗೆ ಬಂದು, ನಿಮ್ಮ ಪಾಪಗಳು
ನಿಮ್ಮ ಕಾರ್ಯಗಳಲ್ಲೆಲ್ಲಾ ಪ್ರತ್ಯಕ್ಷವಾಗಿ, ನೀವು ನಿಮ್ಮ ಅಧರ್ಮವನ್ನು ನನ್ನ ನೆನಪಿಗೆ ತಂದಿರುವಿರಿ;
ಆದಕಾರಣ ಶತ್ರುವಿನ ಕೈಗೆ ಸಿಕ್ಕಿಬೀಳುವಿರಿ. 25ಇಸ್ರಯೇಲಿನ ದೊರೆಯೇ, ದುಷ್ಟನೇ, ಭ್ರಷ್ಟನೇ, ನಿನಗೆ
ಸಮಯವು ಸಮೀಪಿಸಿದೆ; ಇದೇ ನಿನ್ನ ಅಪರಾಧದ ಕಡೆಗಾಲ. 26ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ
– ನಿನ್ನ ರುಮಾಲನ್ನು ಕಿತ್ತುಬಿಡು, ಕಿರೀಟವನ್ನು ತೆಗೆದುಹಾಕು. ಎಲ್ಲವೂ ಮೊದಲಿದ್ದ ಹಾಗೆ ಇರುವುದಿಲ್ಲ;
ಕೆಳಗಿರುವುದನ್ನು ಮೇಲೆ ಸೇರಿಸಲಾಗುವುದು, ಮೇಲಿರುವುದನ್ನು ಕೆಳಕ್ಕಿಳಿಸಲಾಗುವುದು. 27ಧ್ವಂಸ, ಧ್ವಂಸ,
ನಾನು ಧ್ವಂಸ ಮಾಡುವೆನು; ರಾಜ್ಯಕ್ಕೆ ಬಾಧ್ಯನು ಬರುವುದರೊಳಗೆ ಒಂದೂ ಇದ್ದಂತಿರದು; ಅವನಿಗೇ
ರಾಜ್ಯವನ್ನು ವಹಿಸುವೆನು.

## ಅಮ್ಮೋನಿನ ಮೇಲೆ ಬೀಳುವ ಖಡ್ಗ

28 “ನರಪುತ್ರನೇ, ನೀನು ದೈವಸಂಕಲ್ಪವನ್ನು ಪ್ರಕಟಿಸುತ್ತಾ ಹೀಗೆ ನುಡಿ – ಅಮ್ಮೋನ್ಯರ
ವಿಷಯದಲ್ಲೂ ಅವರು ಮಾಡುವ ದೂಷಣೆಯ ವಿಷಯದಲ್ಲೂ ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ
– ಆಃಆ, ಖಡ್ಗ, ಖಡ್ಗ, ಸಂಹರಿಸುವುದಕ್ಕೆ ಹಿರಿದಿದೆ; ಮಿಂಚುವಂತೆ ಪೂರ್ಣ ಮಸೆಯಲಾಗಿದೆ.
29ಅಮ್ಮೋನೇ, ನಿನ್ನ ಜೋಯಿಸರು ಮಿಥ್ಯೆಯನ್ನು ಕಲ್ಪಿಸಿಕೊಂಡು ಸುಳ್ಳು ಸುಳ್ಳಾಗಿ ಕಣಿಹೇಳುತ್ತಿದ್ದಾರೆ.
ಸಮಯವು ಸಮೀಪಿಸಿ ಅಪರಾಧದ ಕಡೆಗಾಲವು ಸಂಭವಿಸಿ, ಹತರಾಗಿ ಬಿದ್ದಿರುವ ದುಷ್ಟರ ಗತಿಯನ್ನು
ನೋಡು; ಜೋಯಿಸರನ್ನು ನಂಬಿದ ನೀನೂ ಆ ದುಷ್ಟರ ಕತ್ತುಗಳ ಮೇಲೆ ಬೀಳುವೆ. 30ಕತ್ತಿಯನ್ನು ಒರೆಗೆ
ಸೇರಿಸು. ನೀನು ಹುಟ್ಟಿದ ಸ್ಥಳದಲ್ಲಿ, ನಿನ್ನ ಜನ್ಮಭೂಮಿಯಲ್ಲಿ, ನಿನಗೆ ನ್ಯಾಯ ತೀರಿಸುವೆನು. 31ನಿನ್ನ ಮೇಲೆ
ನನ್ನ ಕೋಪವನ್ನು ಸುರಿಸಿ, ರೋಷಾಗ್ನಿಯನ್ನು ಕಾರಿ, ಕ್ರೂರಿಗಳನ್ನು ಹಾಳುಮಾಡುವುದರಲ್ಲಿ ಗಟ್ಟಿಗರಾದವರ
ಕೈಗೆ ಸಿಕ್ಕಿಸುವೆನು. 32ನೀನು ಅಗ್ನಿಗೆ ಆಹುತಿಯಾಗುವೆ; ನಿನ್ನ ರಕ್ತ ನಾಡಿನಲ್ಲೆಲ್ಲಾ ಇಂಗಿರುವುದು; ನೀನು
ಇನ್ನು ನೆನಪಿಗೆ ಬರುವುದಿಲ್ಲ; ಸರ್ವೇಶ್ವರನಾದ ನಾನೇ ಇದನ್ನು ನುಡಿದಿದ್ದೇನೆ.”

## ಜೆರುಸಲೇಮಿನ ಘೋರ ಕೃತ್ಯಗಳು

**22** ಸರ್ವೇಶ್ವರ ಇನ್ನೊಂದು ವಾಣಿಯನ್ನು ನನಗೆ ದಯಪಾಲಿಸಿದರು – 2“ನರಪುತ್ರನೇ, ರಕ್ತಸಿಕ್ತವಾದ
ಆ ಪಟ್ಟಣಕ್ಕೆ ನ್ಯಾಯ ತೀರಿಸಲು ಸ್ಥಿರಮನಸ್ಸು ಮಾಡಿರುವೆಯಾ? ಅದರ ದುರಾಚಾರಗಳನ್ನೆಲ್ಲಾ ಅದಕ್ಕೆ ಹೀಗೆ
ತಿಳಿಸು – 3ಸರ್ವೇಶ್ವರ ದೇವರು ಇಂತೆನ್ನುತ್ತಾರೆ – ನಿನ್ನ ಮಧ್ಯೆ ರಕ್ತ ಸುರಿಸಿ, ದಂಡನೆಯ ಕಾಲವನ್ನು
ಹತ್ತಿರಕ್ಕೆ ತಂದುಕೊಂಡ ನಗರಿಯೇ, ನಿನ್ನ ಕೇಡಿಗಾಗಿಯೇ ವಿಗ್ರಹಗಳನ್ನು ಮಾಡಿಕೊಂಡು ನಿನ್ನನ್ನೆ
ಹೊಲೆಗೆಡಿಸಿಕೊಂಡ ನಗರಿಯೇ, 4ನೀನು ಸುರಿಸಿದ ರಕ್ತದಿಂದ ಅಪರಾಧಿಯಾಗಿರುವೆ; ಮಾಡಿಕೊಂಡ
ವಿಗ್ರಹಗಳಿಂದ ಅಶುದ್ಧವಾಗಿರುವೆ. ಹೀಗೆ ನಿನ್ನ ಸಮಯವನ್ನು ಹತ್ತಿರಕ್ಕೆ ತಂದುಕೊಂಡು ದಂಡನೆಯ ಕಾಲಕ್ಕೆ
ಬಂದಿರುವೆ. ಆದ ಕಾರಣ ನಿನ್ನನ್ನು ಜನಾಂಗಗಳ ದೂಷಣೆಗೂ ಸಕಲ ದೇಶಗಳ ಹಾಸ್ಯಕ್ಕೂ
ಗುರಿಮಾಡಿದ್ದೇನೆ. 5ಕುಖ್ಯಾತನಗರವೇ, ಗದ್ದಲಕ್ಕೆ ಪ್ರಸಿದ್ಧವಾದ ಪಟ್ಟಣವೇ, ಹತ್ತಿರದವರೂ ದೂರದವರೂ
ನಿನ್ನನ್ನು ಹಾಸ್ಯ ಮಾಡುವರು. 6ಇಗೋ, ಇಸ್ರಯೇಲಿನ ಅರಸರು ತಮ್ಮ ತಮ್ಮ ಶಕ್ತ್ಯಾನುಸಾರ ನಿನ್ನಲ್ಲಿ ರಕ್ತ
ಸುರಿಸುತ್ತಲೇ ಇದ್ದಾರೆ. 7ನಿನ್ನವರು ತಾಯಿತಂದೆಗಳನ್ನು ತುಚ್ಛೀಕರಿಸಿದ್ದಾರೆ, ನಿನ್ನವರು ವಿದೇಶಿಯರನ್ನು
ಬಾದಿಸಿದ್ದಾರೆ, ನಿನ್ನವರು ಅನಾಥರನ್ನೂ ವಿಧವೆಯರನ್ನೂ ಹಿಂಸಿಸಿದ್ದಾರೆ. 8ನೀನು ನನ್ನ ಪವಿತ್ರ ವಸ್ತುಗಳನ್ನು
ಅಲಕ್ಷ್ಯಮಾಡಿ, ನಾನು ನೇಮಿಸಿದ ಸಬ್ಬತ್ ದಿನಗಳನ್ನು ಅಪವಿತ್ರಗೊಳಿಸಿರುವೆ. ಚಾಡಿಕೋರರು ನಿನ್ನಲ್ಲಿ ರಕ್ತ
ಹರಿಸಿದ್ದಾರೆ; 9ನಿನ್ನವರು ಗುಡ್ಡಗಳ ಮೇಲೆ ಯಜ್ಞಶೇಷವನ್ನು ತಿಂದಿದ್ದಾರೆ; ನಿನ್ನ ಮಧ್ಯೆ ದುರಾಚಾರಗಳನ್ನು
ನಡೆಸಿದ್ದಾರೆ. 10ನಿನ್ನವರು ತಮ್ಮ ತಂದೆಯವರಿಗೆ ಮಾನಭಂಗ ಮಾಡಿದ್ದಾರೆ; ನಿನ್ನಲ್ಲಿ ಮುಟ್ಟಿನಿಂದ
ಅಶುದ್ಧಳಾದವಳನ್ನು ಕೂಡಿದ್ದಾರೆ. 11ನಿನ್ನಲ್ಲಿ ಒಬ್ಬನು ನೆರೆಯವನ ಹೆಂಡತಿಯೊಡನೆ ದುರಾಚಾರ
ನಡೆಸಿದ್ದಾನೆ; ಇನ್ನೊಬ್ಬನು ಅತ್ಯಾಚಾರಮಾಡಿ ಸೊಸೆಯನ್ನು ಕೆಡಿಸಿದ್ದಾನೆ; ಮತ್ತೊಬ್ಬನು ತನ್ನ ತಂದೆಯ
ಮಗಳೇ ಆದ ತಂಗಿಯ ಮಾನಭಂಗ ಮಾಡಿದ್ದಾನೆ.

12“ನಿನ್ನವರು ರಕ್ತ ಸುರಿಸುವುದಕ್ಕೆ ಲಂಚ ಪಡೆದಿದ್ದಾರೆ; ನಿನ್ನವರು ಸಾಲಕ್ಕೆ ಬಡ್ಡಿ ತೆಗೆದುಕೊಂಡು,
ಲಾಭಕ್ಕೆ ಹಣಕೊಟ್ಟು ತಮ್ಮ ನೆರೆಯವರನ್ನು ಬಾಧಿಸಿ, ಸುಲಿಗೆಮಾಡಿ, ನನ್ನನ್ನು ಮರೆತೇ ಬಿಟ್ಟಿದ್ದಾರೆ; ಇದು
ಸರ್ವೇಶ್ವರನಾದ ದೇವರ ನುಡಿ.

13 “ಇಗೋ, ನೀನು ದೋಚಿಕೊಂಡ ಲಾಭವನ್ನೂ ನೀನು ಸುರಿದ ರಕ್ತವನ್ನೂ ನೋಡಿ ಕೈ
ಎತ್ತಿದ್ದೇನೆ. 14ನಾನು ನಿನ್ನನ್ನು ದಂಡಿಸುವ ಕಾಲದಲ್ಲಿ ಮನಸ್ಸನ್ನು ಗಟ್ಟಿಮಾಡಿಕೊಂಡಿರುವೆಯಾ? ಕೈಗಳನ್ನು
ಬಲಪಡಿಸಿ ಕೊಂಡಿರುವೆಯಾ? ಸರ್ವೇಶ್ವರನಾದ ನಾನೇ ಇದನ್ನು ನುಡಿದಿದ್ದೇನೆ. ಅಂತೆಯೇ ನಡೆಸುತ್ತೇನೆ.
15ನಾನು ನಿನ್ನನ್ನು ಜನಾಂಗಗಳಲ್ಲಿ ಚದರಿಸಿ, ದೇಶ ವಿದೇಶಗಳಿಗೆ ತೂರಿಬಿಟ್ಟು, ನಿನ್ನ ಹೊಲಸನ್ನು

ನಿನ್ನೊಳಗಿಂದ ತೆಗೆದುಹಾಕುವೆನು. 16ಜನಾಂಗಗಳ ದೃಷ್ಟಿಯಲ್ಲಿ ನಿನ್ನಷ್ಟಕ್ಕೆ ನೀನೇ ಅಪಕೀರ್ತಿಗೆ
ಗುರಿಯಾಗುವೆ; ನಾನೇ ಸರ್ವೇಶ್ವರ ಎಂದು ಆಗ ನಿನಗೆ ಗೊತ್ತಾಗುವುದು."

### ದೇವರ ಕುಲುಮೆ

17 ಆಮೇಲೆ ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು – " 18ನರಪುತ್ರನೇ,
ಇಸ್ರಯೇಲ್ ವಂಶವೆಂಬ ಲೋಹವು ನನ್ನ ದೃಷ್ಟಿಯಲ್ಲಿ ಕಲ್ಮಷವಾಗಿದೆ; ಅದೆಲ್ಲಾ ಕುಲುಮೆಯಲ್ಲಿನ ತಾಮ್ರ,
ತವರ, ಕಬ್ಬಿಣ, ಸೀಸ; ಅದು ಕುಂದುಲೋಹ. 19ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ –
ನೀವೆಲ್ಲರು ಕಲ್ಮಷವಾಗಿರುವುದರಿಂದ ಇಗೋ, ನಿಮ್ಮನ್ನು ಜೆರುಸಲೇಮಿನ ಒಳಕ್ಕೆ ಸೇರಿಸುವೆನು. 20ಬೆಳ್ಳಿ,
ತಾಮ್ರ, ಕಬ್ಬಿಣ, ಸೀಸ, ತವರ ಇವುಗಳನ್ನು ಕುಲುಮೆಯೊಳಗೆ ಹಾಕಿ ಊದಿ, ಉರಿಹತ್ತಿಸಿ, ಕರಗಿಸುವಂತೆ
ನಾನು ನಿಮ್ಮನ್ನು ನನ್ನ ಉಗ್ರ ಕೋಪಾಗ್ನಿಯಲ್ಲಿ ಇಟ್ಟು ಕರಗಿಸುವೆನು. 21ಹೌದು, ನಾನು ನಿಮ್ಮನ್ನು ನನ್ನ
ರೋಷಾಗ್ನಿಯಲ್ಲಿ ಹಾಕಿ ಊದಲು ನೀವು ಅದರೊಳಗೆ ಕರಗಿಹೋಗುವಿರಿ. 22ಬೆಳ್ಳಿ ಕುಲುಮೆಯೊಳಗೆ
ಕರಗುವಂತೆ ನೀವು ನನ್ನ ರೋಷಾಗ್ನಿಯಲ್ಲಿ ಕರಗಿ ಬಿಡುವಿರಿ; ನಿಮ್ಮ ಮೇಲೆ ರೋಷಾಗ್ನಿಯನ್ನು ಸುರಿಸಿದ
ನಾನು ಸರ್ವೇಶ್ವರ ಎಂದು ನಿಮಗೆ ಗೊತ್ತಾಗುವುದು."

### ಇಸ್ರಯೇಲಿನ ಪ್ರಮುಖರ ಪಾಪಕೃತ್ಯಗಳು

23 ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು – "ನರಪುತ್ರನೇ, 24ಆ ನಾಡಿಗೆ
ಹೀಗೆ ಹೇಳು – ದೇವರ ಕೋಪದ ಈ ದಿನದಲ್ಲಿ ನೀನು ಶುದ್ಧಿಯಾಗದ ದೇಶ, ಮಳೆಯಿಲ್ಲದ ದೇಶ. 25ಆ
ನಾಡಿನೊಳಗೆ ಪ್ರವಾದಿಗಳು ಒಳಸಂಚು ಮಾಡಿಕೊಂಡಿದ್ದಾರೆ, ಬೇಟೆಯನ್ನು ಸೀಳುತ್ತಾ ಗರ್ಜಿಸುವ
ಸಿಂಹದಂತಿದ್ದಾರೆ. ನರಪ್ರಾಣಿಗಳನ್ನು ನುಂಗಿದ್ದಾರೆ, ಆಸ್ತಿಯನ್ನೂ ಅಮೂಲ್ಯ ವಸ್ತುಗಳನ್ನೂ
ದೋಚಿಕೊಂಡಿದ್ದಾರೆ; ದೇಶದಲ್ಲಿ ಬಹು ಮಂದಿಯನ್ನು ವಿಧವೆಯರನ್ನಾಗಿ ಮಾಡಿದ್ದಾರೆ. 26ಅಲ್ಲಿನ
ಯಾಜಕರು ನನ್ನ ವಿಧಿಗಳನ್ನು ಉಲ್ಲಂಘಿಸಿದ್ದಾರೆ, ನನ್ನ ಪರಿಶುದ್ಧ ವಸ್ತುಗಳನ್ನು ಅಪವಿತ್ರಗೊಳಿಸಿದ್ದಾರೆ;
ಮೀಸಲಾದುದಕ್ಕೂ ಮೀಸಲಲ್ಲದ್ದಕ್ಕೂ ಭೇದವೆಣಿಸಲಿಲ್ಲ. ಶುದ್ಧಾ ಶುದ್ಧ ವಿವೇಚನೆಯನ್ನು ಬೋಧಿಸಲಿಲ್ಲ;
ನಾನು ನೇಮಿಸಿದ ಸಬ್ಬತ್ ದಿನಗಳನ್ನು ಕಡೆಗಣಿಸಿದ್ದಾರೆ. ಇದರಿಂದ ನಾನು ಅವರ ಮಧ್ಯೆ ಅಪಕೀರ್ತಿಗೆ
ಗುರಿಯಾಗಿದ್ದೇನೆ. 27ಅಲ್ಲಿನ ಪ್ರಮುಖರು ಸುಲಿಗೆಗಾಗಿ ರಕ್ತ ಸುರಿಸಿ, ನರಪ್ರಾಣಿಗಳನ್ನು ಕಬಳಿಸುವ,
ಬೇಟೆಯನ್ನು ಸೀಳುವ ತೋಳಗಳಂತಿದ್ದಾರೆ. 28ಅಲ್ಲಿನ ಪ್ರವಾದಿಗಳು ಇವರಿಗಾಗಿ ಮಿಥ್ಯ ದರ್ಶನವನ್ನು
ಕಂಡು, ಸುಳ್ಳು ಕಣಿಯನ್ನು ಹೇಳಿ, ಸರ್ವೇಶ್ವರ ಮಾತಾಡದಿದ್ದರೂ 'ಸರ್ವೇಶ್ವರ ದೇವರು ಇಂತೆನ್ನುತ್ತಾರೆ'
ಎಂದು ನುಡಿಯುತ್ತಾ ಮೇಲೆ ಮೇಲೆ ಸುಣ್ಣ ಬಳಿದಿದ್ದಾರೆ. 29ಜನ ಸಾಮಾನ್ಯರೂ ಹಿಂಸಿಸಿ
ಸೂರೆಮಾಡಿದ್ದಾರೆ, ದೀನದರಿದ್ರರನ್ನು ಬಾಧಿಸಿದ್ದಾರೆ, ವಿದೇಶಿಗಳನ್ನು ಅನ್ಯಾಯವಾಗಿ ನಸುಕಿ ಬಿಟ್ಟಿದ್ದಾರೆ.
30ನಾನು ದೇಶವನ್ನು ಹಾಳುಮಾಡದಂತೆ ನನ್ನೆದುರಿಗೆ ದೇಶ ರಕ್ಷಣೆಗಾಗಿ, ಪೌಳಿಯ ಒಡಕಿನಲ್ಲಿ
ನಿಲ್ಲುವುದಕ್ಕೂ ಗೋಡೆಯನ್ನು ಗಟ್ಟಿ ಮಾಡುವುದಕ್ಕೂ ತಕ್ಕವನನ್ನು ನಾನು ಹುಡುಕಿದರೂ ಯಾರೂ ಸಿಕ್ಕಲಿಲ್ಲ.
31ಆದ ಕಾರಣ, ನಾನು ನನ್ನ ಕೋಪವನ್ನು ಅವರ ಮೇಲೆ ಸುರಿಸಿ, ನನ್ನ ರೋಷಾಗ್ನಿಯಿಂದ ಅವರನ್ನು
ಧ್ವಂಸಮಾಡಿ, ಅವರ ದುರ್ನಡತೆಯ ಹೊಣೆಯನ್ನು ಅವರ ಮೇಲೆ ಹೊರಿಸಿದ್ದೇನೆ. ಇದು ಸರ್ವೇಶ್ವರನಾದ
ದೇವರ ನುಡಿ."

### ಸೂಳೆಯರಾದ ಇಬ್ಬರು ಸಹೋದರಿಯರ ಸಾಮತಿ

**23** ಸರ್ವೇಶ್ವರ ಮತ್ತೊಂದು ವಾಣಿಯನ್ನು ನನಗೆ ದಯಪಾಲಿಸಿದರು: 2"ನರಪುತ್ರನೇ, ಒಬ್ಬ ತಾಯಿಯ
ಮಕ್ಕಳಾದ ಇಬ್ಬರು ಹೆಂಗಸರಿದ್ದರು. 3ಅವರು ಈಜಿಪ್ಟಿನಲ್ಲಿ ಸೂಳೆತನ ಮಾಡುತ್ತಿದ್ದರು. ಬಾಲ್ಯದಲ್ಲಿ
ವೇಶ್ಯೆಯರಾಗಿ ನಡೆಯುತ್ತಿದ್ದರು. ಅಲ್ಲಿನ ಪುರುಷರು ಅವರ ಸ್ತನಗಳನ್ನು ಹಿಸುಕಿದರು, ಎಳೆಯ
ತೊಟ್ಟುಗಳನ್ನು ಸವರಿಸಿದರು. 4ಹಿರಿಯಳ ಹೆಸರು ಒಹೊಲ, ಕಿರಿಯವಳ ಹೆಸರು ಒಹೊಲೀಬ. ಅವರು

ನನ್ನವರಾಗಿ ಗಂಡು ಹೆಣ್ಣು ಮಕ್ಕಳನ್ನು ಹೆತ್ತರು. ಒಹೊಲ ಸಮಾರಿಯವನ್ನೂ, ಒಹೊಲೀಬಜೆರು ಸಲೇಮನ್ನೂ ಸೂಚಿಸುವ ಹೆಸರುಗಳು. 5ಒಹೊಲಳು ನನ್ನವಳಾಗಿದ್ದರೂ ಹಾದರ ನಡೆಸಿ 6ತನ್ನ ಮಿಂಡರನ್ನು ಅಂದರೆ, ಯೋಧರು, ನೀಲಾಂಬರರು, ಅಶ್ವಾರೂಢರು, ನಾಯಕ-ಉಪನಾಯಕರು ಎಲ್ಲ ಮನೋಹರ ಯುವಕರೂ ಆದ ಅಸ್ಸೀರಿಯರನ್ನು ಮೋಹಿಸಿ ಅವರಿಗೆ 7ತನ್ನನ್ನು ಸೂಳೆಯಾಗಿ ಒಪ್ಪಿಸಿಕೊಂಡಳು; ಇವರೆಲ್ಲರು ಅಸ್ಸೀರಿಯದಲ್ಲಿನ ಗಣ್ಯವ್ಯಕ್ತಿಗಳು; ಅವಳು ಯಾರನ್ನು ಮೋಹಿಸಿದಳೋ ಅವರ ವಿಗ್ರಹಗಳಿಂದ ತನ್ನನ್ನೇ ಹೊಲಸು ಮಾಡಿಕೊಂಡಳು. 8ಅವಳು ಈಜಿಪ್ಟ್‌ನಲ್ಲಿ ಇದ್ದಂದಿನಿಂದಲೂ ತನ್ನ ಸೂಳೆತನವನ್ನು ಬಿಡಲಿಲ್ಲ; ಬಾಲ್ಯದಲ್ಲಿಯೇ ಅಲ್ಲಿಯವರು ಅವಳೊಂದಿಗೆ ಮಲಗಿ, ಅವಳ ಎಳೆಯ ತೊಟ್ಟುಗಳನ್ನು ನಸುಕಿ, ಅವಳ ಸಂಗಡ ಸೂಳೆಗಾರಿಕೆಯನ್ನು ಹೆಚ್ಚೆಚ್ಚಾಗಿ ಮಾಡಿದರು. 9ಆದಕಾರಣ ನಾನು ಅವಳನ್ನು ಅವಳ ಮಿಂಡರ ಕೈಗೆ ಅಂದರೆ, ಅವಳು ಮೋಹಿಸಿದ ಅಸ್ಸೀರಿಯರ ಕೈಗೆ ಒಪ್ಪಿಸಿದೆ. 10ಇವರು ಅವಳನ್ನು ಅವಮಾನ ಪಡಿಸಿ, ಅವಳ ಗಂಡುಹೆಣ್ಣು ಮಕ್ಕಳನ್ನು ಎತ್ತಿಕೊಂಡು ಹೋಗಿ, ಅವಳನ್ನು ಖಡ್ಗದಿಂದ ಸಂಹರಿಸಿದರು. ನ್ಯಾಯ ನಿರ್ಣಯವಾಗುವಾಗ ಹೆಂಗಸರಲ್ಲಿ ಅವಳಿಗೆ ಕೆಟ್ಟ ಹೆಸರು ಬಂದಿತು.

11 "ಅವಳ ತಂಗಿಯಾದ ಒಹೊಲೀಬಳು ಇದನ್ನು ನೋಡಿಯೂ ಅವಳಿಗಿಂತ ಅಧಿಕವಾಗಿ ಮೋಹಗೊಂಡು, ಅಕ್ಕನ ಹಾದರಕ್ಕಿಂತ ಹೆಚ್ಚಾಗಿ ಹಾದರವನ್ನು ನಡೆಸಿ ಅವಳನ್ನು ಮೀರುವಷ್ಟು ಕೆಟ್ಟವಳಾದಳು. 12ಇವಳು ನಾಯಕ-ಉಪನಾಯಕರೂ ಯೋಧರೂ ವಿಚಿತ್ರ ವಸ್ತ್ರಧಾರಿಗಳೂ ಅಶ್ವಾರೂಢರೂ ಎಲ್ಲ ಮನೋಹರ ಯುವಕರೂ ಆದ ಅಸ್ಸೀರಿಯರನ್ನು ಮೋಹಿಸಿದಳು. 13ಇವಳೂ ಅಪವಿತ್ರಳಾದುದ್ದನ್ನು ಕಂಡೆನು. ಇಬ್ಬರೂ ಒಂದೇ ಮಾರ್ಗವನ್ನು ಹಿಡಿದಿದ್ದರು.

14-15 "ಇವಳು ತನ್ನ ಸೂಳೆತನವನ್ನು ಇನ್ನೂ ಹೆಚ್ಚಿಸಿದಳು; ಬಾಬಿಲೋನಿಯರ ಚಿತ್ರಗಳನ್ನು ಅಂದರೆ, ಸೊಂಟಕ್ಕೆ ನಡುಕಟ್ಟನ್ನು ಕಟ್ಟಿ, ತಲೆಗೆ ಚುಂಗಿನ ರುಮಾಲನ್ನು ಧರಿಸಿ, ನೋಟಕ್ಕೆ ಸರದಾರರಂತಿದ್ದ ಆ ಬಾಬಿಲೋನಿನ ಕಸ್ದೀಯರ ಆಕಾರಗಳನ್ನು ಗೋಡೆಯಲ್ಲಿ ಕಿರಮಂಜಿಯಿಂದ ಚಿತ್ರಿಸಿರುವುದನ್ನು ನೋಡಿದ ಕೂಡಲೆ ಇವಳು ಮೋಹಗೊಳ್ಳುತ್ತಿದ್ದಳು. 16ಬಾಬಿಲೋನಿಯಾದ ಆ ವ್ಯಕ್ತಿಗಳ ಬಳಿಗೆ ದೂತರನ್ನು ಕಳುಹಿಸುತ್ತಿದ್ದಳು. 17ಆ ಬಾಬಿಲೋನಿನವರು ಇವಳ ರತಿಮಂಚವನ್ನೇರಿ ತಮ್ಮ ಕಾಮತೃಷೆಯಿಂದ ಇವಳನ್ನು ಕೆಡಿಸಿದರು; ಇವಳು ಅವರಿಂದ ಎಷ್ಟು ಅಶುದ್ಧಳಾದಳೆಂದರೆ ಇವಳಿಗೇ ಅವರ ಬಗ್ಗೆ ಜಿಗುಪ್ಸೆಹುಟ್ಟಿತು. 18ಇವಳು ಮುಚ್ಚುಮರೆಯಿಲ್ಲದೆ ಹಾದರಮಾಡಿ ತನ್ನ ಮಾನವನ್ನೇ ಕೆಡಿಸಿಕೊಂಡಾಗ ನನ್ನ ಅನುರಾಗ, ಮೊದಲು ಇವಳ ಅಕ್ಕನಿಂದ ದೂರವಾದ ಹಾಗೆ, ಇವಳಿಂದಲೂ ದೂರವಾಯಿತು. 19ಆದರೂ ಇವಳು ತಾನು ಈಜಿಪ್ಟ್ ದೇಶದಲ್ಲಿ ಸೂಳೆಯಾಗಿದ್ದ ತನ್ನ ತಾರುಣ್ಯವನ್ನು ನೆನಪುಮಾಡಿಕೊಂಡು ತನ್ನ ಸೂಳೆತನವನ್ನು ಇನ್ನೂ ಹೆಚ್ಚಿಸಿದಳು. 20ಕತ್ತೆಗಳಂತೆ ಬೆದೆಯುಳ್ಳವರು, ಕುದುರೆಗಳಂತೆ ದಾಟುವವರು ಆದ ಕಸ್ದೀಯ ಮಿಂಡರನ್ನು ಮೋಹಿಸಿದಳು. 21ಒಹೊಲೀಬಳೇ, ನಿನ್ನ ಪುಟ್ಟ ಮೊಲೆಗಳಿಗೆ ಆಸೆ ಬಿದ್ದ ಈಜಿಪ್ಟ್‌ರಿಂದ ತೊಟ್ಟುಗಳನ್ನು ಚಿವುಟಿಸಿಕೊಂಡ ನಿನ್ನ ತಾರುಣ್ಯದ ಕಾಮವನ್ನು ನೀನು ನೆನಪಿಗೆ ತಂದುಕೊಂಡು ಆ ಮಿಂಡರನ್ನು ಮೋಹಿಸಿದೆಯಲ್ಲವೆ?"

## ತಂಗಿಗಾದ ದೇವದಂಡನೆ

22 ಹೀಗಿರಲು, ಒಹೊಲೀಬಳೇ, ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – "ಇಗೋ, ಯಾವ ಮಿಂಡರಿಂದ ನಿನ್ನ ಆಸೆ ತೊಲಗಿತೋ ಆ ಮಿಂಡರನ್ನು ಅಂದರೆ, ಮನೋಹರ ಯುವಕರು, ಎಲ್ಲ ನಾಯಕ ಉಪನಾಯಕರು, ಪ್ರಭುಪ್ರಧಾನರು, ಅಶ್ವಾರೂಢರು ಆದ ಬಾಬಿಲೋನಿನವರು, 23ಸಮಸ್ತ ಕಸ್ದೀಯರು, ಪೆಕೋದಿನವರು, ಷೋಯದವರು, ಕೋಯದವರು, ಇವರನ್ನೂ ಇವರೊಂದಿಗೆ ಅಸ್ಸೀರಿಯರೆಲ್ಲರನ್ನೂ ನಾನು ನಿನಗೆ ವಿರುದ್ಧ ಎಬ್ಬಿಸಿ, ಎಲ್ಲ ಕಡೆಯಿಂದಲೂ ನಿನ್ನ ಮೇಲೆ ಬೀಳುವಂತೆ ಮಾಡುವೆನು. 24ಅವರು ಆಯುಧ, ರಥ, ಸರಕುಗಾಡಿ, ಜನಾಂಗಗಳ ಸಮೂಹ, ಇವುಗಳೊಂದಿಗೆ ನಿನ್ನ ಮೇಲೆ ಬೀಳುವರು; ಗುರಾಣಿ, ಖೇಡ್ಯ, ಶಿರಸ್ತ್ರಾಣ, ಇವುಗಳನ್ನು ಧರಿಸಿ, ನಿನಗೆ ವಿರುದ್ಧ ಸುತ್ತುಮುತ್ತಲು ವ್ಯೂಹ ಕಟ್ಟುವರು. ನ್ಯಾಯತೀರಿಸುವ ಅಧಿಕಾರವನ್ನು ನಾನು ಅವರಿಗೆ ಕೊಡುವೆನು; ಅವರು ತಮ್ಮ ನ್ಯಾಯಾನುಸಾರ ತೀರ್ಪು ನೀಡಿ ನಿನ್ನನ್ನು ದಂಡಿಸುವರು. 25ನಾನು ನನ್ನ ರೋಷವನ್ನು ನಿನ್ನ ಮೇಲೆ ಸುರಿಯಲು ಅವರು ನಿನ್ನಲ್ಲಿ

ಕೋಪ ತೀರಿಸಿ ಕೊಳ್ಳುವರು; ನಿನ್ನ ಮೂಗುಕಿವಿಗಳನ್ನು ಕತ್ತರಿಸಿ ಬಿಡುವರು; ನಿನ್ನಲ್ಲಿ ಉಳಿದವರು ಖಡ್ಗಕ್ಕೆ ತುತ್ತಾಗುವರು; ನಿನ್ನ ಗಂಡು ಹೆಣ್ಣು ಮಕ್ಕಳನ್ನು ಅಪಹರಿಸುವರು; ನಿನ್ನ ಜನಶೇಷವು ಅಗ್ನಿಗೆ ಆಹುತಿಯಾಗುವುದು.
26ನಿನ್ನ ವಸ್ತ್ರಗಳನ್ನು ಸೆಳೆದು, ನಿನ್ನ ಚಂದದ ಒಡವೆಗಳನ್ನು ಕಳಚಿಬಿಡುವರು.
27ಹೀಗೆ ನಾನು ನಿನ್ನ ಲಂಪಟತನವನ್ನೂ ನೀನು ಈಜಿಪ್ಟಿನಲ್ಲಿ ಇದ್ದಂದಿನಿಂದ ನಡೆದು ಬಂದ ನಿನ್ನ ಸೂಳೆತನವನ್ನೂ ನಿನ್ನಿಂದ ತೊಲಗಿಸುವೆನು. ಆಮೇಲೆ ನೀನು ಅವರ ಕಡೆಗೆ ಇನ್ನು ಕಣ್ಣೆತ್ತದೆ ಈಜಿಪ್ಟನ್ನು ನೆನಪಿಗೆ ತಂದುಕೊಳ್ಳಲಾರೆ."

28 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – "ಇಗೋ, ನೀನು ಯಾರನ್ನು ಹಗೆಮಾಡುತ್ತೀಯೋ ಯಾರ ಬಗ್ಗೆ ಅಸಹ್ಯ ಪಡುತ್ತಿಯೋ
29ಅವರ ಕೈಗೆ ನಿನ್ನನ್ನು ನಾನು ಒಪ್ಪಿಸುವೆನು. ಅವರು ನಿನ್ನಲ್ಲಿ ಹಗೆ ತೀರಿಸಿಕೊಳ್ಳುವರು. ನೀನು ದುಡಿದದ್ದನ್ನೆಲ್ಲಾ ಅಪಹರಿಸಿ, ನಿನ್ನನ್ನು ಬಟ್ಟ ಬರಿದುಮಾಡಿ ಬಿಟ್ಟುಬಿಡುವರು; ಹೀಗೆ ನಾಚಿಕೆಗೇಡಾದ ನಿನ್ನ ಹಾದರವು, ಹೌದು, ನಿನ್ನ ಲಂಪಟತನ ಹಾಗು ಸೂಳೆತನ ಬಯಲಿಗೆ ಬರುವುವು.
30ಈ ವಿಪತ್ತುಗಳು ನಿನಗೆ ಸಂಭವಿಸುವುದಕ್ಕೆ, ನೀನು ಜನಾಂಗಗಳನ್ನು ಮೋಹಿಸಿ ಅವರ ವಿಗ್ರಹಗಳಿಂದ ನಿನ್ನನ್ನೇ ಹೊಲಸುಮಾಡಿಕೊಂಡದ್ದೇ ಕಾರಣ.
31ನೀನು ನಿನ್ನ ಅಕ್ಕನ ಹಾದಿಯಲ್ಲೆ ನಡೆದುಕೊಂಡದ್ದರಿಂದ ಅವಳು ಕುಡಿದ ಪಾತ್ರೆಯನ್ನೇ ನಿನ್ನ ಕೈಗೆ ಕೊಡುವೆನು."

32 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ –
"ಆಳವೂ ಅಗಲವೂ ಬಹಳ ಹಿಡಿಯುವುದೂ
ಆದ ನಿನ್ನ ಅಕ್ಕನ ಪಾತ್ರೆಯಲ್ಲೇ
ನೀನೂ ಕುಡಿದು ಹಾಸ್ಯಕ್ಕೂ ಕುಚೋದ್ಯಕ್ಕೂ
ಗುರಿಯಾಗುವೆ.
ಸಮಾರಿಯಳೆಂಬ ನಿನ್ನ ಅಕ್ಕನು ಕುಡಿದ
ಬೆಚ್ಚುಬೆರಗಿನಾ ಕೊಡದಿಂದಲೇ
33 ನೀನೂ ಕುಡಿದು, ಕುಡಿದು ಪೂರಾ ಅಮಲೇರಿ
ದುಃಖಭರಿತಳಾಗುವೆ.
ಅದರಲ್ಲಿ ಒಂದು ತೊಟ್ಟನ್ನೂ ಉಳಿಸದೆ
ಕುಡಿಯುವೆ.
34 ಅದರ ಬೋಕಿಗಳನ್ನು ಕಚ್ಚಿ, ನೆಕ್ಕಿ, ನಿನ್ನ ಮೊಲೆಗಳನ್ನು ಬಗೆದುಕೊಳ್ಳುವೆ. ಇದು ನನ್ನ ಅಪ್ಪಣೆ ಎಂಬುದೇ ಸರ್ವೇಶ್ವರನಾದ ದೇವರ ನುಡಿ.
35ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ. 'ನೀನು ನನ್ನನ್ನು ಮರೆತು, ನನಗೆ ಬೆನ್ನು ಮಾಡಿದ್ದರಿಂದ ನಿನ್ನ ಲಂಪಟತನದ ಮತ್ತು ಸೂಳೆತನದ ಫಲವನ್ನು ಅನುಭವಿಸಬೇಕು.'

### ಸಹೋದರಿಯರಿಬ್ಬರಿಗೂ ಆದ ದೇವದಂಡನೆ

36 ಸರ್ವೇಶ್ವರ ನನಗೆ ಹೀಗೆ ಹೇಳಿದರು: "ನರಪುತ್ರನೇ, ಒಹೊಲಳಿಗೂ ಒಹೊಲೀಬಳಿಗೂ ನ್ಯಾಯ ತೀರಿಸಲು ನಿನ್ನ ಮನಸ್ಸು ಸ್ಥಿರವಾಗಿದೆಯೇ? ಹಾಗಾದರೆ ಅವರ ದುರಾಚಾರಗಳನ್ನು ಅವರಿಗೆ ತಿಳಿಸು.
37ಅವರು ವ್ಯಭಿಚಾರಿಣಿಯರು, ಅವರ ಕೈ ರಕ್ತಸಿಕ್ತವಾಗಿದೆ, ತಮ್ಮ ವಿಗ್ರಹಗಳಿಂದ ವ್ಯಭಿಚಾರ ಮಾಡಿದ್ದಾರೆ, ನನಗೆ ಹೆತ್ತ ತಮ್ಮ ಗಂಡುಮಕ್ಕಳನ್ನು ಆ ವಿಗ್ರಹಗಳಿಗೆ ಬಲಿಯಾಗಿ ಆಹುತಿಕೊಟ್ಟಿದ್ದಾರೆ.
38ಇದಲ್ಲದೆ, ನನಗೆ ಈ ಅಪರಾಧವನ್ನು ನಡೆಸಿದ್ದಾರೆ: ಆಹುತಿಕೊಟ್ಟ ದಿನದಲ್ಲೇ ನನ್ನ ಪವಿತ್ರಾಲಯವನ್ನು ಅಪವಿತ್ರಪಡಿಸಿ, ನಾನು ನೇಮಿಸಿದ ಸಬ್ಬತ್ ದಿನವನ್ನು ಅಶುದ್ಧ ಮಾಡಿದರು.
39ತಮ್ಮ ಮಕ್ಕಳನ್ನು ಕೊಂದು, ತಮ್ಮ ವಿಗ್ರಹಗಳಿಗೆ ಅರ್ಪಿಸಿದ ದಿನದಲ್ಲೇ ನನ್ನ ಪವಿತ್ರಾಲಯವನ್ನು ಸೇರಿ ಅಪವಿತ್ರಮಾಡಿದರು; ಹೌದು, ನನ್ನ ಮಂದಿರದ ನಟ್ಟನಡುವೆ ಇದನ್ನು ನಡೆಸಿದರು.

40 "ಇಷ್ಟರಲ್ಲಿ ದೂತನನ್ನು ಕಳುಹಿಸಿ ಪುರುಷರನ್ನು ದೂರದಿಂದ ಕರೆಯಿಸಿಕೊಂಡರು. ಇಗೋ, ಅವರೂ ಬಂದರು. ಎಲೌ ಹೆಂಗಸೇ, ಅವರಿಗಾಗಿ ನೀನು ಸ್ನಾನಮಾಡಿ, ಕಣ್ಣಿಗೆ ಕಾಡಿಗೆ ಹಚ್ಚಿ,
41ನಿನ್ನನ್ನು

ಆಭರಣಗಳಿಂದ ಸಿಂಗರಿಸಿಕೊಂಡು ವೈಭವದ ಮಂಚದ ಮೇಲೆ ಕೂತಿರುವೆ. ಅದರ ಮುಂದೆ ಔತಣಕ್ಕೆ
ಸಿದ್ಧವಾಗಿದ್ದ ಮೇಜಿನ ಮೇಲೆ ನನ್ನ ಧೂಪತೈಲಗಳನ್ನು ಇಟ್ಟಿರುವೆ. 42ಅಲ್ಲಿ ವಿನೋದ ಪ್ರಿಯರ ದೊಡ್ಡ
ಗುಂಪಿನವರ ಕಳಕಳವಾಯಿತು; ಅರಣ್ಯದಿಂದ ಕರೆಯಿಸಿಕೊಂಡ ಕುಡುಕರು ನಾಡಾಡಿಗರೊಂದಿಗೆ ಸೇರಿ,
ಅಸ್ಸೀರಿಯರಿಬ್ಬರ ಕೈಗೆ ಕಡಗವನ್ನು ತೊಡಿಸಿ, ಅವರ ತಲೆಗೆ ಸುಂದರ ಕಿರೀಟವನ್ನಿಟ್ಟರು. 43ಆಗ ನಾನು –
'ಅಹಾ, ಕಳೆಗುಂದಿದವಳಿಗೆ ಇನ್ನೂ ವ್ಯಭಿಚಾರವೇ! ಇವರು ಅವಳೊಂದಿಗೆ ಅವಳು ಇವರೊಂದಿಗೆ ಜಾರತನ
ಮಾಡುತ್ತಾರಲ್ಲಾ' ಎಂದುಕೊಂಡೆ. 44ಸೂಳೆಯನ್ನು ಸೇರುವ ಹಾಗೆ ಈ ಜನರು ಅವಳನ್ನು ಸೇರಿದರು;
ಹೌದು, ಕೆಟ್ಟ ಹೆಂಗಸರಾದ ಒಹೊಲಳನ್ನೂ ಒಹೊಲೀಬಳನ್ನೂ ಸೇರಿದರು. 45ಸದ್ಧರ್ಮಿಗಳು ಅವರಿಗೆ
ನ್ಯಾಯತೀರಿಸಿ ವ್ಯಭಿಚಾರಿಣಿಯರಿಗೂ ರಕ್ತಹರಿಸುವ ಹೆಂಗಸರಿಗೂ ತಕ್ಕ ದಂಡನೆಯನ್ನು ವಿಧಿಸುವರು;
ಅವರು ವ್ಯಭಿಚಾರಿಣಿಯರು, ಅವರ ಕೈ ರಕ್ತಸಿಕ್ತವಾಗಿದೆ."

46 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – "ನಾನು ಈ ಹೆಂಗಸರ ದಂಡನೆಗಾಗಿ ಸಭೆಯನ್ನು
ಸೇರಿಸುವೆನು. ಇವರನ್ನು ಸೂರೆಗೆ ಒಳಗಾಗಿಸಿ ಎಲ್ಲರಿಗೂ ಭಯಾಸ್ಪದವಾಗುವಂತೆ ಮಾಡುವೆನು.
47ಸಭೆಯವರು ಇವರ ಮೇಲೆ ಕಲ್ಲುತೂರಿ, ಕತ್ತಿಗಳಿಂದ ಸಂಹರಿಸಿ, ಇವರ ಗಂಡು ಹೆಣ್ಣು ಮಕ್ಕಳನ್ನು
ಕೊಂದು, ಇವರ ಮನೆಗಳನ್ನು ಬೆಂಕಿಯಿಂದ ಸುಟ್ಟುಬಿಡುವರು. 48ಹೀಗೆ ನಾನು ನಾಡಿನೊಳಗಿಂದ
ಲಂಪಟತನವನ್ನು ತೊಲಗಿಸುವೆನು; ಇದರಿಂದ ಸಮಸ್ತ ಮಹಿಳೆಯರಿಗೂ ನಿಮ್ಮ ಲಂಪಟತನವನ್ನೂ
ಅನುಸರಿಸಬಾರದೆಂಬ ಬುದ್ಧಿಬರುವುದು. 49ನಿಮ್ಮ ಲಂಪಟತನದ ಫಲವನ್ನು ನಿಮಗೇ ತಿನ್ನಿಸುವರು; ನಿಮ್ಮ
ವಿಗ್ರಹಗಳಿಂದಾದ ನಿಮ್ಮ ಪಾಪದ ಫಲವನ್ನು ನೀವು ಅನುಭವಿಸಿ, ನಾನೇ ಸರ್ವೇಶ್ವರನಾದ ದೇವರು ಎಂದು
ತಿಳಿದುಕೊಳ್ಳುವಿರಿ."

**ಕಿಲುಬು ಹಂಡೆಯ ಸಾಮತಿ**

**24** ಒಂಬತ್ತನೆಯ ವರ್ಷದ ಹತ್ತನೆಯ ತಿಂಗಳಿನ ಹತ್ತನೆಯ ದಿನದಲ್ಲಿ ಸರ್ವೇಶ್ವರಸ್ವಾಮಿ ಈ
ವಾಣಿಯನ್ನು ನನಗೆ ದಯಪಾಲಿಸಿದರು. 2"ನರಪುತ್ರನೇ, ಈ ದಿನದ ಇದೇ ದಿನದ ಹೆಸರನ್ನು ಬರೆದುಕೋ;
ಇದೇ ದಿನದಲ್ಲಿ ಬಾಬಿಲೋನಿನ ಅರಸನು ಜೆರುಸಲೇಮಿಗೆ ಮುತ್ತಿಗೆ ಹಾಕಿದ್ದಾನೆ. 3ಈ ದ್ರೋಹಿವಂಶಕ್ಕೆ
ದೃಷ್ಟಾಂತಕೊಟ್ಟು ಹೀಗೆ ಹೇಳು – ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ –

ಹಂಡೆಯನ್ನು ಒಲೆಯ ಮೇಲಿಡು, ಮೇಲಿಡು,
ಅದರಲ್ಲಿ ನೀರನ್ನು ಹೊಯ್ಯಿಸು;
4 ಮಾಂಸಖಂಡಗಳನ್ನು, ತೊಡೆ ಮುಂದೊಡೆ
ಮೊದಲಾದ ಒಳ್ಳೆಯ ಖಂಡಗಳನ್ನೆಲ್ಲಾ
ಅದರಲ್ಲಿ ಒಟ್ಟಿಗೆ ಹಾಕು,
ಉತ್ತಮವಾದ ಎಲುಬುಗಳನ್ನು ಅದರಲ್ಲಿ
ತುಂಬಿಸು.
5 ಹಿಂಡಿನಲ್ಲಿ ಶ್ರೇಷ್ಠವಾದುದನ್ನು ತೆಗೆದುಕೋ;
ಹಂಡೆಯ ತಳದಲ್ಲಿ ಎಲುಬುಗಳನ್ನು
ರಾಶಿಯಾಗಿ ಒಟ್ಟು;
ಚೆನ್ನಾಗಿ ಕುದಿಸು; ಹೌದು, ಎಲುಬುಗಳನ್ನು
ಅದರಲ್ಲಿ ಬೇಯಿಸು."

6 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – "ಹಾ, ರಕ್ತಮಯವಾದ ಪಟ್ಟಣವೇ, ನಿನಗೆ ಧಿಕ್ಕಾರ ! ಆ
ಹಂಡೆಯ ಕಿಲುಬು ಬಿಟ್ಟುಹೋಗದೆ ಅದರಲ್ಲೇ ಲೆಪ್ಪವಾಗಿದೆಯಲ್ಲಾ! ಮಾಂಸದ ತುಂಡುಗಳನ್ನು ಆರಿಸಿ, ಸಿಕ್ಕಿ
ಸಿಕ್ಕಿದ ಹಾಗೆ ತೆಗೆದುಬಿಡು. 7ಜೆರುಸಲೇಮ್ ನಗರ ಸುರಿಸಿದ ರಕ್ತ ಅದರಲ್ಲೇ ನಿಂತಿದೆ. ಧೂಳು
ಮುಚ್ಚೇತೆಂದು ಆ ಪಟ್ಟಣದವರು ಅದನ್ನು ನೆಲದ ಮೇಲೆ ಹೊಯ್ಯದೆ, ಬರೀ ಬಂಡೆಯ ಮೇಲೆ

ನಿಲ್ಲಿಸಿರುತ್ತಾರೆ. 8ಆ ರಕ್ತದಿಂದ ರೋಷವೆದ್ದು ಮುಯ್ಯಿಗೆ ಮುಯ್ಯಿ ತೀರಿಸಲೆಂದು, ಅದನ್ನು ನಾನು ಇಂಗಗೊಡಿಸದೆ ಬರೀ ಬಂಡೆಯ ಮೇಲೆ ನಿಲ್ಲಿಸಿದ್ದೇನೆ.

9 ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – "ಹಾ, ರಕ್ತಮಯವಾದ ಪಟ್ಟಣವೇ, ನಿನಗೆ ಧಿಕ್ಕಾರ! ನಾನೇ ಬೆಂಕಿಯನ್ನು ರಾಶಿಯಾಗಿ ಹೆಚ್ಚಿಸುವೆನು. 10ತುಂಬಾ ಸೌದೆ ಹಾಕು, ಬೆಂಕಿಯನ್ನುರಿಸು, ಮಾಂಸವನ್ನು ತೀರ ಬೇಯಿಸು, ಸಾರನ್ನು ಮಂದಮಾಡು, ಎಲುಬುಗಳು ಬೆಂದು ಹೋಗಲಿ. 11ಆಮೇಲೆ ಹಂಡೆಯು ಕಾದು ತಾಮ್ರವು ಕೆಂಪಾಗಿ, ಒಳಗಣ ಕಲ್ಮಷವು ಕರಗಿ ಕಿಲುಬು ಇಲ್ಲವಾಗುವಂತೆ, ಅದನ್ನು ಬರಿದುಮಾಡಿ ಕೆಂಡಗಳ ಮೇಲೆ ಇಡು. 12ಅದು ನನಗೆ ಕೇವಲ ಪ್ರಯಾಸವನ್ನೂ ಆಯಾಸವನ್ನೂ ಉಂಟು ಮಾಡಿದೆ; ಆದರೂ ಅದಕ್ಕೆ ಹತ್ತಿದ್ದ ಕಿಲುಬು ಹೋಗಲಿಲ್ಲ, ಬೆಂಕಿಯಿಂದಲೂ ನೀಗಲಿಲ್ಲ. 13ಅಂತೆಯೇ ನಿನ್ನ ಲಂಪಟತನ ಅಸಹ್ಯವಾಗಿರುವುದರಿಂದಲೂ ನಾನು ನಿನ್ನನ್ನು ಎಷ್ಟು ಶುದ್ಧಿ ಮಾಡಿದರೂ ನೀನು ಶುದ್ಧಿಯಾಗದೆ ಹೋದದ್ದರಿಂದಲೂ ನಾನು ನನ್ನ ರೋಷವನ್ನು ನಿನ್ನಲ್ಲಿ ಹರಿಸಿ ಶಾಂತನಾಗುವವರೆಗೂ ನೀನು ನಿನ್ನ ಕೊಳೆಯನ್ನು ಇನ್ನೂ ಕಳೆದುಕೊಳ್ಳದೆ, ಶುದ್ಧಿಯಾಗದೆ ಇರುವೆ. 14ಸರ್ವೇಶ್ವರನಾದ ನಾನೇ ಇದನ್ನು ನುಡಿದಿದ್ದೇನೆ; ಇದು ನಡೆದೇ ತೀರುವುದು, ನಾನು ನೆರವೇರಿಸುವೆನು; ಹಿಂತೆಗೆಯೆನು, ಕ್ಷಮಿಸೆನು, ಕರುಣಿಸೆನು; ನಿನ್ನ ದುರ್ಮಾರ್ಗ ದುಷ್ಕೃತ್ಯಗಳಿಗೆ ಸರಿಯಾಗಿ ನಿನಗೆ ನ್ಯಾಯ ತೀರ್ಪು ಆಗುವುದು; ಇದು ಸರ್ವೇಶ್ವರನಾದ ದೇವರ ನುಡಿ."

## ಪ್ರವಾದಿಗೆ ಪತ್ನಿವಿಯೋಗ

15 ಸರ್ವೇಶ್ವರ ಇನ್ನೊಂದು ವಾಣಿಯನ್ನು ನನಗೆ ದಯಪಾಲಿಸಿದರು – 16"ನರಪುತ್ರನೇ, ಇಗೋ, ಒಂದೇ ಏಟಿನಿಂದ ನಾನು ನಿನಗೆ ನೇತ್ರಾನಂದವಾಗಿರುವವಳನ್ನು ನಿನ್ನಿಂದ ತೆಗೆದು ಬಿಡುವೆನು. ಆದರೂ ನೀನು ಗೋಳಾಡಬೇಡ, ಅಳಬೇಡ, ಕಣ್ಣೀರು ಸುರಿಸಬೇಡ. 17ಸದ್ದಿಲ್ಲದೆ ಮೊರೆಯಿಡು, ವಿಯೋಗದುಃಖ ತೋರಿಸಬೇಡ. ರುಮಾಲನ್ನು ಸುತ್ತಿಕೊಂಡಿರು, ಕೆರಗಳನ್ನು ಮೆಟ್ಟಿಕೊಂಡಿರು, ಬಾಯನ್ನು ಬಟ್ಟೆಯಿಂದ ಮುಚ್ಚಿಕೊಳ್ಳಬೇಡ, ಗಾರಿಗೆಯನ್ನು ತಿನ್ನಬೇಡ."

18 "ಹೀಗೆ ಆಜ್ಞೆಯಾಗಲು, ನಾನು ಪ್ರಾತಃ ಕಾಲದಲ್ಲಿ ಜನರಿಗೆ ಪ್ರವಾದಿಸಿದೆನು; ಸಾಯಂಕಾಲಕ್ಕೆ ನನ್ನ ಪತ್ನಿ ತೀರಿಹೋದಳು; ಮಾರನೆಯ ಬೆಳಿಗ್ಗೆ ನನಗೆ ಅಪ್ಪಣೆಯಾದಂತೆ ನಡೆದುಕೊಂಡೆನು. 19ಜನರು, "ನೀನು ಹೀಗೆ ಮಾಡುವುದರಿಂದ ನಾವು ತಿಳಿಯತಕ್ಕದ್ದೇನು? ತಿಳಿಸುವುದಿಲ್ಲವೋ?" ಎಂದು ನನ್ನನ್ನು ಕೇಳಿದರು. 20ಅದಕ್ಕೆ ನಾನು ಹೀಗೆ ಹೇಳಿದೆ:

"ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದ್ದಾರೆ – 21ಇಸ್ರಯೇಲ್ ವಂಶದವರಿಗೆ ಹೀಗೆ ಸಾರು – ಹಾ, ನಿಮಗೆ ಮುಖ್ಯಬಲ, ನೇತ್ರಾನಂದ ಹಾಗು ಪ್ರಾಣಪ್ರಿಯ ಆದ ನನ್ನ ಪವಿತ್ರಾಲಯವನ್ನು ನಾನು ಅಪವಿತ್ರ ಮಾಡಿಸುವೆನು; ನೀವು ಬಿಟ್ಟು ಬಂದಿರುವ ನಿಮ್ಮ ಗಂಡು ಹೆಣ್ಣು ಮಕ್ಕಳು ಖಡ್ಗಕ್ಕೆ ತುತ್ತಾಗುವರು, ಎಂಬುದಾಗಿ ಸರ್ವೇಶ್ವರನಾದ ದೇವರು ನುಡಿದಿದ್ದಾರೆ. 22ನಾನು ಮಾಡಿದಂತೆ ಆಗ ನೀವೂ ಮಾಡುವಿರಿ, ಅಂದರೆ ಬಟ್ಟೆಯಿಂದ ಬಾಯನ್ನು ಮುಚ್ಚಿಕೊಳ್ಳದೆ, 23ಗಾರಿಗೆಯನ್ನು ತಿನ್ನದೆ, ರುಮಾಲನ್ನು ಸುತ್ತಿಕೊಂಡು, ಕೆರಗಳನ್ನು ಮೆಟ್ಟಿಕೊಂಡು ಇರುವಿರಿ; ನೀವು ಗೋಳಾಡುವುದಿಲ್ಲ, ಅಳುವುದಿಲ್ಲ. ಆದರೆ ನಿಮ್ಮ ಅಧರ್ಮದಿಂದ ಕ್ಷೀಣವಾಗಿ ನರಳುವಿರಿ. ಒಬ್ಬರೆದುರಿಗೆ ಒಬ್ಬರು ನರಳುವಿರಿ. 24ಈ ವಿಷಯದಲ್ಲಿ ಯೆಜೆಕಿಯೇಲನು ನಿಮಗೆ ಮುಂಗುರುತಾಗಿರುವನು. ಅವನು ಮಾಡಿದಂತೆಯೇ ಎಲ್ಲವನ್ನು ಮಾಡುವಿರಿ; ಇದು ಸಂಭವಿಸುವಾಗ ನಾನೇ ಸರ್ವೇಶ್ವರನಾದ ದೇವರು ಎಂದು ನಿಮಗೆ ಗೊತ್ತಾಗುವುದು.

25 "ನರಪುತ್ರನೇ, ಅವರಿಗೆ ಬಲಾಧಾರವೂ ನೇತ್ರಾನಂದವೂ ಆದ ಅವರ ಇಷ್ಟು ಸುಂದರ ಆಲಯವನ್ನೂ ಹೃದಯೋಲ್ಲಾಸವಾದ ಅವರ ಗಂಡುಹೆಣ್ಣು ಮಕ್ಕಳನ್ನೂ ನಾನು ನಿರ್ಮೂಲ ಮಾಡುವ ದಿನದಲ್ಲಿ 26ತಪ್ಪಿಸಿಕೊಂಡವನು ನಿನ್ನ ಬಳಿಗೆ ಬಂದೇ ಬರುವನು. ನಡೆದ ಸಂಗತಿಯನ್ನು ನೀನು ಕಿವಿಯಾರೆ ಕೇಳುವಂತೆ ನಿನಗೆ ತಿಳಿಸುವನು. 27ಆ ದಿನದಲ್ಲಿ ತಪ್ಪಿಸಿಕೊಂಡವನಿಗಾಗಿ ನೀನು ಬಾಯಿಬಿಡುವೆ, ನಿನ್ನ ಮೂಕತನವನ್ನು ಕಳೆದುಕೊಂಡು ಮಾತಾಡುವೆ; ಹೀಗೆ ನೀನು ಅವರಿಗೆ ಗುರುತಾಗುವೆ. ನಾನೇ ಸರ್ವೇಶ್ವರ ಎಂದು ಅವರಿಗೆ ಗೊತ್ತಾಗುವುದು."

## ಅಮ್ಮೋನ ವಿರುದ್ಧ ದೈವೋಕ್ತಿ

**25** ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು – 2“ನರಪುತ್ರನೇ, ನೀನು ಅಮ್ಮೋನಿಗೆ
ಅಭಿಮುಖವಾಗಿ ಅದನ್ನು ಕುರಿತ ದೈವಸಂಕಲ್ಪವನ್ನು ಪ್ರಕಟಿಸುತ್ತಾ ಅದಕ್ಕೆ ಹೀಗೆ ನುಡಿ: 3ಸರ್ವೇಶ್ವರನಾದ
ದೇವರ ವಾಕ್ಯವನ್ನು ಕೇಳು – ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಅಮ್ಮೋನೇ, ನನ್ನ
ಪವಿತ್ರಾಲಯವು ಅಪವಿತ್ರವಾದುದ್ದನ್ನು, ಇಸ್ರಯೇಲ್ ನಾಡು ಪಾಳುಬಿದ್ದುದನ್ನು, ಯೆಹೂದ್ಯ ವಂಶದವರು
ಗಡೀಪಾರಾದುದನ್ನು ನೋಡಿ ನೀನು ಹಿರಿಹಿರಿ ಹಿಗ್ಗಿಹೋದೆ. 4ಆದುದರಿಂದ ಇಗೋ, ನಾನು ನಿನ್ನನ್ನು
ಮೂಡಣದವರ ವಶವಾಗುವಂತೆ ಮಾಡುವೆನು; ಅವರು ನಿನ್ನಲ್ಲಿ ತಮ್ಮ ಗುಡಾರಗಳನ್ನು ಹಾಕಿ ಪಾಳೆಯ
ಮಾಡಿಕೊಳ್ಳುವರು; ನಿನ್ನ ಹಣ್ಣನ್ನು ತಿನ್ನುವರು; ನಿನ್ನ ಹಾಲನ್ನು ಕುಡಿಯುವರು, 5ನಾನು ರಬ್ಬಾಪಟ್ಟಣವನ್ನು
ಒಂಟೆಗಳಿಗೆ ಲಾಯವನ್ನಾಗಿ ಹಾಗೂ ಅಮ್ಮೋನ್ ಸೀಮೆಯನ್ನು ಹಿಂಡುಗಳಿಗೆ ರೊಪ್ಪವನ್ನಾಗಿ ಮಾಡುವೆನು;
ನಾನೇ ಸರ್ವೇಶ್ವರ ಎಂದು ನಿಮಗೆ ಗೊತ್ತಾಗುವುದು.

6 “ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನೀನು ಚಪ್ಪಾಳೆ ಹೊಡೆದು, ಕಾಲಿನಿಂದ ನೆಲವನ್ನು
ಒದೆದು, ಇಸ್ರಯೇಲ್ ನಾಡನ್ನು ಮನಃಪೂರ್ವಕವಾಗಿ ತಿರಸ್ಕರಿಸಿ, ಅದಕ್ಕೆ ಬಂದ ಗತಿಗೆ ಹಿಗ್ಗಿಕೊಂಡೆ.
7ಆದುದರಿಂದ ಇಗೋ, ನಾನು ನಿನ್ನ ಮೇಲೆ ಕೈಯೆತ್ತಿ ಸುಲಿಗೆಗಾಗಿ ನಿನ್ನನ್ನು ಮ್ಲೇಚ್ಛರಿಗೆ ವಶಪಡಿಸುವೆನು.
ಜನಾಂಗಗಳಿಂದ ಕಿತ್ತು, ದೇಶಗಳಿಂದ ನಿನ್ನ ಹೆಸರನ್ನು ಅಳಿಸಿ ನಿನ್ನನ್ನು ಹಾಳುಮಾಡುವೆನು; ಆಗ ನಾನೇ
ಸರ್ವೇಶ್ವರ ಎಂದು ನಿನಗೆ ಗೊತ್ತಾಗುವುದು”

## ಮೋವಾಬ್ ವಿರುದ್ಧ ದೈವೋಕ್ತಿ

8 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: – “ಆಹಾ, ಯೆಹೂದವಂಶ ಎಲ್ಲಾ ಜನಾಂಗಗಳ
ಹಾಗೆಯೇ ಇದೆ, ವಿಶೇಷವೇನು ಎಂದು ಮೋವಾಬ ಹಾಗೂ ಸೇಯೀರ ಹೇಳಿಕೊಂಡರು. 9ಆದುದರಿಂದ
ಇಗೋ, ದೇಶಭೂಷಣಗಳಾದ ಮೋವಾಬಿನ ಗಡಿಯ ಪಟ್ಟಣಗಳು, ಅಂದರೆ ಬೇತ್‍ಯೆಷೀಮೋತ್,
ಬಾಳ್‍ಮೆಯೋನ, ಕಿರ್ಯಾಥಯಿಮ್ ಎಂಬ ಪಟ್ಟಣಗಳು, ಇರುವ ಕಡೆಯಲ್ಲಿ ನಾನು ಮೋವಾಬಿನ
ಮೇರೆಯನ್ನು ಒಡೆದುಬಿಡುವೆನು. 10ಆ ಸೀಮೆಯನ್ನಲ್ಲದೆ, ಅಮ್ಮೋನನ್ನೂ ಮೂಡಣದವರಿಗೆ ಬಾಧ್ಯವಾಗಿ
ಕೊಟ್ಟು, ಅಮ್ಮೋನ್ಯರು ಜನಾಂಗಗಳೊಳಗೆ ನಿರ್ನಾಮವಾಗಬೇಕೆಂಬ ನನ್ನ ಸಂಕಲ್ಪವನ್ನು ನೆರವೇರಿಸುವೆನು;
11ಮೋವಾಬ್ಯರಿಗೂ ದಂಡನೆಗಳನ್ನು ವಿಧಿಸದೆ ಬಿಡೆನು. ಆಗ ನಾನೇ ಸರ್ವೇಶ್ವರ ಎಂದು ಅವರಿಗೆ
ಗೊತ್ತಾಗುವುದು.”

## ಎದೋಮ್ ವಿರುದ್ಧ ದೈವೋಕ್ತಿ

12 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ:–“ಎದೋಮ್ ಯೆಹೂದವಂಶಕ್ಕೆ
ಪ್ರತೀಕಾರಮಾಡಿದೆ; ಮುಯ್ಯಿಗೆ ಮುಯ್ಯಿ ತೀರಿಸಿ ಮಹಾಪರಾಧವನ್ನು ನಡೆಸಿದೆ; 13ಹೀಗಿರಲು
ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನಾನು ಎದೋಮಿನ ಮೇಲೆ ಕೈಯೆತ್ತಿ, ಅದರೊಳಗಿಂದ
ಜನರನ್ನೂ ಪಶುಗಳನ್ನೂ ನಿರ್ಮೂಲಪಡಿಸಿ, ತೇಮೊನಿನಿಂದ ದೆದಾನಿನವರೆಗೂ ಅದನ್ನು ಹಾಳುಮಾಡಿ,
ಪ್ರಜೆಗಳನ್ನು ಖಡ್ಗಕ್ಕೆ ಸಿಕ್ಕಿಸುವೆನು. 14ನಾನು ಎದೋಮಿಗೆ ನನ್ನ ಜನರಾದ ಇಸ್ರಯೇಲರ ಕೈಯಿಂದ
ಮುಯ್ಯಿತೀರಿಸುವೆನು; ಅವರು ನನ್ನ ಕೋಪರೋಷಗಳಿಗೆ ತಕ್ಕ ಹಾಗೆ ಅದಕ್ಕೆ ಮಾಡುವರು; ನನ್ನ
ಪ್ರತೀಕಾರವು ಎದೋಮಿನ ಅನುಭವಕ್ಕೆ ಬರುವುದು; ಇದು ಸರ್ವೇಶ್ವರನಾದ ದೇವರ ನುಡಿ.”

## ಫಿಲಿಷ್ಟಿಯರ ವಿರುದ್ಧ ದೈವೋಕ್ತಿ

15 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: “ಫಿಲಿಷ್ಟಿಯರು ಜುದೇಯಕ್ಕೆ ಪ್ರತೀಕಾರ ಮಾಡಿದ್ದಾರೆ;
ಹೌದು, ಮುಯ್ಯಿಗೆ ಮುಯ್ಯಿ ತೀರಿಸುತ್ತಾ, ಅದನ್ನು ಮನಃಪೂರ್ವಕವಾಗಿ ತಿರಸ್ಕರಿಸಿ, ದೀರ್ಘದ್ವೇಷದಿಂದ

ಹಾಳುಮಾಡಿದ್ದಾರೆ; 16ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಇಗೋ, ನಾನು ಫಿಲಿಷ್ಟಿಯರ ಮೇಲೆ ಕೈಯೆತ್ತುವೆನು; ಕೆರೇತಿಯರನ್ನು ಕತ್ತರಿಸಿಬಿಟ್ಟು, ಸಮುದ್ರತೀರದಲ್ಲಿನ ಜನಶೇಷವನ್ನು ನಿಶ್ಶೇಷಮಾಡುವೆನು; 17ಅವರೆಲ್ಲರನ್ನು ಬಹಳವಾಗಿ ಖಂಡಿಸಿ ಮುಯ್ಯಿಗೆ ಮುಯ್ಯಿ ತೀರಿಸುವೆನು; ಹೀಗೆ ಪ್ರತೀಕಾರಮಾಡುವೆನು, ನಾನೇ ಸರ್ವೇಶ್ವರ ಎಂದು ಅವರಿಗೆ ಗೊತ್ತಾಗುವುದು."

## ಟೈರ್ ನಗರದ ವಿರುದ್ಧ ದೈವೋಕ್ತಿ

**26** ಹನ್ನೊಂದನೆಯ ವರ್ಷದ ಒಂದನೆಯ ತಿಂಗಳಿನ ಮೊದಲನೆಯ ದಿನದಲ್ಲಿ ಸರ್ವೇಶ್ವರ ಈ ವಾಣಿಯನ್ನು ದಯಪಾಲಿಸಿದರು: 2"ನರಪುತ್ರನೇ, ಜೆರುಸಲೇಮಿನ ವಿಷಯವಾಗಿ ಟೈರ್ ನಗರವು 'ಅಹಹ, ಜನಾಂಗಗಳಿಗೆ ಅಡ್ಡಿಯಾಗಿದ್ದ ಬಾಗಿಲು ಮುರಿದುಹೋಗಿದೆ, ನನ್ನ ಕಡೆಗೆ ತೆರೆದುಬಿದ್ದಿದೆ; ಜೆರುಸಲೇಮ್ ಹಾಳಾದ ಕಾರಣ ನಾನು ವೃದ್ಧಿಗೊಳ್ಳುವೆನು' ಎಂದುಕೊಂಡಿತು."

3 ಆದುದರಿಂದ ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಟೈರೇ, ಇಗೋ ನಿನಗೆ ವಿರುದ್ಧವಾಗಿದ್ದೇನೆ; ಸಮುದ್ರವು ತೆರೆಗಳನ್ನು ಎಬ್ಬಿಸುವಂತೆ ನಾನು ಬಹುಜನಾಂಗಗಳನ್ನು ನಿನ್ನ ವಿರುದ್ಧ ಎಬ್ಬಿಸುವೆನು. 4ಅವು ಟೈರಿನ ಪೌಳಿಗೋಡೆಯನ್ನು ಉರುಳಿಸಿ, ಅದರ ಕೊತ್ತಲಗಳನ್ನು ಕೆಡವಿ ಹಾಕುವುವು; ನಾನು ಅದರ ಮಣ್ಣನ್ನು ಕೆರೆದು, ಅದನ್ನು ಬೋಳುಬಂಡೆಯಾಗಿ ಮಾಡುವೆನು; 5ಅದು ಸಮುದ್ರದ ನಡುವೆ ಬಲೆಗಳಿಗೆ ಹಾಸುಬಂಡೆಯಾಗುವುದು; ನಾನೇ ಇದನ್ನು ನುಡಿದಿದ್ದೇನೆ; ಎಂದು ಸರ್ವೇಶ್ವರನಾದ ದೇವರು ಎನ್ನುತ್ತಾರೆ; ಅದು ಜನಾಂಗಗಳಿಗೆ ಸೂರೆಯಾಗುವುದು; 6ಬಯಲು ಭೂಮಿಯಲ್ಲಿನ ಅವರ ಕುವರಿಯರು ಖಡ್ಗದಿಂದ ಹತರಾಗುವರು; ನಾನೇ ಸರ್ವೇಶ್ವರ ಎಂದು ಎಲ್ಲರಿಗೂ ಗೊತ್ತಾಗುವುದು."

7 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಇಗೋ, ರಾಜಾಧಿರಾಜನೂ ಬಾಬಿಲೋನಿನ ಅರಸನೂ ಆದ ನೆಬೂಕದ್ನೆಚ್ಚರನನ್ನು, ಅಶ್ವ, ರಥ, ರಾಹುತ, ಬಹುಸೈನ್ಯ ಪರಿವಾರ ಇವುಗಳಿಂದ ಕೂಡಿದವನಾಗಿ, ನಾನು ಉತ್ತರದಿಂದ ಟೈರಿನ ಮೇಲೆ ಬರಮಾಡುವೆನು. 8ಅವನು ಬಯಲು ಭೂಮಿಯಲ್ಲಿ ನಿನ್ನ ಕುವರಿಯರನ್ನು ಖಡ್ಗದಿಂದ ಹತಿಸಿ, ನಿನಗೆ ವಿರುದ್ಧ ಒಡ್ಡು ಕಟ್ಟಿ, ದಿಬ್ಬ ಹಾಕಿ, ಗುರಾಣಿಯೆತ್ತಿರುವವರನ್ನು ಕಳುಹಿಸಿ, 9ತನ್ನ ಭಿತ್ತಿಭೇದಕ ಯಂತ್ರಗಳಿಂದ ನಿನ್ನ ಪೌಳಿಗೋಡೆಯನ್ನು ಹೊಡೆಯಿಸಿ, ತನ್ನ ಆಯುಧಗಳಿಂದ ನಿನ್ನ ಕೊತ್ತಲಗಳನ್ನು ಒಡೆದುಬಿಡುವನು. 10ಅವನ ಲೆಕ್ಕವಿಲ್ಲದ ಕುದುರೆಗಳಿಂದೆದ್ದ ಧೂಳು ನಿನ್ನನ್ನು ಮುಸುಕುವುದು; ಒಡಕು ಬಿದ್ದ ಕೋಟೆಯೊಳಗೆ ಶತ್ರು ನುಗ್ಗುವ ಪ್ರಕಾರ ಅವನು ನಿನ್ನ ಬಾಗಿಲುಗಳೊಳಗೆ ನುಗ್ಗುವಾಗ ರಾಹುತ, ಸರಕುಗಾಡಿ, ರಥ, ಇವುಗಳ ಶಬ್ದಕ್ಕೆ ನಿನ್ನ ಗೋಡೆಗಳು ಅದರುವುವು. 11ಅವನು ತನ್ನ ಕುದುರೆಗಳ ಗೊರಸುಗಳಿಂದ ನಿನ್ನ ಬೀದಿಗಳನ್ನು ತುಳಿಸಿ ಖಡ್ಗದಿಂದ ನಿನ್ನ ಜನರನ್ನು ಸಂಹರಿಸಿ, ನಿನ್ನ ಬಲವಾದ ಕಲ್ಲು ಕಂಬಗಳನ್ನು ಕೆಡಹುವನು. 12ಅವನ ಸಬನಿಕರು ನಿನ್ನ ಆಸ್ತಿಯನ್ನು ಸುಲಿದುಕೊಂಡು, ನಿನ್ನ ಸರಕುಗಳನ್ನು ಕೊಳ್ಳೆಹೊಡೆದು, ನಿನ್ನ ಗೋಡೆಗಳನ್ನು ಉರುಳಿಸಿ, ನಿನ್ನ ವಿನೋದ ಭವನಗಳನ್ನು ಕೆಡವಿ, ನಿನ್ನ ಕಲ್ಲುಮರಮಣ್ಣುಗಳನ್ನು ಸಮುದ್ರದ ಪಾಲು ಮಾಡುವರು. 13ನಾನು ನಿನ್ನ ಸಂಗೀತಗಳ ಧ್ವನಿಯನ್ನು ನಿಲ್ಲಿಸಿಬಿಡುವೆನು; ನಿನ್ನ ಕಿನ್ನರಿಗಳ ನುಡಿ ಇನ್ನು ಕೇಳಿಸದು. 14ನಾನು ನಿನ್ನನ್ನು ಬೋಳುಬಂಡೆ ಮಾಡುವೆನು; ನೀನು ಬಲೆಗಳಿಗೆ ಹಾಸುಬಂಡೆಯಾಗುವೆ; ಇನ್ನು ನೀನು ಪುನಃ ನಿರ್ಮಾಣ ಹೊಂದಲಾರೆ; ಸರ್ವೇಶ್ವರನಾದ ನಾನು ಅಪ್ಪಣೆ ಕೊಟ್ಟಿದ್ದೇನೆ; ಇದು ಸರ್ವೇಶ್ವರನಾದ ದೇವರ ನುಡಿ."

15 ಸರ್ವೇಶ್ವರನಾದ ದೇವರು ಟೈರ್ ನಗರಕ್ಕೆ ಹೀಗೆ ಹೇಳುತ್ತಾರೆ–"ನಿನ್ನ ಮಧ್ಯದಲ್ಲಿ ಕಗ್ಗೊಲೆಯುಂಟಾಗಿ, ಗಾಯಗೊಂಡವರು ನರಳುತ್ತಿರಲು, ನೀನು ಧಡಮ್ಮನೆ ಬೀಳುವ ಶಬ್ದಕ್ಕೆ ದ್ವೀಪಗಳು ಅದರುವವಲ್ಲವೆ? 16ಆಗ ಸಮುದ್ರದ ಸುತ್ತುಮುತ್ತಲಿನ ಎಲ್ಲ ಒಡೆಯರು ತಮ್ಮ ಸಿಂಹಾಸನಗಳಿಂದಿಳಿದು, ನಿಲುವಂಗಿಗಳನ್ನು ತೆಗೆದುಹಾಕಿ, ಕಸೂತಿ ವಸ್ತ್ರಗಳನ್ನು ಕಿತ್ತೆಸೆದು, ತತ್ತರವನ್ನೇ ಹೊದ್ದುಕೊಂಡು, ನೆಲದ ಮೇಲೆ ಕುಕ್ಕರಿಸಿ, ಕ್ಷಣ ಕ್ಷಣವೂ ನಡುಗುತ್ತಾ ನಿನಗೆ ಬೆಚ್ಚಿಬೆರಗಾಗುವರು.

17 “ಇವರು ನಿನ್ನ ಕುರಿತು, ‘ನಾವಿಕರ ನಿವಾಸವೇ, ಹೆಸರುವಾಸಿಯ ನಗರಿಯೇ, ಸಮುದ್ರದಿಂದ
ಬಲಗೊಂಡ ಪಟ್ಟಣವೇ, ನೀನು ತೀರಾ ಹಾಳಾಗಿರುವೆ. ಸಮುದ್ರಸಂಚಾರಿಗಳಿಗೆಲ್ಲಾ ಭಯಾಸ್ಪದರಾಗಿದ್ದ ನಿನ್ನ
ನಿವಾಸಿಗಳು ತೀರಾ ಹಾಳಾದರು. 18ಆ ನಿನ್ನ ಪತನ ದಿನದಲ್ಲಿ ಕರಾವಳಿಯು ನಡುಗುತ್ತದೆ; ನೀನು ಅಳಿದು
ಹೋದುದಕ್ಕೆ ಸಮುದ್ರದ್ವೀಪಗಳು ತತ್ತರಿಸುತ್ತವೆ’ ಎಂಬ ಶೋಕಗೀತೆಯನ್ನೆತ್ತುವರು.”
19 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ:– “ನಾನು ನಿನ್ನನ್ನು ಹಾಳೂರು ಮಾಡಿ, ನಿರ್ಜನ
ಪಟ್ಟಣಗಳ ಗತಿಗೆ ತಂದು, ನೀನು ಜಲರಾಶಿಯಲ್ಲಿ ಮುಣುಗಿ ಹೋಗುವಂತೆ ನಿನ್ನ ಮೇಲೆ
ಮಹಾಸಾಗರವನ್ನು ಉಕ್ಕಿಸುವೆನು. 20ಆಗ ಪುರಾತನ ಕಾಲದಲ್ಲಿ ಹಾಳಾದ ಪಟ್ಟಣಗಳಂತೆ, ನಿನ್ನನ್ನು
ಅಧೋಲೋಕಕ್ಕೆ ತಳ್ಳಿ, ಪಾತಾಳಕ್ಕೆ ಇಳಿದ ಪೂರ್ವಕಾಲದವರೊಂದಿಗೆ ವಾಸಿಸಮಾಡುವೆನು; ಹೌದು, ನೀನು
ನಿನ್ನ ಮಹಿಮೆಯನ್ನು ಜೀವಲೋಕದಲ್ಲಿ ನೆಲೆಗೊಳಿಸದೆ, ನಿರ್ನಿವಾಸಿಯಾಗುವಂತೆ, ನಿನ್ನನ್ನು ಪಾತಾಳಕ್ಕೆ
ಇಳಿದವರ ಸಹವಾಸದಲ್ಲೇ ಸೇರಿಸುವೆನು. 21ನಿನ್ನನ್ನು ಪೂರ್ತಿಯಾಗಿ ಧ್ವಂಸಮಾಡುವೆನು; ನೀನು
ಇಲ್ಲವಾಗುವೆ; ಎಷ್ಟು ಹುಡುಕಿದರೂ ನೀನು ಎಂದಿಗೂ ಸಿಕ್ಕುವುದಿಲ್ಲ; ಇದು ಸರ್ವೇಶ್ವರನಾದ ದೇವರ
ನುಡಿ.”

### ವ್ಯಾಪಾರದ ನಾವೆಯಂತಿದ್ದ ಟೈರ್ ನಗರದ ಶೋಕಗೀತೆ

**27** ಸರ್ವೇಶ್ವರಸ್ವಾಮಿ ನನಗೆ ಅನುಗ್ರಹಿಸಿದ ಮತ್ತೊಂದು ವಾಣಿ: 2 “ನರಪುತ್ರನೇ, ಟೈರ್‌ನಗರ ಕುರಿತ
ಶೋಕಗೀತೆಯೊಂದನ್ನು ಹಾಡಿ, ಹೀಗೆಂದು ಹೇಳು: 3ಸಮುದ್ರ ದ್ವಾರದಲ್ಲಿ ವಾಸಿಸುವ ನಗರಿಯೇ,
ರಾಷ್ಟ್ರಗಳಿಗೂ ಹಲವಾರು ದ್ವೀಪಗಳಿಗೂ ನಡುವೆ ವ್ಯಾಪಾರ ನಡೆಸುವವಳೇ, ಸರ್ವೇಶ್ವರನಾದ ದೇವರು
ಹೇಳುವುದನ್ನು ಕೇಳು:

“ಟೈರ್ ನಗರಿಯೇ, ‘ನಾನೋರ್ವ ನಾವೆ,’
‘ಸರ್ವಾಂಗ ಸುಂದರಿ ನಾನಾಗಿರುವೆ,’
ಎಂದು ಕೊಚ್ಚಿಕೊಂಡೆಯಲ್ಲವೆ?
4 ನಿನ್ನ ನೆಲೆಯಿರುವುದು ಸಮುದ್ರಗಳ ನಡುವೆ
ನಿನ್ನ ನಿರ್ಮಿಸಿಹರು ಸರ್ವಾಂಗ
ಸುಂದರಿಯಾಗಿಯೇ !
5 ನಿನ್ನ ಪಕ್ಕಗಳ ಮಾಡಿಹರು ಸೆನೀರಿನ
ತುರಾಯಿ ಹಲಗೆಗಳಿಂದ
ನಿನ್ನ ಸ್ತಂಭ ರಚಿಸಿಹರು ಲೆಬನೋನಿನ
ದೇವದಾರು ಮರಗಳಿಂದ.
6 ನಿನ್ನ ಹುಟ್ಟುಗಳು ರೂಪಿಸಲಾಗಿವೆ
ಬಾಷಾನಿನ ಅಲ್ಲೋನ್ ಮರದಿಂದ
ನಿನ್ನ ಮೇಲ್ಮಾಳಿಗೆ ಕಟ್ಟಲಾಗಿದೆ
ಕಿತ್ತೀಮ್ ದ್ವೀಪದ ತಿಲಕ ಹಲಗೆಯಿಂದ,
ಕೆತ್ತಲಾಗಿದೆ ದಂತದಿಂದ.
7 ನಿನ್ನ ಹಾಯಿ ನಿನಗೆ ಧ್ವಜವಾಗಲೆಂದೆ
ಮಾಡಿಹರು ಈಜಿಪ್ಟಿನ ಕಸೂತಿಯ
ನಾರುಮಡಿಯಿಂದ.
ನಿನ್ನ ಮೇಲ್ಕಟ್ಟು ಚಿತ್ರಿತವಾಗಿದೆ
ಎಲೀಷ ಕರಾವಳಿಯ ಊದಾ
ಕಡುಗೆಂಪುಗಳಿಂದ.

8 ನಿನಗೆ ಹುಟ್ಟು ಹಾಕುವರು ಸಿದೋನಿನವರು,
ಅರ್ವಾದಿನವರು.
ಟೈರ್ ನಗರಿಯೇ, ನಿನ್ನಲ್ಲಿನ ವಿವೇಕಿಗಳೇ ನಿನ್ನ
ನಾವಿಕರು.
9 ನಿನ್ನ ಕಂಡಿಗಳ ಭದ್ರಪಡಿಸಿಹರು, ನಿನ್ನಲ್ಲಿ ಸೇರಿದ್ದ
ಗೆಬಲಿನ ಜಾಣರು, ಹಿರಿಯರು.
ನಿನಗೆ ಸರಕುಗಳ ತಂದೊಪ್ಪಿಸುತ್ತಿದ್ದರು ಸಕಲ
ನಾವೆಗಳು, ಸಕಲನಾವಿಕರು.

10 "ಪಾರಸಿಯರೂ ಲೂದ್ಯರೂ ಪೂಟ್ಯರೂ ನಿನ್ನ ಸೈನ್ಯದ ಭಟರಾಗಿದ್ದರು. ಖೇಡ್ಯ ಶಿರಸ್ತ್ರಾಣಗಳನ್ನು
ನಿನ್ನಲ್ಲಿ ನೇತುಹಾಕಿ ನಿನ್ನನ್ನು ಭೂಷಿಸುತ್ತಿದ್ದರು. 11ಅರ್ವಾದಿನವರೂ ನಿನ್ನ ಸೈನಿಕರೂ ಸುತ್ತುಮುತ್ತಲು ನಿನ್ನ
ತೆನೆಗೋಡೆಗಳಲ್ಲಿ ನಿಂತಿದ್ದರು; ಗಮ್ಮಾದ್ಯರು ನಿನ್ನ ಕೊತ್ತಲಗಳಲ್ಲಿ ಕಾವಲಾಗಿದ್ದರು; ಎಲ್ಲರು ತಮ್ಮ
ಖೇಡ್ಯಗಳನ್ನು ಸುತ್ತಮುತ್ತಲು ನಿನ್ನ ಗೋಡೆಗಳಿಗೆ ನೇತುಹಾಕಿ ನಿನ್ನ ಸೌಂದರ್ಯವನ್ನು ಪರಿಪೂರ್ಣ
ಗೊಳಿಸಿದ್ದರು. 12ಅಪಾರವಾದ ಬಗೆಬಗೆಯ ಆಸ್ತಿಯು ನಿನಗೆ ಬೇಕಾಗಿತ್ತು. ಆದುದರಿಂದ ತಾರ್ಷೀಷಿನವರು
ಹಾಗೂ ಸೀಸಗಳನ್ನು ನಿನಗೆ ಒದಗಿಸುತ್ತಿದ್ದರು. 13ಯಾವಾನಿನವರು, ತೂಬಲಿನವರು ಮತ್ತು ಮೆಷೆಕಿನವರು
ನಿನ್ನ ಪರವಾಗಿ ವ್ಯಾಪಾರಮಾಡಿ ನರಪ್ರಾಣಿಗಳನ್ನು ಹಾಗು ತಾಮ್ರದ ಪಾತ್ರೆಗಳನ್ನು ನಿನಗೆ ಸರಬರಾಜು
ಮಾಡುತ್ತಿದ್ದರು; 14ತೋಗರ್ಮ ವಂಶದವರು ಕುದುರೆ, ಜಾತಿಯ ಕುದುರೆ, ಹೇಸರಗತ್ತೆ, ಇವುಗಳನ್ನು
ನಿನಗಾಗಿ ತರುತ್ತಿದ್ದರು. 15ದೆದಾನಿನವರು ನಿನ್ನ ವರ್ತಕರಾಗಿದ್ದರು; ಬಹು ದ್ವೀಪಗಳ ಉತ್ಪತ್ತಿ ನಿನ್ನ ಕೈಗೆ
ಸೇರಿತ್ತು. ಗಜದಂತಗಳನ್ನೂ, ಕರೀಮರವನ್ನೂ ನಿನಗೆ ಕಪ್ಪವಾಗಿ ಸಲ್ಲಿಸುತ್ತಿದ್ದರು. 16ಕೈಕೆಲಸದ ವಸ್ತುಗಳು
ನಿನಗೆ ಅಪಾರವಾಗಿದ್ದವು; ಆದುದರಿಂದ ಅರಾಮಿನವರೂ ನಿನ್ನವರಾಗಿ ವ್ಯಾಪಾರಮಾಡಿ ಕೆಂಪರಲು,
ರಕ್ತಾಂಬರ, ಕಸೂತಿಯ ವಸ್ತ್ರ, ನಾರುಮಡಿ, ಹವಳ, ಮಾಣಿಕ್ಯ ಮೊದಲಾದ ಸರಕುಗಳನ್ನು ನಿನಗೆ ತಂದು
ಸುರಿಯುತ್ತಿದ್ದರು. 17ಯೆಹೂದ್ಯರೂ, ಇಸ್ರಯೇಲ್ ನಾಡಿನವರೂ ನಿನ್ನ ಕಡೆಯ ವರ್ತಕರಾಗಿ ಮಿನ್ನೀಥಿನ,
ಗೋಧಿ, ಕಡೆಯ ವರ್ತಕರಾಗಿ ಮಿನ್ನೀಥಿನ, ಗೋಧಿ, 'ಪನ್ನಗ್', ಜೇನು, ಎಣ್ಣೆ, ಸುಗಂಧತೈಲ, ಈ
ಸಾಮಗ್ರಿಗಳನ್ನು ನಿನಗೆ ಸೇರಿಸುತ್ತಿದ್ದರು.

18 ಕೈಕೆಲಸದ ವಸ್ತುಗಳು ನಿನ್ನಲ್ಲಿ ಅಪಾರವಾಗಿದ್ದುದರಿಂದಲೂ ಅಪರಿಮಿತವಾದ ಬಗೆ ಬಗೆಯ
ಆಸ್ತಿಯೂ ನಿನಗೆ ಬೇಕಾಗಿದ್ದುದರಿಂದಲೂ ದಮಸ್ಕದವರೂ ನಿನ್ನ ಪರವಾಗಿ ವ್ಯಾಪಾರ ಮಾಡಿ, ಹೆಲ್ಬೋನಿನ
ದ್ರಾಕ್ಷಾರಸವನ್ನು ಹಾಗೂ ಚಾಹರಿನ ಉಣ್ಣೆಯನ್ನು ನಿನ್ನಲ್ಲಿ ತುಂಬಿಸುತ್ತಿದ್ದರು.

19 "ವೆದಾನಿನವರೂ, ಯಾವಾನಿನವರೂ ಉಜಾಲಿನಿಂದ ನಾನಾ ಸರಕುಗಳನ್ನು ತಂದು ನಿನಗೆ
ಒಪ್ಪಿಸುತ್ತಿದ್ದರು. ಉಕ್ಕು, ಬಜೆ, ಲವಂಗ, ಚಕ್ಕೆಗಳು ನಿನಗೆ ಆಮದಾಗುತ್ತಿದ್ದವು. 20ದೇದಾನಿನವರು ಹಲ್ಲಣಕ್ಕೆ
ಸರಿಯಾದ ಒಳ್ಳೆಯ ಜಮಖಾನೆಗಳನ್ನು ನಿನಗೆ ತರುತ್ತಿದ್ದ ವ್ಯಾಪಾರಿಗಳಾಗಿದ್ದರು.

21 "ಅರಾಬ್ಯರೂ, ಕೇದಾರಿನ ಪ್ರಮುಖರೂ ನಿನ್ನ ಕೈಕೆಳಗಣ ವರ್ತಕರು: ಕುರಿ, ಟಗರು,
ಹೋತಗಳನ್ನು ನಿನಗಾಗಿ ಸಾಗಿಸಿಕೊಂಡು ಬರುತ್ತಿದ್ದರು. 22ಶೆಬದವರೂ ರಗ್ಮದವರೂ ನಿನ್ನ ಕಡೆಯ
ವರ್ತಕರಾಗಿ ಕನಕ, ಮುಖ್ಯ ಮುಖ್ಯ ಸುಗಂಧ ದ್ರವ್ಯ, ಸಮಸ್ತ ಅಮೂಲ್ಯರತ್ನ, ಈ ವಸ್ತುಗಳನ್ನು ನಿನಗಾಗಿ
ತರುತ್ತಿದ್ದರು. 23ಹಾರಾನ್ ಕನ್ನೆ, ಏದೆನ್ ಸ್ಥಳಗಳವರು ಹಾಗೂ ಶೆಬ, ಅಸ್ಸೀರಿಯಾ, ಕಿಲ್ಮದ್ ಪ್ರಾಂತ್ಯಗಳ
ವರ್ತಕರು, 24ನಿನ್ನ ವ್ಯಾಪಾರಿಗಳಾಗಿ ಉತ್ತಮಾಂಬರ ಕಸೂತಿಯ ಊದ ನಿಲುವಂಗಿ ಮೊದಲಾದ
ಮಾಲುಗಳನ್ನೂ ಹಗ್ಗಗಳಿಂದ ಬಲವಾಗಿ ಬಿಗಿದ ಬಣ್ಣಬಣ್ಣದ ವಸ್ತ್ರಗಳ ಮೂಟೆಗಳನ್ನೂ ನಿನಗಾಗಿ
ಕಳುಹಿಸಿದ್ದರು.

25 ನಿನಗೆ ಬೇಕಾದ ದಿನಸುಗಳನು ತಂದವು
ತಾರ್ಷೀಷಿನ ಹಡಗುಗಳು ಸಾಲುಸಾಲಾಗಿ
ನೀನು ಭರ್ತಿಯಾಗಿ, ಸಮುದ್ರದ ಮಧ್ಯೆಯಿದ್ದೆ
ಬಹು ಭಾರವಾಗಿ.

26 ಹುಟ್ಟುಹಾಕುವವರು ನಿನ್ನ ಸಿಕ್ಕಿಸಿಹರು
ಮಹಾತರಂಗಗಳಿಗೆ
ಸಾಗರಮಧ್ಯೆ ಒಡೆದು ಚೂರಾಗಿರುವೆ
ಸಿಕ್ಕಿ ಮೂಡಣಗಾಳಿಗೆ.
27 ವಿನಾಶದಿನದೊಳು ಮುಳುಗಿಹೋಗುವುವು
ಸಮುದ್ರದೊಳು
ನಿನ್ನ ಆಸ್ತಿ, ನಿನ್ನ ದಿನಸು, ನಿನ್ನ ಸರಕುಗಳು
ನಿನ್ನ ನಾವಿಕರು, ಅಂಬಿಗರು, ಕಂಡಿ
ಭದ್ರಪಡಿಸುವವರು,
ನಿನ್ನ ವ್ಯಾಪಾರಿಗಳು, ಸೈನಿಕರೆಲ್ಲರು, ನಿನ್ನ
ಸಿಬ್ಬಂದಿಯೆಲ್ಲವು.
28 ನಡುಗುವುವು ಸಮೀಪದ ಪ್ರದೇಶಗಳು ಆ
ನಾವಿಕರ ಕೂಗಾಟಕೆ.
29 ದುಃಖದಿಂದರಚುವರು ಹುಟ್ಟುಹಾಕುವವರು,
ಅಂಬಿಗರು, ನಾವಿಕರೆಲ್ಲರು;
30 ತಮ್ಮ ತಮ್ಮ ಹಡಗುಗಳಿಂದಿಳಿದು, ನೆಲದ
ಮೇಲೆ ನಿಂತು.
ತಲೆಗೆ ದೂಳೆರಚಿಕೊಂಡು, ಬೂದಿಯಲ್ಲಿ
ಹೊರಳಾಡಿಕೊಂಡು,
31 ತಲೆಬೋಳಿಸಿಕೊಂಡು, ಗೋಣಿತಟ್ಟನು
ಸುತ್ತಿಕೊಂಡು,
ದುಃಖಿಸಿ ಗೋಳಾಡುವರು, ಅಳುವರು
ನಿನಗಾಗಿ ನಿಟ್ಟುಸಿರಿಟ್ಟು;
32 ರೋಧಿಸುವರು, ಪ್ರಲಾಪಿಸುವರು,
ಹಾಡುವರು ಶೋಕಗೀತೆಯನ್ನು;
ಕಡಲ ನಡುವೆ ಬಿಕೋ ಎನ್ನುವ ಟೈರನ್ನು
ಏತಕೆ ಹೋಲಿಸೋಣ? ಎಂದು.
33 ಅಪಾರ ಐಶ್ವರ್ಯದಿಂದ, ವಾಣಿಜ್ಯ
ದಿನಸುಗಳಿಂದ ನೀನು
ತುಂಬಿಸಿದೆ ಬಹುರಾಷ್ಟ್ರಗಳನು,
ಸಮೃದ್ಧಿಗೊಳಿಸಿದೆ ಭೂರಾಜರನು.
ಈಗಾಗಿವೆ ಸಮುದ್ರದ ಪಾಲು ಆ ಸರಕು
ಸಾಮಗ್ರಿಗಳೆಲ್ಲವು.
34 ಮುಳುಗಿಹೋದರು ಅಗಾಧ ಜಲದೊಳು
ಸರಕುಸಮೇತ ನಿನ್ನ ಸೇರಿದ್ದ ಜನರು;
ಹಾಳಾದೆ ನೀನು ಸಮುದ್ರ ಸಾಗರದೊಳು.

35 ನಿನ್ನೀ ಗತಿಗೆ ಬೆರಗಾಗಿಹರು ಕರಾವಳಿಯ ಸರ್ವನಿವಾಸಿಗಳು, ರೋಮಾಂಚಿತರಾಗಿಹರು
ಮೊಗಗೆಟ್ಟು ರಾಜರಾಜರುಗಳು; 36ನಿನ್ನ ನೋಡಿ ಸಿಳ್ಳುಹಾಕುವರು ರಾಷ್ಟ್ರಗಳ ವರ್ತಕರು. ನಾಶವಾದೆ ನೀನು
ಪೂರ್ತಿಯಾಗಿ, ಇಲ್ಲವಾದೆ ಇನ್ನೆಂದಿಗು.”

## ಟೈರಿನ ಪ್ರಭುವಿನ ಅಹಂಭಾವ – ಅದರ ಖಂಡನೆ

**28** ಸರ್ವೇಶ್ವರ ಇನ್ನೊಂದು ವಾಣಿಯನ್ನು ನನಗೆ ದಯಪಾಲಿಸಿದರು – 2"ನರಪುತ್ರನೇ, ನೀನು ಟೈರ್
ನಗರದ ರಾಜನಿಗೆ ಹೀಗೆ ನುಡಿ; ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನೀನು ಗರ್ವದಿಂದ 'ಆಹಾ,
ನಾನೆ ದೇವರು, ಸಮುದ್ರ ಮಧ್ಯೆ ದೇವರ ಆಸನವನ್ನೇ ಆಲಂಕರಿಸಿದ್ದೇನೆ', ಎಂದುಕೊಂಡೆ. ನೀನು ನಿನ್ನ
ದೇವರಿಗೆ ಸಮನಾಗಿಸಿಕೊಂಡೆಯೋ? ನೀನು ಎಂದಿಗೂ ದೇವರಲ್ಲ, ನೀನೊಬ್ಬ ನರಪ್ರಾಣಿಯಷ್ಟೆ. 3ನೀನು
ದಾನಿಯೇಲನಿಗಿಂತಲೂ ಬುದ್ಧಿವಂತನೋ? ಹಾಗಾದರೆ ನಿನಗೆ ಮರೆಯಾದ ರಹಸ್ಯ ಯಾವುದೂ ಇಲ್ಲ!
4ನಿನ್ನ ಜ್ಞಾನ ವಿವೇಕಿಗಳಿಂದ ಐಶ್ವರ್ಯವನ್ನು ಗಳಿಸಿ, ನಿನ್ನ ಬೊಕ್ಕಸಗಳಲ್ಲಿ ಬೆಳ್ಳಿಬಂಗಾರವನ್ನು ತುಂಬಿಸಿ
ಕೊಂಡಿರುವೆ. 5ನಿನ್ನ ಅಧಿಕ ಜ್ಞಾನದಿಂದ ಹಾಗು ವ್ಯಾಪಾರದಿಂದ ಸಿರಿಸಂಪತ್ತನ್ನು ವೃದ್ಧಿಮಾಡಿಕೊಂಡಿರುವೆ.
ಆದುದರಿಂದ ನಿನ್ನ ಮನಸ್ಸು ನಿನ್ನ ಆಸ್ತಿಯ ನಿಮಿತ್ತ ಉಬ್ಬಿಹೋಗಿದೆ. 6ಹೀಗಿರಲು ಸರ್ವೇಶ್ವರನಾದ ದೇವರು
ಇಂತೆನ್ನುತ್ತಾರೆ–ನೀನು ನಿನ್ನನ್ನೆ ದೇವರಿಗೆ ಸಮನಾಗಿಸಿಕೊಂಡಿರುವೆ. 7ಆದುದರಿಂದ ನಾನು ಅತಿಭಯಂಕರ
ಜನಾಂಗದವರಾದ ಮ್ಲೇಚ್ಛರನ್ನು ನಿನ್ನ ಮೇಲೆ ಬೀಳಮಾಡುವೆನು; ಅವರು ನಿನ್ನ ಜ್ಞಾನದ ಸೊಬಗಿನ ಮೇಲೆ
ಕತ್ತಿ ಹಿರಿದು, ನಿನ್ನ ಹೊಳಪನ್ನು ಹೊಲಸು ಮಾಡುವರು. 8ನಿನ್ನನ್ನು ಪಾತಾಳಕ್ಕೆ ತಳ್ಳಿಬಿಡುವರು;
ಸಮುದ್ರಮಧ್ಯೆ ಹತರಾದವರ ಗತಿ ನಿನಗೆ ಸಂಭವಿಸುವುದು. 9ನಿನ್ನನ್ನು ಸಂಹರಿಸುವವನೆದುರಿಗೆ ನಿಂತು,
'ನಾನು ದೇವರು' ಎಂದು ಹೇಳಬಲ್ಲೆಯಾ? ಹತಿಸುವವನ ಕೈಗೆ ನೀನು ಎಂದಿಗೂ ದೇವರಲ್ಲ,
ನರಪ್ರಾಣಿಯೇ! 10ನೀನು ಅನ್ಯರ ಕೈಯಿಂದ ಸುನ್ನತಿಹೀನರ ಮರಣಕ್ಕೆ ಗುರಿಯಾಗುವೆ; ನಾನೇ ನುಡಿದಿದ್ದೇನೆ,
ಇದು ಸರ್ವೇಶ್ವರನಾದ ದೇವರ ಸಂಕಲ್ಪ."

## ಟೈರಿನ ಅರಸನ ಪತನ

11 ಸರ್ವೇಶ್ವರ ದಯಪಾಲಿಸಿದ ಇನ್ನೊಂದು ವಾಣಿ ನನಗೆ ಹೀಗೆಂದಿತು: 12"ನರಪುತ್ರನೇ, ನೀನು
ಟೈರಿನ ಅರಸನನ್ನು ಕುರಿತು ಶೋಕಗೀತೆಯೊಂದನ್ನು ಹಾಡಿ ಅವನಿಗೆ ಹೀಗೆ ನುಡಿ: ಸರ್ವೇಶ್ವರನಾದ
ದೇವರು ಹೀಗೆನ್ನುತ್ತಾರೆ:–

"ನೀನು ಸರ್ವಸುಲಕ್ಷಣ ಶಿರೋಮಣಿ
ಪರಿಪೂರ್ಣ ಸುಂದರ, ಪೂರ್ಣಜ್ಞಾನಿ !
13 ನೀನಿದ್ದೆ ದೇವರ ಉದ್ಯಾನವನದ ಏದೆನಿನೊಳು
ಮಾಣಿಕ್ಯ, ಪುಷ್ಯರಾಗ, ಪಚ್ಚೆ, ಪೀತರತ್ನ,
ಬೆರುಲ್ಲ, ವೈಡೂರ್ಯ, ನೀಲ, ಕೆಂಪರಲು,
ಸ್ಫಟಿಕವೆಂಬ ನವರತ್ನಗಳಿಂದ
ಭೂಷಿತನಾಗಿದ್ದೆ ನೀನು.
ನಿನ್ನ ಕಿವಿಯೋಲೆ ಆಭರಣಗಳು
ಸುವರ್ಣಖಚಿತವಾಗಿದ್ದವು,
ನಿನ್ನ ಸೃಷ್ಟಿಯ ದಿನದಂದೇ ಸಿದ್ಧವಾಗಿದ್ದವವು.
14 ರೆಕ್ಕೆ ತೆರೆದು ನೆರಳು ನೀಡುವ ಕೆರೂಬಿ
ನೀನಾಗಿದ್ದೆ
ದೇವರ ಪರಿಶುದ್ಧ ಮರೆಯಲ್ಲಿ ನಿನ್ನ ನಾ
ನೆಲೆಗೊಳಿಸಿದ್ದೆ.
ಕೆಂಡದ ಮಡುಮಧ್ಯೆ ನೀ ವಿಹಾರ
ಮಾಡುತ್ತಿದ್ದೆ.
15 ಹುಟ್ಟಿದ ದಿನದಿಂದ ಅಪರಾಧವೆಸಗುವವರೆಗೆ
ನಿರ್ದೋಷವಾಗಿತ್ತು ನಿನ್ನ ನಡತೆ.

16 ನೀ ಪಾಪಿಯಾದೆ ಮಿತಿಯಿಲ್ಲದ
ವ್ಯಾಪಾರದಿಂದ
ನಿನ್ನಲ್ಲಿ ಹಿಂಸಾಚಾರಗಳು
ತುಂಬಿಕೊಂಡದ್ದರಿಂದ.
ಎಂದೇ, ಹೊಲಸೆಂಬಂತೆ ನಿನ್ನ ತಳ್ಳಿಬಿಟ್ಟೆ
ದೇವರ ಬೆಟ್ಟದಿಂದ
ಕಿತ್ತೆಸೆದುಬಿಟ್ಟೆ ಕೆಂಡದ ನಡು ಮಡುವಿನ
ನೆಲೆಯಿಂದ
ನೆರಳು ನೀಡುವ ಕೆರೂಬಿಯೇ ಎಸೆಯಿತು.
ನಿನ್ನನ್ನು ಅಲ್ಲಿಂದ
17 ಸೊಬಗಿನ ನಿಮಿತ್ತ ನೀ ಗರ್ವಿಯಾದೆ
ಮೆರೆತದಿಂದ ಬುದ್ಧಿಯನ್ನು ಕಳೆದುಕೊಂಡೆ.
ಎಂದೇ, ನಾ ನಿನ್ನನ್ನು ದೊಬ್ಬಿಬಿಟ್ಟೆ ನೆಲಕೆ
ಅರಸರ ಕಣ್ಮುಂದೆ ಎಸೆದೆ ಅವರಿಗೆ
ಅವರಿಗೆ ನೋಟವಾಗಲೆಂದೆ.
18 ಅಪಾರ ಅಪರಾಧಗಳಿಂದ, ಅನ್ಯಾಯ
ವ್ಯಾಪಾರಗಳಿಂದ
ನಿನ್ನಲ್ಲಿನ ಪವಿತ್ರಾಲಯ ಅಶುದ್ಧವಾಯಿತು
ನಿನ್ನಿಂದ.
ಎಂದೇ, ನಾ ಬರ ಮಾಡಿದೆ ಬೆಂಕಿಯನು
ನಿನ್ನೊಳಗಿಂದ
ನೋಡ್ವರೆಲ್ಲರ ಮಂದೆ ಸುಟ್ಟು ಭಸ್ಮ ಮಾಡಿತು ನಿನ್ನ.
19 ನಿನ್ನೀ ಗತಿ ನೋಡಿ ಬೆರಗಾದರು ನಿನ್ನನ್ನರಿತ
ರಾಷ್ಟ್ರಗಳು
ಪೂರ್ತಿಯಾಗಿ ನೀ ಧ್ವಂಸವಾದೆ, ಇಲ್ಲವಾದೆ
ಇನ್ನೆಂದಿಗೂ."

## ಸಿದೋನನ್ನು ಕುರಿತ ದೈವೋಕ್ತಿ

20 ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು: – 21"ನರಪುತ್ರನೇ, ನೀನು
ಸಿದೋನಿಗೆ ಅಭಿಮುಖನಾಗಿ ಅದರ ಬಗ್ಗೆ ಹೀಗೆ ನುಡಿ – 22ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ:
ಆಹಾ, ಸಿದೋನೇ, ನಾನು ನಿನಗೆ ವಿರುದ್ಧನಾಗಿ ನಿನ್ನ ಮಧ್ಯದಲ್ಲೆ ಪ್ರಖ್ಯಾತಿಗೊಳ್ಳುವೆನು; ನಾನು ಈ
ಪಟ್ಟಣವನ್ನು ದಂಡಿಸಿ, ನನ್ನ ಗೌರವವನ್ನು ಕಾಪಾಡಿಕೊಂಡ ಮೇಲೆ, ನಾನೇ ಸರ್ವೇಶ್ವರ ಎಂದು ಎಲ್ಲರಿಗು
ಗೊತ್ತಾಗುವುದು. 23ನಾನು ಅದರಲ್ಲಿ ವ್ಯಾಧಿಯನ್ನೂ ಅದರ ಚೌಕಗಳಲ್ಲಿ ಸಂಹಾರವನ್ನೂ
ಉಂಟುಮಾಡುವೆನು; ಖಡ್ಗವು ಸುತ್ತುಮುತ್ತಲು ಅದರ ಮೇಲೆ ಬೀಸುತ್ತಿರುವಾಗ ಪ್ರಜೆಗಳು ಅದರ ನಡುವೆ
ಹತರಾಗಿ ಬೀಳುವರು; ಆಗ ಸರ್ವೇಶ್ವರ ಎಂದು ಅವರಿಗೆ ತಿಳಿದು ಬರುವುದು. 24ಇಸ್ರಯೇಲ್
ವಂಶದವರಿಗೆ ಚುಚ್ಚುವ ಮುಳ್ಳು ಇನ್ನಿರದು; ಹೀನೈಸುವ ನೆರೆಹೊರೆಯವರೆಂಬ ಕಂಟಕದ ಬಾಧೆ
ಇನ್ನಾಗದು; ನಾನೇ ಸರ್ವೇಶ್ವರನಾದ ದೇವರು ಎಂದು ಅವರಿಗೆ ವ್ಯಕ್ತವಾಗುವುದು."

### ಇಸ್ರಯೇಲಿನ ಮುಂದಿನ ಸುಸ್ಥಿತಿ

25 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಜನಾಂಗಗಳಲ್ಲಿ ಚದುರಿಹೋಗಿರುವ ಇಸ್ರಯೇಲ್ ವಂಶದವರನ್ನು ನಾನು ಒಟ್ಟುಗೂಡಿಸಿ, ಎಲ್ಲ ಜನಾಂಗಗಳ ಕಣ್ಣೆದುರಿಗೆ ನನ್ನ ಗೌರವವನ್ನು ಕಾಪಾಡಿಕೊಳ್ಳುವೆನು. ಆಮೇಲೆ ದಾಸ ಯಕೋಬನಿಗೆ ನಾನು ಅನುಗ್ರಹಿಸಿದ ಸ್ವಂತ ನಾಡಿನಲ್ಲಿ ವಾಸಿಸುವರು.
26ಅಲ್ಲಿ ನಿರ್ಭಯವಾಗಿರುವರು; ಮನೆಗಳನ್ನು ಕಟ್ಟಿಕೊಂಡು, ತೋಟಗಳನ್ನು ಮಾಡಿಕೊಂಡು, ಸುಖವಾಗಿ ವಾಸಿಸುವರು; ಅವರನ್ನು ಹೀನೈಸುವ ನೆರೆಹೊರೆಯವರನ್ನು ನಾನು ದಂಡಿಸಿದ ಮೇಲೆ ನಾನೇ ತಮ್ಮ ದೇವರಾದ ಸರ್ವೇಶ್ವರ ಎಂದು ಅವರಿಗೆ ನಿಶ್ಚಯವಾಗುವುದು."

### ಈಜಿಪ್ಟನ್ನು ಕುರಿತು ದೈವೋಕ್ತಿಗಳು

**29** ಹತ್ತನೆಯ ವರ್ಷದ ಹತ್ತನೆಯ ತಿಂಗಳಿನ ಹನ್ನೆರಡನೆಯ ದಿನದಲ್ಲಿ ಸರ್ವೇಶ್ವರ ಈ ವಾಣಿಯನ್ನು
ನನಗೆ ದಯಪಾಲಿಸಿದರು: 2"ನರಪುತ್ರನೇ, ನೀನು ಈಜಿಪ್ಟ್‌ನ ಅರಸ ಫರೋಹನ ಕಡೆಗೆ ಮುಖಮಾಡಿ
ಅವನನ್ನು ಹಾಗು ಈಜಿಪ್ಟ್‌ನವರೆಲ್ಲರನ್ನು ಕುರಿತು ಹೀಗೆ ನುಡಿ – 3ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ
– ಈಜಿಪ್ಟಿನ ಅರಸ ಫರೋಹನೇ, ನದೀಶಾಖೆಗಳ ನಡುವೆ ಒರಗಿಕೊಂಡು 'ಈ ನದಿ ನನ್ನದೇ. ನನಗಾಗಿಯೇ
ಮಾಡಿಕೊಂಡಿದ್ದೇನೆ' ಎಂದುಕೊಳ್ಳುವ ದೊಡ್ಡ ಮೊಸಳೆ ನೀನು. ಇಗೋ, ನಾನು ನಿನಗೆ ವಿರುದ್ಧನಾಗಿದ್ದೇನೆ.
4ನಾನು ನಿನ್ನ ದವಡೆಗಳಿಗೆ ಗಾಳಹಾಕುವೆನು; ನಿನ್ನ ನದಿಯ ಮೀನುಗಳು ನಿನ್ನ ಬೆನ್ನು ಚಿಪ್ಪುಗಳಿಗೆ
ಅಂಟಿಕೊಳ್ಳುವಂತೆ ಮಾಡುವೆನು. ಅಂಟಿಕೊಂಡಿರುವ ಆ ಮೀನುಗಳ ಸಹಿತ ನಿನ್ನನ್ನು ನಿನ್ನ ನದಿಯ
ಮಧ್ಯೆಯಿಂದ ಈಚೆಗೆ ಎಳೆಯುವೆನು. 5ನಿನ್ನನ್ನೂ ನಿನ್ನ ಎಲ್ಲ ಮೀನುಗಳನ್ನೂ ಕಾಡು ಪಾಲುಮಾಡುವೆನು;
ನೀನು ಬಯಲಿನಲ್ಲಿ ಬಿದ್ದಿರುವೆ; ನಿನ್ನನ್ನು ಯಾರೂ ಹೊರರು, ಹೂಣಿಡರು; ನಿನ್ನನ್ನು ಭೂಜಂತುಗಳಿಗೂ
ಆಕಾಶದ ಪಕ್ಷಿಗಳಿಗೂ ಆಹಾರ ಮಾಡಿದ್ದೇನೆ.
6 "ಆಗ ಈಜಿಪ್ಟ್‌ನ ಸಕಲ ನಿವಾಸಿಗಳು, 'ಇಸ್ರಯೇಲ್ ವಂಶದವರಿಗೆ ನಾವು ಬರೀ ದಂಟಿನ
ಊರುಗೋಲಾದೆವು' ಎಂದು ನಾಚಿಕೆಪಟ್ಟು ನಾನೇ ಸರ್ವೇಶ್ವರ ಎಂಬುದಾಗಿ ದೃಢಮಾಡಿಕೊಳ್ಳುವರು.
7ಈಜಿಪ್ಟೇ, ಇಸ್ರಯೇಲರು ನಿನ್ನ ಮೇಲೆ ಕೈಯಿಡಲು, ನೀನು ಅವರನ್ನು ಮುರಿದು ಅವರೆಲ್ಲರ ಹೆಗಲನ್ನು
ಚುಚ್ಚಿದೆ; ನಿನ್ನ ಮೇಲೆ ಊರಿಕೊಳ್ಳಲು, ನೀನು ಒಡೆದು ಅವರೆಲ್ಲರ ನಡುವಿಗೆ ನಡುಕವನ್ನು ಉಂಟುಮಾಡಿದೆ.
8ಹೀಗಿರಲು, ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಇಗೋ, ನಾನು ನಿನ್ನ ಮೇಲೆ ಖಡ್ಗವನ್ನು
ಬರಮಾಡಿ ಜನರನ್ನೂ ಜಾನುವಾರುಗಳನ್ನೂ ನಿನ್ನಿಂದ ನಿರ್ಮೂಲಮಾಡುವೆನು. 9ಫರೋಹನು, – 'ಈ
ನದಿ ನನ್ನದೇ, ನಾನೇ ಮಾಡಿಕೊಂಡೆ' ಎಂದುಕೊಂಡನು. ಈ ಕಾರಣ ಈಜಿಪ್ಟ್ ದೇಶ
ಹಾಳುಪಾಳಾಗುವುದು; ಆಗ ನಾನೇ ಸರ್ವೇಶ್ವರ ಎಂದು ಅವರಿಗೆ ಗೊತ್ತಾಗುವುದು. 10ಇಗೋ, ನಾನು
ನಿನಗೂ ನಿನ್ನ ನದಿಗೂ ವಿರುದ್ಧನಾಗಿ ಈಜಿಪ್ಟ್ ದೇಶವನ್ನು ಮಿಗ್ದೋಲಿನಿಂದ ಸೆವೇನೆಯ ತನಕ, ಹೌದು,
ಸುಡಾನ್ ಎಲ್ಲೆಯವರೆಗೂ ಪೂರ್ತಿಯಾಗಿ ಹಾಳುಪಾಳುಮಾಡುವೆನು. 11ಯಾವ ವ್ಯಕ್ತಿಯೂ ಅಲ್ಲಿ
ಹೆಜ್ಜೆಯಿಟ್ಟು ಹಾದುಹೋಗನು; ನಲವತ್ತು ವರ್ಷ ನಿರ್ಜನವಾಗಿರುವುದು. 12ಹಾಳು ಬಿದ್ದಿರುವ
ದೇಶಗಳೊಳಗೆ ಈಜಿಪ್ಟ್ ದೇಶವನ್ನೂ ಹಾಳು ಬೀಳಿಸುವೆನು; ಪಾಳುಬಿದ್ದಿರುವ ಪಟ್ಟಣಗಳೊಳಗೆ ಅದರ
ಪಟ್ಟಣಗಳನ್ನೂ ಪಾಳುಬೀಳಿಸುವೆನು; ನಲವತ್ತು ವರ್ಷ ಹಾಗೆಯೇ ಇರುವುವು; ನಾನು ಈಜಿಪ್ಟಿನವರನ್ನು
ಜನಾಂಗಗಳಲ್ಲಿ ಚದರಿಸಿ, ದೇಶ ವಿದೇಶಗಳಿಗೆ ತೂರಿಬಿಡುವೆನು. 13ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ
– ನಲವತ್ತು ವರ್ಷಗಳ ಮೇಲೆ ನಾನು 14ಈಜಿಪ್ಟಿನ ದುರವಸ್ಥೆಯನ್ನು ತಪ್ಪಿಸಿ, ಅವರ ಜನ್ಮಭೂಮಿಯಾದ
ದಕ್ಷಿಣ ಈಜಿಪ್ಟಿಗೆ ಪುನಃ ಬರಮಾಡುವೆನು. ಅಲ್ಲೇ ಅವರು ನಿಕೃಷ್ಟ ರಾಜ್ಯದವರಾಗಿರುವರು. 15ಆ ರಾಜ್ಯ
ಸಮಸ್ತ ರಾಜ್ಯಗಳಲ್ಲಿ ಕನಿಷ್ಟವೆನಿಸಿಕೊಳ್ಳುವುದು; ಮಿಕ್ಕ ಜನಾಂಗಗಳಿಗಿಂತ ತಾನು ದೊಡ್ಡದೆಂದು ಅದು ಇನ್ನು
ತಲೆಯೆತ್ತದು; ಆ ಜನಾಂಗಗಳ ಮೇಲೆ ಇನ್ನು ದೊರೆತನ ಮಾಡಲಾರದಂತೆ ನಾನು ಅದನ್ನು ಕ್ಷೀಣಗತಿಗೆ
ತರುವೆನು. 16ಈಜಿಪ್ಟ್ ಇನ್ನು ಇಸ್ರಯೇಲ್ ವಂಶದವರ ಭರವಸೆಯಾಗದು; ಅದರ ಕಡೆಗೆ ಕಣ್ಣೆತ್ತುವಾಗ

ದೇವದ್ರೋಹದ ನೆನಪು ಇಸ್ರಯೇಲರಲ್ಲಿ ಹುಟ್ಟುವುದು; ನಾನೇ ಸರ್ವೇಶ್ವರ ಎಂದು ಅವರಿಗೆ ಮನದಟ್ಟಾಗುವುದು."

## ನೆಬೂಕದ್ನೆಚ್ಚರನು ಈಜಿಪ್ಟನ್ನು ಜಯಿಸಿದ್ದು

17 ಇಪ್ಪತ್ತೇಳನೆಯ ವರ್ಷದ ಮೊದಲನೆಯ ತಿಂಗಳಿನ ಮೊದಲನೆಯ ದಿನದಲ್ಲಿ ಸರ್ವೇಶ್ವರ ಈ
ವಾಣಿಯನ್ನು ನನಗೆ ದಯಪಾಲಿಸಿದರು – 18"ನರಪುತ್ರನೇ, ಬಾಬಿಲೋನಿನ ನೆಬೂಕದ್ನೆಚ್ಚರನು ಟೈರಿಗೆ
ಮುತ್ತಿಗೆ ಹಾಕಿ, ತನ್ನ ಸೈನಿಕರಿಂದ ಬಹು ಶ್ರಮದ ಸೇವೆಯನ್ನು ಮಾಡಿಸಿದ್ದಾನೆ; ಪ್ರತಿಯೊಬ್ಬನ ತಲೆ
ಬೋಳಾಗಿದೆ. ಪ್ರತಿಯೊಬ್ಬನ ಹೆಗಲು ಕಾಯಿಕಟ್ಟಿದೆ; ಆದರೂ ಆ ಮುತ್ತಿಗೆಯಲ್ಲಿ ಅವನು ಪಟ್ಟ ಶ್ರಮಕ್ಕೆ
ಅವನಿಗಾಗಲಿ ಅವನ ಸೈನಿಕರಿಗಾಗಲಿ ಟೈರಿನಿಂದ ಫಲವೇನೂ ಸಿಕ್ಕಲಿಲ್ಲ. 19ಹೀಗಿರಲು ಸರ್ವಶಕ್ತನಾದ
ದೇವರು ಇಂತೆನ್ನುತ್ತಾರೆ–ಇಗೋ, ನಾನು ಬಾಬಿಲೋನಿನ ಅರಸ ನೆಬೂಕದ್ನೆಚ್ಚರನಿಗೆ ಈಜಿಪ್ಟ್ ದೇಶವನ್ನು
ಕೊಡುವೆನು; ಅವನು ಅದರ ಜನರನ್ನೂ ಆಸ್ತಿಪಾಸ್ತಿಯನ್ನೂ ಒಯ್ದು, ಆ ದೇಶವನ್ನು ಸೂರೆಮಾಡಿ ಕೊಳ್ಳೆ
ಹೊಡೆಯುವನು; ಅದೇ ಅವನ ಸೈನ್ಯಕ್ಕೆ ಸಿಕ್ಕುವ ಸಂಬಳ. 20ಅವನು ಸೈನ್ಯ ಸಮೇತ ನನ್ನ ಪರವಾಗಿ ಸೇವೆ
ಮಾಡಿದ್ದರಿಂದ ಅವನು ಪಟ್ಟ ಶ್ರಮಕ್ಕೆ ಪ್ರತಿಫಲವಾಗಿ ನಾನು ಈಜಿಪ್ಟ್ ದೇಶವನ್ನು ಅವನಿಗೆ ಕೊಟ್ಟಿದ್ದೇನೆ;
ಇದು ಸರ್ವೇಶ್ವರನಾದ ದೇವರ ನುಡಿ.

21 "ಆ ದಿನದಲ್ಲಿ ನಾನು ಇಸ್ರಯೇಲ್ ವಂಶಕ್ಕೆ ಕೋಡುಮೂಡಿಸಿ ಆ ವಂಶದವರ ಮಧ್ಯೆ ನಿನ್ನ
ಬಾಯನ್ನು ಬಿಚ್ಚುವೆನು; ನಾನೇ ಸರ್ವೇಶ್ವರ ಎಂದು ಅವರಿಗೆ ಖಚಿತವಾಗುವುದು.

## ಈಜಿಪ್ಟಿಗಾಗುವ ದಂಡನೆ

**30** ಸರ್ವೇಶ್ವರ ಇನ್ನೊಂದು ವಾಣಿಯನ್ನು ನನಗೆ ದಯಪಾಲಿಸಿದರು – 2"ನರಪುತ್ರನೇ, ನೀನು ಈ
ದೈವೋಕ್ತಿಯನ್ನು ಪ್ರಕಟಿಸು – ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಅರಚಿಕೊಳ್ಳಿರಿ, ಅಯ್ಯೋ
ದುರ್ದಿನವೇ! ಆ ದಿನ ಹತ್ತಿರವಾಯಿತು:

3 ಹೌದು, ಸಮೀಪಿಸಿತು ಸರ್ವೇಶ್ವರನ ದಿನ,
ಕಾರ್ಮುಗಿಲಿನ ದಿನ
ಅದು ರಾಷ್ಟ್ರಗಳಿಗೆ ನ್ಯಾಯತೀರಿಸತಕ್ಕ ಕಾಲ.
4 ಖಡ್ಗವು ಈಜಿಪ್ಟಿನ ಮೇಲೆ ಬೀಳುವುದು;
ಅಲ್ಲಿ ಪ್ರಜೆಗಳು ಹತರಾಗಲು
ಸುಡಾನಿನಲ್ಲಿಯೂ ಸಂಕಟವಾಗುವುದು;
ಈಜಿಪ್ಟಿನಲ್ಲಿ ಹಲವರು ಸತ್ತು ಬೀಳುವರು,
ಅದರ ಅಸ್ತಿಭಾರ ಹಾಳಾಗುವುದು.

5 "ಸುಡಾನರು, ಲೀಡಿಯರು, ಲೂದ್ಯರು, ಬಗೆಬಗೆಯ ಸಕಲವಿದೇಶೀಯರು, ಕೂಬ್ಯರು,
ಮಿತ್ರರಾಜ್ಯದವರು ಇವರೆಲ್ಲ ಈಜಿಪ್ಟಿನವರೊಂದಿಗೆ ಖಡ್ಗದಿಂದ ಹತರಾಗುವರು."

6 ಸರ್ವೇಶ್ವರ ಇಂತೆನ್ನುತ್ತಾರೆ–"ಈಜಿಪ್ಟ್‌ಗೆ ಆಧಾರವಾದವರು ಬೀಳುವರು, ಅದರ ಶಕ್ತಿ ಮದವು
ಇಳಿದು ಹೋಗುವುದು; ಅಲ್ಲಿನ ಜನರು ಮಿಗ್ದೋಲಿನಿಂದ ಸೆವೇನೆಯವರೆಗೆ ಖಡ್ಗದಿಂದ ಹತರಾಗುವರು.
ಇದು ಸರ್ವೇಶ್ವರನಾದ ದೇವರ ನುಡಿ. 7ಹಾಳಾದ ದೇಶಗಳಲ್ಲಿ ಈ ದೇಶವೂ ಹಾಳಾಗುವುದು.
ಪಾಳುಬಿದ್ದಿರುವ ಪಟ್ಟಣಗಳಲ್ಲಿ ಅದರ ಪಟ್ಟಣಗಳೂ ಪಾಳುಬಿದ್ದಿರುವುವು. 8ನಾನು ಈಜಿಪ್ಟ್‌ಗೆ ಬೆಂಕಿಹಚ್ಚಿ,
ಅದರ ಸಹಾಯಕರನ್ನೆಲ್ಲ ನಾಶಮಾಡಿದ ಮೇಲೆ ನಾನೇ ಸರ್ವೇಶ್ವರ ಎಂದು ಅವರಿಗೆ ಗೊತ್ತಾಗವುದು."

9 "ಆ ದಿನಗಳಲ್ಲಿ ದೂತರು ನನ್ನ ಸನ್ನಿಧಾನದಿಂದ ಹೊರಟು, ಹಡಗುಗಳಲ್ಲಿ ಪ್ರಯಾಣ ಮಾಡಿ,
ನಿಶ್ಚಿಂತರಾದ ಸುಡಾನರನ್ನು ಹೆದರಿಸುವರು; ಈಜಿಪ್ಟಿನ ವಿನಾಶ ದಿನದಲ್ಲಿ ಸುಡಾನರಿಗೂ ಸಂಕಟವಾಗುವುದು;
ಇಗೋ, ಆ ದಿನ ಬಂದಿತು!"

10 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: “ನಾನು ಬಾಬಿಲೋನಿನ ಅರಸ ನೆಬೂಕದ್ನೆಚ್ಚರನ ಕೈಯಿಂದ ಈಜಿಪ್ಟಿನ ಅಸಂಖ್ಯಾತ ಪ್ರಜೆಯನ್ನು ಕೊನೆಗಾಣಿಸುವೆನು. 11ಆ ದೇಶವನ್ನು ನಾಶಪಡಿಸಲು ಅವನನ್ನು ಅತಿ ಭಯಂಕರ ಜನಾಂಗದವರಾದ ಅವನ ಸೈನಿಕರೊಡನೆ ಬರಮಾಡುವೆನು; ಅವರು ಈಜಿಪ್ಟಿನ ಮೇಲೆ ಕತ್ತಿ ಹಿರಿದು ದೇಶವನ್ನು ಹತರಾದವರಿಂದ ತುಂಬಿಸುವರು. 12ನಾನು ನದೀ ಶಾಖೆಗಳನ್ನು ಬತ್ತಿಸಿ, ದೇಶವನ್ನು ದುಷ್ಟರ ಕೈಗೆ ವಶಮಾಡಿಬಿಡುವೆನು; ಹೌದು, ದೇಶವನ್ನೂ ಅದರಲ್ಲಿನ ಸಮಸ್ತವನ್ನೂ ಅನ್ಯರ ಕೈಯಿಂದ ಹಾಳುಮಾಡಿಸುವೆನು; ಸರ್ವೇಶ್ವರನಾದ ನಾನೇ ನುಡಿದಿದ್ದೇನೆ.”

13 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: “ನಾನು ಮೆಂಫೀಸ್‍ನ ವಿಗ್ರಹಗಳನ್ನೆಲ್ಲ ಒಡೆದು, ಕೊನೆಗಾಣಿಸುವೆನು; ಈಜಿಪ್ಟ್ ದೇಶದಲ್ಲಿ ಇನ್ನು ಯಾವ ಪ್ರಭುವೂ ಇರನು; ನಾನು ಆ ದೇಶಕ್ಕೆ ಭಯವನ್ನೊಡ್ಡುವೆನು. 14ನಾನು ದಕ್ಷಿಣ ಈಜಿಪ್ಟನ್ನು ಹಾಳುಮಾಡಿ, ಚೋವನಿಗೆ ಬೆಂಕಿಯಿಕ್ಕಿ, ತೆಬೆಸಿನ ರಾಜಧಾನಿಯನ್ನು ದಂಡಿಸಿ, 15ಈಜಿಪ್ಟಿಗೆ ರಕ್ಷಣಾ ಕೋಟೆಯಾದ ಪೆಲೂಸಿಯಮ್‍ನ ಮೇಲೆ ನನ್ನ ರೋಷಾಗ್ನಿಯನ್ನು ಸುರಿಸಿ, ತೆಬೆಸಿನ ನಿವಾಸಿಗಳನ್ನೆಲ್ಲಾ ಕತ್ತರಿಸಿಬಿಡುವೆನು. 16ನಾನು ಈಜಿಪ್ಟಿಗೆ ಕಿಚ್ಚನ್ನು ಹತ್ತಿಸಲು ಪೆಲೂಸಿಯಮ್ ಪ್ರಾಣಸಂಕಟ ಪಡುವುದು; ತೆಬೆಸ್ ಭಂಗಕ್ಕೆ ಈಡಾಗುವುದು; ಮೆಂಫೀಸ್ ಮೇಲೆ ವೈರಿಗಳು ಮಧ್ಯಾಹ್ನದಲ್ಲೇ ಬೀಳುವರು. 17ಓನಿನ ಮತ್ತು ಪೀಬೆತಿನ ಯುವಕರು ಖಡ್ಗದಿಂದ ಹತರಾಗುವರು; ಅಲ್ಲಿನ ನಿವಾಸಿಗಳು ಸೆರೆಯಾಗಿ ಹೋಗುವರು. 18ಈಜಿಪ್ಟ್ ಹೊರಿಸಿದ ನೊಗಗಳನ್ನು ನಾನು ತಹಪನೇಸಿನಲ್ಲಿ ಮುರಿಯುವಾಗ, ಅಲ್ಲಿ ಹೊತ್ತು ಮೂಡದು, ಅದರ ಶಕ್ತಿಮದವು ಅಡಗಿ ಹೋಗುವುದು. ಕಾರ್ಮುಗಿಲು ಅದನ್ನು ಆವರಿಸುವುದು. ಅದರ ಯುವತಿಯರು ಸೆರೆಗೆ ಒಯ್ಯಲ್ಪಡುವರು. 19ಹೀಗೆ ನಾನು ಈಜಿಪ್ಟರಿಗೆ ದಂಡನೆಗಳನ್ನು ವಿಧಿಸಿ ತೀರಿಸುವಾಗ ನಾನೇ ಸರ್ವೇಶ್ವರ ಎಂದು ಅವರಿಗೆ ಗೊತ್ತಾಗುವುದು.”

### ದುರ್ಬಲನಾದ ಈಜಿಪ್ಟಿನ ಅರಸ

20 ಹನ್ನೊಂದನೆಯ ವರ್ಷದ ಮೊದಲನೆಯ ತಿಂಗಳಿನ ಏಳನೆಯ ದಿವಸದಲ್ಲಿ ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು. 21“ನರಪುತ್ರನೇ, ನಾನು ಈಜಿಪ್ಟ್‍ನ ಅರಸ ಫರೋಹನ ಕೈಯನ್ನು ಮುರಿದುಬಿಟ್ಟಿದ್ದೇನೆ; ಇಗೋ, ಅದನ್ನು ಯಾರೂ ಕಟ್ಟಲಿಲ್ಲ, ಔಷಧ ಹಚ್ಚಲಿಲ್ಲ. ಅದು ಖಡ್ಗ ಹಿಡಿಯುವಷ್ಟು ಬಲಗೊಳ್ಳುವಂತೆ ಯಾರೂ ಬಟ್ಟೆ ಸುತ್ತಿ ಅದನ್ನು ಬಿಗಿಸಲಿಲ್ಲ. 22ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನಾನು ಈಜಿಪ್ಟಿನ ಅರಸ ಫರೋಹನಿಗೆ ವಿರುದ್ಧನಾಗಿ ಅವನ ಕೈಗಳನ್ನು, ಅಂದರೆ ಸರಿಯಾಗಿ ಇರುವುದನ್ನೂ, ಮುರಿದದ್ದನ್ನೂ ಪೂರ್ತಿಯಾಗಿ ಮುರಿದು ಬಿಟ್ಟು, ಖಡ್ಗವು ಅವನ ಕೈಯೊಳಗಿನಿಂದ ಬೀಳುವಂತೆ ಮಾಡುವೆನು. 23ಈಜಿಪ್ಟರನ್ನು ಜನಾಂಗಗಳಲ್ಲಿ ಚದರಿಸಿ ದೇಶದೇಶಗಳಿಗೆ ತೂರಿಬಿಡುವೆನು. 24ನಾನು ಬಾಬಿಲೋನಿನ ಅರಸನ ಕೈಗಳನ್ನು ಬಲಪಡಿಸಿ, ನನ್ನ ಖಡ್ಗವನ್ನು ಅವನ ಕೈಗೆ ಕೊಟ್ಟು, ಫರೋಹನ ಕೈಗಳನ್ನು ಮುರಿಸುವಾಗ ಗಾಯದಿಂದ ಪ್ರಾಣಸಂಕಟ ಪಡುವವನಂತೆ ಫರೋಹನು ಆ ಅರಸನ ಮುಂದೆ ನರಳಾಡುವನು. 25ನಾನು ಬಾಬಿಲೋನಿನ ಅರಸನ ಕೈಗಳನ್ನು ಬಲಪಡಿಸುವೆನು; ಫರೋಹನ ಕೈಗಳಾದರೋ ಜೋಲು ಬೀಳುವುವು: ನಾನು ನನ್ನ ಖಡ್ಗವನ್ನು ಬಾಬಿಲೋನಿನ ಅರಸನಿಗೆ ಎತ್ತುವೆನು. ಅವನು ಅದನ್ನು ಈಜಿಪ್ಟ್ ದೇಶದ ಮೇಲೆ ಎತ್ತುವನು. ಆಗ ನಾನೇ ಸರ್ವೇಶ್ವರ ಎಂದು ಎಲ್ಲರಿಗೆ ಗೊತ್ತಾಗುವುದು. 26ನಾನು ಈಜಿಪ್ಟರನ್ನು ಜನಾಂಗಗಳಲ್ಲಿ ಚದರಿಸಿ ದೇಶವಿದೇಶಗಳಿಗೆ ತೂರಿಬಿಡುವಾಗ ನಾನೇ ಸರ್ವೇಶ್ವರ ಎಂದು ಅವರಿಗೆ ತಿಳಿದು ಬರುವುದು.”

### ಹೆಮ್ಮರದಂತಿದ್ದ ಈಜಿಪ್ಟಿನ ಪತನ

**31** ಹನ್ನೊಂದನೆಯ ವರ್ಷದ ಮೂರನೆಯ ತಿಂಗಳಿನ ಮೊದಲನೆಯ ದಿನ ಸರ್ವೇಶ್ವರಸ್ವಾಮಿ ನನಗೆ ಅನುಗ್ರಹಿಸಿದ ವಾಣಿ ಇದು:

2 “ನರಪುತ್ರನೇ, ನೀನು ಈಜಿಪ್ಟಿನ ಅರಸ ಫರೋಹನಿಗೂ ಅವನ ಅಸಂಖ್ಯಾತ ಪ್ರಜೆಗೂ ಹೀಗೆ ನುಡಿ:

3 ದೊಡ್ಡಸ್ತಿಕೆಯಲ್ಲಿ ನಿನಗೆ ಸರಿಸಮಾನನಾರು?
ಲೆಬನೋನಿನಲ್ಲಿ ದೇವದಾರು
ವೃಕ್ಷವೊಂದಿತ್ತು;
ಅದರ ರೆಂಬೆಗಳು ಅಂದ, ಅದರ ನೆರಳು ದಟ್ಟ
ಅದರ ಎತ್ತರ ಬಹಳ, ಅದರ ತುದಿ ಮೇಘ ಚುಂಬಿತ.
4 ಅದನ್ನು ಬೆಳೆಸಿದವು ಜಲಪ್ರವಾಹಗಳು
ವೃದ್ಧಿಗೊಳಿಸಿತದನು ಮಹಾನದಿಯೊಂದು
ಸುತ್ತಿಕೊಂಡಿದ್ದವು ಅಲ್ಲಿನ ಉದ್ಯಾನವನವನ್ನು
ನದಿ ಶಾಖೆಗಳು
ಮರಗಿಡಗಳಿಗೆ ನದಿ ನೀಡಿತ್ತು ತನ್ನ
ಕಾಲುವೆಗಳನು.
5 ಇಂತಿರಲು ವನವೃಕ್ಷಗಳಲೆಲ್ಲ ಆ ವೃಕ್ಷ
ಅತ್ಯುನ್ನತವಾಗಿತ್ತು
ಅದರ ರೆಂಬೆಗಳು ನಿಬಿಡವಾಗಿದ್ದವು,
ಉದ್ದುದ್ದ ಚಾಚಿಕೊಂಡಿದ್ದವು.
6 ಆ ರೆಂಬೆಗಳಲ್ಲಿ ಗೂಡುಮಾಡಿದ್ದವು ಆಕಾಶದ
ಪಕ್ಷಿಗಳೆಲ್ಲವು
ಅದರಡಿಯಲಿ ಮರಿಗಳನೀಯುತ್ತಿದ್ದವು
ಭೂಜಂತುಗಳೆಲ್ಲವು
ಅದರ ನೆರಳನಾಶ್ರಯಿಸುತ್ತಿದ್ದವು
ಮಹಾಜನಾಂಗಗಳೆಲ್ಲವು.
7 ಬೇರಿಗೆ ಬೇಕಾದ ಜಲಾಸರೆ ಪಡೆದಿದ್ದ ಆ
ಮರವು ಎತ್ತರದಿಂದ, ನೀಳವಾದ
ರೆಂಬೆಗಳಿಂದ ಕಂಗೊಳಿಸಿತು.
8 ದೇವೋದ್ಯಾನದ ಇತರ ದೇವದಾರುಗಳಿಂದ
ಅದನು ಮುಚ್ಚಲಾಗಲಿಲ್ಲ.
ತುರಾಯಿ ಮರಗಳು ಅದರ ರೆಂಬೆಗಳಷ್ಟು
ಉದ್ದವಾಗಿರಲಿಲ್ಲ,
ಅತ್ತಿಮರಗಳು ಅದರ ಕೊಂಬೆಗಳಷ್ಟು
ದಪ್ಪವಾಗಿರಲಿಲ್ಲ.
ದೇವರವನದಲ್ಲಿನ ಯಾವ ಮರವೂ ಅದರಷ್ಟು
ರಮಣೀಯವಿರಲಿಲ್ಲ.
9 ನಾನದನು ಅಷ್ಟೊಂದು ಸುಂದರಗೊಳಿಸಿದ್ದೆ
ಶಾಖೋಪಶಾಖೆಗಳಿಂದ
ಅಸೂಯೆಪಡುತ್ತಿದ್ದವು ಏದೇನಿನ
ದೇವೋದ್ಯಾನದ ವೃಕ್ಷಗಳೆಲ್ಲ.

10 “ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಆ ವೃಕ್ಷವು ಬಹಳ ಎತ್ತರವಾಗಿ
ಬೆಳೆದು ತನ್ನ ತುದಿ ಮೋಡಕ್ಕೆ ಮುಟ್ಟುವಷ್ಟು ನೀಳವಾಗಿದ್ದುದರ ಬಗ್ಗೆ ಗರ್ವಪಟ್ಟಿತು. 11ಆದುದರಿಂದ ನಾನು
ಅದನ್ನು ರಾಷ್ಟ್ರಗಳಲ್ಲಿ ಮಹಾ ಬಲಿಷ್ಠನಾದವನ ಕೈಗೆ ಕೊಟ್ಟುಬಿಟ್ಟಿದ್ದೇನೆ. ಅವನು ಅದರ ಕೆಟ್ಟತನಕ್ಕೆ ತಕ್ಕಂತೆ
ಅದನ್ನು ದಂಡಿಸೇ ತೀರುವನು; ನಾನು ಅದನ್ನು ತಳ್ಳಿ ಹಾಕಿದ್ದೆ. 12ಅತಿ ಭಯಂಕರ ರಾಷ್ಟ್ರದವರಾದ

ಮ್ಲೇಚ್ಛರು ಅದನ್ನು ಕಡಿದುಹಾಕಿ ಹೋಗಿ ಬಿಟ್ಟಿದ್ದಾರೆ; ಅದರ ರೆಂಬೆಗಳು ಗುಡ್ಡಗಳಲ್ಲೂ ಎಲ್ಲ ಹಳ್ಳಕೊಳ್ಳಗಳಲ್ಲೂ ಬಿದ್ದಿವೆ; ಅದರ ಕೊಂಬೆಗಳು ದೇಶದ ಎಲ್ಲ ತೊರೆಗಳ ಹತ್ತಿರ ಮುರಿದು ಬಿದ್ದಿವೆ; ಲೋಕದ ಸಮಸ್ತ ಜನಾಂಗಗಳು ಅದರ ನೆರಳಿನಿಂದ ತೊಲಗಿ ಹೋಗಿವೆ.

13 "ಬಿದ್ದ ಆ ಬುಡದ ಮೇಲೆ ಎಲ್ಲ ಆಕಾಶ ಪಕ್ಷಿಗಳು ಎರಗುವುವು; ಅದರ ರೆಂಬೆಗಳನ್ನು ಸಮಸ್ತ ಭೂಜಂತುಗಳು ತುಳಿದಾಡುವುವು. 14ನೀರಾವರಿಯ ಯಾವ ಮರವ ತಮ್ಮ ಎತ್ತರವನ್ನು ಹೆಚ್ಚಿಸಿಕೊಂಡು ತನ್ನ ತುದಿಯಿಂದ ಮೋಡ ಮುಟ್ಟದಿರಲೆಂದು ಹಾಗೂ ನೀರನ್ನು ಹೀರುತ್ತಲೇ ಇರುವ ದೊಡ್ಡ ದೊಡ್ಡ ಮರಗಳು ಎತ್ತರವಾಗಿ ಚಿಗುರಿಕೊಳ್ಳದಿರಲೆಂದು ಹೀಗಾಯಿತು; ಆದರೆ ಎಲ್ಲ ಮರಗಳು ಮರಣದ ಪಾಲಾಗುವುವು. ಅಧೋಲೋಕವೇ ಅವುಗಳ ಗತಿ; ಪಾತಾಳಕ್ಕೆ ಇಳಿದು ಹೋದವರ ಬಳಿಗೆ, ನರಜನ್ಮದವರೊಂದಿಗೆ ಒಂದೇ ಗುಂಪಾಗಿ ಸೇರುವುವು."

15 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಆ ವೃಕ್ಷ ಪಾತಾಳಕ್ಕೆ ಇಳಿದುಹೋದ ದಿನದಲ್ಲಿ ನಾನು ದುಃಖದ ಚಿಹ್ನೆಗಳನ್ನು ಏರ್ಪಡಿಸಿದೆ; ಆದರ ವಿಯೋಗಕ್ಕಾಗಿ ನಾನು ಮಹಾನದಿಯನ್ನು ಮರೆಮಾಡಿ, ನದಿಯ ಶಾಖೆಗಳನ್ನು ತಡೆದುಬಿಟ್ಟೆ; ಜಲಪ್ರವಾಹವು ನಿಂತು ಹೋಯಿತು; ಅದಕ್ಕಾಗಿ ಲೆಬನೋನು ಗೋಳಿಡುವಂತೆ ಮಾಡಿದೆ. ಭೂಮಿಯ ಸಕಲ ವೃಕ್ಷಗಳು ಆ ದುಃಖಕ್ಕೆ ಮೂರ್ಛೆಹೋದವು. 16ನಾನು ಅದನ್ನು ಪ್ರೇತಗಳ ಜೊತೆಗೆ ಸೇರಿಸಬೇಕೆಂದು ಪಾತಾಳಕ್ಕೆ ತಳ್ಳಿಬಿಟ್ಟಾಗ, ಅದು ಬಿದ್ದ ಶಬ್ದಕ್ಕೆ ಸಕಲ ಜನಾಂಗಗಳು ನಡುಗಿದವು; ಮತ್ತು ಪೂರ್ವಕಾಲದಲ್ಲಿ ಅಧೋಲೋಕದ ಪಾಲಾದ ಏದೆನಿನ ಎಲ್ಲ ಮರಗಳು, ಲೆಬನೋನಿನ ಉತ್ತಮೋತ್ತಮ ವೃಕ್ಷಗಳು, ಅಂತು ನೀರಾವರಿಯ ಸಕಲ ಸಸ್ಯಗಳೂ ಅಲ್ಲಿ ಸಂತೈಸಿಕೊಂಡವು. 17ಇದಲ್ಲದೆ, ಅದಕ್ಕೆ ತೋಳಬಲವಾಗಿ ಜನಾಂಗಗಳ ಮಧ್ಯೆ ಅದರ ನೆರಳನ್ನು ಆಶ್ರಯಿಸಿದವರು, ಅದರೊಂದಿಗೆ ಪಾತಾಳಕ್ಕಿಳಿದು, ಖಡ್ಗಹತರ ಜೊತೆಗೆ ಸೇರಿದರು. 18ಇಂಥಾ ವೈಭವದಿಂದ ಹಾಗೂ ಮಹಿಮೆಯಿಂದ ಕೂಡಿದ ನೀನು, ಏದೆನಿನ ವೃಕ್ಷಗಳಲ್ಲಿ ಯಾವುದಕ್ಕಿಂತ ಕಡಿಮೆ? ಆದರೂ ನೀನು ಏದೆನಿನ ವೃಕ್ಷಗಳೊಂದಿಗೆ ಅಧೋಲೋಕಕ್ಕೆ ದೂಡಿದವನಾಗಿ ಸುನ್ನತಿಹೀನರ ನಡುವೆ ಖಡ್ಗಹತರ ಸಂಗಡ ಒರಗಿಹೋಗುವೆ. ಫರೋಹನೂ ಅವನ ಎಲ್ಲಾ ಪ್ರಜೆಗಳೂ ಇದೇ ಗತಿಯನ್ನು ಹೊಂದುವರು. ಇದು ಸರ್ವೇಶ್ವರನಾದ ದೇವರು ನುಡಿ."

### ಈಜಿಪ್ಟಿನ ಅರಸ ದೊಡ್ಡ ಮೊಸಳೆಗೆ ಸಮಾನ

**32** ಹನ್ನೆರಡನೆಯ ವರ್ಷದ ಹನ್ನೆರಡನೆಯ ತಿಂಗಳಿನ ಮೊದಲನೆಯ ದಿನ ಸರ್ವೇಶ್ವರಸ್ವಾಮಿ ನನಗೆ ಅನುಗ್ರಹಿಸಿದ ವಾಣಿ ಇದು: 2"ನರಪುತ್ರನೇ, ನೀನು ಈಜಿಪ್ಟಿನ ಅರಸ ಫರೋಹನನ್ನು ಕುರಿತು ಶೋಕಗೀತೆಯೊಂದನ್ನು ನುಡಿ:

"ನೀನು ಮೃಗರಾಜನೆನಿಸಿಕೊಂಡಿರುವೆ
ಜನಾಂಗಗಳಲ್ಲಿ,
ಇಗೋ ದೊಡ್ಡ ಮೊಸಳೆಯಾಗಿಬಿಟ್ಟಿರುವೆ
ಮಹಾನದಿಯಲ್ಲಿ.
ನೀನಿದ್ದ ನದಿಗಳ ಭೇದಿಸಿಕೊಂಡು ಬಂದು,
ಕಾಲಿಂದ ನೀ ಕಲಕಿರುವೆ ಅದರ ನೀರನ್ನು,
ತುಳಿದು ಬದಿಮಾಡಿರುವೆ ಜನಾಂಗವೆಂಬ
ಹೊಳೆಯನ್ನು."

3 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ:
"ಗುಂಪಾಗಿ ಕೂಡಿದ ಬಹುಜನಾಂಗಗಳ
ಕೈಯಿಂದ,
ನಾ ನಿನ್ನ ಮೇಲೆ ಬೀಸುವೆ ಬಲೆಯೊಂದ.

4 ಆಕಾಶದ ಪಕ್ಷಿಗಳು ನಿನ್ನ ಮೇಲೆರಗುವಂತೆ,
ಸಮಸ್ತ ಭೂಜಂತುಗಳು ನಿನ್ನಿಂದ
ತೃಪ್ತಿಗೊಳ್ಳುವಂತೆ,
ನಿನ್ನನೆಸೆದು ಬಿಡುವೆ ನೆಲದಮೇಲೆ
ಬಯಲಿಗೆ.
5 ಚೆಲ್ಲಲಾಗುವುದು ನಿನ್ನ ಮಾಂಸಖಂಡಗಳನು
ಗುಡ್ಡೆಗಳ ಮೇಲೆ,
ತುಂಬಲಾಗುವುದು ಕಣಿವೆಗಳನು ನಿನ್ನ ಮೂಳೆ
ಮುಸುಕುಗಳಿಂದಲೆ.
6 ತೋಯಿಸುವೆನು ಸಮನಾಡನು ನಿನ್ನ ರಕ್ತ
ಪ್ರವಾಹದಿಂದ,
ಹಳ್ಳಕೊಳ್ಳಗಳು ತುಂಬಿ ತುಳುಕುವುವು
ಅದರಿಂದ.
7 ನಿನ್ನ ಬೆಳಕನು ನಾ ನಂದಿಸಿ ಕತ್ತಲಾಗಿಸುವಾಗ,
ಮುಚ್ಚುವೆನು ಸೂರ್ಯಚಂದ್ರ ನಕ್ಷತ್ರಗಳನು
ಮೋಡಮುಸುಕಿನಿಂದ.
8 ನಿನ್ನ ಮೇಲೆ ಗಗನದಲಿ ಮಿನುಗುವ ಸಕಲ
ಜ್ಯೋತಿಗಳನು
ಮುಸುಕು ಮಾಡುವೆನು, ನಿನ್ನ ನಾಡಿನೊಳು
ಕತ್ತಲನೊಡ್ಡುವೆನು.

9 "ನಿನ್ನ ವಿನಾಶದ ಸುದ್ದಿಯನ್ನು, ರಾಷ್ಟ್ರಗಳಲ್ಲಿ ನಿನಗೇ ತಿಳಿಯದ ದೇಶಗಳಿಗೆ ನಾನು ಮುಟ್ಟಿಸುವಾಗ
ಆ ದೇಶಗಳು ಕಳವಳ ಪಡುವುವು. 10ಹೌದು, ಬಹುರಾಷ್ಟ್ರಗಳು ನಿನ್ನ ಗತಿಗೆ ಬೆಚ್ಚಿಬೆರಗಾಗುವಂತೆ
ಮಾಡುವೆನು; ನಾನು ನನ್ನ ಖಡ್ಗವನ್ನು ಅವುಗಳ ಅರಸರ ಕಣ್ಣೆದುರಿಗೆ ಬೀಳಿಸುವಾಗ ಅವರು ನಿನ್ನ
ದುರ್ಗತಿಯನ್ನು ನೆನೆಸಿ ಭಯಭ್ರಾಂತರಾಗುವರು; ನಿನ್ನ ಪತನದಿಂದ ಪ್ರತಿಯೊಬ್ಬನು ತನ್ನ ಪ್ರಾಣಾಪಾಯಕ್ಕೆ
ಕ್ಷಣಕ್ಷಣವು ನಡುಗುವನು."

11 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಬಾಬಿಲೋನಿನ ಅರಸನ ಖಡ್ಗ ನಿನ್ನ ಮೇಲೆ
ಬೀಳುವುದು. 12ನಿನ್ನ ಬಹುಪ್ರಜೆಯನ್ನು ಅತಿ ಭಯಾನಕ ಜನಾಂಗದವರಾದ ಬಲಿಷ್ಠರ ಕತ್ತಿಗಳಿಂದ
ಸಂಹರಿಸುವೆನು; ಈಜಿಪ್ಟ್ ಹೆಚ್ಚಳ ಪಡುವ ವಸ್ತುಗಳನ್ನೇ ಅವರು ಸೂರೆಮಾಡುವರು; ಅದರ ಜನ
ನಿರ್ನಾಮವಾಗುವುದು. 13ದೊಡ್ಡ ಪ್ರವಾಹಗಳ ತೀರದಲ್ಲಿನ ಪಶುಗಳನ್ನೆಲ್ಲಾ ನಾಶಪಡಿಸುವೆನು; ಆ ನೀರನ್ನು
ಕಲಕಲು ಇನ್ನು ಯಾವ ಮನುಷ್ಯನೂ ಅಲ್ಲಿ ಹೆಜ್ಜೆಯಿಡನು, ಯಾವ ಪಶುವೂ ಅಲ್ಲಿ ಗೊರಸಿಕ್ಕದು. 14ಆಗ
ಆ ನೀರು ತಿಳಿಯಾಗುವಂತೆ, ಆ ಪ್ರವಾಹಗಳು ಎಣ್ಣೆಯ ಹಾಗೆ ಹರಿಯುವಂತೆ ಮಾಡುವೆನು; ಇದು
ಸರ್ವೇಶ್ವರನಾದ ದೇವರ ನುಡಿ. 15ಈಜಿಪ್ಟಿನಲ್ಲಿ ತುಂಬಿದ್ದ ಸೊತ್ತನ್ನೆಲ್ಲಾ ಕರಗಿಸಿ ಆ ದೇಶವನ್ನು
ಹಾಳುಪಾಳುಮಾಡಿ ಅಲ್ಲಿನ ಸಕಲ ನಿವಾಸಿಗಳನ್ನು ಸಂಹರಿಸಿದಾಗ ನಾನೇ ಸರ್ವೇಶ್ವರ ಎಂದು
ಗೊತ್ತಾಗುವುದು. 16ಪ್ರಲಾಪಿಸುವವರು ಈ ಶೋಕಗೀತವನ್ನು ಹಾಡಲಿ; ಜನಾಂಗಗಳ ಯುವತಿಯರು ಹೀಗೆ
ಗೋಳಿಡಲಿ; ಈಜಿಪ್ಟಿಗಾಗಿಯೂ ಅಲ್ಲಿನ ಬಹುಪ್ರಜೆಗಾಗಿಯೂ ದುಃಖಿಸಿ ಈ ಗೀತೆಯನ್ನು ಹಾಡಲಿ; ಇದು
ಸರ್ವೇಶ್ವರನಾದ ದೇವರ ನುಡಿ."

**ಫರೋಹನ ಪಾತಾಳಪ್ರವೇಶ**

17 ಹನ್ನೆರಡನೆಯ ವರ್ಷದ ಹದಿನೈದನೆಯ ದಿನದಲ್ಲಿ ಸರ್ವೇಶ್ವರ ಈ ವಾಣಿಯನ್ನು
ದಯಪಾಲಿಸಿದರು – 18"ನರಪುತ್ರನೇ, ನೀನು ಈಜಿಪ್ಟಿನ ಅಸಂಖ್ಯಾತ ಪ್ರಜೆಗಾಗಿ ಗೋಳಾಡಿ ಅವರನ್ನೂ

ಘನವಾದ ಜನಾಂಗಗಳವರನ್ನೂ ಅಧೋಲೋಕಕ್ಕೆ, ಪ್ರೇತಗಳ ಜೊತೆಗೆ ತಳ್ಳಿಬಿಡು. 19ಈಜಿಪ್ಟೇ, ನೀನು ಸೌಂದರ್ಯದಲ್ಲಿ ಯಾರಿಗೆ ಕಡಿಮೆ? ಪಾತಾಳಕ್ಕೆ ಇಳಿದು ನೆಲಸು ಸುನ್ನತಿಹೀನರ ನಡುವೆ. 20ಖಡ್ಗ ಹತರ ಮಧ್ಯೆ ಬೀಳು, ಕತ್ತಿಯನ್ನು ಎತ್ತಿಹಿಡಿಯಲಾಗಿದೆ. ಅಧೋಲೋಕದವರೇ, ಈಜಿಪ್ಟನ್ನು ಅದರ ಅನಂತ ಪ್ರಜೆಗಳನ್ನೂ ಎಳೆದುಕೊಳ್ಳಿ. 21ಪಾತಾಳದಲ್ಲಿನ ಬಲಿಷ್ಠಶೂರರೂ ಅದನ್ನೂ ಅದರ ಸಹಾಯಕರನ್ನೂ ನೋಡಿ, "ಓಹೋ, ಇವರು ಸುನ್ನತಿ ಹೀನರು, ಖಡ್ಗಹತರು, ಇಳಿದು ಬಂದು ಒರಗಿಬಿದ್ದರು' ಎಂದುಕೊಳ್ಳುವರು.

22 "ಅಸ್ಸೀರಿಯ ಮತ್ತು ಅದರ ಜನತೆ ಯಾವಾಗಲು ಅಲ್ಲಿರುವುವು; ಆ ಜನರ ಗೋರಿಗಳು ಅದನ್ನು ಸುತ್ತಿಕೊಂಡಿವೆ; ಅವರೆಲ್ಲರೂ ಸಂಹೃತರು, ಖಡ್ಗಹತರು. 23ಅವರ ಗೋರಿಗಳು ಅಧೋಲೋಕದ ಅಗಾಧ ಸ್ಥಳಗಳಲ್ಲಿ ಹರಡಿಕೊಂಡಿವೆ; ಅವರು ಅಸ್ಸೀರಿಯದ ಗೋರಿಯ ಸುತ್ತಲಿದ್ದಾರೆ; ಜೀವಲೋಕದಲ್ಲಿ ಭೀಕರವಾಗಿದ್ದ ಇವರೆಲ್ಲರೂ ಸಂಹೃತರು, ಖಡ್ಗಹತರು.

24 "ಏಲಾಮೂ ಅಲ್ಲಿದೆ; ಅದರ ಪ್ರಜೆಯೆಲ್ಲಾ ಅದರ ಗೋರಿಯನ್ನು ಸುತ್ತಿಕೊಂಡಿವೆ. ಅವರೆಲ್ಲರೂ ಸಂಹೃತರು, ಖಡ್ಗಹತರು; ಜೀವಲೋಕದಲ್ಲಿ ಭೀಕರವಾಗಿದ್ದ ಆ ಸುನ್ನತಿಹೀನರು ಅಧೋಲೋಕಕ್ಕೆ ಇಳಿದು ಪ್ರೇತಗಳ ನಡುವೆ ಅವಮಾನಪಟ್ಟಿದ್ದಾರೆ. 25ಏಲಾಮು ಮಲಗುವುದಕ್ಕೆ, ಹತರಾದ ಅದರ ಪ್ರಜೆಗಳೆಲ್ಲರ ನಡುವೆ ಸ್ಥಳವನ್ನು ಏರ್ಪಡಿಸಿದ್ದಾರೆ, ಅವರ ಗೋರಿಗಳು ಅದರ ಸುತ್ತುಮುತ್ತಲಿವೆ. ಅವರೆಲ್ಲರೂ ಸುನ್ನತಿ ಹೀನರು, ಖಡ್ಗಹತರು; ಅವರು ಜೀವಲೋಕದಲ್ಲಿ ಭೀಕರರಾಗಿದ್ದು ಪ್ರೇತಗಳ ಜೊತೆಗೆ ಸೇರಿ ಅವಮಾನಪಟ್ಟವರಾಗಿದ್ದಾರೆ. ಸಂಹೃತರ ಮಧ್ಯದಲ್ಲೇ ಏಲಾಮಿಗೆ ಸ್ಥಳ ಏರ್ಪಾಡಾಗಿದೆ.

26 "ಮೆಷೆಕ್, ತೂಬಲ್ ಅವುಗಳ ಎಲ್ಲಾ ಪ್ರಜೆಯೂ ಅಲ್ಲಿರುತ್ತಾರೆ; ಆ ಪ್ರಜೆಗಳ ಗೋರಿಗಳು ಅವುಗಳನ್ನು ಸುತ್ತಿಕೊಂಡಿವೆ; ಅವರೆಲ್ಲರೂ ಸುನ್ನತಿಹೀನರು, ಖಡ್ಗಹತರು. ಜೀವಲೋಕದಲ್ಲಿ ಅವರು ಭೀಕರ ರಾಗಿದ್ದರಲ್ಲವೇ? 27ಪೂರ್ವದಲ್ಲಿ ಯಾವ ಸುನ್ನತಿಹೀನ ಶೂರರು, ಜೀವಲೋಕದೊಳಗೆ ಬಲಿಷ್ಠರಿಗೂ ಭೀಕರರಾಗಿದ್ದು, ಹತರಾಗಿ ಆಯುಧ ಸಹಿತ ಪಾತಾಳಕ್ಕೆ ಇಳಿದು, ಕತ್ತಿಗಳನ್ನು ತಲೆದಿಂಬು ಮಾಡಿಕೊಂಡು, ತಮ್ಮ ಅಸ್ಥಿಗಳ ಮೇಲೆ ತಮ್ಮ ದುಷ್ಕೃತ್ಯಗಳ ಭಾರವನ್ನು ಹೊತ್ತುಕೊಂಡಿದ್ದರೋ ಅವರ ನಡುವೆ ಮೆಷೆಕಿನವರೂ, ತೂಬಲಿನವರೂ ನೆಲಸದೆ ಹೋಗುವರೇ?

28 "ಹೀಗೆ ಈಜಿಪ್ಟರು ಸುನ್ನತಿಹೀನರ ಮಧ್ಯೆ ನಾಶವಾಗಿ ಖಡ್ಗಹತರ ನಡುವೆ ಸೇರಿ ಹೋಗುವರು.

29 "ಎದೋಮೂ ಅದರ ಅರಸರೂ ಎಲ್ಲ ಸರದಾರರೂ ಅಲ್ಲಿದ್ದಾರೆ; ಅವರು ಹಿಂಸಾಚಾರಿಗಳಾಗಿದ್ದು, ಖಡ್ಗಹತರ ಸಂಗಡ ಬಿದ್ದಿರುತ್ತಾರೆ; ಸುನ್ನತಿಹೀನರೊಡನೆ ಪ್ರೇತಗಳ ನಡುವೆ ನೆಲಸಿದ್ದಾರೆ.

30 "ಉತ್ತರದೇಶದ ಸಕಲ ರಾಜರುಗಳೂ ಸಮಸ್ತ ಸಿದೋನ್ಯರೂ ಸಂಹೃತರೊಂದಿಗೆ ಇಳಿದು ಅಲ್ಲಿದ್ದಾರೆ; ಭಯಂಕರರಾಗಿದ್ದ ತಮ್ಮ ಶೌರ್ಯಕ್ಕೆ ನಾಚಿಕೆಗೊಂಡು, ಖಡ್ಗಹತರ ಮಧ್ಯೆ ಸುನ್ನತಿಹೀನರಾಗಿ ಬಿದ್ದು, ಪ್ರೇತಗಳ ನಡುವೆ ಅವಮಾನ ಪಟ್ಟಿದ್ದಾರೆ.

31 "ಫರೋಹನು ಇವರೆಲ್ಲರನ್ನೂ ನೋಡಿ ತನ್ನ ಸಮಸ್ತ ಪ್ರಜೆಯ ವಿಷಯದಲ್ಲಿ ಸಮಾಧಾನ ಹೊಂದುವನು; ಹೌದು, ಫರೋಹನೂ ಖಡ್ಗಹತರಾದ ಅವನ ಸಕಲ ಸೈನಿಕರೂ ಸಮಾಧಾನ ಹೊಂದುವರು. ಇದು ಸರ್ವೇಶ್ವರನಾದ ದೇವರ ನುಡಿ.

32 "ಇಗೋ, ಜೀವಲೋಕದಲ್ಲಿ ನಾನು ನನ್ನ ಭಯವನ್ನು ಹುಟ್ಟಿಸಿದ್ದೇನೆ; ಫರೋಹನೂ ಅವನ ಸಮಸ್ತ ಪ್ರಜೆಯೂ ಸುನ್ನತಿಹೀನರ ಮಧ್ಯೆ ಖಡ್ಗ ಹತರ ನಡುವೆ ಸೇರಿಹೋಗುವರು," ಎಂಬುದು ಸರ್ವೇಶ್ವರನಾದ ದೇವರ ನುಡಿ.

## ಯೆಜೆಕಿಯೇಲನು ಇಸ್ರಯೇಲರ ಕಾವಲುಗಾರ
(ಯೆಜೆ 3.16–21)

**33** ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು: 2"ನರಪುತ್ರನೇ, ಜನರನ್ನು ಸಂಭೋದಿಸಿ
ಅವರಿಗೆ ಹೀಗೆ ನುಡಿ – "ನಾನು ದೇಶದ ಮೇಲೆ ಖಡ್ಗವನ್ನು ಬೀಳಮಾಡುವಾಗ, ಆ ದೇಶದವರು ತಮ್ಮಲ್ಲಿ
ಆರಿಸಿ ನೇಮಿಸಿಕೊಂಡ ಕಾವಲುಗಾರನು 3ದೇಶದ ಮೇಲೆ ಬೀಳುವ ಖಡ್ಗವನ್ನು ನೋಡಿದ ಕೂಡಲೆ
ಕೊಂಬನ್ನೂದಿ ಸಜ್ಜನರನ್ನು ಎಚ್ಚರಿಸಲಿ; ಕೊಂಬಿನ ಕೂಗನ್ನು 4ಕೇಳಿಯೂ ಯಾವನಾದರು ಎಚ್ಚರಗೊಳ್ಳದೆ
ಬೀಳುವ ಖಡ್ಗಕ್ಕೆ ಸಿಕ್ಕಿ ನಾಶವಾದರೆ, ತನ್ನ ಮರಣಕ್ಕೆ ತಾನೇ ಕಾರಣನಾಗುತ್ತಾನೆ. 5ಏಕೆಂದರೆ ಅವನು
ಕೊಂಬಿನ ಕೂಗನ್ನು ಕೇಳಿಯೂ ಎಚ್ಚರಗೊಳ್ಳಲಿಲ್ಲ. ತನ್ನ ಮರಣಕ್ಕೆ ತಾನೇ ಕಾರಣನು; ಎಚ್ಚರಗೊಂಡಿದ್ದರೆ
ತನ್ನ ಪ್ರಾಣವನ್ನು ಉಳಿಸಿಕೊಳ್ಳುತ್ತಿದ್ದ. 6ಆದರೆ ಕಾವಲುಗಾರನೇ ಬೀಳುವ ಖಡ್ಗವನ್ನು ನೋಡಿಯೂ
ಕೊಂಬನ್ನೂದದೆ, ಸಜ್ಜನರನ್ನು ಎಚ್ಚರಿಸದೆ ಹೋದರೆ ಖಡ್ಗ ಬಿದ್ದು ಆ ಜನರೊಳಗೆ ಯಾವನನ್ನೇ ಆಗಲಿ
ನಾಶಮಾಡಿದರೆ, ತನ್ನ ಅಧರ್ಮದಲ್ಲೇ ನಾಶಗೊಂಡ ಆ ಮನುಷ್ಯನ ಮರಣಕ್ಕೆ, ಕಾವಲುಗಾರನೇ ಹೊಣೆ.
ಅವನಿಗೆ ನಾನು ಮುಯ್ಯಿ ತೀರಿಸುವೆನು.

7 "ನರಪುತ್ರನೇ, ನಾನು ನಿನ್ನನ್ನು ಇಸ್ರಯೇಲ್ ವಂಶದವರಿಗೆ ಕಾವಲುಗಾರನಾಗಿ ನೇಮಿಸಿದ್ದೇನೆ;
ನೀನು ನನ್ನ ಬಾಯಿಂದ ಹೊರಡುವ ಮಾತನ್ನು ಕೇಳಿ, ನನ್ನ ದೂತನಾಗಿ ಅವರನ್ನು ಎಚ್ಚರಪಡಿಸು. 8ನಾನು
ದುಷ್ಟನಿಗೆ – 'ದುಷ್ಟನೇ, ನೀನು ಸತ್ತೇಸಾಯುವೆ' ಎಂದು ನುಡಿಯುವಾಗ ನೀನು ಆ ದುಷ್ಟನನ್ನು ತನ್ನ
ದುರ್ಮಾರ್ಗದಿಂದ ತಪ್ಪಿಸಲು ಅವನನ್ನು ಎಚ್ಚರಪಡಿಸದೆ ಹೋದರೆ ಅವನು ತನ್ನ ಅಪರಾಧದಿಂದಲೇ
ಸಾಯಬೇಕಾಗುವುದು; ಅವನ ಮರಣಕ್ಕೆ ಹೊಣೆಯಾದ ನಿನಗೆ ಮುಯ್ಯಿತೀರಿಸುವೆನು. 9ಆದರೆ ನೀನು
ದುಷ್ಟನನ್ನು ದುರ್ಮಾರ್ಗದಿಂದ ತಪ್ಪಿಸಲು ಅವನನ್ನು ಎಚ್ಚರಿಸಿದರೂ ಇವನು ಅದನ್ನು ಬಿಡದೆ ಹೋದರೆ
ನಿನ್ನ ಪ್ರಾಣವನ್ನು ಉಳಿಸಿಕೊಳ್ಳುವೆ.

### ವೈಯಕ್ತಿಕ ಹೊಣೆಗಾರಿಕೆ

10 "ನರಪುತ್ರನೇ, ಇಸ್ರಯೇಲ್ ವಂಶದವರಿಗೆ ಹೀಗೆ ನುಡಿ – ಅಯ್ಯೋ, ನಮ್ಮ ದ್ರೋಹಗಳ ಮತ್ತು
ಪಾಪಗಳ ಭಾರ ನಮ್ಮ ಮೇಲೆ ಬಿದ್ದಿವೆ; ಅವುಗಳಿಂದ ಕ್ಷೀಣವಾಗಿ ಹೋಗುತ್ತಿದ್ದೇವೆ; ನಾವು ಹೇಗೆ ಉಳಿದೇವು
ಅಂದುಕೊಳ್ಳುತ್ತೀರಲ್ಲವೇ? 11ನನ್ನ ಜೀವದಾಣೆ, ದುಷ್ಟನ ಸಾವಿನಲ್ಲಿ ನನಗೆ ಲವಲೇಶವೂ ಸಂತೋಷವಿಲ್ಲ;
ಅವನು ತನ್ನ ದುರ್ಮಾರ್ಗವನ್ನು ಬಿಟ್ಟು ಬಾಳುವುದೇ ನನಗೆ ಸಂತೋಷ. ಇಸ್ರಯೇಲ್ ವಂಶದವರೇ, ನಿಮ್ಮ
ದುರ್ಮಾರ್ಗಗಳನ್ನು ಬಿಟ್ಟು ಬಾಳುವುದೇ ನನಗೆ ಸಂತೋಷ. ಇಸ್ರಯೇಲ್ ವಂಶದವರೇ, ನಿಮ್ಮ
ದುರ್ಮಾರ್ಗಗಳನ್ನು ಬಿಡಿ, ಬಿಟ್ಟುಬಿಡಿ; ನೀವು ಏಕೆ ಸಾಯಬೇಕು?" ಇದು ಸರ್ವೇಶ್ವರನಾದ ದೇವರ ನುಡಿ.

12 "ನರಪುತ್ರನೇ, ನಿನ್ನ ಜನರಿಗೆ ಹೀಗೆ ಹೇಳು: ಶಿಷ್ಟನು ದ್ರೋಹಮಾಡಿದ್ದಲ್ಲಿ ಅವನ ಪುಣ್ಯ
ಅವನನ್ನು ಉದ್ಧರಿಸದು; ದುಷ್ಟನು ತನ್ನ ದುಷ್ಟತನವನ್ನು ಬಿಟ್ಟಲ್ಲಿ ಅವನ ಪಾಪ ಅವನನ್ನು ಬೀಳಿಸದು;
ಶಿಷ್ಟನು ಪಾಪಮಾಡಿದಲ್ಲಿ ಅವನ ಪುಣ್ಯ ಅವನನ್ನು ಉಳಿಸಲಾರದು. 13ನಾನು ಶಿಷ್ಟನಿಗೆ, ನೀನು ಬಾಳೇ
ಬಾಳುವೆ ಎಂದು ಹೇಳಲು, ಅವನು ತನ್ನ ಪುಣ್ಯದ ಮೇಲೆ ಭರವಸೆಯಿಟ್ಟು ಪಾಪಮಾಡಿದರೆ, ಅವನು
ಮಾಡಿದ ಯಾವ ಸುಕೃತ್ಯವು ಅವನ ಲೆಕ್ಕಕ್ಕೆ ಸೇರದು; ಅವನು ಮಾಡುವ ಪಾಪದಿಂದರೇ ಅವನು
ಸಾಯುವನು. 14ನಾನು ದುಷ್ಟನಿಗೆ 'ನೀನು ಸತ್ತೇ ಸಾಯುವೆ' ಎಂದು ಹೇಳಲು ಅವನು ತನ್ನ ಪಾಪವನ್ನು
ಬಿಟ್ಟು ನ್ಯಾಯನೀತಿಗಳನ್ನು ನಡೆಸಲು 15ಅಂದರೆ, ಆ ದುಷ್ಟನು ಒತ್ತೆಯನ್ನು ಬಿಗಿಹಿಡಿಯದೆ,
ದೋಚಿಕೊಂಡದ್ದನ್ನು ಹಿಂದಕ್ಕೆ ಕೊಟ್ಟು, ಜೀವಾಧಾರವಾದ ವಿಧಿಗಳನ್ನು ಅನುಸರಿಸಿ, ಸಕಲ
ದುಷ್ಕರ್ಮಗಳಿಗೂ ದೂರವಾದರೆ ಅವನು ಸಾಯನು, ಬಾಳೇ ಬಾಳುವನು. 16ಅವನು ಮಾಡಿದ ಯಾವ
ಪಾಪವೂ ಅವನ ಲೆಕ್ಕಕ್ಕೆ ಸೇರದು; ನ್ಯಾಯ ನೀತಿಗಳನ್ನು ನಡೆಸುತ್ತಿರುವುದರಿಂದ ಅವನು ಬಾಳೇ ಬಾಳುವನು.

17 "ಆದರೆ ನಿನ್ನ ಜನರು ಸರ್ವೇಶ್ವರನ ಕ್ರಮ ಸರಿಯಲ್ಲವೆಂದು ಹೇಳುತ್ತಿದ್ದಾರೆ. ಬದಲಿಗೆ ಅವರ
ಕ್ರಮವೇ ಸರಿಯಿಲ್ಲ. 18ಶಿಷ್ಟನು ತನ್ನ ಶಿಷ್ಟತನವನ್ನು ಬಿಟ್ಟು ಅಧರ್ಮಮಾಡಿದರೆ, ಆ ಅಧರ್ಮದಿಂದಲೇ

ಸಾಯುವನು. 19ದುಷ್ಟನು ತನ್ನ ದುಷ್ಟತನವನ್ನು ಬಿಟ್ಟು ನೀತಿ ನ್ಯಾಯಗಳನ್ನು ನಡೆಸಿದರೆ, ಅವುಗಳಿಂದ ಉಳಿಯುವನು. 20ಆದರೆ ನೀವು ಸರ್ವೇಶ್ವರನ ಕ್ರಮವು ಸರಿಯಿಲ್ಲವೆಂದು ಹೇಳುತ್ತಿದ್ದೀರಿ; ಇಸ್ರಯೇಲ್ ವಂಶದವರೇ, ನಿಮ್ಮ ನಿಮ್ಮ ನಡತೆಗೆ ತಕ್ಕ ಹಾಗೆ ನಾನು ನಿಮಗೆ ತೀರ್ಪುನೀಡುವೆನು.”

### ಜೆರುಸಲೇಮಿನ ಪತನದ ಸುದ್ದಿ

21 ನಾವು ಸೆರೆಯಾಗಿ ಹನ್ನೆರಡನೆಯ ವರ್ಷದ ಹತ್ತನೆಯ ತಿಂಗಳಿನ ಐದನೆಯ ದಿನದಲ್ಲಿ ಜೆರುಸಲೇಮಿನಿಂದ ಪಲಾಯನ ಮಾಡಿದವನೊಬ್ಬನು ನನ್ನ ಬಳಿಗೆ ಬಂದು, – ‘ಪಟ್ಟಣವು ಶತ್ರು ವಶವಾಯಿತು’ ಎಂದು ಹೇಳಿದನು. 22ಅವನು ಬರುವುದಕ್ಕೆ ಹಿಂದಿನ ಸಾಯಂಕಾಲ ನಾನು ಸರ್ವೇಶ್ವರನ ಹಸ್ತಸ್ಪರ್ಶದಿಂದ ಪರವಶನಾಗಿದ್ದೆ. ಆ ಪಲಾಯಿತನು ಬೆಳಿಗ್ಗೆ ಬರುವನೆಂದು ಸರ್ವೇಶ್ವರ ನನ್ನ ಬಾಯನ್ನು ಬಿಚ್ಚಿದರು; ಹೌದು ನನ್ನ ಬಾಯಿ ಬಿಚ್ಚಿತ್ತು, ನನ್ನ ಮೂಕತನ ಹೋಗಿತ್ತು.

### ಇಸ್ರಯೇಲ್ ಜನರ ಪಾಪಗಳು

23 ಆಗ ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು–24“ನರಪುತ್ರನೇ, ಇಸ್ರಯೇಲ್ ನಾಡಿನ ಹಾಳುಪ್ರದೇಶಗಳಲ್ಲಿ ವಾಸಿಸುವರು, ‘ಅಬ್ರಹಾಮನು ಒಂಟಿಗನಾಗಿದ್ದರೂ ಈ ನಾಡು ಅವನಿಗೆ ಸೊತ್ತಾಗಿ ಸಿಕ್ಕಿತು; ಅದು ಬಹುಜನರಾದ ನಮಗೆ ಸೊತ್ತಾಗಿ ಸಿಕ್ಕಿದ್ದು ಏನು ದೊಡ್ಡದು! ಎಂದುಕೊಳ್ಳುತ್ತಿದ್ದಾರೆ.

25 “ಆದುದರಿಂದ ನೀನು ಅವರಿಗೆ ಹೀಗೆ ನುಡಿ: ‘ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: ರಕ್ತದಿಂದ ಕೂಡಿದ ಮಾಂಸವನ್ನು ತಿನ್ನುತ್ತೀರಿ, ವಿಗ್ರಹಗಳ ಕಡೆಗೆ ಕಣ್ಣೆತ್ತುತ್ತೀರಿ; ರಕ್ತವನ್ನು ಸುರಿಸುತ್ತೀರಿ; ನಿಮ್ಮಥವರು ದೇಶವನ್ನು ಅನುಭವಿಸಬಹುದೇ? 26ನೀವು ಕತ್ತಿ ಬಳಸುವುದರಲ್ಲೇ ನಿರತರಾಗಿದ್ದೀರಿ, ದುರಾಚಾರ ನಡೆಸುತ್ತೀರಿ, ನಿಮ್ಮಲ್ಲಿ ಪ್ರತಿಯೊಬ್ಬನು ತನ್ನ ತನ್ನ ನೆರೆಯವನ ಹೆಂಡತಿಯನ್ನು ಕೆಡಿಸುತ್ತಾನೆ; ನಿಮ್ಮಂಥವರು ದೇಶವನ್ನು ಅನುಭವಿಸಬಹುದೋ?’

27 “ಮತ್ತು ಅವರಿಗೆ ಹೀಗೆ ನುಡಿ – ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನನ್ನ ಜೀವದಾಣೆ, ಹಾಳು ಪ್ರದೇಶಗಳಲ್ಲಿ ಇರುವವರನ್ನು ಖಡ್ಗವು ಹತಿಸುವುದು; ಬಯಲಿನಲ್ಲಿ ಇರುವವರನ್ನು ನಾನು ಮೃಗಗಳಿಗೆ ತುತ್ತುಮಾಡುವೆನು; ಗುಹೆದುರ್ಗಗಳಲ್ಲಿ ಇರುವವರನ್ನು ವ್ಯಾಧಿಯು ಸಾಯಿಸುವದು. 28ನಾನು ದೇಶವನ್ನು ಹಾಳುಪಾಳು ಮಾಡುವೆನು, ಅದರ ಶಕ್ತಿಯ ಮದವು ಇಳಿದು ಹೋಗುವುದು; ಇಸ್ರಯೇಲಿನ ಮಲೆನಾಡು ಬೀಡುಬೀಳುವುದು; ಯಾರೂ ಇಲ್ಲಿ ಹಾದುಹೋಗರು. 29ಅವರು ನಡೆಸಿದ ಬಹುದುರಾಚಾರಗಳ ನಿಮಿತ್ತ ನಾನು ದೇಶವನ್ನು ಹಾಳುಪಾಳು ಮಾಡಿದಾಗ ನಾನೇ ಸರ್ವೇಶ್ವರ ಎಂದು ಅವರಿಗೆ ದೃಢವಾಗುವುದು.

### ಪ್ರವಾದಿಯಿತ್ತ ಸಂದೇಶದ ಪರಿಣಾಮ

30 “ನರಪುತ್ರನೇ, ನಿನ್ನ ಜನರು ಗೋಡೆಗಳ ನೆರಳಿನಲ್ಲೂ ಮನೆಯ ಬಾಗಿಲುಗಳಲ್ಲೂ ನಿಂತು ನಿನ್ನ ಪ್ರಸ್ತಾಪವನ್ನೆತ್ತಿ ಒಬ್ಬರಿಗೊಬ್ಬರು, ‘ಸರ್ವೇಶ್ವರನ ಬಾಯಿಂದ ಹೊರಟ ಮಾತೇನೆಂದು ಕೇಳೋಣ ಬನ್ನಿ’ ಎಂದು ಹೇಳಿಕೊಳ್ಳುತ್ತಿದ್ದಾರೆ. 31ಪ್ರಶ್ನೆ ಕೇಳುವುದಕ್ಕೆ ಬರುವ ಜನರಂತೆ, ಅವರು ನಿನ್ನ ಬಳಿಗೆ ಬಂದು, ನನ್ನ ಭಕ್ತರಾಗಿ ನಿನ್ನ ಮುಂದೆ ಕೂತುಕೊಂಡು, ನಿನ್ನ ಮಾತುಗಳನ್ನು ಕೇಳುತ್ತಾರೆ; ಆದರೆ ಕೈಗೊಳ್ಳುವುದಿಲ್ಲ. ಬಾಯಿಂದ ಬಹು ಪ್ರೀತಿಯನ್ನು ತೋರಿಸುತ್ತಾರೆ; ಅವರ ಮನಸ್ಸಾದರೋ ತಾವು ದೋಚಿಕೊಂಡದ್ದರ ಮೇಲೆ ಇರುತ್ತದೆ. 32ಇಗೋ, ನಿನ್ನ ಮಾತು ಅವರ ಎಣಿಕೆಯಲ್ಲಿ ಒಬ್ಬ ಸಂಗೀತಗಾರನು ವಾದ್ಯವನ್ನು ಜಾಣತನದಿಂದ ಬಾರಿಸಿ ಮಧುರಸ್ವರದಿಂದ ಹಾಡುವ ಪ್ರೇಮಗೀತೆಗೆ ಸಮಾನವಾಗಿದೆ; ನಿನ್ನ ಮಾತುಗಳನ್ನು ಕೇಳುತ್ತಾರೆ, ಆದರೆ ಕೈಗೊಳ್ಳುವುದಿಲ್ಲ. 33ನೀನು ಮುಂತಿಳಿಸಿದ್ದು ಸಂಭವಿಸುವಾಗ ಅದು ಈಗ ಸಂಭವಿಸಲಿದೆ, ತಮ್ಮ ಮಧ್ಯೆ ಇದ್ದವನು ಪ್ರವಾದಿಯೇ ಎಂದು ಅವರಿಗೆ ನಿಶ್ಚಿತವಾಗುವುದು.”

### ಇಸ್ರಯೇಲೆಂಬ ಮಂದೆಯ ಕುರುಬರು

**34** ಸರ್ವೇಶ್ವರಸ್ವಾಮಿ ಈ ವಾಣಿಯನ್ನು ನನಗೆ ದಯಪಾಲಿಸಿದರು. 2 “ನರಪುತ್ರನೇ, ಇಸ್ರಯೇಲೆಂಬ
ಮಂದೆಯ ಕುರುಬರಿಗೆ ವಿರುದ್ಧ ಈ ದೈವೋಕ್ತಿಯನ್ನು ಪ್ರವಚನ ರೂಪವಾಗಿ ನುಡಿ – ಸರ್ವೇಶ್ವರನಾದ
ದೇವರು ಇಂತೆನ್ನುತ್ತಾರೆ – ಅಯ್ಯೋ ಸ್ವಂತ ಹೊಟ್ಟೆ ಹೊರೆದುಕೊಳ್ಳುವ ಇಸ್ರಯೇಲಿನ ಕುರುಬರಿಗೆ ಧಿಕ್ಕಾರ!
ಕುರಿಗಳ ಹೊಟ್ಟೆ ಗಮನಿಸುವುದು ಕುರುಬರ ಧರ್ಮವಲ್ಲವೆ? 3ನೀವು ಅವುಗಳ ಹಾಲನ್ನು ಕುಡಿಯುತ್ತೀರಿ,
ಉಣ್ಣೆಯ ಹೊದಿಕೆಯನ್ನು ಹೊದಿಯುತ್ತೀರಿ. ಕೊಬ್ಬಿದ ಕುರಿಗಳನ್ನು ಕಡಿಯುತ್ತೀರಿ; ಆದರೆ ಕುರಿಗಳನ್ನು
ಮೇಯಿಸುವುದಿಲ್ಲ. 4ಹೌದು, ದುರ್ಬಲವಾದವುಗಳನ್ನು ನೀವು ಬಲಗೊಳಿಸಲಿಲ್ಲ, ರೋಗದವುಗಳನ್ನು ಸ್ವಸ್ಥ
ಮಾಡಲಿಲ್ಲ, ಮುರಿದ ಅಂಗಗಳನ್ನು ಕಟ್ಟಲಿಲ್ಲ, ದಾರಿತಪ್ಪಿದವುಗಳನ್ನು ಮಂದೆಗೆ ಸೇರಿಸಲಿಲ್ಲ,
ತಪ್ಪಿಸಿಕೊಂಡವುಗಳನ್ನು ಹುಡುಕಲಿಲ್ಲ; ಅವುಗಳನ್ನು ಹಿಂಸೆ, ಬಲಾತ್ಕಾರಗಳಿಂದ ಆಳುತ್ತಾ ಬಂದಿದ್ದೀರಿ.
5ಕುರಿಗಾಹಿಗಳು ಇರಲಿಲ್ಲವಾದುದರಿಂದ ಅವು ಚದುರಿಹೋದುವು; ದಿಕ್ಕಾಪಾಲಾಗಿ ಕಾಡಿನ ಸಕಲ
ಮೃಗಗಳಿಗೆ ತುತ್ತಾದವು; 6ನನ್ನ ಕುರಿಗಳು ಮಲೆನಾಡಿನಲ್ಲೆಲ್ಲಾ ಎತ್ತರವಾದ ಪ್ರತಿಯೊಂದು ಬೆಟ್ಟದ ಮೇಲೆ
ಅಲೆದಾಡಿದವು; ಹೌದು, ನನ್ನ ಕುರಿಗಳು ಭೂ ಮಂಡಲದಲ್ಲೆಲ್ಲಾ ಚದರಿಹೋದವು; ಯಾರೂ ಅವುಗಳ
ಹಿಂದೆ ಹೋಗಿ ಹುಡುಕಲಿಲ್ಲ.

7 “ಕುರುಬರೇ, ಸರ್ವೇಶ್ವರನ ಮಾತನ್ನು ಕೇಳಿರಿ; ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ –
8ಅಯ್ಯೋ, ನನ್ನ ಕುರಿಗಳು ಕೊಳ್ಳೆಯಾದವು, ಕಾಡಿನ ಸಕಲಮೃಗಗಳಿಗೆ ತುತ್ತಾದವು; ಕುರುಬರೇ ಇರಲಿಲ್ಲ.
ನನ್ನ ಕುರುಬರು ನನ್ನ ಕುರಿಗಳನ್ನು ಹುಡುಕಲಿಲ್ಲ; ಅವರು ಸ್ವಂತ ಹೊಟ್ಟೆಪಾಡನ್ನು ನೋಡಿಕೊಂಡರೇ
ಹೊರತು, ನನ್ನ ಕುರಿಗಳ ಹೊಟ್ಟೆಯನ್ನು ನೋಡಲೇ ಇಲ್ಲ. 9ಆದ ಕಾರಣ ಕುರುಬರೇ, ಸರ್ವೇಶ್ವರನ
ವಾಕ್ಯವನ್ನು ಕೇಳಿರಿ; 10ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಅಕಟಾ! ನನ್ನ ಜೀವದಾಣೆ, ನಾನು ಆ
ಕುರಿಗಾಹಿಗಳಿಗೆ ವಿರುದ್ಧನಾಗಿದ್ದೇನೆ; ಅವರು ನನ್ನ ಕುರಿಗಳ ಲೆಕ್ಕವನ್ನು ನನಗೆ ಒಪ್ಪಿಸಬೇಕು; ನನ್ನ ಕುರಿ
ಮೇಯಿಸುವ ಕೆಲಸದಿಂದ ಅವರನ್ನು ತೆಗೆದುಬಿಡುವೆನು; ಆ ಕುರುಬರು ಇನ್ನು ಸ್ವಂತ ಹೊಟ್ಟೆಯನ್ನು
ತುಂಬಿಸಿಕೊಳ್ಳರು; ನನ್ನ ಕುರಿಗಳು ಆಹಾರವಾಗಿ ಅವರ ಬಾಯಿಗೆ ಬೀಳದಂತೆ ಅವುಗಳನ್ನು ರಕ್ಷಿಸುವೆನು.

### ಸರ್ವೇಶ್ವರನೇ ಒಳ್ಳೆಯ ಕುರಿಗಾಹಿ

11 “ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಆಹಾ, ನಾನೇ ನನ್ನ ಕುರಿಗಳನ್ನು ಹಿಂಬಾಲಿಸಿ
ಹುಡುಕುವೆನು. 12ಮಂದೆಯ ಕುರುಬನು ಸುತ್ತಮುತ್ತಲು ಚದರಿಹೋದ ತನ್ನ ಕುರಿಗಳನ್ನು ಹುಡುಕುವ
ಹಾಗೆ ನಾನು ನನ್ನ ಕುರಿಗಳನ್ನು ಹುಡುಕುವೆನು; 13ಕಾರ್ಮುಗಿಲಿನ ದುರ್ದಿನದಲ್ಲಿ ಚೆಲ್ಲಾಪಿಲ್ಲಿಯಾದ
ಅವುಗಳನ್ನು ಎಲ್ಲ ಸ್ಥಳಗಳಿಂದ ಬಿಡಿಸಿ, ಜನಾಂಗಗಳ ವಶದಿಂದ ತಪ್ಪಿಸಿ, ದೇಶಗಳಿಂದ ಒಟ್ಟುಗೂಡಿಸಿ,
ಸ್ವದೇಶಕ್ಕೆ ಬರಮಾಡಿ ಇಸ್ರಯೇಲಿನ ಬೆಟ್ಟಗಳಲ್ಲೂ, ತೊರೆಗಳ ಬಳಿಯಲ್ಲೂ ನಾಡಿನ ಎಲ್ಲ ಹಕ್ಕೆಗಳಲ್ಲೂ
ಮೇಯಿಸುವೆನು; 14ಅವುಗಳಿಗೆ ಒಳ್ಳೆಯ ಮೇವನ್ನು ಮೇಯಿಸುವೆನು; ಅವುಗಳ ಹುಲ್ಲುಗಾವಲು
ಇಸ್ರಯೇಲಿನ ಎತ್ತರವಾದ ಬೆಟ್ಟಗಳಲ್ಲಿರುವುದು; ಅಲ್ಲಿ ಒಳ್ಳೆಯ ತೆವರಿನಲ್ಲಿ ಮಲಗುವುವು; ಇಸ್ರಯೇಲಿನ
ಬೆಟ್ಟಗಳಲ್ಲಿ ಹಸಿಹುಲ್ಲನ್ನು ಮೇಯುವುವು. 15ನಾನೇ ನನ್ನ ಕುರಿಗಳನ್ನು ಮೇಯಿಸಿ ಹಾಯಾಗಿ ಮಲಗುವಂತೆ
ಮಾಡುವೆನು; ಇದು ಸರ್ವೇಶ್ವರನಾದ ದೇವರ ನುಡಿ.

16 “ತಪ್ಪಿಸಿಕೊಂಡಿದ್ದನ್ನು ಹುಡುಕುವೆನು, ದಾರಿತಪ್ಪಿದ್ದನ್ನು ಮಂದೆಗೆ ಸೇರಿಸುವೆನು,
ದುರ್ಬಲವಾದುದನ್ನು ಬಲಗೊಳಿಸುವೆನು, ಮುರಿದ ಅಂಗವನ್ನು ಕಟ್ಟುವೆನು; ಬಲಿತ ಕೊಬ್ಬಿದ
ಕುರಿಗಳನ್ನಾದರೋ ಧ್ವಂಸಮಾಡುವೆನು; ಅವುಗಳಿಗೆ ನ್ಯಾಯದಂಡನೆ ಎಂಬ ಮೇವನ್ನು ತಿನ್ನಿಸುವೆನು.”

17 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – “ನನ್ನ ಹಿಂಡೇ, ಇಗೋ, ನಾನು ನಿಮ್ಮಲ್ಲಿನ
ಕುರಿಮೇಕೆಗಳಿಗೂ ಟಗರುಹೋತಗಳಿಗೂ ಮಧ್ಯವರ್ತಿಯಾಗಿ ನ್ಯಾಯ ತೀರಿಸುವೆನು. 18(ಟಗರು
ಹೋತಗಳೇ,) ಒಳ್ಳೆಯ ಮೇವನ್ನು ನೀವು ಮೇದುಬಿಟ್ಟು ಮಿಕ್ಕ ಮೇವನ್ನು ತುಳಿದು, ಕಾಲಕಸ ಮಾಡಿದ್ದು
ಅಲ್ಪ ಕಾರ್ಯವೋ? ತಿಳಿನೀರನ್ನು ಕುಡಿದುಬಿಟ್ಟು ಮಿಕ್ಕದ್ದನ್ನು ಕಾಲಿನಿಂದ ಕಲಕಿ ಬದಿಮಾಡಿದ್ದು ಸಣ್ಣ

ಕೆಲಸವೋ? 19ನೀವು ತುಳಿದು ಕಾಲ ಕಸಮಾಡಿದ್ದನ್ನು ನನ್ನ ಕುರಿಗಳು ಮೇಯಬೇಕಾಯಿತು. ನೀವು ಕಾಲಿನಿಂದ ಕಲಕಿ ಬದಿಮಾಡಿದ್ದನ್ನು ಅವು ಕುಡಿಯಬೇಕಾಯಿತು.

20 "ಹೀಗಿರಲು ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಇಗೋ, ನಾನೇ ಕೊಬ್ಬಿದ ಟಗರು
ಹೋತಗಳಿಗೂ ಬಡ ಕುರಿಮೇಕೆಗಳಿಗೂ ನ್ಯಾಯತೀರಿಸುವೆನು. 21ಟಗರು ಹೋತಗಳೇ, ನೀವು
ಕುರಿಮೇಕೆಗಳನ್ನು ಪಕ್ಕದಿಂದಲೂ ಹೆಗಲಿನಿಂದಲೂ ನೂಕುತ್ತಾ ದುರ್ಬಲವಾದವುಗಳನ್ನು ಕೊಂಬುಗಳಿಂದ
ಹಾಯುತ್ತಾ ನನ್ನ ಹಿಂಡನ್ನು ಚದರಿಸಿಬಿಟ್ಟಿರಿ; 22ಆದಕಾರಣ ನನ್ನ ಹಿಂಡು ಇನ್ನೆಂದಿಗೂ ಸೂರೆಯಾಗದಂತೆ
ನಾನು ಅದನ್ನು ರಕ್ಷಿಸಿ ಟಗರುಹೋತಗಳಿಗೂ ಕುರಿಮೇಕೆಗಳಿಗೂ ನ್ಯಾಯತೀರಿಸುವೆನು.

23 "ನನ್ನ ಹಿಂಡನ್ನು ಕಾಯಲು ಒಬ್ಬನೇ ಕುರುಬನನ್ನು ಏರ್ಪಡಿಸುವೆನು; ನನ್ನ ದಾಸ
ದಾವೀದನೆಂಬ ಆ ಕುರುಬನು ಅದನ್ನು ಮೇಯಿಸುವನು; ಹೌದು, ಅದರ ಕುರುಬನಾಗಿ ಅದನ್ನು
ಮೇಯಿಸುತ್ತಾ ಬರುವನು. 24ಸರ್ವೇಶ್ವರನಾದ ನಾನು ನನ್ನ ಜನರ ದೇವರಾಗಿರುವೆನು; ನನ್ನ ದಾಸ
ದಾವೀದನು ಅವರನ್ನಾಳುವ ಪ್ರಭುವಾಗಿರುವನು; ಸರ್ವೇಶ್ವರನಾದ ನಾನೇ ಇದನ್ನು ನುಡಿದಿದ್ದೇನೆ. 25ನಾನು
ಅವರೊಂದಿಗೆ ಶಾಂತಿ ಸಮಾಧಾನದ ಒಡಂಬಡಿಕೆಯನ್ನು ಮಾಡಿಕೊಳ್ಳುವೆನು; ದುಷ್ಟಮೃಗಗಳು ನಾಡಿನಲ್ಲಿ
ಇನ್ನಿರದಂತೆ ಮಾಡುವೆನು; ನನ್ನ ಜನರು ಕಾಡಿನಲ್ಲಿ ನಿರ್ಭಯವಾಗಿ ವಾಸಿಸುವರು, ಅರಣ್ಯದಲ್ಲಿ ಹಾಯಾಗಿ
ನಿದ್ರಿಸುವರು. 26ನಾನು ಅವರನ್ನೂ ನನ್ನ ಪರ್ವತದ ಸುತ್ತಣ ಪ್ರದೇಶಗಳನ್ನೂ ಆಶೀರ್ವದಿಸಿ
ಸುಖಪಡಿಸುವೆನು; ಕಾಲಕ್ಕೆ ಸರಿಯಾಗಿ ಮಳೆಯನ್ನು ಸುರಿಸುವೆನು; ಶುಭದಾಯಕ ವೃಷ್ಟಿ ಆಗುವುದು.
27ತೋಟದ ಮರಗಳು ಹಣ್ಣು ಬಿಡುವುವು; ಹೊಲಗಳು ಒಳ್ಳೆಯ ಬೆಳೆಕೊಡುವುವು; ಜನರು ಸ್ವದೇಶದಲ್ಲಿ
ನೆಮ್ಮದಿಯಾಗಿರುವರು; ಅವರ ಮೇಲೆ ಹೇರಿದ ನೊಗಗಳನ್ನು ನಾನು ಮುರಿದು ಹಾಕಿ, ಅವರನ್ನು
ಅಡಿಯಾಳಾಗಿ ಮಾಡಿಕೊಂಡವರ ಅಧೀನದಿಂದ ಬಿಡಿಸಿದಾಗ, ನಾನೇ ಸರ್ವೇಶ್ವರ ಎಂದು ಅವರಿಗೆ
ದೃಢವಾಗುವುದು. 28ಅಂದಿನಿಂದ ಅವರನ್ನು ಅನ್ಯಜನರು ಸೂರೆಮಾಡರು, ಕಾಡುಮೃಗಗಳು ನುಂಗವು;
ಅವರು ಯಾರಿಗೂ ಹೆದರದೆ ನೆಮ್ಮದಿಯಾಗಿ ವಾಸಿಸುವರು. 29ನಾನು ಅವರಿಗಾಗಿ ಪ್ರಸಿದ್ಧ ಫಲವೃಕ್ಷಗಳನ್ನು
ಬೆಳೆಯಿಸುವೆನು, ಕ್ಷಾಮವು ಅವರ ನಾಡನ್ನು ಇನ್ನು ಹಾಳು ಮಾಡದು. ಅವರು ಅನ್ಯಜನರ ತಿರಸ್ಕಾರಕ್ಕೆ
ಗುರಿಯಾಗರು. 30ಆಗ ಅವರು ತಮ್ಮ ದೇವರಾದ ಸರ್ವೇಶ್ವರನೆಂಬ ನಾನು ತಮ್ಮೊಂದಿಗಿದ್ದೇನೆಂದೂ
ಇಸ್ರಯೇಲ್ ವಂಶದವರಾದ ತಾವು ನನ್ನ ಜನರಾಗಿದ್ದೇವೆಂದೂ ನಿಶ್ಚಯಿಸಿಕೊಳ್ಳುವರು; ಇದು
ಸರ್ವೇಶ್ವರನಾದ ದೇವರ ನುಡಿ. 31ನೀವು ನನ್ನ ಕುರಿಗಳು, ನನ್ನ ಕಾವಲಿನ ಕುರಿಗಳು, ನರಕುರಿಗಳಾದ
ನಿಮಗೆ ನಾನು ದೇವರು," ಎಂದು ಸರ್ವೇಶ್ವರನಾದ ದೇವರು ಹೇಳುತ್ತಾರೆ.

## ಎದೋಮಿನ ಬೆಟ್ಟಕುರಿತ ದೈವೋಕ್ತಿ

**35** ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು – 2"ನರಪುತ್ರನೇ, ನೀನು ಸೇಯೀರ
ಬೆಟ್ಟದ ಸೀಮೆಗೆ ಅಭಿಮುಖನಾಗಿ ಅದಕ್ಕೆ ಈ ದೈವೋಕ್ತಿಯನ್ನು ನುಡಿ – ಸರ್ವೇಶ್ವರನಾದ ದೇವರು
ಇಂತೆನ್ನುತ್ತಾರೆ:–

3 ಎದೋಮೇ ಇಗೋ,
ನಿನಗೆ ನಾ ವಿರೋಧಿಯಾಗಿರುವೆ
ನಿನ್ನ ನಾಡಿನ ಮೇಲೆ ಕೈಯೆತ್ತಿ
ನಾಶಪಡಿಸುವೆ.
4 ನಿನ್ನ ಪಟ್ಟಣಗಳು ಹಾಳಾಗುವುವು;
ನೀ ಕಾಡಾಗುವೆ.
ಆಗ ನಾನೇ ಸರ್ವೇಶ್ವರನೆಂದು ನೀನು
ತಿಳಿದುಕೊಳ್ಳುವೆ.

5 “ನೀನು ಇಸ್ರಯೇಲಿನ ಮೇಲೆ ದೀರ್ಘ ದ್ವೇಷವಿಟ್ಟು, ಅವರ ಅಪರಾಧದ ಕಡೆಗಾಲದಲ್ಲಿ ಆಪತ್ತು ಸಂಭವಿಸಿದಾಗ, ಅವರನ್ನು ಕತ್ತಿಯ ಬಾಯಿಗೆ ಗುರಿಮಾಡಿದ್ದೆ. 6ಆದುದರಿಂದ ನನ್ನ ಜೀವದಾಣೆ, ನಾನು ನಿನ್ನನ್ನು ರಕ್ತಮಯಮಾಡುವೆನು. ರಕ್ತದ ಕೋಡಿ ನಿನ್ನನ್ನು ಹಿಂದಟ್ಟುವುದು; ನೀನು ರಕ್ತ ಸುರಿಸುವುದಕ್ಕೆ ಹೇಸದೆ ಹೋದ ಕಾರಣ, ರಕ್ತಪ್ರವಾಹವೇ ನಿನ್ನ ಬೆನ್ನಹತ್ತುವುದು; ಇದು ಸರ್ವೇಶ್ವರನಾದ ದೇವರ ನುಡಿ. 7ಸೆಯೀರ್ ಬೆಟ್ಟವೇ, ನಾನು ನಿನ್ನ ಸೀಮೆಯನ್ನು ಹಾಳು ಪಾಳು ಮಾಡಿ ಅದರೊಳಗೆ ಹೋಗುವವರನ್ನೂ ಬರುವವರನ್ನೂ ಕತ್ತರಿಸಿಬಿಟ್ಟು, 8ನಿನ್ನ ಪರ್ವತಗಳನ್ನು ನಿನ್ನವರ ಶವಗಳಿಂದ ತುಂಬಿಸುವೆನು; ಖಡ್ಗಹತರು ನಿನ್ನ ಗುಡ್ಡತಗ್ಗು ತೊರೆಗಳಲ್ಲಿ ಬಿದ್ದುಹೋಗುವರು. 9ನಾನು ನಿನ್ನನ್ನು ನಿತ್ಯನಾಶನಕ್ಕೆ ಈಡುಮಾಡುವೆನು; ನಿನ್ನ ಪಟ್ಟಣಗಳು ನಿರ್ಜನವಾಗುವುವು; ಆಗ ನಾನೇ ಸರ್ವೇಶ್ವರ ಎಂದು ನಿನ್ನವರಿಗೆ ನಿಶ್ಚಿತವಾಗುವುದು.

10 “ನೀನು ‘ಇವೆರಡು ಜನಾಂಗಗಳೂ ಇವೆರಡು ದೇಶಗಳೂ ನನ್ನ ವಶವಾಗುವುವು, ನಾವು ಅವುಗಳನ್ನು ಅನುಭವಿಸುವೆವು’ ಎಂದುಕೊಂಡು ಅಲ್ಲಿನ ನನ್ನ ಸಾನ್ನಿಧ್ಯವನ್ನು ಅಲಕ್ಷ್ಯಮಾಡಿದ್ದೆ. 11ಆದುದರಿಂದ ನನ್ನ ಜೀವದಾಣೆ, ನೀನು ನನ್ನ ಜನರನ್ನು ದ್ವೇಷಿಸಿ, ಅವರ ಮೇಲಿಟ್ಟ ಕೋಪಕ್ಕೂ ಮಾತ್ಸರ್ಯಕ್ಕೂ ನಾನು ನಿನಗೆ ಪ್ರತೀಕಾರಮಾಡುವೆನು; ನಿನ್ನನ್ನು ದಂಡಿಸುವಾಗ ನಾನು ಅವರಿಗೆ ಗೋಚರವಾಗುವೆನು. ಇದು ಸರ್ವೇಶ್ವರನಾದ ದೇವರ ನುಡಿ. 12ನೀನು ಇಸ್ರಯೇಲಿನ ಪರ್ವತಗಳನ್ನು ನೋಡಿ, – ‘ಆಹಾ, ಹಾಳಾದವು, ನಮಗೆ ತಿನ್ನುವ ತುತ್ತಾಗಿವೆ’, ಎಂದು ಮಾಡಿದ ದೂಷಣೆಗಳು ಸರ್ವೇಶ್ವರನಾದ ನನ್ನ ಕಿವಿಗೆ ಬಿದ್ದಿವೆ ಎಂಬುದು ನಿನಗೆ ಗೊತ್ತಾಗುವುದು. 13ನಿನ್ನವರು ದೊಡ್ಡ ಬಾಯಿಮಾಡಿ ನನ್ನ ಮೇಲೆ ಆಡಿದ ಅತಿಯಾದ ಹರಟೆಗಳನ್ನು ಕೇಳಿದ್ದೇನೆ.”

14 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – “ನಾನು ನಿನ್ನನ್ನು ಹಾಳುಮಾಡಿ ಜಗವನ್ನೆಲ್ಲಾ ಸಂತೋಷಪಡಿಸುವೆನು. 15ಇಸ್ರಯೇಲರ ಸೊತ್ತಿನ ನಾಶನಕ್ಕೆ ಜಗವೆಲ್ಲಾ ಸಂತೋಷಪಡುವಂತೆ ಮಾಡುವೆನು; ಸೆಯೀರ್ ಬೆಟ್ಟವೇ, ನೀನು ಹಾಳಾಗುವೆ; ಹೌದು, ಎದೋಮ್ ಸೀಮೆಯೆಲ್ಲಾ ತೀರಾ ಹಾಳಾಗುವುದು; ಆಗ ನಾನೇ ಸರ್ವೇಶ್ವರ ಎಂದು ವ್ಯಕ್ತವಾಗುವುದು.”

### ಇಸ್ರಯೇಲರ ಮುಂದಿನ ಸೌಭಾಗ್ಯ

**36** “ನರಪುತ್ರನೇ, ನೀನು ಇಸ್ರಯೇಲಿನ ಪರ್ವತಗಳಿಗೆ ಈ ದೈವೋಕ್ತಿಯನ್ನು ನುಡಿ: ಇಸ್ರಯೇಲಿನ ಪರ್ವತಗಳೇ, ಸರ್ವೇಶ್ವರನ ಈ ವಾಕ್ಯವನ್ನು ಕೇಳಿರಿ: 2ಶತ್ರು ನಿಮ್ಮನ್ನು ನೋಡಿ, ‘ಆಹಾ ಈ ಪುರಾತನ ದುರ್ಗಗಳು ನಮ್ಮ ವಶವಾಗಿವೆ’ ಎಂದು ಹಿಗ್ಗಿಕೊಂಡದ್ದರಿಂದ ಈ ದೈವೋಕ್ತಿಯನ್ನು ನುಡಿಯಬೇಕೆಂದು ಸರ್ವೇಶ್ವರನಾದ ದೇವರ ಅಪ್ಪಣೆಯಾಯಿತು.”

3 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: “ಅಯ್ಯೋ, ಎಲ್ಲಾ ಕಡೆಯೂ ತುಳಿಯಲ್ಪಟ್ಟು, ಹಾಳಾದ ನೀವು, ಜನಾಂಗಗಳಲ್ಲಿ ಉಳಿದವರ ವಶವಾಗಿದ್ದು ಹರಟೆಕೊಚ್ಚುವವರ ಬಾಯಿಗೆ ಬಿದ್ದು, ಜನರ ದೂಷಣೆಗೆ ಗುರಿಯಾಗಿದ್ದೀರಿ. 4ಆದಕಾರಣ ಇಸ್ರಯೇಲಿನ ಪರ್ವತಗಳೇ, ಸರ್ವೇಶ್ವರನಾದ ದೇವರ ಈ ವಾಕ್ಯವನ್ನು ಕೇಳಿರಿ – ಬೆಟ್ಟಗುಡ್ಡಗಳಿಗೆ ತೊರೆತಗ್ಗುಗಳಿಗೆ, ಕಾಡಾದ ಹಾಳು ಪ್ರದೇಶಗಳಿಗೆ, ಸುತ್ತಣ ಜನಾಂಗಗಳಲ್ಲಿ ಉಳಿದವರು ಕೊಳ್ಳೆಹೊಡೆದು ಅಣಕಿಸುವ ಹಾಳು ಪಟ್ಟಣಗಳಿಗೆ ಸರ್ವೇಶ್ವರನಾದ ದೇವರು ಹೀಗೆ ನುಡಿಯುತ್ತಾರೆ:

5 “ಆಹಾ, ನನ್ನ ದೇಶವನ್ನು ತಮ್ಮ ಸೊತ್ತಾಗಿ ಮಾಡಿಕೊಂಡು, ಪೂರ್ಣ ಹೃದಯದಿಂದ ಆನಂದ ಪಟ್ಟವರು ಹಾಗು ಅದನ್ನು ಮನಃಪೂರ್ವಕವಾಗಿ ತಿರಸ್ಕರಿಸಿ ಸೂರೆಗೆ ತಳ್ಳಿಬಿಟ್ಟವರು ಆದ ಎದೋಮಿನವರೆಲ್ಲರನ್ನು ಮತ್ತು ಇತರ ಜನಾಂಗಗಳಲ್ಲಿ ಉಳಿದವರನ್ನು ನಾನು ರೋಷಾವೇಶದಿಂದ ಶಪಿಸಿಯೇ ಶಪಿಸಿದ್ದೇನೆ.

6 “ಹೀಗಿರಲು ಇಸ್ರಯೇಲ್ ನಾಡಿನ ವಿಷಯವಾದ ಈ ದೈವೋಕ್ತಿಯನ್ನು ಅದರ ಬೆಟ್ಟ – ಗುಡ್ಡ, ತೊರೆ–ತಗ್ಗುಗಳಿಗೆ ನುಡಿಯಬೇಕೆಂದು ಅಪ್ಪಣೆಯಾಗಿದೆ – ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ಆಹಾ, ನಾನು ಕೋಪೋದ್ರೇಕದಿಂದ, ರೋಷಾವೇಶದಿಂದ ಮಾತನಾಡಿದ್ದೇನೆ. ನೀವು ಅನ್ಯಜನಾಂಗಗಳಿಗೆ

ಅವಮಾನವನ್ನು ಅನುಭವಿಸಿದ್ದೀರಿ. 7ಆದಕಾರಣ ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನಿಮ್ಮ
ಸುತ್ತಣ ಆ ಅನ್ಯ ಜನಾಂಗಗಳೇ ತಮ್ಮ ಮೇಲೆ ಬಿದ್ದ ಅವಮಾನವನ್ನು ಅನುಭವಿಸುವದು ಖಂಡಿತ ಎಂದು
ಕೈಯೆತ್ತಿ ಪ್ರಮಾಣಮಾಡಿದ್ದೇನೆ. 8ಇಸ್ರಯೇಲಿನ ಪರ್ವತಗಳೇ, ನಿಮ್ಮ ಗಿಡಗಳು ರೆಂಬೆಗಳನ್ನು ಹರಡಿಕೊಂಡು
ನನ್ನ ಜನರಾದ ಇಸ್ರಯೇಲರಿಗೆ ಫಲಕೊಡುವುವು; ಅವರ ಬರುವಿಕೆ ಸಮೀಪವಾಯಿತು. 9ಇಗೋ, ನಾನು
ನಿಮ್ಮ ಪಕ್ಷದವನು; ನಿಮ್ಮ ಕಡೆಗೆ ತಿರುಗಿಕೊಳ್ಳುವೆನು. 10ನಿಮ್ಮ ಹೊಲಗಳನ್ನು ಉಳುಮೆಮಾಡಿ ಬಿತ್ತುವರು;
ನಿಮ್ಮಲ್ಲಿ ಬಹು ಜನರು ಅಂದರೆ, ಇಸ್ರಯೇಲ್ ವಂಶವೆಲ್ಲವೂ ವಾಸಿಸುವಂತೆ ಮಾಡುವೆನು; ಪಟ್ಟಣಗಳು
ಜನಭರಿತವಾಗುವುವು, ಹಾಳುನಿವೇಶನಗಳಲ್ಲಿ ಕಟ್ಟಡಗಳು, ಏಳುವುವು; 11ನಿಮ್ಮಲ್ಲಿ ಬಹು ಜನರನ್ನೂ
ಪಶುಗಳನ್ನೂ ವೃದ್ಧಿಗೊಳಿಸುವೆನು; ಅವು ಹೆಚ್ಚಿ ಫಲಭರಿತವಾಗುವುವು. ಮೊದಲಿನಂತೆ ನಿಮ್ಮಲ್ಲಿ
ನಿವಾಸಿಗಳನ್ನು ತುಂಬಿಸಿ, ಮೊದಲಿಗಿಂತ ನಿಮ್ಮನ್ನು ಉತ್ತಮಸ್ಥಿತಿಗೆ ತರುವೆನು; ನಾನೇ ಸರ್ವೇಶ್ವರ ಎಂದು
ನಿಮಗೆ ದೃಢವಾಗುವುದು, 12ಬೆಟ್ಟದ ಸೀಮೆಯೇ, ನಾನು ನಿನ್ನಲ್ಲಿ ಜನಸಂಚಾರವನ್ನು ಉಂಟುಮಾಡುವೆನು;
ನನ್ನ ಜನರಾದ ಇಸ್ರಯೇಲರೇ, ನಿನ್ನಲ್ಲಿ ಸಂಚರಿಸುತ್ತಾ, ನಿನ್ನನ್ನು ಸೊತ್ತಾಗಿ ಅನುಭವಿಸಿದರು; ನೀನು ಇನ್ನು
ಅವರಿಗೆ ಪುತ್ರ ಶೋಕವನ್ನು ಕೊಡದಿರುವೆ."

13 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "'ನೀನು ನರಭಕ್ಷಕನಾಗಿ ನಿನ್ನ ಪ್ರಜೆಗೆ
ಪುತ್ರಶೋಕವನ್ನು ಕೊಟ್ಟಿರುವೆ' ಎಂದು ನಿನ್ನನ್ನು ಬಯ್ಯುತ್ತಾರಲ್ಲವೆ? 14ಇನ್ನು ಮುಂದೆ ನೀನು ನರಭಕ್ಷಕ
ನಾಗುವುದಿಲ್ಲ; ನಿನ್ನ ಪ್ರಜೆಗೆ ಇನ್ನು ಪುತ್ರಶೋಕವನ್ನು ಕೊಡದಿರುವೆ; 15ಮ್ಲೇಚ್ಛರ ಧಿಕ್ಕಾರವನ್ನು ಇನ್ನು ನಿನ್ನ
ಕಿವಿಗೆ ಬೀಳಿಸೆನು; ನೀನು ಜನಾಂಗಗಳಿಂದ ಇನ್ನು ಅವಮಾನವನ್ನು ಅನುಭವಿಸದಿರುವೆ; ನಿನ್ನ ಪ್ರಜೆ
ಮುಗ್ಗರಿಸುವುದಕ್ಕೆ ಇನ್ನು ನೀನು ಕಾರಣನಾಗುವುದಿಲ್ಲ" ಇದು ಸರ್ವೇಶ್ವರನಾದ ದೇವರ ನುಡಿ.

### ಇಸ್ರಯೇಲಿನ ನವಜೀವನ

16 ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು – 17"ನರಪುತ್ರನೇ, ಇಸ್ರಯೇಲ್
ವಂಶದವರು ಸ್ವದೇಶದಲ್ಲಿ ವಾಸಿಸುತ್ತಿದ್ದಾಗ ತಮ್ಮ ದುರ್ಮಾರ್ಗ ದುರಾಚಾರಗಳಿಂದ ಅದನ್ನು
ಅಶುದ್ಧಗೊಳಿಸಿದರು. ಅವರ ನಡತೆ ಮುಟ್ಟಿನ ಹೊಲಸಿನಂತೆ ನನಗೆ ಅಸಹ್ಯವಾಗಿತ್ತು. 18ಅವರು ನಾಡಿನ
ಮೇಲೆ ರಕ್ತವನ್ನು ಸುರಿಸಿ, ತಮ್ಮ ವಿಗ್ರಹಗಳಿಂದ ಅದನ್ನು ಹೊಲೆಗೈದಕಾರಣ ನಾನು ಅವರ ಮೇಲೆ ನನ್ನ
ರೋಷಾಗ್ನಿಯನ್ನು ಸುರಿಸಿವೆನು; 19ಜನಾಂಗಗಳೊಳಗೆ ಅವರನ್ನು ಚದರಿಸುವೆನು; ದೇಶಗಳಿಗೆ ತೂರಿಬಿಟ್ಟು,
ಅವರ ದುರ್ಮಾರ್ಗ ದುರಾಚಾರಗಳಿಗೆ ಸರಿಯಾಗಿ ದಂಡಿಸಿದೆನು. 20ಅವರು ಆ ಜನಾಂಗಗಳೊಳಗೆ
ಸೇರಿಕೊಂಡ ಮೇಲೆ, 'ಓಹೋ, ಇವರು ಸರ್ವೇಶ್ವರನ ಪ್ರಜೆಗಳು, ಆತನ ದೇಶದಿಂದ ಭ್ರಷ್ಟರಾಗಿ ಬಂದಿದ್ದಾರೆ'
ಎಂದೆನಿಸಿಕೊಂಡರು. ನನ್ನ ಪರಿಶುದ್ಧನಾಮಕ್ಕೆ ಅಪಕೀರ್ತಿಯನ್ನು ತಂದರು. 21 ಇಸ್ರಯೇಲ್ ವಂಶದವರು
ಜನಾಂಗಗಳೊಳಗೆ ಸೇರಿ, ಅಲ್ಲಿ ಅಪಕೀರ್ತಿಗೆ ಗುರಿಮಾಡಿದ ನನ್ನ ಪರಿಶುದ್ಧ ನಾಮವನ್ನು ಕುರಿತು, ನಾನು
ಮರುಗಿದೆನು.

22 "ಆದಕಾರಣ – ನೀನು ಇಸ್ರಯೇಲ್ ವಂಶದವರಿಗೆ ಹೀಗೆ ನುಡಿ – ಸರ್ವೇಶ್ವರನಾದ ದೇವರು
ಇಂತೆನ್ನುತ್ತಾರೆ – ಇಸ್ರಯೇಲ್ ವಂಶದವರೇ, ನಿಮ್ಮ ನಿಮಿತ್ತವಲ್ಲ, ನೀವು ಜನಾಂಗಗಳೊಳಗೆ ಸೇರಿ
ಅಪಕೀರ್ತಿಗೆ ಗುರಿಮಾಡಿದ ನನ್ನ ಪರಿಶುದ್ಧನಾಮದ ನಿಮಿತ್ತವೆ, ಈ ರಕ್ಷಣಾ ಕಾರ್ಯವನ್ನು ಮಾಡುತ್ತೇನೆ.
23ಜನಾಂಗಗಳಲ್ಲಿ ಅಪಕೀರ್ತಿಗೆ ಗುರಿಯಾದ, ಅಂದರೆ ನೀವು ಜನಾಂಗಗಳ ನಡುವೆ ಅಪಕೀರ್ತಿಗೆ
ಗುರಿಮಾಡಿದ ನನ್ನ ಶ್ರೀನಾಮದ ಗೌರವವನ್ನು ನಾನು ಕಾಪಾಡಿಕೊಳ್ಳುವೆನು. ಹೀಗೆ ನಾನು ಅವುಗಳ
ಕಣ್ಣೆದುರಿಗೆ, ನಿಮ್ಮ ರಕ್ಷಣೆಯ ಮೂಲಕ ನನ್ನ ಗೌರವವನ್ನು ಕಾಪಾಡಿಕೊಳ್ಳುವೆನು. ಆಗ ನಾನೇ ಸರ್ವೇಶ್ವರ
ಎಂದು ಅವುಗಳಿಗೆ ನಿಶ್ಚಿತವಾಗುವುದು. ಇದು ಸರ್ವೇಶ್ವರನಾದ ದೇವರ ನುಡಿ. 24ನಾನು ನಿಮ್ಮನ್ನು
ಜನಾಂಗಗಳಿಂದ ಬಿಡಿಸಿ, ಸಕಲ ದೇಶಗಳಿಂದ ಒಟ್ಟುಗೂಡಿಸಿ, ಸ್ವದೇಶಕ್ಕೆ ಬರಮಾಡುವೆನು. 25ನಾನು ನಿಮ್ಮ
ಮೇಲೆ ನಿರ್ಮಲೋದಕವನ್ನು ಪ್ರೋಕ್ಷಿಸುವೆನು, ನೀವು ನಿರ್ಮಲರಾಗುವಿರಿ; ನಿಮ್ಮ ಸಮಸ್ತ
ವಿಗ್ರಹಗಳಿಂದಲೂ ಸಕಲ ವಿಧವಾದ ಹೊಲಸಿನಿಂದಲೂ ನಿಮ್ಮನ್ನು ಶುದ್ಧಿಮಾಡುವೆನು. 26ನಾನು ನಿಮಗೆ
ಹೊಸ ಮನಸ್ಸನ್ನು ಕೊಟ್ಟು, ನಿಮ್ಮಲ್ಲಿ ನನ್ನ ಸ್ವಭಾವವನ್ನು ಹುಟ್ಟಿಸುವೆನು. ಕಲ್ಲಾದ ಹೃದಯವನ್ನು

ನಿಮ್ಮೊಳಗಿಂದ ತೆಗೆದು, ಮೃದುವಾದ ಹೃದಯವನ್ನು ನಿಮಗೆ ದಯಪಾಲಿಸುವೆನು. 27ನನ್ನ ಆತ್ಮವನ್ನು
ನಿಮ್ಮಲ್ಲಿ ನೆಲೆಸಿರುವಂತೆ ಅನುಗ್ರಹಿಸಿ, ನೀವು ನನ್ನ ನಿಯಮಗಳನ್ನು ಅನುಸರಿಸುವ ಹಾಗೆ ಮಾಡುವೆನು.
ನೀವು ನನ್ನ ವಿಧಿಗಳನ್ನು ಕೈಗೊಂಡು ಆಚರಿಸುವಿರಿ. 28ನಾನು ನಿಮ್ಮ ಪಿತೃಗಳಿಗೆ ಅನುಗ್ರಹಿಸಿದ ನಾಡಿನಲ್ಲಿ
ನೀವು ವಾಸಿಸುವಿರಿ. ನೀವು ನನಗೆ ಪ್ರಜೆಯಾಗಿರುವಿರಿ, ನಾನು ನಿಮಗೆ ದೇವರಾಗಿರುವೆನು. 29ನಾನು
ನಿಮ್ಮನ್ನು ನಿಮ್ಮ ಎಲ್ಲ ಅಶುದ್ಧತೆಯಿಂದ ಉದ್ಧರಿಸಿ, ಕಾಳನ್ನು ಬೆಳೆಯಲೆಂದು ಅಪ್ಪಣೆಕೊಟ್ಟು ಅದನ್ನು
ವೃದ್ಧಿಗೊಳಿಸುವೆನು; ನಿಮಗೆ ಕ್ಷಾಮವನ್ನು ಇನ್ನು ಬರಮಾಡೆನು. 30ನೀವು ಕ್ಷಾಮದೇಶದವರೆಂದು
ಜನಾಂಗಗಳು ಇನ್ನು ನಿಮ್ಮನ್ನು ನಿಂದಿಸದಂತೆ ನಾನು ಮರದ ಹಣ್ಣನ್ನೂ ಹೊಲದ ಬೆಳೆಯನ್ನೂ
ಹೆಚ್ಚಿಸುವೆನು. 31ಆಗ ನೀವು ನಿಮ್ಮ ದುರ್ಮಾರ್ಗ, ದುರಾಚಾರಗಳನ್ನು ಜ್ಞಾಪಕಕ್ಕೆ ತಂದುಕೊಂಡು, ನಿಮ್ಮ
ಅಪರಾಧಗಳ ಮತ್ತು ಅಸಹ್ಯಕಾರ್ಯಗಳ ನಿಮಿತ್ತ, ನಿಮಗೆ ನೀವೇ ಹೇಸಿಕೊಳ್ಳುವಿರಿ."

32 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ–"ನಾನು ಈ ರಕ್ಷಣಾ ಕಾರ್ಯವನ್ನು ಮಾಡುವುದು
ನಿಮ್ಮ ನಿಮಿತ್ತವಲ್ಲವೆಂಬುದು ನಿಮಗೆ ತಿಳಿದಿರಲಿ; ಇಸ್ರಯೇಲ್ ವಂಶದವರೇ, ನಿಮ್ಮ ದುರ್ಮಾರ್ಗಗಳಿಗಾಗಿ
ಲಜ್ಜೆಗೊಳ್ಳಿರಿ, ನಾಚಿಕೆ ಪಡಿರಿ. 33ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನಾನು ನಿಮ್ಮನ್ನು ನಿಮ್ಮ
ಅಪರಾಧಗಳಿಂದೆಲ್ಲಾ ಶುದ್ಧಿಮಾಡುವ ದಿನದಲ್ಲಿ ಪಟ್ಟಣಗಳನ್ನು ನಿವಾಸಿಗಳಿಂದ ತುಂಬಿಸುವೆನು,
ನಿವೇಶನಗಳಲ್ಲಿ ಕಟ್ಟಡಗಳು ಏಳುವುವು. 34ಹೌದು, ಹೋಗುವವರೆಲ್ಲರ ಕಣ್ಣೆದುರಿಗೆ ಬೀಡುಬಿದ್ದು ಕಾಡಾದ
ಭೂಮಿಯನ್ನು ಕೃಷಿಮಾಡುವರು. 35ಆಗ ಜನರು, 'ಕಾಡಾಗಿದ್ದ ಈ ನಾಡು ಏದೆನ ಉದ್ಯಾನದಂತೆ
ಕಂಗೊಳಿಸುತ್ತದೆ; ಬಿದ್ದುಹೋಗಿ ಹಾಳು ಪಾಳಾದ ಪಟ್ಟಣಗಳು ಕೋಟೆಕೊತ್ತಲಗಳಿಂದ ಕೂಡಿ
ಜನಭರಿತವಾಗಿವೆಯಲ್ಲಾ!' ಎಂದು ಹೇಳುವರು. 36ಸರ್ವೇಶ್ವರನಾದ ನಾನೇ ಬಿದ್ದು ಹೋದುದನ್ನು ಕಟ್ಟಿ,
ಹಾಳಾದುದನ್ನು ಬೆಳೆಯಿಸಿದ್ದೇನೆಂಬುದು ನಿಮ್ಮ ಸುತ್ತಲು ಉಳಿದ ಜನಾಂಗಗಳಿಗೆ ಗೊತ್ತಾಗುವುದು.
ಸರ್ವೇಶ್ವರನಾದ ನಾನೇ ನುಡಿದಿದ್ದೇನೆ, ಹಾಗೆಯೇ ನಡೆಸುತ್ತೇನೆ."

37 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – "ನಾನು ಇನ್ನೊಂದು ವಿಷಯದಲ್ಲಿ ಇಸ್ರಯೇಲ್
ವಂಶದವರ ವಿಜ್ಞಾಪನೆಯನ್ನು ಆಲಿಸಿ ನೆರವೇರಿಸುವೆನು. ಅದೇನೆಂದರೆ, ಅವರ ಜನಸಂಖ್ಯೆಯನ್ನು
ಹಿಂಡಿನಂತೆ ಹೆಚ್ಚಿಸುವೆನು. 38ಮೀಸಲಾದ ಮಂದೆಯಂತೆ, ಹಬ್ಬಗಳಲ್ಲಿ ಜೆರುಸಲೇಮಿಗೆ ಬಂದು ಸೇರುವ
ಹಿಂಡಿನ ಹಾಗೆ, ಜನರು ಹಾಳುಪಟ್ಟಣಗಳಲ್ಲಿ ಹಿಂಡುಹಿಂಡಾಗಿ ತುಂಬಿಕೊಳ್ಳುವರು. ಆಗ ನಾನೇ ಸರ್ವೇಶ್ವರ
ಎಂದು ಅವರಿಗೆ ನಿಶ್ಚಯವಾಗುವುದು."

### ಒಣ ಎಲುಬುಗಳ ಪುನರ್ಜೀವನ

**37** ನಾನು ಸರ್ವೇಶ್ವರನ ಹಸ್ತಸ್ಪರ್ಶದಿಂದ ಪರವಶನಾಗಿದ್ದೆ. ಆಗ ಅವರು ತಮ್ಮ ಆತ್ಮದ ಮೂಲಕ ನನ್ನನ್ನು
ಒಯ್ದು, ಎಲುಬುಗಳಿಂದ ತುಂಬಿದ್ದ ಒಂದು ಕಣಿವೆಯಲ್ಲಿ ಇಳಿಸಿದರು. 2ನಾನು ಎಲುಬುಗಳ ಮಧ್ಯೆ ಆ
ಕಣಿವೆಯನ್ನು ಬಳಸಿಕೊಂಡು ಬರುವಂತೆ ಮಾಡಿದರು. ಇಗೋ, ಕಣಿವೆಯ ಮೇಲೆಲ್ಲಾ ಬಹಳವಾಗಿ
ಒಣಗಿದ ಎಲುಬುಗಳು ಲೆಕ್ಕವಿಲ್ಲದಷ್ಟು ಬಿದ್ದಿದ್ದವು. 3ಸರ್ವೇಶ್ವರ ನನ್ನನ್ನು – "ನರಪುತ್ರನೇ, ಈ
ಎಲುಬುಗಳಿಗೆ ಜೀವ ಬರಬಹುದೇ?" ಎಂದು ಕೇಳಿದರು. ನಾನು, "ಸರ್ವೇಶ್ವರರಾದ ದೇವರೇ,
ನೀವೇಬಲ್ಲಿರಿ", ಎಂದು ಉತ್ತರ ಕೊಟ್ಟೆ. 4ಆಗ ಅವರು ನನಗೆ ಹೀಗೆ ಅಪ್ಪಣೆ ಮಾಡಿದರು: "ನೀನು ಆ
ಎಲುಬುಗಳಿಗೇ ಪ್ರವಾದಿಸಿ ಅವಕ್ಕೆ ಈ ದೈವೋಕ್ತಿಯನ್ನು ನುಡಿ: ಒಣ ಎಲುಬುಗಳೇ, ಸರ್ವೇಶ್ವರನ
ವಾಣಿಯನ್ನು ಕೇಳಿ: 5ಸರ್ವೇಶ್ವರನಾದ ದೇವರು ನಿಮಗೆ ಹೀಗೆ ಹೇಳುತ್ತಾರೆ –ಇಗೋ, ನಾನು ನಿಮ್ಮೊಳಗೆ
ಶ್ವಾಸವನ್ನು ಊದುವೆನು; ನೀವು ಬದುಕುವಿರಿ. 6ನಾನು ನಿಮ್ಮ ಮೇಲೆ ನರಗಳನ್ನು ಹಬ್ಬಿಸಿ, ಮಾಂಸವನ್ನು
ಹರಡಿ, ಚರ್ಮವನ್ನು ಹೊದಿಸಿ, ನಿಮ್ಮಲ್ಲಿ ಶ್ವಾಸವನ್ನು ತುಂಬುವೆನು; ಆಗ ನೀವು ಬದುಕಿ ನಾನೇ ಸರ್ವೇಶ್ವರ
ಎಂದು ತಿಳಿದುಕೊಳ್ಳುವಿರಿ."

7 ನನಗೆ ಅಪ್ಪಣೆಯಾದಂತೆ ನಾನು ಈ ದೈವೋಕ್ತಿಯನ್ನು ನುಡಿದೆ. ನಾನು ಮಾತಾಡುತ್ತಿರುವಾಗ
ಒಂದು ಶಬ್ದ ಕೇಳಿಸಿತು. ಇಗೋ, ಟಕಟಕ ಎನ್ನುತ್ತಾ ಎಲುಬು ಎಲುಬಿಗೆ, ಜೋಡನೆಯಾದವು. 8ನಾನು

ನೋಡುತ್ತಿರಲು ಏನಾಶ್ಚರ್ಯ! ಅವುಗಳ ಮೇಲೆ ನರಗಳು ಹಬ್ಬಿಕೊಂಡವು, ಮಾಂಸವು ಹರಡಿಕೊಂಡಿತು, ಚರ್ಮವು ಮೇಲು ಹೊದಿಕೆಯಾಯಿತು; ಶ್ವಾಸ ಮಾತ್ರ ಇರಲಿಲ್ಲ.

9 ಆಗ ಸರ್ವೇಶ್ವರ ನನಗೆ – "ನರಪುತ್ರನೇ, ನೀನು ಶ್ವಾಸಕ್ಕೆ ನುಡಿ; ಶ್ವಾಸವೇ, ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನೀನು ಚತುರ್ದಿಕ್ಕುಗಳಿಂದ ಬೀಸಿ ಹತ ಶರೀರಗಳು ಬದುಕುವಂತೆ ಅವುಗಳ ಮೇಲೆ ಸುಳಿ, ಎಂಬುದಾಗಿ ಶ್ವಾಸಕ್ಕೆ ನುಡಿ," ಎಂದು ಅಪ್ಪಣೆಕೊಟ್ಟರು.

10 ನಾನು ಅವರ ಅಪ್ಪಣೆಯಂತೆ ನುಡಿದೆ. ಇಗೋ, ಶ್ವಾಸವು ಅವುಗಳಲ್ಲಿ ಹೊಕ್ಕಿತು. ಅವು ಬದುಕಿದವು, ಕಾಲೂರಿ ನಿಂತವು, ಅತ್ಯಂತ ದೊಡ್ಡ ಸೈನ್ಯವಾದವು.

11 ಆಮೇಲೆ ಸರ್ವೇಶ್ವರ ನನಗೆ ಹೀಗೆ ಹೇಳಿದರು: "ನರಪುತ್ರನೇ, ಈ ಎಲುಬುಗಳೇ ಇಸ್ರಯೇಲಿನ ಪೂರ್ಣವಂಶ; ಇಗೋ, ಆ ವಂಶೀಯರು, 'ಅಯ್ಯೋ, ನಮ್ಮ ಎಲುಬುಗಳು ಒಣಗಿಹೋದವು, ನಮ್ಮ ನಿರೀಕ್ಷೆ ಹಾಳಾಯಿತು; ನಾವು ಬುಡನಾಶವಾದೆವು,' ಎಂದು ಕೊಳ್ಳುತ್ತಿದ್ದಾರೆ.
12ಆದಕಾರಣ ನೀನು ಈ ದೈವೋಕ್ತಿಯನ್ನು ಅವರಿಗೆ ನುಡಿ: 'ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ – ನನ್ನ ಜನರೇ, ನೋಡಿ: ನಾನು ನಿಮ್ಮ ಗೋರಿಗಳನ್ನು ತೆರೆದು, ಅವುಗಳೊಳಗಿಂದ ನಿಮ್ಮನ್ನು ಎಬ್ಬಿಸಿ, ಇಸ್ರಯೇಲ್ ನಾಡಿಗೆ ಸೇರಮಾಡುವೆನು.
13ನನ್ನ ಜನರೇ, ನಾನು ನಿಮ್ಮ ಗೋರಿಗಳನ್ನು ತೆರೆದು, ಅವುಗಳೊಳಗಿಂದ ನಿಮ್ಮನ್ನು ಎಬ್ಬಿಸಿದಾಗ, ನಾನೇ ಸರ್ವೇಶ್ವರ ಎಂದು ನಿಮಗೆ ದೃಢವಾಗುವುದು.
14ನಾನು ನನ್ನ ಶ್ವಾಸವನ್ನು ನಿಮ್ಮಲ್ಲಿ ಊದಿ, ನಿಮ್ಮನ್ನು ಬದುಕಿಸಿ, ನಿಮ್ಮ ದೇಶದಲ್ಲಿ ನೆಲೆಗೊಳಿಸುವೆನು. ಆಗ ಸರ್ವೇಶ್ವರನಾದ ನಾನೇ ಇದನ್ನು ನುಡಿದು ನಡೆಸಿದ್ದೇನೆ ಎಂದು ತಿಳಿದುಕೊಳ್ಳುವಿರಿ; ಇದು ಸರ್ವೇಶ್ವರನ ಸಂಕಲ್ಪ'."

## ಇಸ್ರಯೇಲ್ ಮತ್ತು ಜುದೇಯ ಒಂದೇ ರಾಜ್ಯ

15 ಸರ್ವೇಶ್ವರ ಇನ್ನೊಂದು ವಾಣಿಯನ್ನು ನನಗೆ ದಯಪಾಲಿಸಿದರು.
16"ನರಪುತ್ರನೇ, ನೀನು ಒಂದು ದಂಡವನ್ನು ತೆಗೆದು ಅದರಲ್ಲಿ 'ಜುದೇಯದ್ದು, ಜುದೇಯಕ್ಕೆ ಸೇರಿದ ಇಸ್ರಯೇಲರದು' ಎಂದು ಬರೆ; ಇನ್ನೊಂದು ದಂಡವನ್ನು ತೆಗೆದು ಅದರಲ್ಲಿ, 'ಜೋಸೆಫನದು, ಎಫ್ರಯಿಮಿನದು, ಜೊಸೇಫಿಗೆ ಸೇರಿದ ಎಲ್ಲ ಇಸ್ರಯೇಲರದು' ಎಂದು ಬರೆ;
17ಆಮೇಲೆ ಅವು ನಿನ್ನ ಕೈಯಲ್ಲಿ ಒಂದಾಗುವಂತೆ ಅವೆರಡನ್ನೂ ಒಂದಕ್ಕೊಂದು ಉದ್ದವಾಗಿ ಸೇರಿಸಿ ಹಿಡಿ.
18ನಿನ್ನ ಜನರು, "ಇದೇನು? ನಮಗೆ ತಿಳಿಸುವುದಿಲ್ಲವೆ?" ಎಂದು ನಿನ್ನನ್ನು ಕೇಳುವರು.
19ಆಗ ನೀನು ಅವರಿಗೆ, "ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ, 'ಇಗೋ, ಎಫ್ರಯಿಮು ಹಿಡಿದಿರುವ ದಂಡವನ್ನು ಅಂದರೆ, ಜೋಸೆಫನ ಮತ್ತು ಜೋಸೆಫನಿಗೆ ಸೇರಿದ ಇಸ್ರಯೇಲ್ ಕುಲಗಳ ದಂಡವನ್ನು ನಾನು ತೆಗೆದು ಜುದೇಯದ ದಂಡಕ್ಕೆ ಉದ್ದವಾಗಿ ಸೇರಿಸಿ ಅವೆರಡನ್ನು ನನ್ನ ಕೈಯಲ್ಲಿ ಒಂದೇ ದಂಡವಾಗಿ ಹಿಡಿಯುವೆನು' ಎಂಬುದನ್ನು ಹೇಳು.

20 "ಹಾಗೆ ಹೇಳುವಾಗನೀನು ಹೆಸರು ಬರೆದಿರುವ ದಂಡಗಳು ಅವರ ಕಣ್ಣೆದುರಿಗೆ ನಿನ್ನ ಕೈಯಲ್ಲಿರಲಿ.
21ಇದನ್ನೂ ಅವರಿಗೆ ನುಡಿ, 'ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: ಇಗೋ, ಇಸ್ರಯೇಲರು ವಶವಾಗಿರುವ ಜನಾಂಗಗಳಿಂದ ನಾನು ಅವರನ್ನು ಉದ್ಧರಿಸಿ, ಎಲ್ಲ ಕಡೆಯಿಂದಲು ಒಟ್ಟುಗೂಡಿಸಿ, ಸ್ವದೇಶಕ್ಕೆ ಕರೆದು ತರುವೆನು.
22ಅಲ್ಲಿ ಇಸ್ರಯೇಲಿನ ಪರ್ವತಗಳ ಮೇಲೆ, ಒಂದೇ ಜನಾಂಗವನ್ನಾಗಿ ಮಾಡುವೆನು; ಒಬ್ಬನೇ ಅವರೆಲ್ಲರಿಗೂ ರಾಜನಾಗಿರುವನು; ಅವರು ಇನ್ನೆಂದಿಗೂ ಎರಡು ಜನಾಂಗದವರಾಗಿರರು; ಭಿನ್ನರಾಜ್ಯದವರಾಗಿ ಇರರು.
23ತಮ್ಮ ವಿಗ್ರಹಗಳಿಂದಾಗಲಿ, ಅಸಹ್ಯ ವಸ್ತುಗಳಿಂದಾಗಲಿ, ಯಾವ ದುರಾಚಾರದಿಂದಲೇ ಆಗಲಿ, ತಮ್ಮನ್ನು ಇನ್ನು ಮುಂದೆ ಹೊಲೆಗೆ ಹೊಯ್ದುಕೊಳ್ಳರು. ಅವರು ಪಾಪ ಮಾಡಿಮಾಡಿ ಸಿಕ್ಕಿಬಿದ್ದ ದೇವದ್ರೋಹದಿಂದೆಲ್ಲಾ ನಾನು ಅವರನ್ನು ಉದ್ಧರಿಸಿ ಶುದ್ಧೀಕರಿಸುವೆನು; ಅವರು ನನಗೆ ಪ್ರಜೆಯಾಗಿರುವರು, ನಾನು ಅವರಿಗೆ ದೇವರಾಗಿರುವೆನು.
24ನನ್ನ ದಾಸ ದಾವೀದನು ಅವರಿಗೆ ರಾಜನಾಗಿರುವನು; ಅವರೆಲ್ಲರಿಗು ಒಬ್ಬನೇ ಪಾಲಕನಿರುವನು; ಅವರು ನನ್ನ ನಿಯಮಗಳನ್ನು ಅನುಸರಿಸಿ, ನನ್ನ ವಿಧಿಗಳನ್ನು ಕೈಕೊಂಡು ಆಚರಿಸುವರು.
25ನನ್ನ ದಾಸ ಯಕೋಬನಿಗೆ ನಾನು ದಯಪಾಲಿಸಿದ ನಾಡಿನಲ್ಲಿ ಅವರು ವಾಸಿಸುವರು. ಹೌದು, ನಿಮ್ಮ ಪಿತೃಗಳು ವಾಸಿಸಿದ ನಾಡಿನಲ್ಲಿ ಅವರೂ ಅವರ ಸಂತಾನದವರೂ ತಲತಲಾಂತರವಾಗಿ ವಾಸಿಸುವರು; ನನ್ನ ದಾಸ

ದಾವೀದನು ಅವರಿಗೆ ಸದಾ ಪ್ರಭುವಾಗಿರುವನು. 26ನಾನು ಅವರೊಂದಿಗೆ ಶಾಂತಿಸಮಾಧಾನದ
ಒಡಂಬಡಿಕೆಯನ್ನು ಮಾಡಿಕೊಳ್ಳುವೆನು; ಅದು ಶಾಶ್ವತವಾಗಿರುವುದು. ನಾನು ಅವರನ್ನು ನೆಲೆಗೊಳಿಸಿ,
ವೃದ್ಧಿಮಾಡಿ, ನನ್ನ ಪವಿತ್ರಾಲಯವನ್ನು ಅವರ ನಡುವೆ ಯುಗಯುಗಾಂತರಕ್ಕೂ ನಿಲ್ಲಿಸುವೆನು. 27ಹೌದು,
ನನ್ನ ವಾಸಸ್ಥಾನವು ಅವರ ಮಧ್ಯೆಯಿರುವುದು; ನಾನು ಅವರಿಗೆ ದೇವರಾಗಿರುವೆನು, ಅವರು ನನಗೆ
ಪ್ರಜೆಯಾಗಿರುವರು. 28ನನ್ನ ಪವಿತ್ರಾಲಯ ಅವರ ಮಧ್ಯೆ ಶಾಶ್ವತವಾಗಿರಲು ಇಸ್ರಯೇಲನ್ನು ಮೀಸಲು
ಮಾಡಿಕೊಂಡಾತ ಸರ್ವೇಶ್ವರ ನಾನೇ ಎಂದು ಜನಾಂಗಗಳಿಗೆ ತಿಳಿದುಬರುವುದು".

## ಗೋಗನು ಸರ್ವೇಶ್ವರನ ಒಂದು ಅಸ್ತ್ರ

**38** ಸರ್ವೇಶ್ವರ ಈ ವಾಣಿಯನ್ನು ನನಗೆ ದಯಪಾಲಿಸಿದರು: 2"ನರಪುತ್ರನೇ, ರೋಷಿನವರನ್ನು,
ಮೆಷೆಕಿನವರನ್ನು ಹಾಗು ತೂಬಲಿನವರನ್ನು ಆಳುವ ಮಾಗೋಗ್ ದೇಶದ ದೊರೆಯಾದ ಗೋಗನ ಕಡೆಗೆ
ಮುಖಮಾಡಿ ಅವನಿಗೆ ಈ ದೈವೋಕ್ತಿಯನ್ನು ನುಡಿ: 3ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ, 'ರೋಷ್,
ಮೆಷೆಕ್, ತೂಬಲ್ ಜನಾಂಗಗಳ ರಾಜನಾದ ಗೋಗನೇ, 4ಇಗೋ, ನಾನು ನಿನಗೆ ವಿರುದ್ಧವಾಗಿ ನಿನ್ನನ್ನು
ತಿರುಗಿಸಿ, ನಿನ್ನ ದವಡೆಗೆ ಕೊಕ್ಕೆಹಾಕಿ ಈಚೆಗೆ ಎಳೆಯುವೆನು. ಅಶ್ವಾರೂಢರು, ಖೇಡ್ಯ ಪ್ರಾಣಿಗಳು, ಎಲ್ಲ
ವಿಚಿತ್ರಾಂಬರರು ಹಾಗು ಖಡ್ಗಹಸ್ತರು ಆದ ರಾಹುತರ ದೊಡ್ಡ ತಂಡದಿಂದ ಕೂಡಿದ ನಿನ್ನ ಸೈನ್ಯವೆಲ್ಲವನ್ನು,
5ಮತ್ತು ಎಲ್ಲ ಖೇಡ್ಯಶಿರಸ್ತ್ರಾಣಧಾರಿಗಳಾದ ಪರ್ಷಿಯರು, ಕೂಷ್ಯರು, ಪೂಟ್ಯರು ಇವರನ್ನು ಹಾಗು
6ಪಡೆಪಡೆಯಾದ ಗೋಮೆರ್ಯರನ್ನು, ಉತ್ತರ ದಿಕ್ಕಿನ ಕಟ್ಟಕಡೆಯಿಂದ ಬಂದ ಪಡೆಪಡೆಯಾದ
ತೋಗರ್ಮದವರನ್ನು, ಹೀಗೆ ಅನೇಕಾನೇಕ ಜನಾಂಗಗಳನ್ನು ನಿನ್ನೊಂದಿಗೆ ಬರಮಾಡುವೆನು. 7ಸಿದ್ಧವಾಗಿರು,
ನಿನ್ನಲ್ಲಿಗೆ ಕೂಡಿ ಬಂದಿರುವ ಎಲ್ಲ ತಂಡಗಳೊಡನೆ ನಿನ್ನನ್ನು ಸಿದ್ಧಮಾಡಿಕೋ; ನೀನು ಅವುಗಳಿಗೆ
ಪಾಲಕನಾಗಿರು. 8ಬಹುದಿನಗಳ ಮೇಲೆ ನಿನಗೆ ಅಪ್ಪಣೆಯಾಗುವುದು: ಖಡ್ಗದಿಂದ ನಾಶವಾಗಿ,
ಪುನರ್ಜೀವಿತವಾದ ದೇಶದೊಳಗೆ ನೀನು ಕಾಲಾನುಕಾಲಕ್ಕೆ ನುಗ್ಗಿ, ಅನೇಕ ಜನಾಂಗಗಳಿಂದ ಒಟ್ಟುಗೂಡಿದ
ನನ್ನ ಜನರ ಮೇಲೆ ಬೀಳುವೆ; ಹೌದು, ಜನಾಂಗಗಳಿಂದ ಪಾರಾದ ಆ ಜನರೆಲ್ಲರು ಬಹುಕಾಲ ಹಾಳಾಗಿದ್ದ
ಇಸ್ರಯೇಲಿನ ಪರ್ವತಗಳಲ್ಲಿ ನೆಮ್ಮದಿಯಾಗಿ ವಾಸಿಸುತ್ತಿರುವಾಗ ನೀನು ಅವರ ಮೇಲೆ ಬೀಳುವೆ. 9ನೀನೂ
ನಿನ್ನ ಎಲ್ಲ ಪಡೆಗಳೂ ನಿನ್ನೊಂದಿಗಿರುವ ಬಹು ಜನಾಂಗಗಳೂ ಬಿರುಗಾಳಿಯಂತೆ ಹೊರಟುಬರುವಿರಿ;
ಕಾರ್ಮುಗಿಲಿನಂತೆ ದೇಶವನ್ನು ಮುಚ್ಚಿಬಿಡುವಿರಿ.'

10 "ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: ಆಗ ನಿನ್ನಮನಸ್ಸಿನಲ್ಲಿ ಆಲೋಚನೆಗಳು
ಹುಟ್ಟುವುವು: 11ನೀನು, 'ಆಹಾ, ನಾನು ಪೌಳಿಗೋಡೆಯಿಲ್ಲದ, ಹಳ್ಳಿಪಳ್ಳಿಗಳು ತುಂಬಿದ ದೇಶವನ್ನು ನುಗ್ಗಿ,
ಅಗುಳಿ ಬಾಗಿಲು ಗೋಡೆಗಳಿಲ್ಲದೆ ನೆಮ್ಮದಿಯಿಂದ ನಿರ್ಭಯವಾಗಿರುವವರ ಮೇಲೆ ಬೀಳುವೆನು,'
ಎಂದುಕೊಂಡು ಸೂರೆ ಗೈಯಲು ಆಶಿಸುವೆ; 12'ಕೊಳ್ಳೆಹೊಡೆಯಬೇಕು, ನಿರ್ಜನವಾಗಿದ್ದು ಜನಭರಿತವಾದ
ಪ್ರದೇಶಗಳ ಮೇಲೆ ಕೈಮಾಡಬೇಕು ಹಾಗು ಜನಾಂಗಗಳಿಂದ ಒಟ್ಟುಗೂಡಿ, ದನ ಮೊದಲಾದ ಸೊತ್ತನ್ನು
ಸಂಗ್ರಹಿಸಿಕೊಂಡು, ಲೋಕದ ನಟ್ಟನಡುವೆ ವಾಸಿಸುವವರನ್ನು ಹತಿಸಬೇಕು' ಎಂದು ಕುತಂತ್ರ ಕಲ್ಪಿಸುವೆ.
13ಶೆಬದವರು, ದೆದಾನಿನವರು, ತಾರ್ಷೀಷಿನ ವರ್ತಕರು ಹಾಗು ಅದರ ಸಿಂಹ ಪ್ರಾಯರೆಲ್ಲರು ನಿನ್ನನ್ನು
ನೋಡಿ, 'ನೀನು ಸೂರೆಮಾಡಲಿಕ್ಕೆ ಬಂದಿಯೋ? ಕೊಳ್ಳೆ ಹೊಡೆದು ಬೆಳ್ಳಿಬಂಗಾರವನ್ನು ದೋಚಿಕೊಂಡು,
ದನ ಮುಂತಾದ ಸೊತ್ತನ್ನು ಅಪಹರಿಸಿ, ಅಪಾರವಾದ ಆಸ್ತಿಯನ್ನು ಸುಲಿದುಕೊಂಡು ಹೋಗಲು ನಿನ್ನ
ತಂಡವನ್ನು ಕೂಡಿಸಿಕೊಂಡು ಬಂದಿಯೋ?' ಎಂದು ಕೇಳುವರು.

14 "ಹೀಗಿರಲು, ನರಪುತ್ರನೇ, ನೀನು ಗೋಗನಿಗೆ ಈ ದೈವೋಕ್ತಿಯನ್ನು ನುಡಿ: 'ಸರ್ವೇಶ್ವರನಾದ
ದೇವರು ಇಂತೆನ್ನುತ್ತಾರೆ: ನನ್ನ ಜನರಾದ ಇಸ್ರಯೇಲರು ನೆಮ್ಮದಿಯಾಗಿ ವಾಸಿಸುವ ಕಾಲದಲ್ಲಿ ಆ
ನೆಮ್ಮದಿಯು ನನಗೆ ಗೊತ್ತಾಗುವುದಿಲ್ಲವೆ? 15ನೀನು ನಿನ್ನ ಸ್ಥಳವನ್ನು ಬಿಟ್ಟು, ಅಶ್ವಬಲದ ಮಹಾಸೈನ್ಯವಾಗಿ
ಗುಂಪುಕೂಡಿದ ಬಹುಜನಾಂಗಗಳೊಡನೆ ಉತ್ತರದಿಕ್ಕಿನ ಕಟ್ಟಕಡೆಯಿಂದ ಬರುವೆ. 16ನನ್ನ ಜನರಾದ
ಇಸ್ರಯೇಲರ ಮೇಲೆ ಬಿದ್ದು ಕಾರ್ಮುಗಿಲಿನಂತೆ ದೇಶವನ್ನು ಮುಚ್ಚಿಬಿಡುವೆ. ಗೋಗನೇ, ಜನಾಂಗಗಳ

ಕಣ್ಣೆದುರಿಗೆ ನಿನ್ನ ನಾಶದಿಂದ ನನ್ನ ಗೌರವವನ್ನು ಕಾಪಾಡಿಕೊಂಡು, ನಾನೇ ಸರ್ವೇಶ್ವರ ಎಂದು ಜನಾಂಗಗಳಿಗೆ ಗೋಚರನಾಗುವಂತೆ ನಾನು ನಿನ್ನನ್ನು ಕಾಲಾನುಕಾಲಕ್ಕೆ ನನ್ನ ನಾಡಿನ ಮೇಲೆ ಬೀಳಮಾಡುವೆನು.
17ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: 'ನನ್ನ ದಾಸರಾದ ಇಸ್ರಯೇಲಿನ ಪ್ರವಾದಿಗಳು ಪುರಾತನಕಾಲದಲ್ಲಿ ಬಹು ವರ್ಷ ಪ್ರವಾದಿಸುತ್ತಾ ನಾನು ಒಬ್ಬನನ್ನು ಇಸ್ರಯೇಲರ ಮೇಲೆ ಬೀಳಮಾಡುವೆನು, ಎಂದು ಮುಂತಿಳಿಸಿದ್ದರು; ನಾನು ಅವರ ಮುಖಾಂತರ ಮುಂತಿಳಿಸಿದವನು ನೀನೇ ಅಲ್ಲವೇ?'

## ಗೋಗನಿಗಾದ ದಂಡನೆ

18 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಗೋಗನು ಇಸ್ರಯೇಲ್ ನಾಡಿನ ಮೇಲೆ ಬೀಳುವ ದಿನದಲ್ಲಿ ನಾನು ಸಿಟ್ಟಿನಿಂದ ಬುಸುಗುಟ್ಟುವೆನು.
19ನಾನು ರೋಷಾನಿಷ್ಟನಾಗಿ ಕೋಪದಿಂದಿರಿಯುತ್ತಾ ಹೀಗೆ ನುಡಿದಿದ್ದೇನೆ: ಆಹಾ, ಆ ದಿನದಲ್ಲಿ ಇಸ್ರಯೇಲ್ ನಾಡಿನೊಳಗೆ ಅದ್ಭುತ ಕಂಪನವಾಗುವುದು ಖಂಡಿತ;
20ಸಮುದ್ರದ ಮೀನುಗಳು, ಆಕಾಶದ ಪಕ್ಷಿಗಳು, ಭೂಜಂತುಗಳು, ನೆಲದಲ್ಲಿ ಹರಿದಾಡುವ ಕ್ರಿಮಿಕೀಟಗಳು ಹಾಗು ಜಗದ ಸಕಲ ಮಾನವರು ನನ್ನೆದುರಿಗೆ ನಡುಗುವರು; ಪರ್ವತಗಳು ಉರಳಿ ಹೋಗುವುವು, ಝರಿಗಳು ಕವಚಿಕೊಳ್ಳುವುವು, ಎಲ್ಲ ಗೋಡೆಗಳು ನೆಲಸಮವಾಗುವುವು.
21ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಖಡ್ಗವು ನನ್ನ ಪರ್ವತಗಳಲ್ಲೆಲ್ಲಾ ಗೋಗನವರನ್ನು ಸಂಹರಿಸಲಿ,' ಎಂದು ಅಪ್ಪಣೆಕೊಡುವೆನು; ಒಬ್ಬರಿಂದೊಬ್ಬರು ಹತರಾಗುವರು.
22ನಾನು ಗೋಗನ ಸಂಗಡ ವ್ಯಾಜ್ಯವಾಡುತ್ತಾ ಅವನನ್ನು ವ್ಯಾಧಿಗೂ ವಧೆಗೂ ಗುರಿಮಾಡುವೆನು. ಅವನ ಮೇಲೂ ಅವನ ಪಡೆಗಳ ಮೇಲೂ ಅವನೊಂದಿಗಿರುವ ಬಹು ಜನಾಂಗಗಳ ಮೇಲೂ ವಿಪರೀತ ಮಳೆ, ದೊಡ್ಡ ದೊಡ್ಡ ಆನೆಕಲ್ಲು, ಬೆಂಕಿ, ಗಂಧಕ, ಇವುಗಳನ್ನು ಸುರಿಸುವೆನು.
23ಹೀಗೆ ನಾನು ನನ್ನ ಮಹಿಮೆಯನ್ನು ತೋರ್ಪಡಿಸಿ, ನನ್ನ ಗೌರವವನ್ನು ಕಾಪಾಡಿಕೊಂಡು, ಬಹು ಜನಾಂಗಗಳು ನಾನೇ ಸರ್ವೇಶ್ವರ ಎಂದು ತಿಳಿದುಕೊಳ್ಳುವಂತೆ ಅವುಗಳ ಕಣ್ಣೆದುರಿಗೆ ವ್ಯಕ್ತವಾಗುವೆನು."

## ಗೋಗನ ಸೋಲು

**39** "ನರಪುತ್ರನೇ, ನೀನು ಗೋಗನಿಗೆ ವಿರುದ್ಧ ಈ ದೈವೋಕ್ತಿಯನ್ನು ನುಡಿ: ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: 'ರೋಷ್, ಮೆಷೆಕ್, ತೂಬಲ್ ಜನಾಂಗಗಳ ಒಡೆಯನಾದ ಗೋಗನೇ,
2ಇಗೋ, ನಾನು ನಿನಗೆ ವಿರುದ್ಧನಾಗಿ, ನಿನ್ನನ್ನು ತಿರುಗಿಸಿ ಮುನ್ನಡೆಸಿ, ಉತ್ತರದಿಕ್ಕಿನ ಕಟ್ಟಕಡೆಯಿಂದ ಬರಮಾಡಿ, ಇಸ್ರಯೇಲಿನ ಪರ್ವತಗಳ ಮೇಲೆ ನುಗ್ಗಿಸಿ,
3ನಿನ್ನ ಎಡಗೈಯಿಂದ ಬಿಲ್ಲನ್ನು ಕಿತ್ತು ಹಾಕಿ, ನಿನ್ನ ಬಲಗೈಯಿಂದ ಬಾಣಗಳನ್ನು ಉದುರಿಸಿಬಿಡುವೆನು.
4ನೀನು, ನಿನ್ನ ಸೇನೆ ಹಾಗು ಪರಿವಾರ ಇಸ್ರಯೇಲಿನ ಪರ್ವತಗಳಲ್ಲಿ ಬಿದ್ದುಬಿಡುವಿರಿ; ನಾನು ನಿಮ್ಮನ್ನು ಮಾಂಸಾಹಾರಿಗಳಾದ ಬಗೆ ಬಗೆಯ ಹಕ್ಕಿಗಳಿಗೂ ಭೂಜಂತುಗಳಿಗೂ ಆಹಾರ ಮಾಡುವೆನು. ನೀವು ಬಯಲಿನಲ್ಲೇ ಬೀಳುವಿರಿ.
5ನಾನೇ ಅಪ್ಪಣೆ ಕೊಟ್ಟಿದ್ದೇನೆ. ಇದು ಸರ್ವೇಶ್ವರನಾದ ದೇವರ ನುಡಿ.
6ನಾನು ಮಾಗೋಗ್ ದೇಶದ ಮೇಲೂ ಕರಾವಳಿಯ ಸೀಮೆಗಳಲ್ಲಿ ನಿರ್ಭಯವಾಗಿ ವಾಸಿಸುವವರ ಮೇಲೂ ಬೆಂಕಿಯನ್ನು ಕಳುಹಿಸುವೆನು; ಆಗ ನಾನೇ ಸರ್ವೇಶ್ವರ ಎಂದು ಅವರಿಗೆ ನಿಶ್ಚಿತ ವಾಗುವುದು.
7ನಾನು ನನ್ನ ಪವಿತ್ರನಾಮವನ್ನು ನನ್ನ ಜನರಾದ ಇಸ್ರಯೇಲರ ನಡುವೆ ವ್ಯಕ್ತಗೊಳಿಸುವೆನು, ಅದನ್ನು ಇನ್ನು ಮುಂದೆ ಅಪಕೀರ್ತಿಗೆ ಗುರಿಯಾಗಲುಬಿಡೆನು; ನಾನೇ ಸರ್ವೇಶ್ವರ, ಇಸ್ರಯೇಲಿನ ಪರಮ ಪಾವನಸ್ವಾಮಿ ಎಂದು ಜನಾಂಗಗಳಿಗೆ ಗೊತ್ತಾಗುವುದು."

8 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಇಗೋ ಬಂದಿತು, ಸಂಭವಿಸಿತು; ನಾನು ಮುಂತಿಳಿಸಿದ ದಿನ ಇದೇ.
9ಇಸ್ರಯೇಲಿನ ಪಟ್ಟಣಗಳ ನಿವಾಸಿಗಳು ಬಯಲಿಗೆ ಬಂದು, ಶತ್ರುವಿನ ಆಯುಧಗಳಿಗೆ ಬೆಂಕಿಯಿಕ್ಕಿ ಸುಟ್ಟು ಬಿಡುವರು; ಹೌದು, ಖೇಡ್ಯ, ಗುರಾಣಿ, ಬಿಲ್ಲು, ಬಾಣ, ದೊಣ್ಣೆ, ಈಟಿ ಇವುಗಳನ್ನು ಏಳು ವರ್ಷಗಳ ತನಕ ಸುಡುತ್ತಲೇ ಬರುವರು.
10ಕಾಡಿನಿಂದ ಸೌದೆಯನ್ನು

ತರಬೇಕಾಗುವುದಿಲ್ಲ, ವನದಲ್ಲಿ ಮರವನ್ನು ಕಡಿಯಬೇಕಾಗುವುದಿಲ್ಲ; ಆಯುಧಗಳನ್ನೇ ಉರಿಸುವರು. ತಮ್ಮನ್ನು ಸೂರೆಮಾಡಿದವರನ್ನು ತಾವು ಸೂರೆಮಾಡುವರು, ತಮ್ಮನ್ನು ಕೊಳ್ಳೆಹೊಡೆದವರನ್ನು ತಾವು ಕೊಳ್ಳೆಹೊಡೆಯುವರು; ಇದು ಸರ್ವೇಶ್ವರನಾದ ದೇವರ ನುಡಿ.

## ಗೋಗನ ಭೂಸ್ಥಾಪನೆ

11 “ಆ ದಿನದಲ್ಲಿ ನಾನು ಇಸ್ರಯೇಲಿನೊಳಗೆ ಲವಣಸಮುದ್ರದ ಪೂರ್ವದಿಕ್ಕಿನಲ್ಲಿ ಪ್ರಯಾಣಿಕರ
ಮಾರ್ಗವಾದ ಕಣಿವೆಯನ್ನು ಗೋಗನಿಗೆ ಹೂಳುವ ಸ್ಥಳವನ್ನಾಗಿ ಏರ್ಪಡಿಸುವೆನು; ಅಲ್ಲಿ ಪ್ರಯಾಣ
ಮಾಡಲು ಆಗುವುದಿಲ್ಲ; ಅಲ್ಲೇ ಗೋಗನನ್ನೂ ಅವನ ಸಮೂಹವೆಲ್ಲವನ್ನೂ ಹೂಣಿಡುವರು; ಅದು
‘ಹಮೋನ್ ಗೋಗ್’ ಕಣಿವೆ ಎನಿಸಿಕೊಳ್ಳುವುದು. 12ಇಸ್ರಯೇಲರು ನಾಡನ್ನು ಶುದ್ಧಿಮಾಡುವುದಕ್ಕಾಗಿ ಏಳು
ತಿಂಗಳು ಅವರನ್ನು ಹೂಣುತ್ತಲೇ ಇರುವರು. 13ಹೌದು, ದೇಶದ ಸಕಲ ಪ್ರಜೆಗಳು ಅವರನ್ನು ಹೂಳಿ
ಬಿಡುವರು. ಹೀಗೆ ನನ್ನ ಮಹಿಮೆಯನ್ನು ಪ್ರತ್ಯಕ್ಷಗೊಳಿಸುವಾಗ ನನ್ನ ಜನರಿಗೆ ಗೌರವ ಉಂಟಾಗುವುದು;
ಇದು ಸರ್ವೇಶ್ವರನಾದ ದೇವರ ನುಡಿ. 14ತರುವಾಯ ಅವರು ನಾಡನ್ನು ಶುದ್ಧಿ ಮಾಡುವುದಕ್ಕೆ ತಕ್ಕವರನ್ನು
ಆರಿಸಿ, ‘ನೀವು ನಾಡಿನಲ್ಲಿ ತಿರುಗಾಡುತ್ತಾ ನೆಲದ ಮೇಲೆ ಉಳಿದಿರುವ ಎಲುಬುಗಳನ್ನು ಹೂಣಿಡಿ’ ಎಂದು
ನಿಯತವಾಗಿ ನೇಮಿಸುವರು; ಏಳು ತಿಂಗಳು ಕಳೆದ ಕೂಡಲೆ, ಇವರು ಈ ಹುಡುಕುವ ಕೆಲಸದಲ್ಲಿ
ತೊಡಗುವರು. 15ದಾರಿಗಳಲ್ಲಿ ಯಾವನೇ ಆಗಲಿ ಪ್ರಯಾಣ ಮಾಡುತ್ತಿರುವಾಗ ಮನುಷ್ಯನ ಎಲುಬನ್ನು
ಕಂಡರೆ ಅಲ್ಲಿ ಒಂದು ಗುರುತನ್ನು ನಿಲ್ಲಿಸುವನು; ಹೂಣಿಡುವವರು ಗೋಗನ ಸಮೂಹದ ಕಣಿವೆಯಲ್ಲಿ
ಅದನ್ನು ಹೂಣುವ ತನಕ ಆ ಗುರುತು ಹಾಗೇ ನಿಂತಿರುವುದು. 16(ಇದಲ್ಲದೆ ಒಂದು ಪಟ್ಟಣಕ್ಕೆ ‘ಹಮೋನ್’
ಪುರವೆಂಬ ಹೆಸರಾಗುವುದು.) ಹೀಗೆ ದೇಶವನ್ನು ಶುದ್ಧಿಮಾಡುವರು.”

17 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: “ನರಪುತ್ರನೇ, ಎಲ್ಲ ಬಗೆಯ ಪಕ್ಷಿಗಳಿಗೂ ಸಮಸ್ತ
ಭೂಜಂತುಗಳಿಗೂ ಹೀಗೆ ನುಡಿ: ನೀವು ಕೂಡಿಬನ್ನಿ; ನಾನು ಇಸ್ರಯೇಲಿನ ಪರ್ವತಗಳ ಮೇಲೆ ನಿಮಗಾಗಿ
ಮಾಡುವ ಮಹಾಯಜ್ಞಕ್ಕೆ ಎಲ್ಲ ಕಡೆಯಿಂದಲೂ ನೆರೆದು ಬಂದು ಮಾಂಸವನ್ನು ತಿಂದು, ರಕ್ತವನ್ನು
ಕುಡಿಯಿರಿ. 18ಟಗರು, ಕುರಿ, ಹೋತ, ಹೋರಿ, ಅಂತು ಬಾಷಾನಿನ ಕೊಬ್ಬಿದ ಪಶುಗಳು, ಅಂದರೆ ಬಲಿಷ್ಠರು,
ಭೂಪತಿಗಳು ಇವರ ಮಾಂಸ ಹಾಗೂ ರಕ್ತ ನಿಮಗೆ ಸಿಕ್ಕುವುವು. 19ನಾನು ನಿಮಗಾಗಿ ವಧಿಸಿರುವ
ಯಜ್ಞಪಶುಗಳ ಮಾಂಸವನ್ನು ಹೊಟ್ಟೆತುಂಬಾ ತಿನ್ನುವಿರಿ, ರಕ್ತವನ್ನು ಅಮಲೇರುವಷ್ಟು ಕುಡಿಯುವಿರಿ.
20ನಾನು ಸಿದ್ಧಪಡಿಸುವ ಆ ಔತಣದಲ್ಲಿ ಕುದುರೆ, ರಾಹುತ ಶೂರ, ಸಕಲವಿಧವಾದ ಯುದ್ಧವೀರರನ್ನು
ಯಥೇಚ್ಛವಾಗಿ ಭಕ್ಷಿಸುವಿರಿ; ಇದು ಸರ್ವೇಶ್ವರನಾದ ದೇವರ ನುಡಿ.”

## ಇಸ್ರಯೇಲಿನ ಪುನರ್‍ಸ್ಥಾಪನೆ

21 “ಹೀಗೆ ನಾನು ಜನಾಂಗಗಳ ನಡುವೆ ನನ್ನ ಮಹಿಮೆಯನ್ನು ಸ್ಥಾಪಿಸುವೆನು. ಆಗ ಆ ಸೈನಿಕರ
ಮೇಲೆ ಕೈಮಾಡಿ ನ್ಯಾಯದಂಡನೆ ನಡೆಸಿದವನು ನಾನೇ ಎಂದು ಆ ಜನಾಂಗಗಳಿಗೆಲ್ಲಾ
ಗೋಚರವಾಗುವುದು, 22ಇಸ್ರಯೇಲ್ ವಂಶದವರು, ನಾನೇ ತಮ್ಮ ದೇವರಾದ ಸರ್ವೇಶ್ವರನೆಂದು
ಅಂದಿನಿಂದ ಯಾವಾಗಲು ತಿಳಿದುಕೊಳ್ಳುವರು. 23ಇದಲ್ಲದೆ, ಇಸ್ರಯೇಲರು ತಮ್ಮ ಅಧರ್ಮದ ನಿಮಿತ್ತವೇ
ಸೆರೆಯಾಗಿ ಹೋದರೆಂದು ಮತ್ತು ಅವರು ನನಗೆ ದ್ರೋಹ ಮಾಡಿದ್ದರಿಂದಲೆ ನಾನು ಅವರಿಗೆ ವಿಮುಖನಾಗಿ
ಅವರೆಲ್ಲರು ಖಡ್ಗಹತರಾಗುವಂತೆ ಅವರನ್ನು ಶತ್ರುವಶ ಮಾಡಿದೆನೆಂದು ಜನಾಂಗಗಳಿಗೆ ಗೊತ್ತಾಗುವುದು;
24ಅವರ ಅಶುದ್ಧತನಕ್ಕೂ ದುರಾಚಾರಗಳಿಗೂ ತಕ್ಕಂತೆ ನಾನು ಅವರನ್ನು ದಂಡಿಸಿ ಅವರಿಗೆ
ವಿಮುಖನಾದೆನು.”

25 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: “ನನ್ನ ಪವಿತ್ರನಾಮಕ್ಕೆ ಇನ್ನು ಅಪಕೀರ್ತಿಬಾರದಂತೆ
ನಾನು ಈಗ ಆಗ್ರಹವುಳ್ಳವನ್ನಾಗಿ ಯಕೋಬ್ಯರ ದುರವಸ್ಥೆಯನ್ನು ತಪ್ಪಿಸಿ ಇಸ್ರಯೇಲ್ ವಂಶದವರಿಗೆಲ್ಲ
ಕೃಪೆತೋರುವೆನು. 26ನಾನು ನನ್ನ ಜನರನ್ನು ಅನ್ಯ ಜನಾಂಗಗಳ ವಶದಿಂದ ತಪ್ಪಿಸಿ ಆ ಶತ್ರುಗಳ
ದೇಶಗಳಿಂದ ಒಟ್ಟುಗೂಡಿಸಿ, ಬಹು ಜನಾಂಗಗಳ ಕಣ್ಣೆದುರಿಗೆ ಅವರ ರಕ್ಷಣೆಯ ಮೂಲಕ ನನ್ನ ಗೌರವವನ್ನು

ಕಾಪಾಡಿಕೊಳ್ಳುವೆನು. 27ಅನಂತರ ಅವರು ಸ್ವದೇಶದಲ್ಲಿ ಯಾರ ಭಯವೂ ಇಲ್ಲದೆ ನೆಮ್ಮದಿಯಿಂದ ವಾಸಿಸುತ್ತಿರುವಾಗ ತಾವು ನನಗೆ ಮಾಡಿದ ಎಲ್ಲ ದ್ರೋಹಗಳ ಹೊರೆಯನ್ನು ಹೊರುತ್ತಾ ನಾಚಿಕೆಪಡುವರು.
28ನಾನು ಅವರನ್ನು ಜನಾಂಗಗಳೊಳಗೆ ಸೆರೆಹೋಗುವಂತೆ ಮಾಡಿ, ಆಮೇಲೆ ಒಟ್ಟುಗೂಡಿಸಿ, ಸ್ವದೇಶಕ್ಕೆ ತಂದದ್ದರಿಂದ ನಾನೇ ತಮ್ಮ ದೇವರಾದ ಸರ್ವೇಶ್ವರ ಎಂದು ದೃಢಮಾಡಿಕೊಳ್ಳುವರು. ಅವರಲ್ಲಿ ಯಾರನ್ನೂ ಸೆರೆಯಲ್ಲಿ ಬಿಟ್ಟುಬಿಡೆನು; 29ಇನ್ನೆಂದಿಗೂ ಅವರಿಗೆ ವಿಮುಖನಾಗೆನು; ಇಸ್ರಯೇಲ್ ವಂಶದ ಮೇಲೆ ನನ್ನ ಆತ್ಮವನ್ನು ಸುರಿಸಿದ್ದೇನೆ; ಇದು ಸರ್ವೇಶ್ವರನಾದ ದೇವರ ನುಡಿ.”

## ನೂತನ ದೇವಾಲಯದ ದೃಶ್ಯ

(ಎಜೆ. 40.1 – 48.35)

### ಜೆರುಸಲೇಮಿಗೆ ಒಯ್ಯಲಾದ ಯೆಜೆಕಿಯೇಲ

**40** ನಾವು ಸೆರೆಯಾದ ಇಪ್ಪತ್ತೈದನೆಯ ವರ್ಷದ ಅಂದರೆ, ಪಟ್ಟಣವು ಹಾಳಾದ ಹದಿನಾಲ್ಕನೆಯ ವರ್ಷದ ಮೊದಲನೆಯ ತಿಂಗಳಿನ ಹತ್ತನೆಯ ದಿನದಲ್ಲಿ ಹೌದು, ಆ ದಿನದಲ್ಲೇ ನಾನು ಸರ್ವೇಶ್ವರಸ್ವಾಮಿಯ ಹಸ್ತ ಸ್ಪರ್ಶದಿಂದ ಪರವಶನಾದೆ. ಆಗ ಅವರು ನನ್ನನ್ನು ಅಲ್ಲಿಗೆ ಒಯ್ದರು. 2ನನ್ನನ್ನು ಇಸ್ರಯೇಲ್ ನಾಡಿಗೆ ತಂದು, ಅತ್ಯುನ್ನತ ಪರ್ವತದ ಮೇಲೆ ಇಳಿಸಿದರೆಂದು ದೇವರ ದರ್ಶನದಲ್ಲಿ ನನಗೆ ಕಂಡುಬಂದಿತು. ದಕ್ಷಿಣ ಕಡೆಯಲ್ಲಿ ಆ ಪರ್ವತದ ಮೇಲೆ ಪಟ್ಟಣದಂತಿರುವ ಒಂದು ಕಟ್ಟಡ ಕಾಣಿಸಿತು. 3ಅವರು ನನ್ನನ್ನು ಅಲ್ಲಿಗೆ ತರಲು, ಇಗೋ, ತಾಮ್ರದಂತೆ ಹೊಳೆಯುವ ಒಬ್ಬ ಪುರುಷನು ನಾರಿನ ಹುರಿಯನ್ನೂ ಅಳತೆ ಕೋಲನ್ನೂ ಕೈಯಲ್ಲಿ ಹಿಡಿದುಕೊಂಡು ಬಾಗಿಲಲ್ಲಿ ನಿಂತಿದ್ದನು.

4 ಆ ಪುರುಷ ನನಗೆ, “ನರಪುತ್ರನೇ, ನೀನು ಕಣ್ಣಿಟ್ಟು ನೋಡು, ಕಿವಿಗೊಟ್ಟು ಕೇಳು; ನಾನು ನಿನಗೆ ತೋರಿಸುವುದನ್ನೆಲ್ಲಾ ಮನಸ್ಸಿಟ್ಟು ತಿಳಿದುಕೋ; ನಾನು ನಿನಗೆ ತೋರಿಸುವುದನ್ನು ನೀನು ನೋಡಬೇಕೆಂದೇ ನಿನ್ನನ್ನು ಇಲ್ಲಿಗೆ ತರಲಾಗಿದೆ; ನೀನು ನೋಡುವುದನ್ನೆಲ್ಲ ಇಸ್ರಯೇಲ್ ವಂಶದವರಿಗೆ ಪ್ರಕಟಿಸು,” ಎಂದು ಹೇಳಿದನು.

### ಪೂರ್ವದಿಕ್ಕಿನ ಹೆಬ್ಬಾಗಿಲು

5 ಇಗೋ, ಒಂದು ಗೋಡೆಯು ಆ ಕಟ್ಟಡವನ್ನು ಸುತ್ತಿಕೊಂಡಿತ್ತು. ಆ ಪುರುಷನ ಕೈಯಲ್ಲಿ ಮೂರು ಮೀಟರ್ ಅಳತೆಕೋಲೊಂದಿತ್ತು. ಆ ಗೋಡೆ ಮೂರು ಮೀಟರ್ ದಪ್ಪ ಹಾಗು ಮೂರು ಮೀಟರ್ ಎತ್ತರ ಇತ್ತು. 6ಆಮೇಲೆ ಅವನು ಪೂರ್ವದಿಕ್ಕಿನ ಹೆಬ್ಬಾಗಿಲಿಗೆ ಬಂದು ಮೆಟ್ಟಲುಗಳನ್ನು ಹತ್ತಿ ಹೊಸ್ತಿಲಿನ ಅಗಲವನ್ನು ಅಳೆದನು. ಒಂದೊಂದು ಹೊಸ್ತಿಲಿನ ಅಗಲವು ಮೂರು ಮೀಟರ್ ಇತ್ತು. 7ಅಲ್ಲಿ ಒಂದೊಂದು ಕೋಣೆಯ ಉದ್ದ ಮೂರು ಮೀಟರ್, ಅಗಲ ಮೂರು ಮೀಟರ್. 8ಆ ಗೋಡೇಕೋಣೆಗಳು ಒಂದಕ್ಕೊಂದು ಎರಡುವರೆ ಮೀಟರ್ ದೂರವಾಗಿದ್ದವು; ದೇವಸ್ಥಾನಕ್ಕೆ ಎದುರಾಗಿರುವ ಹೆಬ್ಬಾಗಿಲ ಕೈಸಾಲೆಯ ಹೊಸ್ತಿಲಿನ ಅಗಲವು ಮೂರು ಮೀಟರ್. 9ಆಮೇಲೆ ಅವನು ಹೆಬ್ಬಾಗಿಲ ಕೈಸಾಲೆಯ ಅಗಲವನ್ನು ಅಳೆದನು; ಅದು ನಾಲ್ಕು ಮೀಟರ್ ಇತ್ತು; ನಿಲವು ಕಂಬಗಳ ಅಗಲ ಒಂದೊಂದು ಮೀಟರ್. ಹೆಬ್ಬಾಗಿಲ ಕೈಸಾಲೆಯು ದೇವಸ್ಥಾನಕ್ಕೆ ಎದುರಾಗಿತ್ತು. 10ಪೂರ್ವದಿಕ್ಕಿನ ಹೆಬ್ಬಾಗಿಲಿನ ಎರಡು ಪಕ್ಕಗಳಲ್ಲಿ ಮೂರು ಮೂರು ಗೋಡೇಕೋಣೆಗಳಿದ್ದವು; ಅವೆಲ್ಲಾ ಒಂದೇ ಅಳತೆ; ಎರಡು ಪಕ್ಕಗಳಲ್ಲಿನ ನಿಲವು ಕಂಬಗಳೂ ಒಂದೇ ಅಳತೆಯಾಗಿದ್ದವು.

11 ಅನಂತರ ಅವನು ಹೆಬ್ಬಾಗಿಲ ದ್ವಾರವನ್ನು ಅಳೆದನು. ಅಗಲ ಐದು ಮೀಟರ್, ಉದ್ದ ಆರುವರೆ ಮೀಟರ್. 12ಎರಡು ಪಕ್ಕಗಳಲ್ಲಿನ ಗೋಡೇಕೋಣೆಗಳ ಮುಂದೆ ಒಂದೊಂದು ಐವತ್ತು ಸೆಂಟಿಮೀಟರ್ ಅವಕಾಶ; ಎರಡು ಕಡೆಯ ಗೋಡೇಕೋಣೆಗಳ ಅಗಲವು ಮೂರು ಮೀಟರ್. 13ಅವನು ಒಂದು ಕಡೆಯ ಗೋಡೆಕೋಣೆಗಳ ಮಾಳಿಗೆಯ ಹೊರಕೊನೆಯಿಂದ ಇನ್ನೊಂದು ಕಡೆಯ ಗೋಡೇಕೋಣೆಗಳ ಮಾಳಿಗೆಯ ಹೊರ ಕೊನೆಗೆ, ಅಂದರೆ ಒಂದು ಕೋಣೆಯ ಬಾಗಿಲಿನಿಂದ ಇನ್ನೊಂದು ಕೋಣೆಯ ಬಾಗಿಲಿಗೆ ಹೆಬ್ಬಾಗಿಲಿನ

ಅಗಲವನ್ನು ಅಳೆಯಲು ಹನ್ನೆರಡುವರೆ ಮೀಟರಿತ್ತು. 14ಪ್ರಾಕಾರದಲ್ಲಿನ ನಿಲವು ಕಂಬದವರೆಗೆ ನಿಲವುಕಂಬಗಳನ್ನು ಅಳತೆ ಮಾಡಲು ಮೂವತ್ತು ಮೀಟರ್ ಇದ್ದವು. ಹೆಬ್ಬಾಗಿಲನ್ನು ಸುತ್ತುಮುತ್ತಲು ಅಳೆದನು. 15ಪ್ರವೇಶ ಸ್ಥಾನದ ಹೊರಗಡೆಯಿಂದ ಒಳ ಕೈಸಾಲೆಯ ಕೊನೆಯತನಕ ಹೆಬ್ಬಾಗಿಲು ಇಪ್ಪತ್ತೈದು ಮೀಟರ್ ಉದ್ದವಾಗಿತ್ತು. 16ಗೋಡೇಕೋಣೆಗಳಲ್ಲೂ ಒಳಗಣ ಎರಡು ಕಡೆಯ ನಿಲುವುಕಂಬಗಳಲ್ಲೂ ಕೈಸಾಲೆಗಳಲ್ಲೂ ತೆರೆಯಲಾಗದ ಕಿಟಕಿಗಳು ಹೆಬ್ಬಾಗಿಲೊಳಗೆ ಸುತ್ತಮುತ್ತಲು ಇದ್ದವು; ಹೊರಗಣ ನಿಲವುಕಂಬಗಳಲ್ಲಿ ಖರ್ಜೂರ ವೃಕ್ಷಗಳು ಚಿತ್ರಿತವಾಗಿದ್ದವು.

### ಹೊರಗಿನ ಪ್ರಾಕಾರ

17 ಅನಂತರ ಆ ಪುರುಷ ನನ್ನನ್ನು ಹೊರಗಣ ಪ್ರಾಕಾರಕ್ಕೆ ಕರೆದುತಂದನು; ಇಗೋ, ಕೋಣೆಗಳೂ ಪ್ರಾಕಾರದ ಸುತ್ತಲು ಹಾಕಿದ ನೆಲಗಟ್ಟೂ ಕಾಣಿಸಿದವು. ಒಟ್ಟಾಗಿ ನೆಲೆಗಟ್ಟಿನ ಮೇಲೆ ಮೂವತ್ತು ಕೋಣೆಗಳಿದ್ದವು. 18ಆ ಕೆಳಗಣ ನೆಲೆಗಟ್ಟು ಹೆಬ್ಬಾಗಿಲುಗಳ ಎರಡು ಪಕ್ಕಗಳಲ್ಲೂ ಹಾಸಲಾಗಿದ್ದ ಅವುಗಳಷ್ಟು ಅಗಲವಾಗಿತ್ತು.

19 ಅವನು ಪೂರ್ವದಲ್ಲೂ ಉತ್ತರದಲ್ಲೂ ಕೆಳಗೂ ಹೆಬ್ಬಾಗಿಲಿನ ಒಳಗಡೆಯಿಂದ ಒಳಗಣ ಪ್ರಾಕಾರದ ಹೊರಗಡೆಯ ತನಕ ಅಳೆಯಲು ಐವತ್ತು ಮೀಟರ್ ಇತ್ತು.

### ಉತ್ತರದ ಹೆಬ್ಬಾಗಿಲು

20 ಇದಲ್ಲದೆ ಹೊರಗಣ ಪ್ರಾಕಾರದ ಉತ್ತರದ ಹೆಬ್ಬಾಗಿಲಿನ ಅಗಲವನ್ನೂ ಉದ್ದವನ್ನೂ ಅಳೆದನು. 21ಅದರೊಳಗೆ ಎರಡು ಕಡೆ ಗೋಡೇಕೋಣೆಗಳು ಮೂರು ಮೂರಿದ್ದವು; ಅಲ್ಲಿನ ನಿಲವುಕಂಬಗಳೂ ಕೈಸಾಲೆಯೂ ಮೊದಲನೆಯ ಹೆಬ್ಬಾಗಿಲಿನ ಅಳತೆಯಂತಿದ್ದವು; ಆ ಹೆಬ್ಬಾಗಿಲಿನ ಉದ್ದ ಇಪ್ಪತ್ತೈದು ಮೀಟರ್, ಅಗಲ ಹನ್ನೆರಡುವರೆ ಮೀಟರ್. 22ಅಲ್ಲಿನ ಕಿಟಕಿಗಳೂ ಕೈಸಾಲೆಯೂ ಚಿತ್ರಿತವಾಗಿದ್ದ ಖರ್ಜೂರ ವೃಕ್ಷಗಳೂ ಮೂಡಣ ಹೆಬ್ಬಾಗಿಲುಗಳ ಅಳತೆಯಷ್ಟಿದ್ದವು; ಏಳು ಮೆಟ್ಟಲು ಹತ್ತಿ ಅಲ್ಲಿಗೆ ಸೇರುತ್ತಿದ್ದರು; ಕೈಸಾಲೆ ಒಳಗಡೆಯಿತ್ತು; 23ಹೊರಗಣ ಪ್ರಾಕಾರದ ಬಡಗಣ ಪ್ರಾಕಾರಕ್ಕೂ ಹೆಬ್ಬಾಗಿಲುಗಳು ಇದ್ದವು. ಒಂದು ಬಾಗಿಲಿನಿಂದ ಎದುರು ಬಾಗಿಲಿಗೆ ಐವತ್ತು ಮೀಟರ್ ಅಳೆದನು.

### ದಕ್ಷಿಣದ ಹೆಬ್ಬಾಗಿಲು

24 ಆಮೇಲೆ ಅವನು ನನ್ನನ್ನು ದಕ್ಷಿಣಕ್ಕೆ ಕರೆತಂದನು. ಇಗೋ, ಅಲ್ಲಿಯೂ ಒಂದು ಹೆಬ್ಬಾಗಿಲು; ಅವನು ಅಲ್ಲಿನ ನಿಲವುಕಂಬಗಳನ್ನೂ ಕೈಸಾಲೆಯನ್ನೂ ಅಳೆಯಲು ಹಿಂದಣ ಅಳತೆಗಳೇ ಕಂಡುಬಂದವು. 25ಅದರಲ್ಲೂ ಅದರ ಕೈಸಾಲೆಯಲ್ಲೂ ಎಲ್ಲ ಕಡೆ ಅಂಥ ಕಿಟಕಿಗಳೇ ಇದ್ದವು; ಹೆಬ್ಬಾಗಿಲಿನ ಉದ್ದ ಇಪ್ಪತ್ತೈದು ಮೀಟರ್, ಅಗಲ ಹನ್ನೆರಡುವರೆ ಮೀಟರ್. 26ಅಲ್ಲಿ ಹತ್ತುವುದಕ್ಕೆ ಏಳು ಮೆಟ್ಟಲುಗಳಿದ್ದವು. ಕೈಸಾಲೆ ಒಳಗಡೆಯಿತ್ತು; ಕೈಸಾಲೆಯ ಎದುರು ಬದುರಿನ ನಿಲವುಕಂಬಗಳಲ್ಲಿ ಖರ್ಜೂರ ವೃಕ್ಷಗಳು ಚಿತ್ರಿತವಾಗಿದ್ದವು. 27ಒಳಗಿನ ಪ್ರಾಕಾರದಲ್ಲೂ ದಕ್ಷಿಣಕ್ಕೆ ಹೆಬ್ಬಾಗಿಲಿತ್ತು; ದಕ್ಷಿಣದಲ್ಲಿ ಒಂದು ಬಾಗಿಲಿನಿಂದ ಎದುರುಬಾಗಿಲಿಗೆ ಅಳೆದಾಗ ಐವತ್ತು ಮೀಟರ್ ಇತ್ತು.

### ಒಳಗಿನ ಪ್ರಾಕಾರ–ದಕ್ಷಿಣ ಬಾಗಿಲು

28 ಆಮೇಲೆ ಅವನು ನನ್ನನ್ನು ದಕ್ಷಿಣ ಬಾಗಿಲ ಮಾರ್ಗವಾಗಿ ಒಳಗಣ ಪ್ರಾಕಾರಕ್ಕೆ ಕರೆದು ತಂದನು. ಅವನು ಆ ದಕ್ಷಿಣ ಹೆಬ್ಬಾಗಿಲನ್ನೂ ಅಲ್ಲಿನ ಗೋಡೇಕೋಣೆ, ನಿಲವುಕಂಬ, ಕೈಸಾಲೆ ಇವುಗಳನ್ನೂ ಅಳೆಯಲು ಅಷ್ಟೇ ಅಳತೆಗಳಿದ್ದವು. 29–30ಅದರಲ್ಲಿಯೂ ಅದರ ಕೈಸಾಲೆಯಲ್ಲಿಯೂ ಕಿಟಕಿಗಳು ಎಲ್ಲ ಕಡೆಯಿದ್ದವು. ಹೆಬ್ಬಾಗಿಲಿನ ಉದ್ದ ಇಪ್ಪತ್ತೈದು ಮೀಟರ್, ಅಗಲ ಹನ್ನೆರಡುವರೆ ಮೀಟರ್. 31ಆ ಹೆಬ್ಬಾಗಿಲ ಕೈಸಾಲೆ ಹೊರಗಣ ಪ್ರಾಕಾರಕ್ಕೆ ಅಭಿಮುಖವಾಗಿತ್ತು; ಅದರ ನಿಲವುಕಂಬಗಳಲ್ಲಿ ಖರ್ಜೂರ ವೃಕ್ಷಗಳು ಚಿತ್ರಿತವಾಗಿದ್ದವು. ಅಲ್ಲಿ ಹತ್ತುವುದಕ್ಕೆ ಎಂಟು ಮೆಟ್ಟಲುಗಳಿದ್ದವು.

## ಒಳಗಿನ ಪ್ರಾಕಾರ–ಪೂರ್ವದ ಹೆಬ್ಬಾಗಿಲು

32 ಅವನು ನನ್ನನ್ನು ಒಳಗಣ ಪ್ರಾಕಾರದ ಪೂರ್ವಕ್ಕೆ ಕರೆದುತಂದು ಅಲ್ಲಿನ ಹೆಬ್ಬಾಗಿಲನ್ನೂ ಅದರ ಗೋಡೇಕೋಣೆ, ನಿಲವುಕಂಬ, ಕೈಸಾಲೆ ಇವುಗಳನ್ನೂ ಅಳೆಯಲು ಆ ಅಳತೆಗಳೇ ಕಂಡು ಬಂದವು. 33ಅದರಲ್ಲಿಯೂ ಅದರ ಕೈಸಾಲೆಯಲ್ಲಿಯೂ ಎಲ್ಲಾ ಕಡೆ ಕಿಟಕಿಗಳಿದ್ದವು. ಆ ಹೆಬ್ಬಾಗಿಲಿನ ಉದ್ದ ಇಪ್ಪತ್ತೈದು ಮೀಟರ್, ಅಗಲ ಹನ್ನೆರಡುವರೆ ಮೀಟರ್. 34ಅದರ ಕೈಸಾಲೆ ಹೊರಗಣ ಪ್ರಾಕಾರಕ್ಕೆ ಅಭಿಮುಖವಾಗಿತ್ತು. ಕೈಸಾಲೆಯ ಎದುರುಬದುರಿನ ನಿಲವುಕಂಬಗಳಲ್ಲಿ ಖರ್ಜೂರ ವೃಕ್ಷಗಳು ಚಿತ್ರಿತವಾಗಿದ್ದವು; ಇಲ್ಲಿ ಹತ್ತುವುದಕ್ಕೆ ಎಂಟು ಮೆಟ್ಟಲುಗಳಿದ್ದವು.

## ಒಳಗಿನ ಪ್ರಾಕಾರ – ಉತ್ತರ ಬಾಗಿಲು

35 ಆಮೇಲೆ ಅವನು ನನ್ನನ್ನು ಉತ್ತರ ಬಾಗಿಲಿಗೆ ಕರೆದುತಂದು ಅದನ್ನೂ ಅದರ ಗೋಡೇಕೋಣೆ, ನಿಲವುಕಂಬ, ಕೈಸಾಲೆ ಇವುಗಳನ್ನೂ ಅಳೆಯಲು ಅಲ್ಲಿಯೂ ಆ ಅಳತೆಗಳೇ ಕಂಡುಬಂದವು; 36ಅದರಲ್ಲಿ ಎಲ್ಲಾ ಕಡೆ ಕಿಟಕಿಗಳಿದ್ದವು; ಅದರ ಉದ್ದ ಇಪ್ಪತ್ತೈದು ಮೀಟರ್, ಅಗಲ ಹನ್ನೆರಡುವರೆ ಮೀಟರ್. 37ಆದರೆ ನಿಲವುಕಂಬಗಳು ಹೊರಗಣ ಪ್ರಾಕಾರಕ್ಕೆ ಅಭಿಮುಖವಾಗಿದ್ದವು; ಆ ಎದುರುಬದುರಿನ ನಿಲವುಕಂಬಗಳಲ್ಲಿ ಖರ್ಜೂರ ವೃಕ್ಷಗಳು ಚಿತ್ರಿತವಾಗಿದ್ದವು; ಅಲ್ಲಿ ಹತ್ತುವುದಕ್ಕೆ ಎಂಟು ಮೆಟ್ಟಲುಗಳಿದ್ದವು.

## ಉತ್ತರ ಹೆಬ್ಬಾಗಿಲ ಬಳಿಯಿದ್ದ ಕಟ್ಟಡಗಳು

38 ಹೆಬ್ಬಾಗಿಲ ನಿಲವುಕಂಬಗಳ ಪಕ್ಕದಲ್ಲಿ ಒಂದು ಕೊಠಡಿಯೂ ಅದರ ದ್ವಾರವೂ ಕಾಣಿಸಿದವು. ಆ ಕೋಣೆಯೊಳಗೆ ದಹನಬಲಿಪ್ರಾಣಿಗಳ ಮಾಂಸವನ್ನು ತೊಳೆಯುತ್ತಿದ್ದರು. 39ಹೆಬ್ಬಾಗಿಲ ಕೈಸಾಲೆಯಲ್ಲಿ ಎರಡು ಕಡೆಯಲ್ಲೂ ಎರಡೆರಡು ಪೀಠಗಳಿದ್ದವು. ಅವುಗಳ ಮೇಲೆ ದಹನಬಲಿ ಪ್ರಾಣಿ, ದೋಷಪರಿಹಾರಕ ಬಲಿಪ್ರಾಣಿ, ಪ್ರಾಯಶ್ಚಿತ್ತ ಬಲಿಪ್ರಾಣಿ, ಇವುಗಳನ್ನು ವಧಿಸುತ್ತಿದ್ದರು. 40ಉತ್ತರ ಹೆಬ್ಬಾಗಿಲ ಪ್ರವೇಶ ಸ್ಥಾನದ ಮೆಟ್ಟಲುಗಳ ಹತ್ತಿರ, ಆ ಬಾಗಿಲ ಕೈಸಾಲೆಯ ಹೊರಗೆ, ಒಂದು ಕೊನೆಯಲ್ಲಿ ಎರಡು ಪೀಠಗಳು ಇದ್ದವು. 41ಹೆಬ್ಬಾಗಿಲಿನ ಎರಡು ಪಕ್ಕಗಳಲ್ಲಿ ಇತ್ತ ನಾಲ್ಕು, ಅತ್ತ ನಾಲ್ಕು ಪೀಠಗಳು, ಒಟ್ಟಿಗೆ ಬಲಿಪ್ರಾಣಿಗಳನ್ನು ವಧಿಸುವ ಎಂಟು ಪೀಠಗಳಿದ್ದವು. 42ಇದಲ್ಲದೆ ದಹನಬಲಿಗೆ ಉಪಯುಕ್ತವಾದ, ಕೆತ್ತಿದ ಕಲ್ಲಿನ ನಾಲ್ಕು ಪೀಠಗಳಿದ್ದವು; ಅವುಗಳ ಉದ್ದ ಎಪ್ಪತ್ತೈದು ಸೆಂಟಿಮೀಟರ್, ಎತ್ತರ ಐವತ್ತು ಸೆಂಟಿಮೀಟರ್, ಅವುಗಳ ಮೇಲೆ ದಹನಬಲಿಪಶುಗಳ ವಧೆಯ ಉಪಕರಣಗಳನ್ನು ಇಡುತ್ತಿದ್ದರು. 43ಅಂಚಿನಲ್ಲಿ ಎಪ್ಪತ್ತೈದು ಮಿಲಿಮೀಟರ್ ದಿಂಡು ಕಟ್ಟಿತ್ತು; ನೈವೇದ್ಯ ಮಾಂಸವು ಪೀಠಗಳ ಮೇಲಿತ್ತು.

44 ಆಮೇಲೆ ಆ ಪುರುಷ ನನ್ನನ್ನು ಒಳಗಣ ಪ್ರಾಕಾರಕ್ಕೆ ಕರೆದುತಂದನು. ಇಗೋ, ಅಲ್ಲಿ ಎರಡು ಕೋಣೆಗಳು ಕಾಣಿಸಿದವು. ಉತ್ತರ ಹೆಬ್ಬಾಗಿಲ ಪಕ್ಕದಲ್ಲಿ ಒಂದು ಕೋಣೆಯು ದಕ್ಷಿಣಕ್ಕೆ ಅಭಿಮುಖವಾಗಿತ್ತು; ದಕ್ಷಿಣ ಹೆಬ್ಬಾಗಿಲ ಪಕ್ಕದಲ್ಲಿ ಇನ್ನೊಂದು ಕೋಣೆ ಉತ್ತರಕ್ಕೆ ಅಭಿಮುಖವಾಗಿತ್ತು. 45ಆಗ ಅವನು ನನಗೆ, ದಕ್ಷಿಣಕ್ಕೆ ಅಭಿಮುಖವಾಗಿರುವ ಈ ಕೋಣೆ ದೇವಾಲಯ ಪಾರುಪತ್ಯವನ್ನು ನಡೆಸುವ ಯಾಜಕರಿಗೆ ನೇಮಕವಾಗಿದೆ. 46ಉತ್ತರಕ್ಕೆ ಅಭಿಮುಖವಾಗಿರುವ ಆ ಕೋಣೆ ಬಲಿಪೀಠದ ಕಾರ್ಯದರ್ಶಿಗಳಾದ ಯಾಜಕರಿಗೆ ನೇಮಕವಾಗಿದೆ. ಚಾದೋಕನ ಸಂತತಿಯಾದವರಾದ ಇವರು ಲೇವಿಯ ಕುಲದವರಲ್ಲಿ ಸರ್ವೇಶ್ವರನ ಸನ್ನಿಧಿ ಸೇವಕರಾಗಿದ್ದಾರೆ ಎಂದು ಹೇಳಿದನು. 47ಆಮೇಲೆ ಅವನು ಪ್ರಾಕಾರವನ್ನು ಅಳೆಯಲು ಅದು ಐವತ್ತು ಮೀಟರ್ ಉದ್ದವಾಗಿಯೂ ಐವತ್ತು ಮೀಟರ್ ಅಗಲವಾಗಿಯೂ ಚಚ್ಚೌಕವಾಗಿತ್ತು; ಬಲಿಪೀಠವು ದೇವಸ್ಥಾನದ ಮುಂದೆ ಇತ್ತು.

## ಒಳಗಿನ ಪ್ರಾಕಾರ ಮತ್ತು ದೇವಾಲಯದ ಕಟ್ಟಡ

48 ಕೂಡಲೆ ಆ ಪುರುಷ ನನ್ನನ್ನು ದೇವಸ್ಥಾನದ ದ್ವಾರಮಂಟಪಕ್ಕೆ ಕರೆದುತಂದು ಅದನ್ನು ಅಳೆದನು. ಅದರ ಎದುರುಬದುರಿನ ನಿಲವುಕಂಬಗಳ ಅಗಲ ಎರಡುವರೆ ಮೀಟರುಗಳು, ಬಾಗಿಲಿನ ಎರಡು

ಪಕ್ಕದ ಗೋಡೆಗಳ ಅಗಲ ಅರ್ಧರ್ಧ ಮೀಟರ್, 49ದ್ವಾರಮಂಟಪದ ಉದ್ದ ಹತ್ತು ಮೀಟರ್, ಅಗಲ ಐದುವರೆ ಮೀಟರ್ ಇದ್ದವು. ಹತ್ತು ಮೆಟ್ಟಲುಗಳನ್ನು ಹತ್ತಿ ಅಲ್ಲಿಗೆ ಸೇರುತ್ತಿದ್ದರು. ಎರಡು ಕಡೆಯ ನಿಲವುಕಂಬಗಳ ಪಕ್ಕದಲ್ಲಿ ಒಂದೊಂದು ಉಪಸ್ತಂಭ ಇತ್ತು.

**41** ಆಮೇಲೆ ಆ ಪುರುಷ ನನ್ನನ್ನು ಪರಿಶುದ್ಧ ಸ್ಥಳಕ್ಕೆ ತಂದು ಅದನ್ನು ಅಳೆಯಲು ಅದರ ಎದುರುಬದುರಿನ ನಿಲವುಕಂಬಗಳ ಅಗಲ ದೇವರ ಗುಡಾರದ ಅಗಲದಂತೆ ಮೂರು ಮೂರು ಮೀಟರ್, 2ದ್ವಾರದ ಅಗಲ ಐದು ಮೀಟರು ದ್ವಾರದ ಎರಡು ಪಕ್ಕದ ಗೋಡೆಗಳ ಅಗಲ ಎರಡುವರೆ ಎರಡುವರೆ ಮೀಟರ್, ಪರಿಶುದ್ಧ ಸ್ಥಳದ ಉದ್ದ ಇಪ್ಪತ್ತು ಮೀಟರ್, ಅಗಲ ಹತ್ತು ಮೀಟರ್ ಇದ್ದವು.

3 ಆಮೇಲೆ ಆ ಪುರುಷ ಇನ್ನೂ ಮುಂದಕ್ಕೆ ಹೋಗಿ ಪರಿಶುದ್ಧ ಸ್ಥಳದ ಕೊನೆಯಲ್ಲಿ ಗರ್ಭಗೃಹವನ್ನು ಅಳೆಯಲು ದ್ವಾರದ ಒಂದೊಂದು ನಿಲವುಕಂಬದ ಅಗಲ ಒಂದೊಂದು ಮೀಟರ್, ದ್ವಾರದ ಅಗಲ ಮೂರು ಮೀಟರ್, 4ದ್ವಾರದ ಪಕ್ಕದ ಗೋಡೆಗಳ ಅಗಲ ಮೂರುವರೆ ಮೂರುವರೆ ಮೀಟರ್, ಗರ್ಭಗೃಹದ ಉದ್ದ ಹತ್ತು ಮೀಟರ್, ಅಗಲ ಹತ್ತು ಮೀಟರ್ ಇದ್ದವು. ಆಗ ಅವನು ನನಗೆ, "ಇದು ಮಹಾ ಪರಿಶುದ್ಧ ಸ್ಥಳ" ಎಂದು ಹೇಳಿದನು.

### ದೇವಸ್ಥಾನದ ಸುತ್ತಣ ಕೊಠಡಿಗಳು

5 ಆಮೇಲೆ ಆ ಪುರುಷ ಅಳೆಯಲು ದೇವಸ್ಥಾನದ ಗೋಡೆಯ ಅಗಲ ಮೂರು ಮೀಟರ್, ದೇವಸ್ಥಾನದ ಸುತ್ತುಮುತ್ತಲು ಎಲ್ಲಕಡೆ ಅದರ ಪಕ್ಕಗಳಿಗೆ ಅಂಟಿಕೊಂಡಿದ್ದ ಕೊಠಡಿಗಳ ಅಗಲ ಎರಡೆರಡು ಮೀಟರ್ ಇದ್ದವು. 6ಆ ಕೊಠಡಿಗಳು ಒಂದರ ಮೇಲೊಂದು ಮೂರಂತಸ್ತಾಗಿದ್ದವು. ಒಂದೊಂದು ಅಂತಸ್ತಿನಲ್ಲಿ ಮೂವತ್ತು ಮೂವತ್ತು ಕೊಠಡಿಗಳಿದ್ದವು. ದೇವಸ್ಥಾನದ ಗೋಡೆಯನ್ನು ಮೆಟ್ಟಲು ಮೆಟ್ಟಲಾಗಿ ಕಟ್ಟಲಾಗಿತ್ತು. ಗೋಡೆಯಲ್ಲಿ ತೂತಿಲ್ಲದೆ ಆ ಮೆಟ್ಟಲುಗಳೇ ಸುತ್ತಣ ಕೊಠಡಿಗಳ ತೊಲೆಗಳಿಗೆ ಆಧಾರವಾಗಿದ್ದವು. 7ಸುತ್ತಣ ಅಂತಸ್ತುಗಳು ಮೇಲೆ ಮೇಲೆ ಹೋದ ಹಾಗೆಲ್ಲಾ ಆಯಾ ಕೊಠಡಿಗಳ ಅಗಲವು ಹೆಚ್ಚುತ್ತಾ ಆಯಾ ಕೊಠಡಿಗಳ ಅಗಲವು ಹೆಚ್ಚುತ್ತಾ ಬಂದಿತು; ಅವು ದೇವಸ್ಥಾನವನ್ನು ಸುತ್ತಿಕೊಂಡು ಮೇಲೆ ಮೇಲೆ ಹೋದ ಹಾಗೆಲ್ಲಾ ಅದನ್ನು ಬಿಗಿಬಿಗಿಯಾಗಿ ತಬ್ಬಿಕೊಂಡಂತೆ ಇದ್ದವು. ಹೀಗೆ ಮೇಲು ಮೇಲಿನ ಅಂತಸ್ತುಗಳು ದೇವಸ್ಥಾನದ ಕಡೆಗೆ ಅಗಲವಾಗುತ್ತಾ ಬಂದವು; ಕೆಳಗಣ ಅಂತಸ್ತಿನಿಂದ ನಡುವಣ ಅಂತಸ್ತಿನ ಮಾರ್ಗವಾಗಿ ಮೇಲಣ ಅಂತಸ್ತಿಗೆ ಹತ್ತುತ್ತಿದ್ದರು. 8ದೇವಸ್ಥಾನದ ಸುತ್ತಮುತ್ತಲು ಒಂದು ಜಗಲಿ ಕಾಣಿಸಿತು. ಅದು ಕೊಠಡಿಗಳಿಗೆ ತಳಹದಿಯಾಗಿ ನೆಲಮಟ್ಟದಿಂದ ಮೂರು ಮೀಟರ್ ಅಳತೇ ಕೋಲಿನಷ್ಟು ಎತ್ತರವಾಗಿತ್ತು. 9ಕೊಠಡಿಗಳ ಹೊರಗೋಡೆಯ ದಪ್ಪ ಎರಡುವರೆ ಮೀಟರಿತ್ತು. 10ದೇವಸ್ಥಾನಕ್ಕೆ ಅಂಟಿಕೊಂಡ ಆ ಕೊಠಡಿಗಳಿಗೂ ದೀಕ್ಷಿತ ಯಾಜಕರ ಕೋಣೆಗಳಿಗೂ ನಡುವೆ ದೇವಸ್ಥಾನದ ಸುತ್ತು ಮುತ್ತಲೂ ಹತ್ತು ಮೀಟರ್ ಅಂತರವಿತ್ತು. 11ಆ ಎಲ್ಲ ಕೊಠಡಿಗಳ ಪ್ರವೇಶಕ್ಕೂ ಎರಡೇ ಬಾಗಿಲು, ಉತ್ತರ ದಕ್ಷಿಣಕ್ಕೊಂದೊಂದು. ಅವೆರಡೂ ಜಗಲಿಯ ಕಡೆಗಿದ್ದವು; ಆ ಜಗಲಿ ಎಲ್ಲ ಕಡೆ ಎರಡುವರೆ ಮೀಟರ್ ಅಗಲವಾಗಿತ್ತು.

### ಪಶ್ಚಿಮ ಕಡೆಯ ಕೊಠಡಿಗಳು

12 ಪಶ್ಚಿಮದಲ್ಲಿ ದೀಕ್ಷಿತರ ಪ್ರಾಕಾರದ ಹಿಂದಿನ ಶಾಲೆಯ ಅಗಲ ಮೂವತ್ತೈದು ಮೀಟರ್, ಉದ್ದ ನಲವತ್ತೈದು ಮೀಟರ್, ಅದರ ಗೋಡೆಯ ದಪ್ಪ ಎರಡುವರೆ ಮೀಟರ್.

### ದೇವಸ್ಥಾನದ ಮೊತ್ತ ಅಳತೆ

13 ಆ ಪುರುಷ ಅಳೆದಾಗ ದೇವಸ್ಥಾನದ ಉದ್ದ ಐವತ್ತು ಮೀಟರ್, ದೀಕ್ಷಿತರ ಪ್ರಾಕಾರ, ಶಾಲೆ ಶಾಲೆಯ ಗೋಡೆಗಳು, ಇವುಗಳ ಒಟ್ಟಗಲ ಐವತ್ತು ಮೀಟರ್. 14ಪೂರ್ವದಲ್ಲಿನ ದೇವಸ್ಥಾನ ಮುಖ,

ದೀಕ್ಷಿತರ ಪ್ರಾಕಾರ, ಇವುಗಳ ಒಟ್ಟಗಲ ಐವತ್ತು ಮೀಟರ್ ಇದ್ದವು. 15ಅವನು ದೀಕ್ಷಿತರ ಪ್ರಾಕಾರದ ಹಿಂದಿನ ಶಾಲೆಯನ್ನು ಆ ಪ್ರಾಕಾರದ ಕಡೆಯಲ್ಲಿ ಅಳೆಯಲು ಅದರ ಉದ್ದ ಎರಡು ಪಕ್ಕದ ಗೋಡೆಗಳ ಸಹಿತ ಐವತ್ತು ಮೀಟರಿತ್ತು.

**ದೇವಸ್ಥಾನದ ಒಳಭಾಗದ ವರ್ಣನೆ**

16 ಗರ್ಭಗೃಹ, ಪ್ರಾಕಾರದಲ್ಲಿನ ದ್ವಾರ ಮಂಟಪಗಳು, ಹೊಸ್ತಿಲುಗಳು, ತೆರೆಯಲಾಗದ ಕಿಟಕಿಗಳು, ಹೊಸ್ತಿಲಿನ ಎದುರಿಗೆ ಮೂರಂತಸ್ತಾಗಿ ಸುತ್ತಲು ಕಟ್ಟಲಾಗಿದ್ದ ಗೋಡೆಯಟ್ಟಗಳು, ಇವುಗಳನ್ನೂ ಅಳೆದನು. 17ನೆಲದಿಂದ ಕಿಟಕಿಗಳವರೆಗೂ ದ್ವಾರದ ಮೇಲೂ ಗರ್ಭಗೃಹದ ಮತ್ತು ಈಚಿನ ಗೃಹದ ಗೊಡೆಗೆಲ್ಲಾ ಸುತ್ತಮುತ್ತಲು ಹಲಗೆಗಳನ್ನು ಚೌಕಚೌಕವಾಗಿ ಹೊದಿಸಲಾಗಿತ್ತು. ಕಿಟಕಿಗಳ ಪಕ್ಕಗಳಿಗೂ ಹಲಿಗೆಯ ಹೊದಿಕೆಯಿತ್ತು. 18ಆ ಚೌಕಗಳಲ್ಲಿ ಕೆರೂಬಿಗಳೂ ಖರ್ಜೂರ ವೃಕ್ಷಗಳೂ ಚಿತ್ರಿತವಾಗಿದ್ದವು; ಎರಡೆರಡು ಕೆರೂಬಿಗಳ ನಡುವೆ ಒಂದೊಂದು ಖರ್ಜೂರ ವೃಕ್ಷ; ಒಂದೊಂದು ಕೆರೂಬಿಗೆ ಎರಡೆರಡು ಮುಖ; 19ಖರ್ಜೂರ ವೃಕ್ಷದ ಒಂದು ಪಕ್ಕವು ಮನುಷ್ಯಮುಖಕ್ಕೆ ಎದುರು, ಇನ್ನೊಂದು ಪಕ್ಕವು ಸಿಂಹಮುಖಕ್ಕೆ ಎದುರು; ದೇವಸ್ಥಾನದ ಒಳ ಭಾಗವೆಲ್ಲಾ ಸುತ್ತಮುತ್ತ ಹೀಗೆ ಚಿತ್ರಮಯವಾಗಿತ್ತು. 20ನೆಲದಿಂದ ದಾರವಂದದ ಮೇಲ್ಮಟ್ಟದ ತನಕ ಕೆರೂಬಿಗಳೂ ಖರ್ಜೂರ ವೃಕ್ಷಗಳೂ ಚಿತ್ರಿತವಾಗಿದ್ದವು. 21ಪರಿಶುದ್ಧ ಸ್ಥಳದ ಈಚಿನ ಗೋಡೆಯ ಬಾಗಿಲ ಚೌಕಟ್ಟು ಚಚ್ಚೌಕವಾಗಿತ್ತು; ಮಹಾಪರಿಶುದ್ಧ ಸ್ಥಳದ ಈಚಿನ ಗೋಡೆಯ ಚೌಕಟ್ಟು ಹಾಗೆಯೇ ಇತ್ತು.

**ಮರದ ವೇದಿಕೆ**

22 ಅಲ್ಲಿ ಮರದ ವೇದಿಕೆಯೊಂದಿತ್ತು: ಅದರ ಎತ್ತರ ಒಂದೂವರೆ ಮೀಟರ್, ಉದ್ದ ಒಂದು ಮೀಟರ್; ಅದರ ಮೂಲೆಗಳು, ಪೀಠ ಹಾಗು ಪಕ್ಕೆಗಳು ಮರದ್ದೇ ಆಗಿದ್ದವು. ಆ ಪುರುಷ ನನಗೆ, “ಇದು ಸರ್ವೇಶ್ವರನ ಸಮ್ಮುಖದ ಮೇಜು,” ಎಂದು ಹೇಳಿದನು.

**ಕದಗಳು**

23 ಪರಿಶುದ್ಧ ಸ್ಥಳದ ಮತ್ತು ಮಹಾಪರಿಶುದ್ಧ ಸ್ಥಳದ ಬಾಗಿಲುಗಳಿಗೆ ಎರಡೆರಡು ಕದಗಳು; 24ಒಂದೊಂದು ಕದಕ್ಕೆ ಎರಡೆರಡು ಮಡಚುವ ಭಾಗಗಳು; ಇತ್ತಕಡೆಯ ಕದಕ್ಕೆ ಎರಡು ಭಾಗ; ಅತ್ತಕಡೆಯ ಕದಕ್ಕೆ ಎರಡು ಭಾಗ ಇದ್ದವು. 25ಆ ಕದಗಳಲ್ಲಿ, ಅಂದರೆ ಪರಿಶುದ್ಧ ಸ್ಥಳದ ಕದಗಳಲ್ಲಿ ಕೆರೂಬಿಗಳು ಹಾಗು ಖರ್ಜೂರ ವೃಕ್ಷಗಳು ಗೋಡೆಗಳಲ್ಲಿ ಚಿತ್ರಿತವಾಗಿದ್ದ ಹಾಗೆಯೇ ಚಿತ್ರಿತವಾಗಿದ್ದವು. ದ್ವಾರ ಮಂಟಪದ ಹೊರಗಡೆ ಮರದ ಸೂರು ಇತ್ತು. 26ದ್ವಾರಮಂಟಪದ ಪಕ್ಕದ ಗೋಡೆಗಳಲ್ಲಿ ತೆರೆಯಲಾಗದ ಕಿಟಕಿಗಳೂ ಚಿತ್ರಿತ ಖರ್ಜೂರ ವೃಕ್ಷಗಳೂ ಇದ್ದವು.

**ದೇವಸ್ಥಾನದ ಹತ್ತಿರದ ಕಟ್ಟಡಗಳು**

**42** ಆಮೇಲೆ ಅವನು ನನ್ನನ್ನು ಉತ್ತರದ ಮಾರ್ಗವಾಗಿ ಹೊರಗಣ ಪ್ರಾಕಾರಕ್ಕೆ ಬರಮಾಡಿ ದೀಕ್ಷಿತರ ಪ್ರಾಕಾರಕ್ಕೂ ಉತ್ತರದ ಪೌಳಿಗೋಡೆಗಳಿಗೂ ನಡುವಣ ಕೋಣೆಗಳಿಗೆ ಕರೆದುತಂದು 2ಉತ್ತರದ ಬಾಗಿಲುಳ್ಳ ಕೋಣೆಗಳ ಸಾಲಿನ ಮುಂದೆ ನಿಲ್ಲಿಸಿದನು. ಆ ಸಾಲಿನ ಉದ್ದ ಐವತ್ತು ಮೀಟರ್. 3ಒಳಗಣ ಪ್ರಾಕಾರಕ್ಕೆ ಸೇರಿದ ಹತ್ತು ಮೀಟರ್ ಅಗಲದ ದೀಕ್ಷಿತರ ಪ್ರಾಕಾರಕ್ಕೂ ಹೊರಗಣ ಪ್ರಾಕಾರದ ನೆಲಗಟ್ಟಿಗೂ ನಡುವೆಯಿದ್ದ ಆ ಪ್ರದೇಶ ಇಪ್ಪತ್ತೈದು ಮೀಟರ್ ಅಗಲ. ಅಲ್ಲಿನ ಎರಡು ಸಾಲುಗಳ ಮೂರನೆಯ ಅಂತಸ್ತಿನ ಅಂಚಿನ ದಾರಿಗಳು ಒಂದಕ್ಕೊಂದು ಎದುರಾಗಿದ್ದವು. 4ಆ ಸಾಲುಗಳ ನಡುವೆ ಐವತ್ತು ಮೀಟರ್ ಉದ್ದದ, ಐದು ಮೀಟರ್ ಅಗಲದ ಓಣಿಯೊಂದಿತ್ತು; ಕೋಣೆಗಳ ಬಾಗಿಲುಗಳು ಉತ್ತರದ ಕಡೆಗಿದ್ದವು. 5ಮೇಲಣ ಕೋಣೆಗಳು ನಡುವಣ ಮತ್ತು ಕೆಳಗಣ ಕೋಣೆಗಳಿಗಿಂತ ಇಕ್ಕಟ್ಟಾಗಿದ್ದವು. ಅಂಚಿನ ದಾರಿಗಳು ಅವುಗಳ

ಅಗಲವನ್ನು ತಿಂದುಬಿಟ್ಟಿದ್ದವು. 6ಕೋಣೆಗಳು ಮೂರಂತಸ್ತಾಗಿದ್ದವು; ಹೊರಗಿನ ಪ್ರಾಕಾರದ ಕೋಣೆಗಳಿಗೆ ಇದ್ದಂತೆ ಈ ಕೋಣೆಗಳಿಗೆ ಕೈಸಾಲೆಗಳಿರಲಿಲ್ಲ; ಆದುದರಿಂದ ನೆಲಕ್ಕೆತ್ತರದಲ್ಲಿನ ಮೇಲಿನ ಕೋಣೆಗಳು ಕೆಳಗಿನ ಮತ್ತು ನಡುವಣ ಕೋಣೆಗಳಿಗಿಂತ ಇಕ್ಕಟ್ಟಾಗಿದ್ದವು. 7ಹೊರಗಿನ ಪ್ರಾಕಾರದ ಕಡೆಗಿರುವ ಕೋಣೆಗಳ ಸಾಲಿಗೆ ಸಮವಾಗಿ ಹೊರಗೋಡೆಯೊಂದಿತ್ತು. ಅದು ಇಪ್ಪತ್ತೈದು ಮೀಟರ್ ಉದ್ದವಾಗಿ ಎರಡನೆಯ ಸಾಲಿಗೆ ಎದುರಾಗಿತ್ತು. 8ಹೊರಗಣ ಪ್ರಾಕಾರದ ಕಡೆಗಿರುವ ಕೋಣೆಗಳ ಸಾಲಿನ ಉದ್ದವು ಇಪ್ಪತ್ತೈದು ಮೀಟರ್, ದೇವಸ್ಥಾನದ ಕಡೆಗಿರುವ ಕೋಣೆಗಳ ಸಾಲಿನ ಉದ್ದವು ಐವತ್ತು ಮೀಟರ್. 9ಕೋಣೆಗಳ ಪ್ರಾಕಾರದ ಪೂರ್ವದಲ್ಲಿ ಕೆಳಗಿನ ಮಟ್ಟದಲ್ಲಿ ಆ ಪ್ರಾಕಾರದ ಗೋಡೆಯ ನಡುವೆ ಹೊರಗಿನ ಪ್ರಾಕಾರದಿಂದ ಅಲ್ಲಿಗೆ ಸೇರುವ ಮಾರ್ಗವಿತ್ತು.

10 ಇದಲ್ಲದೆ, ಪೂರ್ವದಕಡೆ ದೀಕ್ಷಿತರ ಪ್ರಾಕಾರಕ್ಕೂ ಪೌಳಿಗೋಡೆಗೂ ನಡುವೆ ಕೊಠಡಿಗಳಿದ್ದವು.
11ಇವುಗಳ ಮುಂದೆ ಓಣಿಯೊಂದಿತ್ತು; ಅವು ಉತ್ತರದ ಕೋಣೆಗಳಂತೆ ಕಾಣಿಸುತ್ತಿದ್ದವು. ಇವುಗಳ ಉದ್ದ
ಹಾಗು ಅಗಲ ಅವುಗಳ ಉದ್ದ ಹಾಗು ಅಗಲ ಒಂದೆ. ಇವುಗಳ ರಚನಾ ಕ್ರಮದ್ವಾರ, ನಿರ್ಗಮಸ್ಥಾನಗಳೆಲ್ಲವೂ
ಅವುಗಳಂತಿದ್ದವು. ದಕ್ಷಿಣ ಕೋಣೆಗಳು ಹಾಗೆಯೇ ಇದ್ದವು. 12ಕೋಣೆಗಳ ಪ್ರಾಕಾರವನ್ನು ಪೂರ್ವದಲ್ಲಿ
ಸೇರುವ ಕಡೆ, ಗೋಡೆಯ ಪಕ್ಕದಲ್ಲಿ ಇರುವ ದಾರಿಯ ಕೊನೆಯಲ್ಲಿ ಒಂದು ಬಾಗಿಲಿತ್ತು.

13 ಆಗ ನನಗೆ, 'ದೀಕ್ಷಿತರ ಪ್ರಾಕಾರದ ಉತ್ತರ ದಕ್ಷಿಣ ಕಡೆಗಳಲ್ಲಿನ ಕೋಣೆಗಳು ಪರಿಶುದ್ಧವಾದವು;
ಅಲ್ಲಿ ಸರ್ವೇಶ್ವರನ ಸನ್ನಿಧಿ ಸೇವಕರಾದ ಯಾಜಕರು ಮಹಾಪರಿಶುದ್ಧ ಪದಾರ್ಥಗಳನ್ನು ಭುಜಿಸುತ್ತಾರೆ,
ಮತ್ತು ಧಾನ್ಯ ನೈವೇದ್ಯ ದೋಷಪರಿಹಾರಕಬಲಿದ್ರವ್ಯ, ಪ್ರಾಯಶ್ಚಿತ್ತಬಲಿದ್ರವ್ಯ ಎಂಬೀ ಮಹಾಪರಿಶುದ್ಧ
ಪದಾರ್ಥಗಳನ್ನು ಅಲ್ಲಿಡುತ್ತಾರೆ. ಆ ಸ್ಥಳ ಪರಿಶುದ್ಧ. 14ಯಾಜಕರು ಪರಿಶುದ್ಧ ಪ್ರಾಕಾರವನ್ನು ಪ್ರವೇಶಿಸಿದ
ಮೇಲೆ ಅದನ್ನು ಬಿಟ್ಟು ಹೊರಗಿನ ಪ್ರಾಕಾರಕ್ಕೆ ಹೋಗಕೂಡದು; ತಮ್ಮ ದೀಕ್ಷಾವಸ್ತ್ರಗಳನ್ನು ಅಲ್ಲೇ ತೆಗೆದಿಟ್ಟು
ಕೊಳ್ಳಬೇಕು, ಅವೂ ಪರಿಶುದ್ಧವಾದುವು. ಆಮೇಲೆ ಬೇರೆ ವಸ್ತ್ರಗಳನ್ನು ಹಾಕಿಕೊಂಡು ಜನಸಾಮಾನ್ಯರ
ಪ್ರಾಕಾರಕ್ಕೆ ಬರುತ್ತಾರೆ,' ಎಂದನು.

### ದೇವಾಲಯದ ಸುತ್ತಮುತ್ತಣ ಅಳತೆ

15 ಆ ಪುರುಷನು ಒಳಗಿನ ಮಂದಿರವನ್ನು ಅಳೆದ ನಂತರ ನನ್ನನ್ನು ಪೂರ್ವಹೆಬ್ಬಾಗಿಲ
ಮಾರ್ಗವಾಗಿ ಈಚೆಗೆ ಕರೆದುತಂದು ಆಲಯವನ್ನೆಲ್ಲಾ ಸುತ್ತಮುತ್ತಲು ಅಳೆದನು. 16ಪೂರ್ವದಿಕ್ಕಿನಲ್ಲಿ
ಉದ್ದಕ್ಕೂ ಅಳತೇ ಕೋಲಿನಿಂದ ಐನೂರು ಕೋಲಳೆದನು. 17ಉತ್ತರ ದಿಕ್ಕಿನಲ್ಲಿ ಉದ್ದಕ್ಕೂ
ಅಳತೇಕೋಲಿನಿಂದ ಐನೂರು ಕೋಲಳೆದನು. 18ಪಶ್ಚಿಮ ಗೋಡೆಯ ಕಡೆಗೆ ತಿರುಗಿಕೊಂಡು
ಅಳತೇಕೋಲಿನಿಂದ ಐನೂರು ಕೋಲಳೆದನು. 19ದಕ್ಷಿಣ ದಿಕ್ಕಿನಲ್ಲಿ ಉದ್ದಕ್ಕೂ ಅಳತೇ ಕೋಲಿನಿಂದ
ಐನೂರು ಕೋಲಳೆದನು. 20ಆಲಯವನ್ನು ನಾಲ್ಕು ಪಾರ್ಶ್ವಗಳಲ್ಲಿಯೂ ಅಳೆದನು; ಪರಿಶುದ್ಧವಾದ ಮತ್ತು
ಅಪರಿಶುದ್ಧವಾದ ಪ್ರದೇಶಗಳನ್ನು ವಿಂಗಡಿಸುವುದಕ್ಕೆ ಐನೂರಳತೇ ಕೋಲುದ್ದದ, ಐನೂರಳತೇ
ಕೋಲಗಲದ ಗೋಡೆ ಸುತ್ತಮುತ್ತಲಿತ್ತು.

### ದೇವಾಲಯಕ್ಕೆ ಸರ್ವೇಶ್ವರನ ಪುನರಾಗಮನ

**43** ಆಮೇಲೆ ಆ ಪುರುಷ ನನ್ನನ್ನು ಪೂರ್ವದ ಬಾಗಿಲಿಗೆ ಬರಮಾಡಿದನು. 2ಆಗ ಇಗೋ, ಇಸ್ರಯೇಲಿನ
ದೇವರ ತೇಜಸ್ಸು ಪೂರ್ವ ಮಾರ್ಗವಾಗಿ ಬಂದಿತು. ಅವರ ಧ್ವನಿ ಜಲ ಪ್ರವಾಹದ ಘೋಷದಂತಿತ್ತು. ಅವರ
ತೇಜಸ್ಸಿನಿಂದ ಭೂಮಿ ಬೆಳಗಿತು. 3ಮೊದಲು ನನಗೆ ಕಂಡು ಬಂದ ತೇಜಸ್ಸಿನಂತೆ ಅದು ಕಾಣಿಸಿತು.
ಪಟ್ಟಣವನ್ನು ಹಾಳುಮಾಡಲು ನಾನು ಬಂದಾಗ ಎಂಥದನ್ನು ಕಂಡೆನೋ ಅಂಥದನ್ನೇ ಕಂಡೆನು. ಕೆಬಾರ್
ನದಿಯ ಹತ್ತಿರ ನನಗಾದ ಅದ್ಭುತ ದರ್ಶನದಂಥ ದರ್ಶನ ಈಗಲೂ ನನಗಾಯಿತು; ಅದನ್ನು ನೋಡಿ
ಅಡ್ಡಬಿದ್ದೆ. 4ಆಗ ಸರ್ವೇಶ್ವರನ ತೇಜಸ್ಸು ಪೂರ್ವ ಬಾಗಿಲ ಮಾರ್ಗವಾಗಿ ದೇವಸ್ಥಾನವನ್ನು ಪ್ರವೇಶಿಸಿತು.

5 ದೇವರಾತ್ಮ ನನ್ನನ್ನು ಎತ್ತಿ ಒಳಗಿನ ಪ್ರಾಕಾರಕ್ಕೆ ತಂದಿತು. ಆಗ ಏನಾಶ್ಚರ್ಯ! ಸರ್ವೇಶ್ವರನ ತೇಜಸ್ಸು
ದೇವಸ್ಥಾನವನ್ನು ತುಂಬಿಕೊಂಡಿತ್ತು. 6ದೇವಸ್ಥಾನದೊಳಗಿಂದ ನನ್ನನ್ನು ಸಂಬೋಧಿಸಿ ನುಡಿಯುವವನ ಶಬ್ಧ
ನನ್ನ ಕಿವಿಗೆ ಬಿದ್ದಿತು; ಆ ಪುರುಷ ನನ್ನ ಪಕ್ಕದಲ್ಲೇ ನಿಂತಿದ್ದನು. 7ನುಡಿಯುವಾತನು ನನಗೆ ಹೀಗೆ ಹೇಳಿದನು:
"ನರಪುತ್ರನೇ, ಇದು ನನ್ನ ಸಿಂಹಾಸನಸ್ಥಾನ, ನನ್ನ ಪಾದಸನ್ನಿಧಿ. ಇಲ್ಲಿ ನಾನು ಇಸ್ರಯೇಲರ ಮಧ್ಯೆ ಸದಾ
ವಾಸಿಸುವೆನು. ಇಸ್ರಯೇಲ್ ವಂಶದವರಾಗಲಿ ಅವರ ಅರಸರಾಗಲಿ, ತಮ್ಮ ದೇವ ದ್ರೋಹದಿಂದ, ಗತಿಸಿದ
ಅರಸರ ಶವಗಳಿಂದ ಹಾಗು 8ನನ್ನ ಹೊಸ್ತಲನಿಲವುಗಳ ಪಕ್ಕದಲ್ಲಿ ತಮ್ಮ ಹೊಸ್ತಲುನಿಲವುಗಳನ್ನು
ಹಾಕಿಕೊಂಡು, ನನ್ನ ಮನೆಗೂ ತಮ್ಮ ಮನೆಗೂ ಒಂದೇ ಗೋಡೆಯಾಗುವಂತೆ ಮಾಡಿಕೊಳ್ಳುವುದರಿಂದ
ಇನ್ನು ನನ್ನ ಪವಿತ್ರ ನಾಮವನ್ನು ಅಶುದ್ಧಗೊಳಿಸರು. ಹೌದು, ಹಿಂದೆ ತಾವು ನಡೆಸಿದ ದುರಾಚಾರಗಳಿಂದ
ನನ್ನ ಪವಿತ್ರ ನಾಮವನ್ನು ಹೊಲೆಗೆಡಿಸಿದರು; ಆದಕಾರಣ ನಾನು ಕೋಪಗೊಂಡು ಅವರನ್ನು ನಾಶಮಾಡಿದೆ.
9ಈಗಲಾದರೂ ತಮ್ಮ ದೇವದ್ರೋಹವನ್ನು ಮತ್ತು ಅರಸರ ಶವಗಳನ್ನು ನನಗೆ ದೂರ ಮಾಡಲಿ; ಆಗ
ನಾನು ಅವರ ಮಧ್ಯೆ ಸದಾ ವಾಸಿಸುವೆನು.

10 "ನರಪುತ್ರನೇ, ಇಸ್ರಯೇಲ್ ವಂಶದವರು ತಮ್ಮ ಅಪರಾಧಗಳ ನಿಮಿತ್ತ ನಾಚಿಕೆಪಡುವಂತೆ
ದೇವಾಲಯವನ್ನು ಅವರಿಗೆ ತೋರಿಸು; ಅವರು ಅದನ್ನು ಅಳತೆಮಾಡಲಿ. 11ತಾವು ನಡೆಸಿದ
ದುಷ್ಕೃತ್ಯಗಳಿಗೆಲ್ಲಾ ನಾಚಿಕೆಪಟ್ಟರೆ, ನೀನು ದೇವಸ್ಥಾನದ ರೂಪ, ಅದರ ವ್ಯವಸ್ಥೆ, ಗಮನಾಗಮನ
ನಿಯಮಗಳು, ಸಕಲ ರಚನಾ ವಿಧಾನಗಳು, ಸಮಸ್ತ ವಿಧಿಗಳು, ಸರ್ವನಿರ್ಮಾಣ ರೀತಿಗಳು, ಎಲ್ಲ
ಕಟ್ಟಳೆಗಳು ಇವೆಲ್ಲವನ್ನು ಅವರಿಗೆ ತಿಳಿಸಿ, ಅವರು ಅದರ ಪೂರ್ಣಕ್ರಮವನ್ನೂ ಎಲ್ಲ ವಿಧಿಗಳನ್ನೂ
ಅನುಸರಿಸಿ ಕೈಗೊಳ್ಳುವಂತೆ ಅವರ ಕಣ್ಣೆದುರಿಗೆ ಬರೆ. 12ಇದೇ ದೇವಸ್ಥಾನದ ನಿಯಮ. ಪರ್ವತಾಗ್ರದಲ್ಲಿನ
ಅದರ ಪ್ರದೇಶವೆಲ್ಲ ಸುತ್ತು ಮುತ್ತಲು ಅತಿ ಪರಿಶುದ್ಧವಾಗಿರಬೇಕು. ಇಗೋ, ದೇವಸ್ಥಾನದ ನಿಯಮ ಇದೇ."

## ಬಲಿಪೀಠದ ನಿರ್ಮಾಣಕ್ರಮ

13 ಬಲಿಪೀಠವು ಮೀಟರ್ ಅಳತೆಯ ಪ್ರಕಾರ ಹೀಗಿರಬೇಕು. ಕೆಳಭಾಗದ ಎತ್ತರ ಐವತ್ತು
ಸೆಂಟಿಮೀಟರ್, ಮೇಲಿನ ಬಿಡುವಿನ ಅಗಲವು ಸುತ್ತಲೂ ಐವತ್ತು ಸೆಂಟಿಮೀಟರ್, ಬಿಡುವಿನ ತುದಿಯಲ್ಲಿ
ಸುತ್ತಣ ದಿಂಡಿನ ಅಗಲವು ಇಪ್ಪತ್ತೈದು ಸೆಂಟಿಮೀಟರ್; ಇದೇ ಬಲಿವೇದಿಕೆಯ ಪೀಠ. 14ನೆಲದ ಮೇಲೆ
ಅಂದರೆ, ಕೆಳಭಾಗದ ಮೇಲೆ ಕೆಳಗಣ ಅಂತಸ್ತಿನ ಎತ್ತರವು ಒಂದು ಮೀಟರ್, ಅದರ ಮೇಲಣ ಬಿಡುವಿನ
ಅಗಲವು ಐವತ್ತು ಸೆಂಟಿಮೀಟರ್, ಆ ಚಿಕ್ಕ ಅಂತಸ್ತಿನ ಮೇಲೆ ದೊಡ್ಡ ಅಂತಸ್ತಿನ ಎತ್ತರವು ಎರಡು ಮೀಟರ್;
ಮೇಲಿನ ಬಿಡುವಿನ ಅಗಲವು ಐವತ್ತು ಸೆಂಟಿಮೀಟರ್. 15ಹೋಮಕುಂಡದ ಅಂತಸ್ತಿನ ಎತ್ತರವು ಎರಡು
ಮೀಟರ್; ಆ ಹೋಮಕುಂಡದ ಮೇಲ್ಗಡೆಯಲ್ಲಿ ನಾಲ್ಕು ಕೊಂಬುಗಳು ಇರಬೇಕು. 16ಹೋಮ ಕುಂಡವು
ಆರು ಮೀಟರ್ ಉದ್ದ, ಆರು ಮೀಟರ್ ಅಗಲ ಚಚ್ಚೌಕವಾಗಿರಬೇಕು. 17ದೊಡ್ಡ ಅಂತಸ್ತು ಏಳು ಮೀಟರ್
ಉದ್ದವಾಗಿಯೂ ಏಳು ಮೀಟರ್ ಅಗಲವಾಗಿಯೂ ನಾಲ್ಕು ಪಾರ್ಶ್ವಗಳಲ್ಲಿ ಸಮವಾಗಿರಬೇಕು. ಸುತ್ತಣ
ದಿಂಡಿನ ಅಗಲವು ಇಪ್ಪತ್ತೈದು ಸೆಂಟಿಮೀಟರ್; ಕೆಳಭಾಗದ ಸುತ್ತಣ ಅಂಚಿನ ಅಗಲವು ಐವತ್ತು
ಸೆಂಟಿಮೀಟರ್; ಸೋಪಾನವು ಮೂಡಲಿಗೆ ಅಭಿಮುಖವಾಗಿರಬೇಕು.

## ಬಲಿಪೀಠದ ಪ್ರತಿಷ್ಠೆ

18 ಆಗ ಆ ಪುರುಷ ನನಗೆ ಹೀಗೆ ಹೇಳಿದನು: "ನರಪುತ್ರನೇ, ಸರ್ವೇಶ್ವರನಾದ ದೇವರು
ಇಂತೆನ್ನುತ್ತಾರೆ: ದಹನಬಲಿಗೂ, ರಕ್ತವೆರಚುವ ಸಂಸ್ಕಾರಕ್ಕೂ ಬಲಿಪೀಠವನ್ನು ನಿರ್ಮಿಸುವಾಗ ಈ
ವಿಧಿಗಳನ್ನು ಕೈಗೊಳ್ಳಬೇಕು. 19ಲೇವಿಯರೂ, ಚಾದೋಕನ ಸಂತಾನದವರೂ ನನ್ನ ಸನ್ನಿಧಿ ಸೇವಕರೂ
ಆದ ಯಾಜಕರಿಗೆ ನೀನು ಒಂದು ಹೋರಿಯನ್ನು ದೋಷಪರಿಹಾರಕ ಬಲಿಗಾಗಿ ಕೊಡು. ಇದು
ಸರ್ವೇಶ್ವರನಾದ ದೇವರ ನುಡಿ. 20ಅದರ ರಕ್ತದಲ್ಲಿ ಸ್ವಲ್ಪವನ್ನು ತೆಗೆದುಕೊಂಡು ಬಲಿಪೀಠದ ನಾಲ್ಕು
ಕೊಂಬುಗಳಿಗೆ, ದೊಡ್ಡ ಅಂತಸ್ತಿನ ನಾಲ್ಕು ಮೂಲೆಗಳಿಗೆ ಹಾಗು ಸುತ್ತಣ ದಿಂಡಿಗೆ ಹಚ್ಚಿ ಬಲಿಪೀಠದ
ದೋಷವನ್ನು ಪರಿಹರಿಸಿ, ಅದನ್ನು ಶುದ್ಧಿಮಾಡು. 21ದೋಷಪರಿಹಾರಕ ಬಲಿಗಾಗಿ ವಧಿತವಾದ

ಹೋರಿಯನ್ನು ಒಪ್ಪಿಸಿದಾಗ ಪವಿತ್ರಾಲಯದ ಹೊರಗೆ, ದೇವಸ್ಥಾನಕ್ಕೆ ಸಂಬಂಧಪಟ್ಟ ಗೊತ್ತಾದ ಸ್ಥಳದಲ್ಲಿ, ಅದನ್ನು ಸುಡಬೇಕು. 22ಎರಡನೆಯ ದಿನದಲ್ಲಿ, ಕಳಂಕರಹಿತವಾದ ಹೋತವನ್ನು ದೋಷಪರಿಹಾರಕ ಬಲಿಗಾಗಿ ಅರ್ಪಿಸು; ಹೋರಿಯಿಂದ ಬಲಿಪೀಠವನ್ನು ಶುದ್ಧಿಮಾಡಿದಂತೆ ಹೋತದಿಂದಲೂ ಶುದ್ಧಿಮಾಡತಕ್ಕದ್ದು. 23ನೀನು ಬಲಿಪೀಠದ ಶುದ್ಧಿಕಾರ್ಯವನ್ನು ಪೂರೈಸಿದ ಮೇಲೆ ಕಳಂಕರಹಿತವಾದ ಹೋರಿಯನ್ನೂ ಹಿಂಡಿನಿಂದ ತಂದ ಕಳಂಕರಹಿತ ಟಗರನ್ನೂ ಅರ್ಪಿಸು. 24ನೀನು ಅವುಗಳನ್ನು ಸರ್ವೇಶ್ವರನಿಗೆ ಸಮರ್ಪಿಸಿದಾಗ ಯಾಜಕರು ಅವುಗಳ ಮೇಲೆ ಉಪ್ಪನ್ನು ಚೆಲ್ಲಿ, ಸರ್ವೇಶ್ವರನಿಗಾಗಿ ದಹನಬಲಿ ಒಪ್ಪಿಸಬೇಕು. 25ಏಳು ದಿವಸ ನೀನು ದಿನದಿನವೂ ದೋಷಪರಿಹಾರಕ್ಕಾಗಿ ಒಂದೊಂದು ಹೋತವನ್ನು ಅರ್ಪಿಸು; ಯಾಜಕರು ಸಹ ಕಳಂಕರಹಿತವಾದ ಹೋರಿಯನ್ನೂ ಹಿಂಡಿನಿಂದ ತಂದ ಕಳಂಕರಹಿತವಾದ ಟಗರನ್ನೂ ಅರ್ಪಿಸಲಿ; 26ಹೀಗೆ ಏಳು ದಿವಸ ಬಲಿಪೀಠದ ದೋಷವನ್ನು ಪರಿಹರಿಸುತ್ತಾ, ಅದನ್ನು ಶುದ್ಧಿಮಾಡಿ ಪ್ರತಿಷ್ಠಿಸಬೇಕು. 27ಏಳು ದಿನಗಳ ಕಾರ್ಯವನ್ನು ಮುಗಿಸಿದ ಬಳಿಕ, ಎಂಟನೆಯ ದಿನದಲ್ಲಿಯೂ ಮುಂದೆಯೂ ಯಾಜಕರು ಬಲಿಪೀಠದ ಮೇಲೆ ನಿಮ್ಮ ಪರವಾಗಿ ದಹನಬಲಿಗಳನ್ನೂ ಶಾಂತಿಸಮಾಧಾನ ಬಲಿಗಳನ್ನೂ ಅರ್ಪಿಸಬೇಕು; ಆಗ ನಾನು ನಿಮಗೆ ಪ್ರಸನ್ನನಾಗುವೆನು; ಇದು ಸರ್ವೇಶ್ವರನಾದ ದೇವರ ನುಡಿ."

### ಪೂರ್ವದ್ವಾರಪ್ರವೇಶ ನಿಷೇಧ

**44** ತರುವಾಯ ಈ ಪುರುಷನು ನನ್ನನ್ನು ಪವಿತ್ರಾಲಯದ ಪೂರ್ವದಿಕ್ಕಿನ ಹೊರಗಿನ ಹೆಬ್ಬಾಗಿಲಿಗೆ ಪುನಃ ಕರೆದುತಂದನು; ಅದು ಮುಚ್ಚಿತ್ತು. 2ಆಗ ಸರ್ವೇಶ್ವರ ನನಗೆ, "ಈ ಬಾಗಿಲು ಮುಚ್ಚಿರಬೇಕು, ಇದನ್ನು ತೆರೆಯಕೂಡದು. ಇದರಿಂದ ಯಾರೂ ಪ್ರವೇಶಿಸದಿರಲಿ; ಇಸ್ರಯೇಲಿನ ದೇವರಾದ ಸರ್ವೇಶ್ವರ ಇದರಿಂದ ಪ್ರವೇಶಿಸಿದ್ದಾರೆ; ಇದು ಮುಚ್ಚೇ ಇರಬೇಕು. 3ರಾಜರು ಸರ್ವೇಶ್ವರನ ಸನ್ನಿಧಿಯಲ್ಲಿ ಹವಿರ್ಭೋಜನ ಮಾಡುವುದಕ್ಕೆ ಇಲ್ಲಿ ಕುಳಿತುಕೊಳ್ಳಬಹುದು; ಅವನು ಹೆಬ್ಬಾಗಿಲ ಕೈಸಾಲೆಯ ಮಾರ್ಗವಾಗಿ ಬಂದು ಅದೇ ಮಾರ್ಗವಾಗಿ ಹೊರಡಬೇಕು," ಎಂದು ಹೇಳಿದರು.

### ದೇವಾಲಯ ಪ್ರವೇಶ ಕುರಿತ ನಿಯಮಗಳು

4 ಬಳಿಕ ಆ ಪುರುಷನು ಉತ್ತರ ಹೆಬ್ಬಾಗಿಲ ಮಾರ್ಗವಾಗಿ ನನ್ನನ್ನು ದೇವಸ್ಥಾನದ ಮುಂದುಗಡೆಗೆ ಕರೆದುತಂದನು; ಏನಾಶ್ಚರ್ಯ! ನಾನು ನೋಡುತ್ತಿದ್ದಂತೆ ಸರ್ವೇಶ್ವರನ ತೇಜಸ್ಸು ದೇವಾಲಯವನ್ನು ತುಂಬಿಕೊಂಡಿತ್ತು; ಅದನ್ನು ನೋಡಿ ಅಡ್ಡಬಿದ್ದೆ. 5ಆಗ ಸರ್ವೇಶ್ವರ ನನಗೆ ಹೀಗೆ ಹೇಳಿದರು; "ನರಪುತ್ರನೇ, ಸರ್ವೇಶ್ವರನ ಆಲಯದ ಸಕಲ ನಿಯಮ ನಿಷ್ಠೆಗಳ ವಿಷಯವಾಗಿ ನಾನು ನಿನಗೆ ಹೇಳುವುದನ್ನೆಲ್ಲಾ ನೀನು ಕಿವಿಯಾರೆ ಕೇಳಿ, ಕಣ್ಣಾರೆ ಕಂಡು, ಮನದಟ್ಟು ಮಾಡಿಕೋ; ಮತ್ತು ಪವಿತ್ರಾಲಯದ ಗಮನಾ ಗಮನವಿಧಿಗಳನ್ನು ಗಮನಿಸು.

6 "ಇದಲ್ಲದೆ, ನೀನು ಆ ದ್ರೋಹಿಗಳಿಗೆ ಅಂದರೆ, ಇಸ್ರಯೇಲ್ ವಂಶದವರಿಗೆ ಹೀಗೆ ನುಡಿ: ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: 7ಇಸ್ರಯೇಲ್ ವಂಶದವರೇ, ನೀವು ನನ್ನ ಆಹಾರವಾದ ರಕ್ತಮೇದಸ್ಸುಗಳನ್ನು ಅರ್ಪಿಸುವಾಗ, ತನುಮನಗಳಲ್ಲಿ ಸುನ್ನತಿಹೀನರಾದ ಮ್ಲೇಚ್ಛರನ್ನು, ನನ್ನ ಪವಿತ್ರಾಲಯದೊಳಗೆ ಬರಮಾಡಿ ನನ್ನ ಮಂದಿರವನ್ನು ಅಶುದ್ಧಗೊಳಿಸಿದ್ದೀರಿ. ನನ್ನ ಒಡಂಬಡಿಕೆಯನ್ನು ಉಲ್ಲಂಘಿಸಿ ನಿಮ್ಮ ಅಮಿತ ದುರಾಚಾರಗಳ ಲೆಕ್ಕವನ್ನು ಹೆಚ್ಚಿಸಿದ್ದೀರಿ. 8ನೀವು ನನ್ನ ಪರಿಶುದ್ಧ ವಸ್ತುಗಳ ಪಾರುಪತ್ಯ ಮಾಡಲಿಲ್ಲ; ಈ ಮ್ಲೇಚ್ಛರನ್ನು ನನ್ನ ಪವಿತ್ರಾಲಯದಲ್ಲಿ ನನ್ನ ವಸ್ತುಗಳ ಮೇಲೆ ಪಾರುಪತ್ಯಗಾರರನ್ನಾಗಿ ನೇಮಿಸಿಕೊಂಡಿರಿ; ನಿಮ್ಮ ಅಪಾರ ದುರಾಚಾರಗಳು ಇನ್ನು ಸಾಕು.

9 "ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: ಇಸ್ರಯೇಲರಲ್ಲಿ ಸೇರಿಕೊಂಡಿರುವ ಮ್ಲೇಚ್ಛರೊಳಗೆ ತನುಮನಗಳಲ್ಲಿ ಸುನ್ನತಿಹೀನನಾದ ಯಾವನೂ ನನ್ನ ಪವಿತ್ರಾಲಯವನ್ನು ಪ್ರವೇಶಿಸಕೂಡದು."

**ಲೇವಿಯರಿಗೆ ಯಾಜಕ ಸೇವೆ ಸಲ್ಲ**

10 “ಇಸ್ರಯೇಲರು ನನ್ನನ್ನು ತೊರೆದಾಗ, ನನ್ನಿಂದಾಗಲಿ ತಮ್ಮ ವಿಗ್ರಹಗಳ ಕಡೆಗೆ ತಿರುಗಿಕೊಂಡು,
ನನಗೆ ದೂರವಾಗಿ ಹೋದ ಲೇವಿಯರು ತಮ್ಮ ದೋಷಫಲವನ್ನು ಅನುಭವಿಸುವರು. 11ಅವರು ನನ್ನ
ಪವಿತ್ರಾಲಯದಲ್ಲಿ ಪರಿಚಾರಕರೂ ಮಂದಿರ ದ್ವಾರಪಾಲಕರೂ ಆಗಿ ಮಂದಿರದಲ್ಲಿ ಸೇವೆಮಾಡಬೇಕು; ಜನರ
ಪರವಾಗಿ ದಹನಬಲಿಪಶುವನ್ನೂ ಶಾಂತಸಮಾಧಾನ ಬಲಿಪಶುವನ್ನೂ ವಧಿಸಿ ಅವರಿಗೆ ಸೇವೆಮಾಡಲು
ಸಿದ್ಧರಾಗಿರಬೇಕು. 12ಅವರು ತಮ್ಮ ವಿಗ್ರಹಗಳ ಮುಂದೆ ಜನರಿಗಾಗಿ ಸೇವೆಮಾಡಿ, ಇಸ್ರಯೇಲ್
ವಂಶದವರಿಗೆ ಪಾಪಕಾರಿ ವಿಘ್ನವಾದುದರಿಂದ, ನಾನು ಅವರ ಮೇಲೆ ಕೈಯೆತ್ತಿದ್ದೇನೆ. ಅವರು ತಮ್ಮ
ದೋಷಫಲವನ್ನು ಅನುಭವಿಸಿಯೇ ತೀರಬೇಕು; ಇದು ಸರ್ವೇಶ್ವರನಾದ ದೇವರ ನುಡಿ. 13ನನಗೆ
ಯಾಜಕಸೇವೆ ಮಾಡುವುದಕ್ಕೆ ಅವರು ನನ್ನ ಸನ್ನಿಧಿಗೆ ಬರಕೂಡದು. ನನ್ನ ಅತಿ ಪವಿತ್ರವಾದ ಪರಿಶುದ್ಧ
ವಸ್ತುಗಳಲ್ಲಿ ಯಾವುದನ್ನೂ ಸಮೀಪಿಸಬಾರದು. ತಮಗಾದ ಅವಮಾನವನ್ನೂ ತಾವು ನಡೆಸಿದ
ದುರಾಚಾರಗಳ ಫಲವನ್ನೂ ಅನುಭವಿಸುವರು. 14ದೇವಾಲಯದ ಸಕಲ ಸೇವೆಯಲ್ಲೂ ಅಲ್ಲಿ ನಡೆಯುವ
ಸಮಸ್ತ ಕಾರ್ಯಗಳಲ್ಲೂ ಸೇವಕ ವೃತ್ತಿಯನ್ನೇ ಅವರಿಗೆ ಕೊಡುವೆನು.

**ಯಾಜಕರು ಪಾಲಿಸಬೇಕಾದ ವಿವಿಧ ನಿಯಮಗಳು**

15 “ಆದರೆ ಇಸ್ರಯೇಲರು ನನ್ನನ್ನು ತೊರೆದಾಗ ಲೇವಿಯರೂ ಚಾದೋಕನ ಸಂತಾನದವರೂ
ಆದ ಯಾಜಕರು ನನ್ನ ಪವಿತ್ರಾಲಯದ ಪಾರುಪತ್ಯವನ್ನು ನೆರವೇರಿಸಿದರು. ಆದ್ದರಿಂದ ಅವರು ನನ್ನ ಸೇವೆ
ಮಾಡಲು ನನ್ನ ಸನ್ನಿಧಿಗೆ ಬರುವರು, ನನಗೆ ರಕ್ತಮೇದಸ್ಸುಗಳನ್ನು ಅರ್ಪಿಸಲು ನನ್ನ ಸಮ್ಮುಖದಲ್ಲಿ
ನಿಂತುಕೊಳ್ಳುವರು; ಇದು ಸರ್ವೇಶ್ವರನಾದ ದೇವರ ನುಡಿ. 16ಅವರು ನನ್ನ ಪವಿತ್ರಾಲಯವನ್ನು ಪ್ರವೇಶಿಸಿ,
ನನ್ನ ಸೇವೆ ಮಾಡುವುದಕ್ಕೆ ನನ್ನ ವೇದಿಕೆಯನ್ನು ಸಮೀಪಿಸಿ, ನನ್ನ ಆಲಯದ ಪಾರುಪತ್ಯವನ್ನು ವಹಿಸುವರು.
17ಅವರು ಒಳಗಿನ ಪ್ರಾಕಾರದ ಬಾಗಿಲುಗಳನ್ನು ಪ್ರವೇಶಿಸುವಾಗ ನಾರುಮಡಿಗಳನ್ನು ಧರಿಸಿರಬೇಕು; ಒಳಗಿನ
ಪ್ರಾಕಾರದ ಬಾಗಿಲುಗಳಲ್ಲೂ ದೇವಸ್ಥಾನದಲ್ಲೂ ಸೇವೆಮಾಡುತ್ತಿರುವಾಗ, ಯಾವ ಉಣ್ಣೆಯ ಉಡುಪೂ
ಅವರ ಮೇಲೆ ಇರಕೂಡದು. 18ಅವರು ತಲೆಗೆ ನಾರುಪೇಟವನ್ನು, ಸೊಂಟಕ್ಕೆ ನಾರುಚಡ್ಡಿಯನ್ನು
ಹಾಕಿಕೊಂಡಿರಲಿ; ಬೆವರುವ ಯಾವ ಉಡುಪನ್ನೂ ಉಟ್ಟುಕೊಳ್ಳಬಾರದು. 19ಅವರು ಹೊರಗಿನ ಪ್ರಾಕಾರಕ್ಕೆ
ಅಂದರೆ, ಅಲ್ಲಿನ ಜನರ ಬಳಿಗೆ ಹೊರಡುವಾಗ, ತಮ್ಮ ದೀಕ್ಷಾವಸ್ತ್ರಗಳನ್ನು ಅವರಿಗೆ ತಗಲಿಸಿ ಅವರನ್ನು
ಪರಿಶುದ್ಧರಾಗ ಮಾಡದಂತೆ ಕೊಠಡಿಗಳಲ್ಲಿ ಇಟ್ಟು ಬೇರೆ ವಸ್ತ್ರಗಳನ್ನು ಧರಿಸಿಕೊಳ್ಳಲಿ.

20 “ಅವರು ತಲೆಬೋಳಿಸಬಾರದು; ಕೂದಲನ್ನು ಬೆಳೆಸಬಾರದು, ಕತ್ತರಿಸಿಕೊಂಡಿರಬೇಕು.
21ಒಳಗಿನ ಪ್ರಾಕಾರವನ್ನು ಪ್ರವೇಶಿಸುವಾಗ ಯಾವ ಯಾಜಕನೂ ದ್ರಾಕ್ಷಾರಸವನ್ನು ಕುಡಿದಿರಬಾರದು.
22ಯಾಜಕರು ವಿಧವೆಯನ್ನಾಗಲಿ ಗಂಡನಿಂದ ಬಿಡಲಾದವಳನ್ನಾಗಲಿ ಮದುವೆಯಾಗಬಾರದು; ಆದರೆ
ಇಸ್ರಯೇಲ್ ವಂಶದ ಕನ್ಯೆಯನ್ನಾಗಲಿ, ಯಾಜಕನ ವಿಧವೆಯನ್ನಾಗಲಿ ಮದುವೆಮಾಡಿಕೊಳ್ಳಲಿ.

23 “ಮೀಸಲಾಗಿದದ್ದಕ್ಕೂ ಮೀಸಲಲ್ಲದ್ದಕ್ಕೂ ಇರುವ ಭೇದವನ್ನು ನನ್ನ ಜನರಿಗೆ ತೋರಿಸಿ,
ಶುದ್ಧಾಶುದ್ಧ ವಿವೇಚನೆಯನ್ನು ಅವರಿಗೆ ಬೋಧಿಸಲಿ. 24ವ್ಯಾಜ್ಯವಾಗುವಾಗ ಅದನ್ನು ತೀರಿಸಲು ನಿಂತು,
ನನ್ನ ನ್ಯಾಯವಿಧಿಗಳಿಗೆ ಅನುಸಾರವಾಗಿ ತೀರಿಸಲಿ; ನಾನು ಏರ್ಪಡಿಸಿದ ಹಬ್ಬಗಳಲ್ಲಿ ನನ್ನ
ನಿಯಮನಿಷ್ಠೆಗಳನ್ನು ಕೈಗೊಂಡು ನನ್ನ ಸಬ್ಬತ್‍ಗಳನ್ನು ಜನರು ಆಚರಿಸುವಂತೆ ನೋಡಿಕೊಳ್ಳಲಿ.

25 “ಸತ್ತವರ ಹೆಣವನ್ನು ಸಮೀಪಿಸಿ ತಮ್ಮನ್ನೇ ಅಶುದ್ಧಮಾಡಿಕೊಳ್ಳಬಾರದು; ಆದರೆ ಸತ್ತ ತಂದೆ,
ತಾಯಿ, ಮಗನು, ಮಗಳು, ತಮ್ಮ, ಮದುವೆಯಿಲ್ಲದ ತಂಗಿ, ಇವರಿಗಾಗಿ ಒಬ್ಬನು ತನ್ನನ್ನೇ ಅಶುದ್ಧ
ಮಾಡಿಕೊಳ್ಳಬಹುದು. 26ಅಂಥವನನ್ನು ಶುದ್ಧನಾದ ಮೇಲೂ, ಏಳು ದಿವಸ ಪ್ರತ್ಯೇಕಿಸಬೇಕು. 27ಅವನು
ಸೇವೆ ಮಾಡಲು ಪವಿತ್ರಾಲಯವನ್ನು ಪ್ರವೇಶಿಸಿ ಒಳಗಿನ ಪ್ರಾಕಾರಕ್ಕೆ ಬರುವ ದಿನದಲ್ಲಿ ತನ್ನ
ದೋಷಪರಿಹಾರಕ್ಕಾಗಿ ಬಲಿಯನ್ನು ಅರ್ಪಿಸಬೇಕು; ಇದು ಸರ್ವೇಶ್ವರನಾದ ದೇವರ ನುಡಿ.

28 “ಯಾಜಕರಿಗೆ ಇರುವ ಒಂದು ಸೊತ್ತು ಎಂದರೆ ನಾನೇ. ಇಸ್ರಯೇಲಿನಲ್ಲಿ ಅವರಿಗೆ ಯಾವ
ಆಸ್ತಿಯನ್ನೂ ಕೊಡಬಾರದು, ನಾನೇ ಅವರಿಗೆ ಆಸ್ತಿ. 29ಅವರು ಧಾನ್ಯ ನೈವೇದ್ಯವನ್ನೂ ದೋಷಪರಿಹಾರಕ

ಬಲಿದ್ರವ್ಯವನ್ನೂ ಪ್ರಾಯಶ್ಚಿತ್ತ ಬಲಿದ್ರವ್ಯವನ್ನೂ ಅನುಭವಿಸಲಿ. ಸರ್ವೇಶ್ವರನದಾಗಿಯೇ ಇರಲೆಂದು ಇಸ್ರಯೇಲರು ಹರಕೆ ಮಾಡಿಕೊಡುವುದೆಲ್ಲವೂ ಅವರಿಗೆ ಸಲ್ಲಬೇಕು. 30ಎಲ್ಲ ಪ್ರಥಮಫಲಗಳಲ್ಲಿ ಉತ್ಕೃಷ್ಟವಾದದ್ದು ಹಾಗು ನೀವು ನನಗೆ ಪ್ರತ್ಯೇಕಿಸಿ ಸಮರ್ಪಿಸುವ ಎಲ್ಲ ಪದಾರ್ಥಗಳು ಅವರದಾಗಬೇಕು. ನಿಮ್ಮ ಮನೆ ಆಶೀರ್ವಾದಕ್ಕೆ ನೆಲೆಯಾಗುವಂತೆ ನೀವು ಮೊದಲನೆಯ ಹಿಟ್ಟನ್ನು ಯಾಜಕರಿಗೆ ಕೊಡತಕ್ಕದ್ದು. 31ಯಾಜಕರು ತಾನಾಗಿ ಸತ್ತುಬಿದ್ದ ಅಥವಾ ಕಾಡುಮೃಗದಿಂದ ಕೊಲ್ಲಲಾದ ಪಕ್ಷಿಯನ್ನಾಗಲಿ, ಪ್ರಾಣಿಯನ್ನಾಗಲಿ ತಿನ್ನಬಾರದು."

### ದೇವರಿಗೆ ಮೀಸಲು ಭೂಮಿ

**45** ನೀವು ನಾಡನ್ನು ಸೊತ್ತುಸೊತ್ತಾಗಿ ಹಂಚುವಾಗ ಒಂದು ಭಾಗವನ್ನು ಮೀಸಲಾಗಿ ಪ್ರತ್ಯೇಕಿಸಿ ಸರ್ವೇಶ್ವರನಿಗೆ ಸಮರ್ಪಿಸಬೇಕು: ಅದರ ಉದ್ದ ಹನ್ನೆರಡುವರೆ ಕಿಲೋಮೀಟರ್, ಅಗಲ ಹತ್ತು ಕಿಲೋಮೀಟರ್; ಆ ಪ್ರಾಂತ್ಯವೆಲ್ಲಾ ಸುತ್ತುಮುತ್ತಲು ಪರಿಶುದ್ಧವಾಗಿ ಇರಬೇಕು. 2ಇದರಲ್ಲಿ 250 ಮೀಟರ್ ಉದ್ದದ, 250 ಮೀಟರ್ ಅಗಲದ ಚಚ್ಚೌಕವಾದ ಸ್ಥಳವು ಪವಿತ್ರಾಲಯಕ್ಕೆ ನಿವೇಶನವಾಗಿರುವುದು: ಅದರ ಸುತ್ತ ಇಪ್ಪತ್ತೈದು ಮೀಟರ್ ಅಗಲ ಉಳದ ಭೂಮಿ ಇರುವುದು. 3ಮೊದಲು ಅಳೆದ ಕ್ಷೇತ್ರದಲ್ಲಿ ಹನ್ನೆರಡುವರೆ ಕಿಲೋಮೀಟರ್ ಉದ್ದದ ಐದು ಕಿಲೋಮೀಟರ್ ಅಗಲದ ಒಂದು ಭಾಗವನ್ನು ಅಳೆ; ಇದರಲ್ಲಿ ಅತಿಪರಿಶುದ್ಧವಾದ ಪವಿತ್ರಾಲಯ ಇರಬೇಕು. 4ಇದು ನಾಡಿನಲ್ಲೇ ಪರಿಶುದ್ಧ ಭಾಗ; ಇದು ಪವಿತ್ರಾಲಯದ ಅರ್ಚಕರೂ ಸರ್ವೇಶ್ವರನ ಸನ್ನಿಧಿಸೇವಕರೂ ಆದ ಯಾಜಕರಿಗೆ ಸಲ್ಲತಕ್ಕದ್ದು; ಇದು ಯಾಜಕರ ಮನೆಗಳಿಗೆ ಅಗ್ರಹಾರವಾಗಿ ಹಾಗು ಪವಿತ್ರಾಲಯಕ್ಕೆ ಪವಿತ್ರಸ್ಥಾನವಾಗಿ ಇರುವುದು. 5ದೇವಾಲಯದ ಸೇವಕರಾದ ಲೇವಿಯರು ಊರುಗಳನ್ನು ಕಟ್ಟಿಕೊಂಡು ವಾಸಿಸುವಂತೆ ಹನ್ನೆರಡುವರೆ ಕಿಲೋಮೀಟರ್ ಉದ್ದದ ಐದು ಕಿಲೋಮೀಟರ್ ಅಗಲದ ಕ್ಷೇತ್ರವು ಅವರಿಗೆ ಸೊತ್ತಾಗುವುದು.

6 ನೀವು ಸಮರ್ಪಿಸುವ ಪರಿಶುದ್ಧ ಭಾಗದ ಅಕ್ಕಪಕ್ಕದಲ್ಲಿ ಎರಡುವರೆ ಕಿಲೋಮೀಟರ್ ಅಗಲದ, ಹನ್ನೆರಡುವರೆ ಕಿಲೋಮೀಟರ್ ಉದ್ದದ ಕ್ಷೇತ್ರವನ್ನು ರಾಜಧಾನಿಗೆ ಒಳಪಟ್ಟ ಭೂಮಿಯನ್ನಾಗಿ ನೇಮಿಸಬೇಕು; ಅದರಲ್ಲಿ ಇಸ್ರಯೇಲ್ ವಂಶದವರಿಗೆಲ್ಲಾ ಹಕ್ಕಿರುವುದು.

### ರಾಜನ ಸೊತ್ತಾದ ಭೂಮಿ

7 ರಾಜನ ಸೊತ್ತು ನೀವು ಮೀಸಲಾಗಿ ಸಮರ್ಪಿಸುವ ಕ್ಷೇತ್ರದ ಮತ್ತು ರಾಜಧಾನಿಗೆ ಒಳಪಟ್ಟ ಭೂಮಿಗೂ ಉಭಯ ಪಾರ್ಶ್ವಗಳಲ್ಲಿರುವುದು; ನೀವು ಮೀಸಲಾಗಿ ಸಮರ್ಪಿಸುವ ಕ್ಷೇತ್ರದ ಮತ್ತು ರಾಜಧಾನಿಗೆ ಒಳಪಟ್ಟ ಭೂಮಿಯ ಪಶ್ಚಿಮದಲ್ಲಿ ಅದು ಪಶ್ಚಿಮ ಕಡೆಗೆ ಹರಡುವುದು. ಪೂರ್ವದಲ್ಲಿ ಪೂರ್ವದ ಕಡೆಗೆ ಹರಡುವುದು. ಅದರ ಉದ್ದ ಪಶ್ಚಿಮದಿಂದ ಪೂರ್ವಕ್ಕೆ ಒಂದು ಕುಲದ ಸೊತ್ತಿನ ಉದ್ದಕ್ಕೆ ಸರಿಸಮಾನ ವಾಗಿರುವುದು. 8ಅದು ಅವನಿಗೆ ಇಸ್ರಯೇಲಿನಲ್ಲಿ ಭೂಸೊತ್ತಾಗುವುದು; ಇನ್ನು ಮೇಲೆ ರಾಜರುಗಳು ನನ್ನ ಪ್ರಜೆಗಳನ್ನು ಹಿಂಸಿಸರು; ನಾಡಿನ ಭೂಮಿಯನ್ನು ಇಸ್ರಯೇಲರಿಗೆ ಕುಲ ಕುಲಕ್ಕೂ ಹಂಚುವರು.

### ರಾಜನ ಕರ್ತವ್ಯಗಳು

9 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಇಸ್ರಯೇಲಿನ ರಾಜರುಗಳೇ, ಇನ್ನು ಸಾಕು, ಸಾಕು; ಕೊಳ್ಳೆಯನ್ನೂ ಹಿಂಸಾಚಾರವನ್ನೂ ತ್ಯಜಿಸಿ ನೀತಿನ್ಯಾಯಗಳನ್ನು ನಡೆಸಿರಿ; ನನ್ನ ಜನರ ಬಾಧ್ಯತೆಗಳನ್ನು ತಪ್ಪಿಸುವ ಅನ್ಯಾಯವನ್ನು ಬಿಟ್ಟುಬಿಡಿ; ಇದು ಸರ್ವೇಶ್ವರನಾದ ದೇವರ ನುಡಿ. 10ನಿಮ್ಮ ತಕ್ಕಡಿಯೂ ಧಾನ್ಯದ ಅಳತೆಯೂ ರಸದ್ರವ್ಯದ ಅಳತೆಯೂ ನ್ಯಾಯವಾಗಿಯೇ ಇರಬೇಕು. 11ಏಫಾ ಎಂಬ ಧಾನ್ಯದ ಅಳತೆ ಮತ್ತು ಬತ್ ಎಂಬ ರಸದ್ರವ್ಯದ ಅಳತೆ ಒಂದೇ ಪ್ರಮಾಣವಾಗಿರತಕ್ಕದ್ದು; ಬತ್ ಎಂಬುದು ಹೋಮೆರಿನ ಹತ್ತನೆಯ ಒಂದು ಪಾಲು, ಏಫಾ ಎಂಬುದು ಹೋಮೆರಿನ ಹತ್ತನೆಯ ಒಂದು ಪಾಲು; ಈ ಎರಡೂ ಹೋಮೆರ್

ಅಳತೆಗೆ ಸಂಬಂಧವಾಗಿರಬೇಕು. 12ಒಂದು ಶೇಕೆಲ್ ಇಪ್ಪತ್ತು ಗೇರಾ ತೂಕವಾಗಿರಬೇಕು; ನಿಮ್ಮಲ್ಲಿ ಸಲ್ಲುವ ಮಾನೆಯು ಇಪ್ಪತ್ತು, ತೂಕದ್ದಾಗಿರಲಿ. 13ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: ನೀವು ನಿಮ್ಮ ದೋಷಪರಿಹಾರಕ್ಕಾಗಿ ಧಾನ್ಯನೈವೇದ್ಯವನ್ನೂ ದಹನಬಲಿಯನ್ನೂ ಸಮಾಧಾನಬಲಿಯನ್ನೂ ಮಾಡುವುದಕ್ಕಾಗಿ ಸಮರ್ಪಿಸತಕ್ಕದೇನೆಂದರೆ: ಒಂದು ಹೋಮೆರ್ ಅಳತೆಯ ಗೋದಿಯಲ್ಲಿ ಏಫಾ ಅಳತೆಯ ಆರನೆಯ ಒಂದು ಪಾಲು; ಒಂದು ಹೋಮೆರ್ ಅಳತೆಯ ಜವೆಗೋದಿಯಲ್ಲಿ ಏಫಾ ಅಳತೆಯ ಆರನೆಯ ಒಂದು ಪಾಲು; 14ಒಂದು ಬತ್ ಎಣ್ಣೆಯಲ್ಲಿ ಸಮರ್ಪಿಸಬೇಕಾದ ಭಾಗ ಎಷ್ಟೆಂದರೆ, ಒಂದು ಹೋಮೆರ್ ಅಳತೆಯ ಜವೆಗೋದಿಯಲ್ಲಿ ಏಫಾ ಅಳತೆಯ ಆರನೆಯ ಒಂದು ಪಾಲು; ಒಂದು ಬತ್ ಎಣ್ಣೆಯಲ್ಲಿ ಸಮರ್ಪಿಸಬೇಕಾದ ಭಾಗವೆಷ್ಟೆಂದರೆ ಒಂದು ಕೋರ್ ಅಂದರೆ, ಹತ್ತು ಬತ್ ಅಥವಾ ಒಂದು ಹೋಮೆರ್ ಅಳತೆಯ ಎಣ್ಣೆಯಲ್ಲಿ ಒಂದು ಬತ್ ಅಳತೆಯ ಹತ್ತನೆಯ ಒಂದು ಪಾಲು; (ಹತ್ತು ಬತ್ ಅಂದರೆ ಒಂದು ಹೋಮೆರ್): 15ಇನ್ನೂರು ಕುರಿಗಳಲ್ಲಿ ಇಸ್ರಯೇಲಿನ ನೀರಾವರಿಯ ಹುಲ್ಲುಗಾವಲಿನ ಒಂದು ಕುರಿ; 16ಇವುಗಳನ್ನು ದೇಶದ ಸಕಲ ಜನರು ಇಸ್ರಯೇಲಿನ ರಾಜನಿಗೆ ಒಪ್ಪಿಸತಕ್ಕದ್ದು. 17ಉತ್ಸವಗಳಲ್ಲೂ ಅಮಾವಾಸ್ಯೆಗಳಲ್ಲೂ ಸಬ್ಬತ್ತುಗಳಲ್ಲೂ ಇಸ್ರಯೇಲ್ ವಂಶದವರಿಗೆ ನೇಮಕವಾದ ಎಲ್ಲಾ ಹಬ್ಬಗಳಲ್ಲೂ ದಹನಬಲಿ ಪ್ರಾಣಿ, ಧಾನ್ಯನೈವೇದ್ಯ, ಪಾನನೈವೇದ್ಯ, ಇವುಗಳನ್ನು ಒದಗಿಸುವುದು ರಾಜನ ಕರ್ತವ್ಯ; ಇಸ್ರಯೇಲ್ ವಂಶದ ದೋಷನಿವಾರಣೆಗಾಗಿ ಅವನು ದೋಷಪರಿಹಾರಕ ಬಲಿಪ್ರಾಣಿ, ಧಾನ್ಯ ನೈವೇದ್ಯ, ದಹನಬಲಿಪ್ರಾಣಿ, ಶಾಂತಿಸಮಾಧಾನ ಬಲಿಪ್ರಾಣಿ ಇವುಗಳನ್ನು ಒಪ್ಪಿಸತಕ್ಕದ್ದು."

### ಪಾಸ್ಕ ಮತ್ತು ಪರ್ಣಶಾಲೆ ಹಬ್ಬಗಳು

(ವಿಮೋ. 12.1–20 ಯಾಜ. 23.33–43)

18 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ಮೊದಲನೆಯ ತಿಂಗಳಿನ ಮೊದಲನೆಯ ದಿನದಲ್ಲಿ ನೀನು ಕಳಂಕರಹಿತವಾದ ಹೋರಿಯನ್ನು ಆರಿಸಿ ಅದರಿಂದ ಪವಿತ್ರಾಲಯವನ್ನು ಶುದ್ಧೀಕರಿಸಬೇಕು. 19ಆಗ ಯಾಜಕನು ಆ ದೋಷಪರಿಹಾರಕ ಬಲಿಪ್ರಾಣಿಯ ರಕ್ತದಲ್ಲಿ ಸ್ವಲ್ಪವನ್ನು ತೆಗೆದುಕೊಂಡು ದೇವಸ್ಥಾನದ ಬಾಗಿಲ ಚೌಕಟ್ಟಿಗೂ ಬಲಿಪೀಠದ ದೊಡ್ಡ ಅಂತಸ್ತಿನ ನಾಲ್ಕು ಮೂಲೆಗಳಿಗೂ ಒಳಗಣ ಪ್ರಾಕಾರದ ಹೆಬ್ಬಾಗಿಲ ನಿಲವುಕಂಬಗಳಿಗೂ ಹಚ್ಚಬೇಕು. 20ಅದೇ ಮೇರೆಗೆ ಏಳನೆಯ ತಿಂಗಳಿನ ಮೊದಲನೆಯ ದಿನದಲ್ಲಿ ನೀನು ಬಲಿದಾನಮಾಡಿ ಯಾರಾದರೂ ಆಕಸ್ಮಾತ್ತಾಗಿ ಮಾಡಿದ ತಪ್ಪಿನಿಂದಾಗಲಿ, ಬುದ್ಧಿಹೀನರ ಅವಿವೇಕದಿಂದಾಗಲಿ, ದೇವಾಲಯಕ್ಕೆ ಸಂಭವಿಸಿದ ದೋಷವನ್ನೆಲ್ಲಾ ಪರಿಹರಿಸಬೇಕು.

21 "ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿನದಲ್ಲಿ ಏಳು ದಿವಸದ ಪಾಸ್ಕಹಬ್ಬವನ್ನು ಆಚರಿಸತೊಡಗಬೇಕು; ಹುಳಿಯಿಲ್ಲದ ರೊಟ್ಟಿಯನ್ನೇ ತಿನ್ನಬೇಕು. 22ಆ ದಿನದಲ್ಲಿ ರಾಜನು ತನ್ನ ನಿಮಿತ್ತ ಹಾಗು ನಾಡಿನ ಜನರೆಲ್ಲರ ನಿಮಿತ್ತ ದೋಷಪರಿಹಾರಕಬಲಿಗಾಗಿ ಒಂದು ಹೋರಿಯನ್ನು ಒಪ್ಪಿಸಲಿ. 23ಹಬ್ಬದ ಏಳು ದಿನಗಳಲ್ಲಿಯೂ ಸರ್ವೇಶ್ವರನಿಗೆ ಸಮರ್ಪಿಸತಕ್ಕ ದಹನಬಲಿಗಾಗಿ ಅವನು ಏಳು ದಿನಗಳವರೆಗೆ ದಿನವೊಂದಕ್ಕೆ ಕಳಂಕರಹಿತವಾದ ಏಳು ಹೋರಿಗಳನ್ನೂ ಏಳು ಟಗರುಗಳನ್ನೂ ಒದಗಿಸಲಿ, ಮತ್ತು ದೋಷ ಪರಿಹಾರಕಬಲಿಗಾಗಿ ದಿನವಹಿ ಒಂದು ಹೋತವನ್ನು ಕೊಡಲಿ. 24ಇದಲ್ಲದೆ ಒಂದೊಂದು ಹೋರಿಯ ಮತ್ತು ಟಗರಿನ ಸಂಗಡ ಮೂವತ್ತು ಮೂವತ್ತು ಸೇರು ಗೋದಿಹಿಟ್ಟನ್ನೂ ಆರಾರು ಸೇರು ಎಣ್ಣೆಯನ್ನೂ ಧಾನ್ಯ ನೈವೇದ್ಯಕ್ಕಾಗಿ ಒಪ್ಪಿಸಬೇಕು.

25 "ಏಳನೆಯ ತಿಂಗಳಿನ ಹದಿನೈದನೆಯ ದಿವಸದಲ್ಲಿ ಪ್ರಾರಂಭವಾಗುವ ಹಬ್ಬದ ಏಳು ದಿವಸಗಳಲ್ಲಿಯೂ ಅವನು ದೋಷಪರಿಹಾರಕ ಬಲಿಪ್ರಾಣಿ, ದಹನಬಲಿಪ್ರಾಣಿ, ಧಾನ್ಯನೈವೇದ್ಯ ಎಣ್ಣೆ, ಇವುಗಳನ್ನು ಅದೇ ಕ್ರಮದಂತೆ ಕೊಡಬೇಕು."

## ಹಬ್ಬದಾಚರಣೆಯಲ್ಲಿ ರಾಜನ ಪಾತ್ರ

**46** ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: “ವಾರದೊಳಗೆ ಕೆಲಸನಡೆಯುವ ಆರು ದಿವಸಗಳಲ್ಲಿ
ಒಳಗಿನ ಪ್ರಾಕಾರದ ಪೂರ್ವ ಹೆಬ್ಬಾಗಿಲು ಮುಚ್ಚಿರಬೇಕು; ಆದರೆ ಸಬ್ಬತ್ ದಿನದಲ್ಲೂ ಅಮಾವಾಸ್ಯೆಯಲ್ಲೂ
ತೆರೆದಿರಬೇಕು. 2ರಾಜನು ಹೊರಗಿನ ಕೈಸಾಲೆಯ ಮಾರ್ಗವಾಗಿ ಆ ಹೆಬ್ಬಾಗಿಲನ್ನು ಪ್ರವೇಶಿಸಿ ಬಾಗಿಲ
ನಿಲವುಕಂಬದ ಪಕ್ಕದಲ್ಲಿ ನಿಂತುಕೊಂಡು, ತಾನು ಒಪ್ಪಿಸಿದ ದಹನಬಲಿ ಪ್ರಾಣಿಯನ್ನು ಶಾಂತಿಸಮಾಧಾನ
ಬಲಿಪ್ರಾಣಿಗಳನ್ನೂ ಯಾಜಕರು ಅರ್ಪಿಸುತ್ತಿರುವಾಗ ಬಾಗಿಲ ಹೊಸ್ತಿಲಿನಲ್ಲಿ ಅಡ್ಡಬೀಳಲಿ; ಆಮೇಲೆ
ಹೊರಟು ಹೋಗಲಿ; ಅಂದು ಸಂಜೆಯ ತನಕ ಬಾಗಿಲನ್ನು ಮುಚ್ಚಬಾರದು. 3ಸಬ್ಬತ್ ದಿನಗಳಲ್ಲೂ
ಅಮಾವಾಸ್ಯೆಗಳಲ್ಲೂ ನಾಡಿನ ಜನರು ಆ ಹೆಬ್ಬಾಗಿಲ ದ್ವಾರದ ಮುಂದೆ ಸರ್ವೇಶ್ವರನ ಸಮ್ಮುಖವಾಗಿ
ಅಡ್ಡಬೀಳಲಿ.

4 “ಸಬ್ಬತ್‍ದಿನದಲ್ಲಿ ರಾಜನು ಸರ್ವೇಶ್ವರನಿಗೆ ಕಳಂಕರಹಿತವಾದ ಆರು ಕುರಿಗಳನ್ನೂ
ಕಳಂಕರಹಿತವಾದ ಒಂದು ಟಗರನ್ನೂ ದಹನ ಬಲಿಗಾಗಿ ಅರ್ಪಿಸತಕ್ಕದ್ದು. 5ಟಗರಿನೊಡನೆ ಮೂವತ್ತು
ಸೇರು ಗೋದಿಹಿಟ್ಟನ್ನೂ ಕುರಿಗಳೊಡನೆ ಸಾಧ್ಯವಿದ್ದಷ್ಟು ಗೋದಿಹಿಟ್ಟನ್ನೂ ಮೂವತ್ತು ಮೂವತ್ತು ಸೇರು
ಗೋದಿಹಿಟ್ಟಿಗೆ ಆರಾರು ಸೇರಿನಂತೆ ಎಣ್ಣೆಯನ್ನೂ ಧಾನ್ಯ ನೈವೇದ್ಯಕ್ಕಾಗಿ ಕೊಡಲಿ. 6ಅಮಾವಾಸ್ಯೆಯಲ್ಲಿ
ಅವನು ಕಳಂಕರಹಿತವಾದ ಒಂದು ಹೋರಿಯನ್ನೂ ಆಡು ಕುರಿಗಳನ್ನೂ ಒಂದು ಟಗರನ್ನೂ ಒಪ್ಪಿಸತಕ್ಕದ್ದು;
ಅವು ಕಳಂಕರಹಿತವಾಗಿಯೇ ಇರಬೇಕು. 7ಮತ್ತು ಹೋರಿಯೊಡನೆ ಮೂವತ್ತು ಸೇರು, ಟಗರಿನೊಡನೆ
ಮೂವತ್ತು ಸೇರು, ಕುರಿಗಳೊಡನೆ ಸಾಧ್ಯವಿದ್ದಷ್ಟು ಗೋದಿಹಿಟ್ಟನ್ನೂ ಮೂವತ್ತು ಮೂವತ್ತು ಸೇರಿಗೆ ಆರಾರು
ಸೇರಿನಂತೆ ಎಣ್ಣೆಯನ್ನೂ ಧಾನ್ಯನೈವೇದ್ಯಕ್ಕಾಗಿ ಒದಗಿಸಬೇಕು.

8 “ರಾಜನು ಪ್ರವೇಶಮಾಡುವಾಗ ಹೆಬ್ಬಾಗಿಲ ಕೈಸಾಲೆಯ ಮಾರ್ಗವಾಗಿ ಬಂದು ಅದೇ
ಮಾರ್ಗವಾಗಿ ಹೊರಡಲಿ. 9ನಾಡಿನ ಜನರಾದರೋ ಹಬ್ಬಗಳಲ್ಲಿ ಸರ್ವೇಶ್ವರನ ಸಮ್ಮುಖದಲ್ಲಿ
ಕಾಣಿಸಿಕೊಳ್ಳುವಾಗ ಉತ್ತರ ಬಾಗಿಲಿಂದ ಆರಾಧಿಸುವುದಕ್ಕೆ ಪ್ರವೇಶಿಸಿದವರು ದಕ್ಷಿಣ ಬಾಗಿಲಿಂದ ಹೊರಡಲಿ;
ದಕ್ಷಿಣ ಬಾಗಿಲಿಂದ ಪ್ರವೇಶಿಸಿದವನು ಉತ್ತರ ಬಾಗಿಲಿಂದ ಹೊರಡಲಿ; ತಾನು ಪ್ರವೇಶಿಸಿದ ಬಾಗಿಲಿಂದ
ಹಿಂದಿರುಗದೆ ಬಂದ ಮುಖವಾಗಿಯೇ ಹೋಗಲಿ. 10ಜನರು ಪ್ರವೇಶಿಸುವಾಗ ರಾಜನು ಅವರ ಮಧ್ಯೆ
ಪ್ರವೇಶಿಸಲಿ ಅವರು ಹೊರಡುವಾಗ ಅವನೂ ಹೊರಡಲಿ. 11ರಾಜನು ಉತ್ಸವಗಳಲ್ಲೂ ಹಬ್ಬಗಳಲ್ಲೂ
ಹೋರಿಯೊಡನೆ ಮೂವತ್ತು ಸೇರು, ಟಗರಿನೊಡನೆ ಮೂವತ್ತು ಸೇರು, ಕುರಿಗಳೊಡನೆ ಸಾಧ್ಯವಿದ್ದಷ್ಟು ಸೇರು
ಗೋದಿಹಿಟ್ಟನ್ನೂ ಮೂವತ್ತು ಮೂವತ್ತು ಸೇರಿಗೆ ಆರಾರು ಸೇರಿನಂತೆ ಎಣ್ಣೆಯನ್ನೂ ಧಾನ್ಯನೈವೇದ್ಯಕ್ಕಾಗಿ
ಒದಗಿಸಬೇಕು.

12 “ರಾಜರು ಸ್ವಂತ ಇಚ್ಛೆಯಿಂದ ಕಾಣಿಕೆಯನ್ನಾಗಲಿ, ದಹನಬಲಿಯನ್ನಾಗಲಿ, ಶಾಂತಿ ಸಮಾಧಾನ
ಬಲಿಗಳನ್ನಾಗಲಿ ಸರ್ವೇಶ್ವರನಿಗೆ ಸಮರ್ಪಿಸಬೇಕೆಂದಿರುವಾಗ ಅವನಿಗಾಗಿ ಪೂರ್ವ ಹೆಬ್ಬಾಗಿಲನ್ನು
ತೆರೆಯಬೇಕು; ಅವನು ಸಬ್ಬತ್ ದಿನದಲ್ಲಿ ಸಮರ್ಪಿಸುವಂತೆ ದಹನಬಲಿಪ್ರಾಣಿಯನ್ನೂ ಶಾಂತಿಸಮಾಧಾನ
ಬಲಿಪ್ರಾಣಿಗಳನ್ನೂ ಸಮರ್ಪಿಸಿ ಹೊರಡಲಿ; ಹೊರಟ ಮೇಲ ಬಾಗಿಲನ್ನು ಮುಚ್ಚಬೇಕು.

## ದಿನನಿತ್ಯದ ಕಾಣಿಕೆ

13 “ನೀನು ಕಳಂಕರಹಿತವಾದ ಒಂದು ವರ್ಷದ ಕುರಿಯನ್ನು ಸರ್ವೇಶ್ವರನಿಗೆ ದಹನ ಬಲಿಯಾಗಿ
ದಿನಂಪ್ರತಿ ಅರ್ಪಿಸಬೇಕು; ಪ್ರತಿದಿನ ಬೆಳಿಗ್ಗೆ ಅದನ್ನು ಅರ್ಪಿಸತಕ್ಕದ್ದು. 14ಅದರೊಂದಿಗೆ ಪ್ರತಿದಿನ ಬೆಳಿಗ್ಗೆ
ಧಾನ್ಯನೈವೇದ್ಯವಾಗಿ ಐದು ಸೇರು ಗೋದಿಹಿಟ್ಟನ್ನೂ ಅದನ್ನು ನೆನೆಯಿಸುವುದಕ್ಕೆ ಎರಡು ಸೇರು ಎಣ್ಣೆಯನ್ನೂ
ನೀನು ಸಮರ್ಪಿಸಬೇಕು; ಇವುಗಳನ್ನು ಪ್ರತಿನಿತ್ಯವೂ ಸರ್ವೇಶ್ವರನಿಗೆ ಧಾನ್ಯನೈವೇದ್ಯವಾಗಿ ಅರ್ಪಿಸತಕ್ಕದ್ದು;
ಇದು ಶಾಶ್ವತ ನಿಯಮ. 15ಯಾಜಕರು ಕುರಿಯನ್ನೂ ಧಾನ್ಯನೈವೇದ್ಯವನ್ನೂ ಎಣ್ಣೆಯನ್ನೂ ನಿತ್ಯದಹನ
ಬಲಿಯಾಗಿ ಪ್ರತಿದಿನ ಬೆಳಿಗ್ಗೆ ಸಮರ್ಪಿಸಬೇಕು.”

## ರಾಜನ ಸೊತ್ತು ಪರಾಧೀನವಾಗಕೂಡದು

16 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ರಾಜನು ತನ್ನ ಮಕ್ಕಳಲ್ಲಿ ಒಬ್ಬನಿಗೆ ಭೂದಾನ
ಮಾಡಿದರೆ ಅದು ತಂದೆಯ ಸೊತ್ತಾದ ಕಾರಣ ಮಕ್ಕಳಿಗೆ ಹಕ್ಕು ಬರುವುದು, ಅದು ಬಾಧ್ಯವಾಗಿ ಸಿಕ್ಕಿದ
ಸೊತ್ತೇ. 17ಆದರೆ ರಾಜನು ತನ್ನ ಭೂಮಿಯ ಒಂದು ಭಾಗವನ್ನು ತನ್ನ ಸೇವಕರಲ್ಲಿ ಒಬ್ಬನಿಗೆ
ದಾನಮಾಡಿದರೆ, ಬಿಡುಗಡೆಯ ವರ್ಷದವರೆಗೆ ಅದು ಅವನ ಅಧೀನವಾಗಿರುವುದು; ಆಮೇಲೆ ಅದು ಪುನಃ
ರಾಜನ ವಶವಾಗುವುದು. ಆದರೆ ರಾಜನು ತನ್ನ ಮಕ್ಕಳಿಗೆ ಕೊಟ್ಟ ಸೊತ್ತು ಅವರಿಗೇ ಸೇರಿಬಿಡುವುದು.
18ಇದಲ್ಲದೆ ರಾಜನು ಪ್ರಜೆಗಳ ಪಿತ್ರಾರ್ಜಿತ ಭೂಮಿಯನ್ನು ಸ್ವಾಧೀನಮಾಡಿಕೊಂಡು ಅವರ ಬಾಧ್ಯತೆಯನ್ನು
ತಪ್ಪಿಸಬಾರದು. ಸ್ವಂತ ಭೂಮಿಯನ್ನೇ ವಿಭಾಗಿಸಿ ತನ್ನ ಮಕ್ಕಳಿಗೆ ಪಾಲುಕೊಡಲಿ; ಇಲ್ಲವಾದರೆ ನನ್ನ
ಪ್ರಜೆಯಲ್ಲಿ ಪ್ರತಿಯೊಬ್ಬನೂ ತನ್ನ ತನ್ನ ಭೂಸ್ಥಿತಿಯನ್ನು ಕಳೆದುಕೊಂಡು ದಿಕ್ಕಾಪಾಲಾಗಿ
ಹೋಗಬೇಕಾಗುವುದು."

## ದೇವಾಲಯದ ಪಾಕಶಾಲೆಗಳು

19 ಬಳಿಕ ಆ ಪುರುಷ ನನ್ನನ್ನು ಹೆಬ್ಬಾಗಿಲ ಪಕ್ಕದಲ್ಲಿನ ಪ್ರವೇಶದ ಮಾರ್ಗವಾಗಿ ಉತ್ತರಕ್ಕೆ
ಅಭಿಮುಖನಾಗಿ ಹಾಗು ಯಾಜಕರಿಗೆ ನೇಮಕವಾಗಿ ಇರುವ ಪರಿಶುದ್ಧವಾದ ಕೋಣೆಗಳಿಗೆ ಬರಮಾಡಿದನು.
ಇಗೋ, ಅವುಗಳ ಹಿಂದೆ ಪಶ್ಚಿಮದಲ್ಲಿ ಒಂದು ಸ್ಥಳವಿತ್ತು. 20ಆಗ ಅವನು ನನಗೆ, "ಯಾಜಕರು ಹವಿಸ್ಸನ್ನು
ಹೊರಗಣ ಪ್ರಾಕಾರಕ್ಕೆ ಒಯ್ದು ಜನರನ್ನು ಶುದ್ಧಿಮಾಡದ ಹಾಗೆ, ಪ್ರಾಯಶ್ಚಿತ್ತ ಬಲಿಪಶುವಿನ ಮತ್ತು
ದೋಷಪರಿಹಾರಕ ಬಲಿಪಶುವಿನ ಮಾಂಸವನ್ನು ಬೇಯಿಸುವುದಕ್ಕೂ ಈ ಸ್ಥಳ ಏರ್ಪಟ್ಟಿದೆ," ಎಂದು
ಹೇಳಿದನು. 21ತರುವಾಯ ಅವನು ನನ್ನನ್ನು ಹೊರಗಿನ ಪ್ರಾಕಾರಕ್ಕೆ ಬರಮಾಡಿ ಅಲ್ಲಿನ ನಾಲ್ಕು ಮೂಲೆಗಳ
ಮಾರ್ಗವಾಗಿ ಕರೆದುಕೊಂಡು ಹೋದನು. ಇಗೋ, ಪ್ರಾಕಾರದ ಒಂದೊಂದು ಮೂಲೆಯಲ್ಲಿ ಒಂದೊಂದು
ಒಳ ಅಂಗಳವು ಕಾಣಿಸಿತು. 22ಹೌದು, ಪ್ರಾಕಾರದ ನಾಲ್ಕು ಮೂಲೆಗಳಲ್ಲೂ ಇಪ್ಪತ್ತು ಮೀಟರ್ ಉದ್ದದ,
ಹದಿನೈದು ಮೀಟರ್ ಅಗಲದ ಪ್ರತ್ಯೇಕವಾದ ಅಂಗಳಗಳು ಇದ್ದವು; ಮೂಲೆಗಳಲ್ಲಿನ ಆ ನಾಲ್ಕು ಅಂಗಳಗಳು
ಒಂದೇ ಅಳತೆಯಾಗಿದ್ದವು. 23ಅವುಗಳೊಳಗೆ ಸುತ್ತಲು, ಅಂದರೆ ಆ ನಾಲ್ಕು ಅಂಗಳಗಳ ಸುತ್ತುಮುತ್ತಲು
ಕಲ್ಲಿನ ವರಸೆಯು ಚಾಚಿಕೊಂಡಿತ್ತು; ಆ ವರಸೆಗಳ ಕೆಳಗೆ ಒಲೆಗಳು ಸುತ್ತಲೂ ಕಟ್ಟಿದ್ದವು. 24ಆಗ ಅವನು
ನನಗೆ, "ಇವು ದೇವಾಲಯದ ಸೇವಕರು ಬಲಿಪ್ರಾಣಿಗಳನ್ನು ತಂದ ಜನರಿಗಾಗಿ ಅವುಗಳ ಮಾಂಸವನ್ನು
ಬೇಯಿಸುವ ಪಾಕಶಾಲೆಗಳು," ಎಂದು ಹೇಳಿದನು.

## ದೇವಸ್ಥಾನದಿಂದ ಹೊರಡುವ ಪ್ರವಾಹ

**47** ಆಮೇಲೆ ಆ ಪುರುಷ ನನ್ನನ್ನು ದೇವಸ್ಥಾನದ ಬಾಗಿಲಿಗೆ ಪುನಃ ಕರೆದು ತಂದನು: ಇಗೋ,
ದೇವಸ್ಥಾನದ ಹೊಸ್ತಿಲ ಕೆಳಗಿನಿಂದ ನೀರು ಹೊರಟು ಪೂರ್ವದಕಡೆಗೆ ಹರಿಯುತ್ತಿತ್ತು. (ದೇವಸ್ಥಾನ
ಪೂರ್ವಾಭಿಮುಖವಾಗಿತ್ತು). ಆ ನೀರು ದೇವಸ್ಥಾನದ ಬಲಗಡೆ ಕೆಳಗಿನಿಂದ ಹೊರಟು ಬಲಿಪೀಠದ
ದಕ್ಷಿಣದಲ್ಲಿ ಹರಿಯುತ್ತಿತ್ತು. 2ಆಗ ಅವನು ನನ್ನನ್ನು ಉತ್ತರ ಹೆಬ್ಬಾಗಿಲಿನಿಂದ ದೇವಾಲಯದ ಹೊರಗಿನ
ಮಾರ್ಗವಾಗಿ ಸುತ್ತಿಸಿಕೊಂಡು ಪೂರ್ವದ ಹೆಬ್ಬಾಗಿಲಿಗೆ ಕರೆದುತಂದನು. ಅಲ್ಲಿ ನೋಡಲು ಅದರ ಬಲಗಡೆ
ಮೆಲ್ಲಮೆಲ್ಲನೆ ಹರಿಯುವ ನೀರು ಕಾಣಿಸಿತು. 3ಆ ಪುರುಷನು ಕೈಯಲ್ಲಿ ಹುರಿಯನ್ನು ಹಿಡಿದುಕೊಂಡು
ಪೂರ್ವದಂಡೆಗೆ ಮುಂದುವರಿದು ಐನೂರು ಮೀಟರ್ ಅಳೆದು, ನನ್ನನ್ನು ನೀರಿನ ಆಚೆಗೆ ದಾಟಿಸುವಾಗ
ಆ ನೀರು ಹೆಜ್ಜೆ ಮುಳುಗುವಷ್ಟಿತ್ತು. 4ಅವನು ಪುನಃ ಐನೂರು ಮೀಟರ್ ಅಳೆದು ದಾಟಿಸುವಾಗ ಆ ನೀರು
ಮೊಣಕಾಲಿನವರೆಗೆ ಇತ್ತು. ಅವನು ಮತ್ತೆ ಐನೂರು ಮೀಟರ್ ಅಳೆದು ನನ್ನನ್ನು ನೀರಿನ ಆಚೆ ದಾಟಿಸುವಾಗ
ಆ ನೀರು ಸೊಂಟದವರೆಗೆ ಇತ್ತು. 5ಅವನು ಮತ್ತೆ ಅಳೆದು ಐನೂರು ಮೀಟರ್ ಅಳೆದಾಗ ಅದು ನನ್ನಿಂದ
ದಾಟಲಾಗದ ತೊರೆಯಾಗಿತ್ತು; ನೀರು ಏರಿ ಈಜಾಡುವಷ್ಟು ಪ್ರವಾಹವಾಗಿತ್ತು. ದಾಟಲಾಗದ

ತೊರೆಯಾಗಿತ್ತು. 6ಆಗ ಅವನು ನನಗೆ, "ನರಪುತ್ರನೇ, ಇದನ್ನು ನೋಡಿದೆಯಾ?" ಎಂದು ಹೇಳಿ ನನ್ನನ್ನು ತೊರೆಯ ದಡಕ್ಕೆ ಹತ್ತಿಸಿ ಹಿಂದಿರುಗಿಸಿದನು.

7 ನಾನು ಹಿಂದಿರುಗಲು, ಇಗೋ, ತೊರೆಯ ಎರಡು ದಡಗಳಲ್ಲಿಯೂ ಅನೇಕಾನೇಕ ವೃಕ್ಷಗಳು ಕಾಣಿಸಿದವು. 8ಆಗ ಅವನು ನನಗೆ ಹೀಗೆ ಹೇಳಿದನು: "ಈ ಪ್ರವಾಹ ಪೂರ್ವಪ್ರಾಂತ್ಯಕ್ಕೆ ಹೊರಟು ಅರಬಾ ಎಂಬ ಕಣಿವೆಗೆ ಇಳಿದು ಲವಣ ಸಮುದ್ರದ ಕಡೆಗೆ ಹರಿಯುವುದು; ದೇವಸ್ಥಾನದಿಂದ ಹೊರಟ ಪ್ರವಾಹವು ಲವಣಸಮುದ್ರಕ್ಕೆ ಸೇರಲು ಅದರ ನೀರು ಸಿಹಿಯಾಗುವುದು. 9ಈ ತೊರೆ ಎಲ್ಲೆಲ್ಲಿ ಹರಿಯುತ್ತದೋ ಅಲ್ಲಲ್ಲಿ ಗುಂಪು ಗುಂಪಾಗಿ ಚಲಿಸುವ ಸಕಲವಿಧ ಜಲ ಜಂತುಗಳು ಬದುಕಿ ಬಾಳುವುವು; ಮೀನುಗಳು ತಂಡೋಪ ತಂಡವಾಗಿರುವುವು. ಈ ನೀರು ಸಮುದ್ರಕ್ಕೆ ಬೀಳಲು ಆ ನೀರೂ ಸಿಹಿಯಾಗುವುದು; ಈ ತೊರೆ ಎಲ್ಲೆಲ್ಲಿ ಹರಿದರೂ ಅಲ್ಲಲ್ಲಿ ಜೀವವುಂಟಾಗುವುದು. 10ಆಗ ಆ ಸಮುದ್ರದ ತೀರದಲ್ಲಿ ಬೆಸ್ತರು ನಿಂತಿರುವರು; ಏನ್‍ಗೆದಿಯಿಂದ ಏನ್‍ಎಗ್ಲಯಿಮಿನವರೆಗೆ ದಡವೆಲ್ಲಾ ಬಲೆಹಾಸುವ ಸ್ಥಳವಾಗುವುದು; ಬಗೆಬಗೆಯ ಮೀನುಗಳು ಮಹಾಸಾಗರದ ಮೀನುಗಳಂತೆ ಅವರಿಗೆ ರಾಶಿರಾಶಿಯಾಗಿ ಸಿಕ್ಕುವುವು. 11ಆದರೆ ಅದರ ಸುತ್ತಣ ಜವುಗುನೆಲವೂ ಸವುಳುಹೊಂಡಗಳೂ ಸಿಹಿಯಾಗುವುದಿಲ್ಲ, ಅವು ಉಪ್ಪಿನ ಗಣಿಯಾಗುವುವು. 12ತೊರೆಯ ಎರಡು ದಡಗಳಲ್ಲಿಯೂ ಸಕಲ ಫಲವೃಕ್ಷಗಳು ಬೆಳೆಯುವುವು. ಅವುಗಳ ಎಲೆ ಬಾಡದು, ಹಣ್ಣು ತೀರದು. ತೊರೆಯ ನೀರು ಪವಿತ್ರಾಲಯದೊಳಗಿಂದ ಹೊರಟುಬರುವ ಕಾರಣ ಅವು ತಿಂಗಳು ತಿಂಗಳಲ್ಲಿಯೂ ಹೊಸ ಹೊಸ ಫಲವನ್ನು ಕೊಡುತ್ತಲಿರುವುವು; ಅವುಗಳ ಹಣ್ಣು ಆಹಾರಕ್ಕೂ, ಸೊಪ್ಪು ಔಷಧಕ್ಕೂ ಅನುಕೂಲಿಸುವುವು."

## ಇಸ್ರಯೇಲ್ ನಾಡಿನ ಎಲ್ಲೆ ಮೇರೆಗಳು

13 ಸರ್ವೇಶ್ವರನಾದ ದೇವರು ಇಂತೆನ್ನುತ್ತಾರೆ: "ನೀವು ಇಸ್ರಯೇಲಿನ ಹನ್ನೆರಡು ಕುಲಗಳಿಗೆ ನಾಡನ್ನು ಬಾಧ್ಯವಾಗಿ ಹಂಚಿಕೊಡುವಾಗ ಮುಂದಿನ ಮೇರೆಗಳನ್ನು ಅನುಸರಿಸಬೇಕು. ಜೋಸೆಫಿಗೆ ಎರಡು ಪಾಲು ಸೇರಲಿ. 14ನಾನು ನಿಮ್ಮ ಪಿತೃಗಳಿಗೆ ಪ್ರಮಾಣವಾಗಿ ವಾಗ್ದಾನಮಾಡಿದ ಈ ನಾಡನ್ನು ನೀವೆಲ್ಲರೂ ಸರಿಸಮಾನವಾಗಿ ಅನುಭವಿಸಿರಿ; ಇದು ನಿಮಗೆ ಸೊತ್ತಾಗಿಯೇ ಇರುವುದು.

15 "ನಿಮ್ಮ ನಾಡಿನ ಮೇರೆಗಳು ಹೀಗಿರಬೇಕು: ಉತ್ತರದ ಮೇಲೆ ದೊಡ್ಡ ಸಮುದ್ರದಿಂದ ಆರಂಭವಾಗಿ ಚೆದಾದಿನ ದಾರಿಯಲ್ಲಿನ 16ಹೆತ್ಲೋನಿನ ಮಾರ್ಗವಾಗಿ ಬಂದು ಹಮಾತ್, ಬೇರೋತ, ದಮಸ್ಕದ ಎಲ್ಲೆಗೂ ಹಮಾತಿನ ಎಲ್ಲೆಗೂ ನಡುವಣ ಸಿಬ್ರಯಿಮ್ ಎಂಬ ಊರುಗಳ ಮೇಲೆ ಹವ್ರಾನಿನ ಸರಹದ್ದಿಗೆ ಹತ್ತಿರವಾದ ಹಾಚೇರ್ ಹತ್ತೀಕೋನಿನ ಬಳಿಯಲ್ಲಿ ಮುಗಿಯಬೇಕು. 17ಹೀಗೆ ಉತ್ತರದ ಮೇರೆಯು ಸಮುದ್ರದಿಂದ, ದಮಸ್ಕದ ಸರಹದ್ದಿನಲ್ಲಿರುವ ಹಚರ್ ಏನೋನಿನವರೆಗೆ ಹಬ್ಬುವುದು; ಅದರ ಉತ್ತರದಲ್ಲಿ ಹಮಾತಿನ ಪ್ರಾಂತ್ಯವಿರುವುದು. ಇದು ಉತ್ತರ ಮೇರೆ.

18 "ಪೂರ್ವದಲ್ಲಿ ಹವ್ರಾನ್, ದಮಸ್ಕ, ಗಿಲ್ಯಾದ್ ಇವುಗಳಿಗೂ ಇಸ್ರಯೇಲ್ ನಾಡಿಗೂ ಮಧ್ಯೆ ಜೋರ್ಡನ್ ಹೊಳೆ ಎಲ್ಲೆಯಾಗಿರುವುದು; ಉತ್ತರದ ಮೇರೆಯಿಂದ ಪೂರ್ವದ ಸಮುದ್ರದವರೆಗೆ ನೀವು ಗುರುತುಹಾಕಿಕೊಳ್ಳಬೇಕು. ಇದು ಪೂರ್ವದಿಕ್ಕಿನ ಮೇರೆ.

19 "ದಕ್ಷಿಣದ ಮೇರೆ ತಾಮಾರಿನಿಂದ ಹೊರಟು ಮೆರೀಬೋತ್‍ಕಾದೇಶಿನ ಹಳ್ಳದ ಮೇಲೆ, ಈಜಿಪ್ಟಿನ ಮುಂದಿರುವ, ತೊರೆಯ ಮಾರ್ಗವಾಗಿ ದೊಡ್ಡ ಸಮುದ್ರಕ್ಕೆ ಮುಟ್ಟಬೇಕು. ಇದು ದಕ್ಷಿಣದ ಮೇರೆ.

20 "ಪಶ್ಚಿಮದಲ್ಲಿ ಉತ್ತರದ ಮೇರೆಯಿಂದ ಹಮಾತಿನ ದಾರಿಗೆ ಎದುರಿನ ಕರಾವಳಿಯ ತನಕ ದೊಡ್ಡ ಸಮುದ್ರವು ಎಲ್ಲೆಯಾಗಿರುವುದು. ಇದು ಪಶ್ಚಿಮದ ಮೇರೆ.

21 "ಈ ನಾಡನ್ನು, ನೀವು ಇಸ್ರಯೇಲಿನ ಕುಲಕುಲಕ್ಕೂ ಹಂಚಿಕೊಳ್ಳಬೇಕು. 22ನಿಮಗೂ ನಿಮ್ಮ ಮಧ್ಯೆ ಪ್ರವಾಸಮಾಡುತ್ತಾ ಮಕ್ಕಳನ್ನು ಪಡೆದಿರುವ ವಿದೇಶಿಗಳಿಗೂ ನಾಡನ್ನು ಬಾಧ್ಯವಾಗಿ ಹಂಚಬೇಕು: ಅವರು ಇಸ್ರಯೇಲರ ಮಧ್ಯೆ ನಿಮಗೆ ಸ್ವದೇಶಿಗಳಂತೆಯೇ ಇರತಕ್ಕದ್ದು; ಇಸ್ರಯೇಲಿನ ಕುಲಗಳೊಳಗೆ ನಿಮ್ಮೊಂದಿಗೆ ಅವರಿಗೆ ಸೊತ್ತಿರಲಿ. 23ಯಾವ ಕುಲದಲ್ಲಿ ವಿದೇಶಿಯು ನೆಲೆಯಾಗಿರುತ್ತಾನೋ ಅಲ್ಲಿ ಅವನಿಗೆ ಸೊತ್ತನ್ನು ಕೊಡಬೇಕು; ಇದು ಸರ್ವೇಶ್ವರನಾದ ದೇವರ ನುಡಿ."

## ಕುಲಗಳಿಗೆ ನಾಡನ್ನು ಹಂಚುವಿಕೆ

**48** ಆ ಕುಲಗಳ ಹೆಸರುಗಳು ಇವು: ನಾಡಿನ ಉತ್ತರದಲ್ಲಿ ಹಮಾತ್ ಸೀಮೆಯ ಹತ್ತಿರ ದಾನಿಗೆ ಒಂದು ಪಾಲು; ಅದರ ಉತ್ತರದ ಮೇರೆ ಹೆತ್ಲೋನಿನ ದಾರಿಯ ಪಕ್ಕದಲ್ಲಿ ಹೊರಟು ಹಮಾತಿನ ದಾರಿಯನ್ನು ದಾಟಿ ದಮಸ್ಕದ ಸರಹದ್ದಿನಲ್ಲಿರುವ ಹಚರ್ ಏನಾನಿನವರೆಗೆ ಹಬ್ಬುವುದು; 2ಅದರ ಪಾರ್ಶ್ವಗಳು ನಾಡಿನ ಪೂರ್ವ ಪಶ್ಚಿಮಗಳ ಎಲ್ಲೆಗಳ ತನಕ ಚಾಚಿಕೊಂಡಿರುವುವು. 3ದಾನಿನ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ ಪಶ್ಚಿಮದ ತನಕ ನಫ್ತಾಲಿಗೆ ಒಂದು ಪಾಲು. 4ನಫ್ತಾಲಿಯ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ ಪಶ್ಚಿಮದ ತನಕ ಮನಸ್ಸೆಗೆ ಒಂದು ಪಾಲು. 5ಮನಸ್ಸೆಯ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ ಪಶ್ಚಿಮದ ತನಕ ಎಫ್ರಯಿಮಿಗೆ ಒಂದು ಪಾಲು. 6ಎಫ್ರಯಿಮಿನ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ ಪಶ್ಚಿಮದ ತನಕ ರೂಬೇನಿಗೆ ಒಂದು ಪಾಲು. 7ರೂಬೇನಿನ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ ಪಶ್ಚಿಮದ ತನಕ ಯೆಹೂದಕ್ಕೆ ಒಂದು ಪಾಲು.

## ಜುದೇಯ ಸರಹದ್ದಿನಲ್ಲಿ ವಿಶೇಷ ವಿಭಾಗಗಳು

8 ಜುದೇಯದ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ ಪಶ್ಚಿಮದ ತನಕ ನೀವು ಮೀಸಲಾಗಿ ಸಮರ್ಪಿಸುವ ಪಾಲು ಇರುವುದು; ಅದರ ಅಗಲ ಹನ್ನೆರಡುವರೆ ಕಿಲೋಮೀಟರ್, ಉದ್ದ ಪಶ್ಚಿಮದಿಂದ ಪೂರ್ವಕ್ಕೆ ಕುಲಗಳ ಪಾಲುಗಳ ಉದ್ದಕ್ಕೆ ಸರಿಸಮಾನ; ಅದರ ಮಧ್ಯದಲ್ಲಿ ಪವಿತ್ರಾಲಯವಿರುವುದು. 9ನೀವು ಮೀಸಲು ಭೂಮಿಯಲ್ಲಿ ಸರ್ವೇಶ್ವರನಿಗೆ ವಿಶೇಷವಾದ ಮೀಸಲಾಗಿ ಸಮರ್ಪಿಸುವ ಪಾಲಿನ ಉದ್ದ ಹನ್ನೆರಡುವರೆ ಕಿಲೋಮೀಟರ್, ಅಗಲ ಐದು ಕಿಲೋಮೀಟರ್. 10ಮೀಸಲಾದ ಆ ಪವಿತ್ರಕ್ಷೇತ್ರವು ಯಾಜಕರಿಗೆ ಸಲ್ಲತಕ್ಕದ್ದು. ಉತ್ತರದಲ್ಲಿ ಅದರ ಉದ್ದವು ಹನ್ನೆರಡುವರೆ ಕಿಲೋಮೀಟರ್, ಪಶ್ಚಿಮದಲ್ಲಿ ಅಗಲವು ಐದು ಕಿಲೋಮೀಟರ್, ಪೂರ್ವದಲ್ಲಿ ಅಗಲವು ಐದು ಕಿಲೋಮೀಟರ್, ಉತ್ತರದಲ್ಲಿ ಉದ್ದವು ಹನ್ನೆರಡುವರೆ ಕಿಲೋಮೀಟರ್. ಅದರ ಮಧ್ಯೆ ಸರ್ವೇಶ್ವರನ ಪವಿತ್ರಾಲಯವಿರುವುದು. 11ಆ ಕ್ಷೇತ್ರ ಚಾದೋಕನ ಸಂತಾನದವರಲ್ಲಿ ನನಗಾಗಿ ಪ್ರತಿಷ್ಠಿತರು ಹಾಗು ನನ್ನ ಆಲಯದ ಪಾರುಪತ್ಯವನ್ನು ನೆರವೇರಿಸಿದವರು ಆದ ಯಾಜಕರಿಗೇ ಸೇರತಕ್ಕದ್ದು. ಇಸ್ರಯೇಲರು ನನ್ನನ್ನು ತೊರೆದಾಗ ಲೇವಿಯರೂ ತೊರೆದಂತೆ ಇವರು ತೊರೆಯಲಿಲ್ಲ. 12ಲೇವಿಯರ ಪಾಲಿನ ಸರಹದ್ದಿಗೆ ಪಕ್ಕದಲ್ಲಿರುವ ಆ ಕ್ಷೇತ್ರ ಅಪವಿತ್ರವೂ ನಾಡಿನಲ್ಲಿನ ಮೀಸಲಲ್ಲಿ ಮೀಸಲೂ ಆಗಿ ಯಾಜಕರದಾಗಿರುವುದು. 13ಹನ್ನೆರಡುವರೆ ಕಿಲೋಮೀಟರ್ ಉದ್ದದ, ಐದು ಕಿಲೋಮೀಟರ್ ಅಗಲದ, ಒಂದು ಪಾಲು, ಯಾಜಕರ ಪಾಲಿನ ಸರಹದ್ದಿಗೆ ಪಕ್ಕದಲ್ಲಿ, ಲೇವಿಯರಿಗೆ ಸಲ್ಲತಕ್ಕದ್ದು; ಈ ಎರಡು ಪಾಲುಗಳ ಒಟ್ಟಳತೆ ಎಷ್ಟೆಂದರೆ ಉದ್ದ ಹನ್ನೆರಡುವರೆ ಕಿಲೋಮೀಟರ್, ಅಗಲ ಹತ್ತು ಕಿಲೋಮೀಟರ್.

14 ಆ ಕ್ಷೇತ್ರ ಸರ್ವೇಶ್ವರನಿಗೆ ಮೀಸಲಾದುದರಿಂದ ಅದರಲ್ಲಿ ಯಾವ ಭಾಗವನ್ನೂ ಮಾರಬಾರದು, ಅದಲುಬದಲು ಮಾಡಕೂಡದು. ನಾಡಿನ ಆ ಶ್ರೇಷ್ಠಾಂಶ ಪರರವಶವಾಗದಿರಲಿ. 15ಹನ್ನೆರಡುವರೆ ಕಿಲೋಮೀಟರ್ ಉದ್ದದ ಆ ಕ್ಷೇತ್ರದ ಪಕ್ಕದಲ್ಲಿ, (ಮೀಸಲುಪಾಲಿನ ಒಟ್ಟಳತೆಯಲ್ಲಿ), ಮಿಕ್ಕ ಎರಡುವರೆ ಕಿಲೋಮೀಟರ್ ಅಗಲದ ಭೂಮಿ ಮೀಸಲಿಲ್ಲವೆಂದೆಣಿಸಿ, ರಾಜಧಾನಿಗೆ ಅಂದರೆ, ಜನರ ನಿವಾಸಕ್ಕೂ ಸುತ್ತಣ ಪ್ರದೇಶಕ್ಕೂ ಪ್ರತ್ಯೇಕವಾಗಿರಲಿ. ರಾಜಧಾನಿ ಅದರ ಮಧ್ಯದಲ್ಲಿರಲಿ. 16ರಾಜಧಾನಿಯ ಅಳತೆ ಹೀಗಿರಬೇಕು: ಉತ್ತರದ ಪಕ್ಕವು 2,240 ಮೀಟರ್, ದಕ್ಷಿಣದ ಪಕ್ಕವು 2,250 ಮೀಟರ್, ಪೂರ್ವದ ಪಕ್ಕವು 2,250 ಮೀಟರ್, ಪಶ್ಚಿಮದ ಪಕ್ಕವು 2,250 ಮೀಟರ್. 17ರಾಜಧಾನಿಗೆ ಸುತ್ತಣ ಪ್ರದೇಶವಿರಬೇಕು; ಅದರ ಅಗಲ ಉತ್ತರದಲ್ಲಿ 125 ಮೀಟರ್, ದಕ್ಷಿಣದಲ್ಲಿ 125 ಮೀಟರ್, ಪೂರ್ವದಲ್ಲಿ 125 ಮೀಟರ್, ಪಶ್ಚಿಮದಲ್ಲಿ 125 ಮೀಟರ್. 18ರಾಜಧಾನಿ ಹೊರತು ಅದಕ್ಕೆ ಒಳಪಟ್ಟ ಮಿಕ್ಕ ಭೂಮಿಯ ಉದ್ದ ಮೀಸಲಾದ ಪವಿತ್ರ ಕ್ಷೇತ್ರದ ಪಕ್ಕದಲ್ಲಿ ಪೂರ್ವದ ಕಡೆ ಐದು ಕಿಲೋಮೀಟರ್, ಪಶ್ಚಿಮದ ಕಡೆ ಐದು ಕಿಲೋಮೀಟರ್. ಆ ಭೂಮಿ ಮೀಸಲಾದ ಪವಿತ್ರ ಕ್ಷೇತ್ರದ ಎಲ್ಲೆಯನ್ನು ಅನುಸರಿಸಿರುವುದು; ಅದರ ಉತ್ಪತ್ತಿಯು ಅದನ್ನು ಕೃಷಿಮಾಡುವ ಆ ಪುರನಿವಾಸಿಗಳಿಗೆ ಆಹಾರವಾಗುವುದು. 19ಅವರು ಇಸ್ರಯೇಲಿನ ಯಾವ ಕುಲಕ್ಕೆ

ಸೇರಿದ್ದರೂ ಪುರದಲ್ಲಿ ವಾಸಿಸುತ್ತಾ ಆ ಭೂಮಿಯನ್ನು ಕೃಷಿಮಾಡುವರು. 20ಮೀಸಲಾದ ಪೂರ್ಣ ಕ್ಷೇತ್ರದ ಉದ್ದ ಹನ್ನೆರಡುವರೆ ಕಿಲೋಮೀಟರ್, ಅಗಲ ಹನ್ನೆರಡುವರೆ ಕಿಲೋಮೀಟರ್; ನೀವು ಮೀಸಲಾಗಿ ಅರ್ಪಿಸುವ ಪವಿತ್ರ ಕ್ಷೇತ್ರ ರಾಜಧಾನಿಗೆ ಒಳಪಟ್ಟ ಭೂಮಿ ಸಹಿತವಾಗಿ ಚಚ್ಚೌಕವಾಗಿರಬೇಕು.

21 ಮೀಸಲಾದ ಪವಿತ್ರಕ್ಷೇತ್ರದ ಮತ್ತು ರಾಜಧಾನಿಗೆ ಒಳಪಟ್ಟ ಭೂಮಿಯ ಎರಡು ಕಡೆಗಳಲ್ಲಿ ಮಿಕ್ಕ ಭೂಮಿ ರಾಜನ ಪಾಲಾಗಿರಲಿ; ಆ ಪಾಲು ಮೀಸಲಾದ ಕ್ಷೇತ್ರದ ಪೂರ್ವದ ಕಡೆ ಹನ್ನೆರಡುವರೆ ಕಿಲೋಮೀಟರ್ ಉದ್ದದ ಎಲ್ಲೆಯ ಪಕ್ಕದಲ್ಲೂ ಪೂರ್ವದ ಕಡೆ ಹನ್ನೆರಡುವರೆ ಕಿಲೋಮೀಟರ್ ಉದ್ದದ ಎಲ್ಲೆಯ ಪಕ್ಕದಲ್ಲೂ ಕುಲಗಳ ಪಾಲಿನಷ್ಟು ಉದ್ದವಾಗಿ ಹಬ್ಬುವುದು; ಅದು ರಾಜನದು; ಮೀಸಲಾದ ಪವಿತ್ರಕ್ಷೇತ್ರ ಹಾಗು ಪವಿತ್ರಾಲಯ ಅದರ ಎರಡು ಭಾಗಗಳ ಮಧ್ಯೆ ಇರುವುವು; 22ರಾಜನ ಪಾಲಿನ ಎರಡು ಭಾಗಗಳ ನಡುವಣ ಲೇವಿಯರ ಪಾಲಿನ ಉತ್ತರದ ಮೇರೆಯಿಂದ ರಾಜಧಾನಿಗೆ ಒಳಪಟ್ಟ ಭೂಮಿಯ ದಕ್ಷಿಣ ಮೇರೆಯ ತನಕ ಅಂದರೆ ಯೆಹೂದ್ಯದ ದಕ್ಷಿಣ ಸರಹದ್ದಿನಿಂದ ಬೆನ್ಯಾಮೀನಿನ ಸರಹದ್ದಿನವರೆಗೆ ರಾಜನ ಪಾಲು ಹರಡಿರುವುದು.

## ಮಿಕ್ಕ ಕುಲಗಳ ಪಾಲು

23 ಮಿಕ್ಕ ಕುಲಗಳ ಪಾಲಿನ ಕ್ರಮವೇನೆಂದರೆ: ಪೂರ್ವದಿಂದ ಪಶ್ಚಿಮದ ತನಕ ಬೆನ್ಯಾಮೀನಿಗೆ ಒಂದು ಪಾಲು; 24ಬೆನ್ಯಾಮೀನಿನ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ ಪಶ್ಚಿಮದ ತನಕ ಸಿಮೆಯೋನಿಗೆ ಒಂದು ಪಾಲು; 25ಸಿಮೆಯೋನಿನ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ ಪಶ್ಚಿಮದ ತನಕ ಇಸ್ಸಾಕಾರಿಗೆ ಒಂದು ಪಾಲು; 26ಇಸ್ಸಾಕಾರಿನ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ ಪಶ್ಚಿಮದ ತನಕ ಜೆಬುಲೂನಿಗೆ ಒಂದು ಪಾಲು; 27ಜೆಬುಲೂನಿನ ಸರಹದ್ದಿನ ಪಕ್ಕದಲ್ಲಿ ಪೂರ್ವದಿಂದ ಪಶ್ಚಿಮದ ತನಕ ಗಾದಿಗೆ ಒಂದು ಪಾಲು; 28ಗಾದಿನ ತೆಂಕಣ ಸರಹದ್ದಿನಲ್ಲಿ ನಾಡಿನ ಮೇರೆಯು ತಾಮಾರಿನಿಂದ ಹೊರಟು ಮೇರೀಬತ್ ಕಾದೇಶಿನ ಹಳ್ಳವನ್ನು ದಾಟಿ ಈಜಿಪ್ಟಿನ ಮುಂದಣ ತೊರೆಯ ಮಾರ್ಗವಾಗಿ ದೊಡ್ಡ ಸಮುದ್ರಕ್ಕೆ ಮುಟ್ಟುವುದು. 29ನೀವು ಇಸ್ರಯೇಲಿನ ಕುಲಗಳಿಗೆ ಸೊತ್ತಾಗಿ ಹಂಚಿಕೊಡಬೇಕಾದ ನಾಡು ಇದೇ; ಕುಲಗಳ ಪಾಲುಗಳೂ ಇವೇ; ಇದು ಸರ್ವೇಶ್ವರನಾದ ದೇವರ ನುಡಿ.

## ಜೆರುಸಲೇಮಿನ ಪ್ರವೇಶ ದ್ವಾರಗಳು

30 ರಾಜಧಾನಿಯ ಗಡಿಗಳು ಹೀಗಿರಬೇಕು: ಉತ್ತರದ ಗಡಿಯ ಉದ್ದ 2,250 ಮೀಟರ್; 31ಪಟ್ಟಣದ ಬಾಗಿಲುಗಳಿಗೆ ಇಸ್ರಯೇಲಿನ ಕುಲಗಳ ಆಯಾ ಹೆಸರುಗಳು ಇರಲಿ; ಉತ್ತರದಲ್ಲಿ ಮೂರು ಬಾಗಿಲುಗಳು; ಒಂದು ರೂಬೇನ್ ಬಾಗಿಲು, ಇನ್ನೊಂದು ಯೆಹೂದ್ಯ ಬಾಗಿಲು, ಮತ್ತೊಂದು ಲೇವಿಬಾಗಿಲು. 32ಪೂರ್ವದ ಗಡಿಯ ಉದ್ದ 2,250 ಮೀಟರ್; ಅದರಲ್ಲಿ ಮೂರು ಬಾಗಿಲುಗಳು; ಒಂದು ಜೋಸೆಫ್ ಬಾಗಿಲು; ಇನ್ನೊಂದು ಬೆನ್ಯಾಮೀನ್ ಬಾಗಿಲು, ಮತ್ತೊಂದು ದಾನ್ ಬಾಗಿಲು. 33ದಕ್ಷಿಣದ ಗಡಿಯ ಉದ್ದ 2,250 ಮೀಟರ್; ಅದರಲ್ಲಿ ಮೂರು ಬಾಗಿಲುಗಳು; ಒಂದು ಸಿಮೆಯೋನ್ ಬಾಗಿಲು, ಇನ್ನೊಂದು ಇಸ್ಸಾಕಾರ್ ಬಾಗಿಲು, ಮತ್ತೊಂದು ಜೆಬುಲೂನ್ ಬಾಗಿಲು. 34ಪಶ್ಚಿಮದ ಗಡಿಯ ಉದ್ದ 2,250 ಮೀಟರ್; ಅದರಲ್ಲಿ ಮೂರು ಬಾಗಿಲುಗಳು; ಒಂದು ಗಾದ್‌ಬಾಗಿಲು, ಇನ್ನೊಂದು ಆಶೇರ್ ಬಾಗಿಲು; ಮತ್ತೊಂದು ನಫ್ತಾಲಿ ಬಾಗಿಲು. 35ಪಟ್ಟಣದ ಸುತ್ತಳತೆ ಒಂಬತ್ತು ಸಾವಿರ ಮೀಟರ್‌ಗಳು. ಅದನ್ನು ನಿರ್ಮಿಸಿದಂದಿನಿಂದ ಆ ಪಟ್ಟಣಕ್ಕೆ 'ಸರ್ವೇಶ್ವರನ ನೆಲೆ' ಎಂದು ಹೆಸರಾಗುವುದು.